ಸಂಪುಟ: 05 ಸಂಚಿಕೆ: 179 ಪುಟಗಳು: 08 ಶುಕ್ರವಾರ 12 ಸೆಪ್ಟೆಂಬರ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**
ಮತ್ತೊಬ್ಬರ ಜೀವನ ಕಂಡು ಅಸೂಯೆ ಪಟ್ಟು ಹುಸಿ ನಗುವುದಕ್ಕಿಂತ ಅವರ ಆತ್ಮವನ್ನು ಅರಿತು ಆನಂದ ಪಟ್ಟರೆ ಅತ್ಯುತ್ಸಾಹ ಬರುವುದು

ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# ವಿಷ್ಣುವರ್ಧನ್ ಹಾಗೂ ಸರೋಜಾದೇವಿಗೆ ಮರಣೋತ್ತರ ಕರ್ನಾಟಕ ರತ್ನ

• ಉದಯವಾಹಿನಿ, ಬೆಂಗಳೂರು

ಮೂರು ವರ್ಷಗಳ ಬಳಿಕ ಕರ್ನಾಟಕ ಸರ್ಕಾವು ಕರ್ನಾಟಕ ರತ್ನ ಪ್ರಶಸ್ತಿಯನ್ನು ಘೋಷಣೆ ಮಾಡಿದೆ. ಅದರಲ್ಲೂ ಸಿನಿಮಾ ಕ್ಷೇತ್ರದ ಇಬ್ಬರು ಸಾಧಕರನ್ನು ಗುರುತಿಸಿದ್ದು, ನಟ ವಿಷ್ಣುವರ್ಧನ್ ಹಾಗೂ ನಟಿ ಸರೋಜಾದೇವಿ ಅವರಿಗೆ ಮರಣೋತ್ತರ ಕರ್ನಾಟಕ ರತ್ನ ಪ್ರಶಸ್ತಿ ನೀಡಿ ಗೌರವಿಸಲು ನಿರ್ಧರಿಸಿದೆ.

ಇದಕ್ಕೂ ಮುನ್ನ 10 ಮಂದಿ ಈಗಾಗಲೇ ಕರ್ನಾಟಕ ರತ್ನ ಗೌರಕ್ಕೆ ಭಾಜನರಾಗಿದ್ದಾರೆ. 1991ರಲ್ಲಿ ಮೊದಲ ಬಾರಿಗೆ 'ಕರ್ನಾಟಕ ರತ್ನ' ಪ್ರಶಸ್ತಿಯನ್ನು ನೀಡಲು ಪ್ರಾರಂಭ ಮಾಡಲಾಯಿತು. ಈ ಪ್ರಶಸ್ತಿಯನ್ನು ಒಂದೇ ಕ್ಷೇತ್ರಕ್ಕೆ ಸೀಮಿತವಾಗಿರದೇ ಯಾವುದೇ ಕ್ಷೇತ್ರದಲ್ಲಿ ಅಸಾಧಾರಣ ಕೊಡುಗೆಯನ್ನು ಸಲ್ಲಿಸಿದ ವ್ಯಕ್ತಿಗಳಿಗೆ ನೀಡಲಾಗುತ್ತದೆ.

**ಸಿನಿಮಾ ಕ್ಷೇತ್ರದ್ದೆ ಮೇಲುಗೈ:** ಈ ಹಿಂದೆ ನೀಡಿದ 10 ಕರ್ನಾಟಕ ಪ್ರಶಸ್ತಿಗಳು ಜೊತೆಯಲ್ಲಿ ಹಾಗೂ ಹೊಸದಾಗಿ ಘೋಷಣೆಯಾಗಿರುವ ಪ್ರಶಸ್ತಿಗಳು ಸೇರಿ ಒಟ್ಟು 12 ಮಂದಿಯಲ್ಲಿ ನಾಲ್ಕು ಮಂದಿ ಸಿನಿಮಾ ಕ್ಷೇತ್ರದವರಾಗಿದ್ದಾರೆ. ಉಳಿದಂತೆ ಸಮಾಜ ಸೇವೆಗೆ ಶಿವಕುಮಾರ ಸ್ವಾಮೀಜಿ, ಡಿ ವೀರೇಂದ್ರ ಹೆಗ್ಗಡೆ, ಸಾಹಿತ್ಯಕ್ಕೆ ಕುವೆಂಪು, ದೇ ಜವರೇಗೌಡ, ವೈದ್ಯಕೀಯ ಸಾಧನೆಗೆ ಖ್ಯಾತ ಹೃದ್ರೋಗ ತಜ್ಞ ದೇವಿಪ್ರಸಾದ್ ಶೆಟ್ಟಿ, ರಾಜಕೀಯ ಸಾಧನೆಗೆ ಎಸ್ ನಿಜಲಿಂಗಪ್ಪ, ಸಂಗೀತ ಕ್ಷೇತ್ರದಲ್ಲಿ ಭೀಮಸೇನ ಜೋಷಿ, ವಿಜ್ಞಾನಿ ಸಿಎನ್‌ಆರ್ ರಾವ್ ಪಡೆದುಕೊಂಡಿದ್ದಾರೆ.

| ಕರ್ನಾಟಕ ರತ್ನ ಪ್ರಶಸ್ತಿ ಪುರಸ್ಕೃತರ ಪಟ್ಟಿ | | |
|---|---|---|
| ಕುವೆಂಪು | ಸಾಹಿತ್ಯ | 1992 |
| ಡಾ. ರಾಜ್‌ಕುಮಾರ್ | ಸಿನಿಮಾ | 1992 |
| ಎಸ್. ನಿಜಲಿಂಗಪ್ಪ | ರಾಜಕೀಯ | 1999 |
| ಸಿ. ಎನ್. ಆರ್. ರಾವ್ | ವಿಜ್ಞಾನ | 2000 |
| ದೇವಿಪ್ರಸಾದ್ ಶೆಟ್ಟಿ | ವೈದ್ಯಕೀಯ | 2001 |
| ಭೀಮಸೇನ ಜೋಷಿ | ಸಂಗೀತ | 2005 |
| ಶಿವಕುಮಾರ ಸ್ವಾಮಿ | ಸಮಾಜ ಸೇವೆ | 2007 |
| ದೇ. ಜವರೇಗೌಡ | ಸಾಹಿತ್ಯ | 2008 |
| ಡಿ. ವೀರೇಂದ್ರ ಹೆಗ್ಗಡೆ | ಸಾಮಾಜಿಕ ಸೇವೆ | 2009 |
| ಡಾ. ಪುನೀತ್ | ಸಮಾಜ ಸೇವೆ | 2022 |



**ಕರ್ನಾಟಕ ರತ್ನ ಪ್ರಶಸ್ತಿ ಪಡೆದ 10 ಮಂದಿ**

**200 ಕ್ಕೂ ಅಧಿಕ ಚಿತ್ರದಲ್ಲಿ ನಟಿಸಿರುವ ವಿಷ್ಣು:** ನಟ ವಿಷ್ಣುವರ್ಧನ್ ಅವರು 220 ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿ, 14 ಬಾರಿ ದ್ವಿಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. 7 ಫಿಲ್ಮ್‌ಫೇರ್ ಪ್ರಶಸ್ತಿಗಳು, 8 ಕರ್ನಾಟಕ ರಾಜ್ಯ ಚಲನಚಿತ್ರ ಪ್ರಶಸ್ತಿಗಳು ಸೇರಿದಂತೆ ಅನೇಕ ಪ್ರಶಸ್ತಿಗಳನ್ನು ಗೆದ್ದಿದ್ದಾರೆ. ಭಾರತೀಯ ಚಿತ್ರರಂಗಕ್ಕೆ ಅವರ ಕೊಡುಗೆಯನ್ನು ಗುರುತಿಸಿ, ಕರ್ನಾಟಕ ಸರ್ಕಾರವು ವಾರ್ಷಿಕ ಪ್ರಶಸ್ತಿಯನ್ನು ಅವರ ಹೆಸರಿನಲ್ಲಿ ಮರುನಾಮಕರಣ ಮಾಡಿತ್ತು.

**ಪಂಚಭಾಷೆ ತಾರೆಗೆ ಒಲಿದ ಪ್ರಶಸ್ತಿ:** ಬಿ. ಸರೋಜಾದೇವಿ ಅವರು ಬೆಂಗಳೂರು ಮೂಲದ ದಕ್ಷಿಣ ಭಾರತದ ಖ್ಯಾತ ನಟಿ. ಕನ್ನಡ, ತೆಲುಗು, ತಮಿಳು ಮತ್ತು ಹಿಂದಿ ಭಾಷೆಗಳಲ್ಲಿ ನಟಿಸಿ, ಅಭಿನಯ ಸರಸ್ವತಿ ಎಂದು ಖ್ಯಾತರಾಗಿದ್ದರು. ತಮ್ಮ 17ನೇ ವಯಸ್ಸಿನಲ್ಲಿ ಕನ್ನಡದ ಮಹಾಕವಿ ಕಾಳಿದಾಸ ಚಿತ್ರದ ಮೂಲಕ ಚಿತ್ರರಂಗ ಪ್ರವೇಶಿಸಿದ್ದರು, 5 ಭಾಷೆಗಳಲ್ಲಿ 200ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿದ್ದಾರೆ. ಪದ್ಮಶ್ರೀ, ಪದ್ಮಭೂಷಣ ಪ್ರಶಸ್ತಿಗಳು ಲಭಿಸಿವೆ. 2025 ರಲ್ಲಿ ಅನಾರೋಗ್ಯ ಕಾರಣಕ್ಕೆ ನಿಧನರಾದರು.

## ಗ್ರಾಮ ಆಡಳಿತಾಧಿಕಾರಿಗಳ ಕೈಗೆ ಬರಲಿದೆ ಲ್ಯಾಪ್‌ಟಾಪ್!

• ಉದಯವಾಹಿನಿ, ಬೆಂಗಳೂರು

ಗ್ರಾಮ ಆಡಳಿತಾಧಿಕಾರಿಗಳ ಕೈಗೆ ಶೀಘ್ರವೇ ಲ್ಯಾಪ್‌ಟಾಪ್ ಬರಲಿದೆ. ಈ ಬಗ್ಗೆ ಕರ್ನಾಟಕ ಸಚಿವ ಸಂಪುಟ ಸಭೆಯು ಮಂಜೂರಾತಿ ನೀಡಿದೆ. ಈ ಬಗ್ಗೆ ಮಾಧ್ಯಮ ಮಾಹಿತಿ ನೀಡಿರುವ ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು, ಕಂದಾಯ ಇಲಾಖೆಯಲ್ಲಿ ಡಿಜಿಟಲೀಕರಣ ಮತ್ತು ಇ ಆಡಳಿತ ನೀಡುವ ಉದ್ದೇಶದಿಂದ ಸರ್ಕಾರದಿಂದ ಹಲವಾರು ಕ್ರಮಗಳನ್ನು ಕೈಗೊಳ್ಳಲಾಗಿದೆ. ಈ ದಿಶೆಯಲ್ಲಿ ಕರ್ನಾಟಕ ರಾಜ್ಯ ಮುಂಚೂಣಿಯಲ್ಲಿರುವುದು ಹೆಮ್ಮೆಯ ವಿಷಯವಾಗಿದೆ. ಇದರ ಜೊತೆ ಮುಂದುವರೆದ ಭಾಗವಾಗಿ ಕಂದಾಯ ಇಲಾಖೆಯಲ್ಲಿ ಸಂಪೂರ್ಣ ಡಿಜಿಟಲೀಕರಣ ಆಡಳಿತ ಸಾಧಿಸಲು ಕೆಳಹಂತದಿಂದಲೇ ಎಲ್ಲರಿಗೂ ಆನ್ಲೈನ್ ಕಡತ ವಿಲೇವಾರಿ ಜಾರಿ ಮಾಡಲು ಎಲ್ಲಾ ಗ್ರಾಮ ಆಡಳಿತಾಧಿಕಾರಿಗಳಿಗೆ ಲ್ಯಾಪ್‌ಟಾಪ್ ಒದಗಿಸಲು ಸಂಪುಟ ಮಂಜೂರಾತಿ ಮಾಡಿದೆ ಎಂದು ತಿಳಿಸಿದ್ದಾರೆ. ಈಗಾಗಲೇ 5000 ಗ್ರಾಮ ಆಡಳಿತಾಧಿಕಾರಿಗಳಿಗೆ ಲ್ಯಾಪ್‌ಟಾಪ್ ನೀಡಲಾಗುತ್ತಿದೆ. ಉಳಿದ ಗ್ರಾಮ ಆಡಳಿತಾಧಿಕಾರಿಗಳಿಗೆ ಮತ್ತು ಕಂದಾಯ ನಿರೀಕ್ಷಕರುಗಳಿಗೆ 3500 ಲ್ಯಾಪ್‌ಟಾಪ್ ನೀಡಲು 19.25 ಕೋಟಿ ಅನುದಾನ ಒದಗಿಸಲು ಇಂದಿನ ಸಭೆಯಲ್ಲಿ ಸಂಪುಟ ಅನುಮತಿ ನೀಡಿದೆ ಎಂದು ಮಾಹಿತಿ ನೀಡಿದ್ದಾರೆ.

## ಕರ್ನಾಟಕ ಹಿಂದೂ ಪಾರ್ಟಿ ಕಟ್ಟುತ್ತೇವೆ: ಯತ್ನಾಳ

• ಉದಯವಾಹಿನಿ, ಮದ್ದೂರು

'ನಾನು ಮತ್ತು ಪ್ರತಾಪ ಸಿಂಹ ಹಿಂದೂಗಳ ಪರವಾಗಿ ಗಟ್ಟಿಯಾಗಿ ಮಾತನಾಡುತ್ತೇವೆ. ನಾವೆಲ್ಲ ಒಂದಾಗಿ ರಾಜ್ಯದಲ್ಲಿ 'ಕರ್ನಾಟಕ ಹಿಂದೂ ಪಾರ್ಟಿ' ಕಟ್ಟುತ್ತೇವೆ. ಆ ಪಕ್ಷದ ಗುರುತು ಜೆಸಿಬಿ. ಅಧಿಕಾರಕ್ಕೆ ಬಂದರೆ ಮುಸ್ಲಿಮರ ಮೀಸಲಾತಿ ತೆಗೆದು ಹಿಂದೂಗಳಿಗೆ ಹಂಚುತ್ತೇನೆ, ಅಕ್ರಮವಾಗಿ ಕಟ್ಟಿದ ಮಸೀದಿಗಳನ್ನು ನೆಲಸಮಗೊಳಿಸುತ್ತೇವೆ' ಎಂದು ಶಾಸಕ ಬಸನಗೌಡ ಪಾಟೀಲ ಯತ್ನಾಳ ಹೇಳಿದರು. ಮದ್ದೂರು ಘಟನೆಯಲ್ಲಿ ಗಾಯಗೊಂಡವರ ಮನೆಗಳಿಗೆ ಭೇಟಿ ನೀಡಿ, ಸಾಂತ್ವನ ಹೇಳಿದ ನಂತರ ಹಿಂದುತ್ವಪರ ಕಾರ್ಯಕರ್ತರನ್ನು ಉದ್ದೇಶಿಸಿ ರ್‍ಯಾಲಿಯಲ್ಲಿ ಅವರು ಮಾತನಾಡಿದರು. ರಾಜ್ಯದ ಬಿಜೆಪಿಯವರು ಹೊಂದಾಣಿಕೆ ಮಾಡಿಕೊಂಡಿದ್ದಾರೆ. ಬಿಜೆಪಿಯವರು ಗೌರವಯುತವಾಗಿ ತೆಗೆದುಕೊಳ್ಳದಿದ್ದರೆ, ರಾಜ್ಯದಲ್ಲಿ ಹೊಸ ಸರ್ಕಾರ ತರುತ್ತೇವೆ. 'ಪಾಕಿಸ್ತಾನಕ್ಕೆ ಜೈ' ಎಂದು ಧ್ವಜ ಹಾರಿಸಿದ್ರೆ ಅಲ್ಲೇ ಎನ್ ಕೌಂಟರ್ ಮಾಡುತ್ತೇವೆ. ಉತ್ತರ ಪ್ರದೇಶದ ಯೋಗಿ ಆದಿತ್ಯನಾಥ್ ರೀತಿ ಆಡಳಿತ ಕರ್ನಾಟಕದಲ್ಲಿ ಬರಲಿದೆ.

ನಮ್ಮ ಸರ್ಕಾರ ಇದ್ದಾಗ ನನ್ನನ್ನು ಮಂತ್ರಿ ಮಾಡಲಿಲ್ಲ. ನಾನು ಗೃಹಮಂತ್ರಿ ಇದ್ದಿದ್ರೆ ಇವರ ಬಾಯಲ್ಲಿ ಗುಂಡು ಹಾಕುತ್ತಿದ್ದೆ' ಎಂದರು. 'ನಾನು ಅಧಿಕಾರಕ್ಕೆ ಬಂದರೆ ಗೋ ಹತ್ಯೆ ಮಾಡುವವರು ಢಮಾರ್, ವಕ್ಫ್ ಅನುದಾನವನ್ನು ಗೋರಕ್ಷಕರಿಗೆ ನೀಡುತ್ತೇನೆ. ನನ್ನನ್ನು ಕರ್ನಾಟಕ ಸಿಎಂ ಮಾಡ್ತೀರಾ ಎಂದು ಕಾರ್ಯಕರ್ತರನ್ನು ಕೇಳಿದರು.

## ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ ಮಾಡಿದ ಸುತ್ತೂರು ಶ್ರೀ


• ಉದಯವಾಹಿನಿ, ಬೆಂಗಳೂರು

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಸುತ್ತೂರು ಮಠದ ಶಿವರಾತ್ರಿ, ದೇಶಿಕೇಂದ್ರ, ಸ್ವಾಮೀಜಿ ಭೇಟಿಯಾಗಿದ್ದಾರೆ.

ಈ ಕುರಿತು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಚಿತ್ರ ಹಾಗೂ ಮಾಹಿತಿ ಹಂಚಿಕೊಂಡಿದ್ದಾರೆ. 'ಭಾರತದ ಗೌರವಾನ್ವಿತ ರಾಷ್ಟ್ರಪತಿಗಳಾದ ಶ್ರೀಮತಿ ದ್ರೌಪದಿ ಮುರ್ಮು ಅವರನ್ನು ಶ್ರೀ ಸುತ್ತೂರು ಮಹಾಸಂಸ್ಥಾನ ಮಠದ ಪೀಠಾಧೀಶರಾದ ಪರಮಪೂಜ್ಯ ಜಗದ್ಗುರುಗಳಾದ ಶ್ರೀ ಶ್ರೀ ಶ್ರೀ ಡಾ. ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿಗಳೊಂದಿಗೆ ಗೌರವಪೂರ್ವಕವಾಗಿ ಭೇಟಿ ಮಾಡಲಾಯಿತು. ಪರಮಪೂಜ್ಯರೊಂದಿಗೆ ರಾಷ್ಟ್ರಪತಿಗಳನ್ನು ಭೇಟಿ ಮಾಡಿದ್ದು ನನ್ನ ಸುಯೋಗ ಎಂದೇ ಭಾವಿಸಿದ್ದೇನೆ' ಎಂದು ಅವರು ತಿಳಿಸಿದ್ದಾರೆ.



## ಸಿಎಂ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಅಲ್ಪಸಂಖ್ಯಾತರ ಹಿಂದುಳಿದ ಕಾಲೋನಿಗಳ ಅಭಿವೃದ್ಧಿಗೆ ಬಂಪರ್ ಕೊಡುಗೆ



**ಕಲ್ಲೆಸೆತದ ವಿವಾದದ ಬೆನ್ನಲ್ಲೇ ಬಂಪರ್ ಗಿಫ್ಟ್**

# ಮುಸ್ಲಿಮರ ಓಲೈಕೆಗೆ 398 ಕೋಟಿ ಸಿಎಂಗೆ ಕಮಲ ಚಾಟಿ

**ಕ್ಯಾಬಿನೆಟ್‌ನಲ್ಲಿ ಅನೇಕ ಮಹತ್ವದ ತೀರ್ಮಾನ**

**ಸಂಪುಟ ನಿರ್ಧಾರಕ್ಕೆ ಬಿಜೆಪಿ ತೀವ್ರ ಟೀಕೆ**

• ಉದಯವಾಹಿನಿ, ಬೆಂಗಳೂರು

ಅಲ್ಪಸಂಖ್ಯಾತ ಸಮುದಾಯದವರಿಗೆ ಸರ್ಕಾರ ಮತ್ತೊಂದು ಬಂಪರ್ ಕೊಡುಗೆ ಕೊಟ್ಟಿದೆ.

ಅಲ್ಪಸಂಖ್ಯಾತರು ವಾಸಿಸುವ ನಗರ ಪ್ರದೇಶದ ಹಿಂದುಳಿದ ಕಾಲೋನಿಗಳು ಮಾದರಿ ಕಾಲೋನಿಯಾಗಿ ಅಭಿವೃದ್ಧಿಗೆ ಸರ್ಕಾರ ಮುಂದಾಗಿದೆ. 22 ವಿಧಾನಸಭಾ ಕ್ಷೇತ್ರಗಳಲ್ಲಿ ಮಾದರಿ ಕಾಲೋನಿ ನಿರ್ಮಾಣಕ್ಕೆ ಸರ್ಕಾರ ತಿರ್ಮಾನ ಮಾಡಿದ್ದು, 398 ಕೋಟಿ ರೂ. ಮೊತ್ತದ ಯೋಜನೆ ಜಾರಿಗೆ ಸಂಪುಟ ಸಭೆ ಒಪ್ಪಿಗೆ ಕೊಟ್ಟಿದೆ. ಅಲ್ಪಸಂಖ್ಯಾತರು ಇರುವ ಅತಿ ಹಿಂದುಳಿದ ಹಾಗೂ ಹಿಂದುಳಿದ ಕಾಲೋನಿಗಳನ್ನು ಮಾದರಿ ಕಾಲೋನಿಗಳಾಗಿ ಅಭಿವೃದ್ಧಿಪಡಿಸುವುದು ಉದ್ದೇಶ. ಇದಕ್ಕಾಗಿ ಈಗಾಗಲೇ 1,000 ಕೋಟಿ ರೂ.ಗಳನ್ನು ರಾಜ್ಯ ಸರ್ಕಾರ ಮೀಸಲಿಟ್ಟಿದೆ. ಆ ಮೊತ್ತಕ್ಕೆ ಕ್ರಿಯಾ ಯೋಜನೆ ಸಿದ್ಧಪಡಿಸಿ ಹಂತಹಂತವಾಗಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ತೀರ್ಮಾನಿಸಲಾಗಿದೆ. ಅದರ ಭಾಗವಾಗಿ ಈಗ 398 ಕೋಟಿ ರೂ ವೆಚ್ಚದಲ್ಲಿ ಅಲ್ಪಸಂಖ್ಯಾತರ ಕಾಲೋನಿಗಳ ಅಭಿವೃದ್ಧಿ ಕಾಮಗಾರಿಗಳನ್ನು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕೈಗೊಳ್ಳಲಿದೆ.

ಸರ್ಕಾರದ ಈ ನಡೆಗೆ ಬಿಜೆಪಿ ನಾಯಕರು ಮತ್ತೊಂದು ಓಲೈಕೆ ರಾಜಕೀಯ ಎಂದು ಟೀಕಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ, ಮುಸ್ಲಿಮರಲ್ಲಿ ಬಡವರಿದ್ದಾರೆ, ದಲಿತರಲ್ಲಿ ಬಡವರಿದ್ದಾರೆ. ಈ ಬಡವರನ್ನು ಮೇಲೆತ್ತಿ, ಅಲ್ಪಸಂಖ್ಯಾತರ ಕಾಲೋನಿಗಳನ್ನು ಅಭಿವೃದ್ಧಿ ಮಾಡೋದಲ್ಲ. ಈ ತರಹದ ಓಲೈಕೆ ಬಿಡಲಿ. ಕಾಂಗ್ರೆಸ್, ಧರ್ಮ-ಧರ್ಮಗಳ ನಡುವೆ ವಿಷ ಬೀಜ ಬಿತ್ತುತ್ತಿದ್ದಾರೆ.

ಇದು ಸರ್ಕಾರದ ಓಲೈಕೆ ರಾಜಕಾರಣ. ಇದು ರಾಜ್ಯದ ಜನತೆಗೂ ಗೊತ್ತಿದೆ. ಓಲೈಕೆ ಮಾಡಿ ಜನರನ್ನು ದಾರಿ ತಪ್ಪಿಸುವ ಕೆಲಸ ಇದು ಎಂದು ಟೀಕಿಸಿದ್ದಾರೆ.

**ಕೆಜಿಐಡಿ ಲಾಭಾಂಶ ಘೋಷಣೆ:** ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯ ಕಡ್ಡಾಯ ಜೀವ ವಿಮಾ ಯೋಜನೆಯ ವಿಮಾದಾರರಿಗೆ 2020-22ರ ದ್ವೈವಾರ್ಷಿಕ ಅವಧಿಯಲ್ಲಿ ಚಾಲ್ತಿಯಲ್ಲಿರುವ ಎಲ್ಲಾ ಪಾಲಿಸಿಗಳಿಗೆ ವಿಮಾ ಮೊತ್ತದ ಮೇಲೆ ಪ್ರತಿ ಸಾವಿರ ರೂಪಾಯಿಗೆ ಪ್ರತಿವರ್ಷಕ್ಕೆ 80 ರಂತೆ ಲಾಭಾಂಶ ವಿತರಿಸಲು ಸರ್ಕಾರ ನಿರ್ಧರಿಸಿದೆ.

ಅವಧಿ ಪೂರ್ಣಗೊಂಡ, ವಿಮಾದಾರರ ಮರಣ ಪ್ರಕರಣ ಹಾಗೂ ವಿಮಾತ್ಯಾಗ ಮೌಲ್ಯಗಳಿಂದ 2022ರ ಏಪ್ರಿಲ್ 1ರಿಂದ 2024 ಮಾರ್ಚ್ 31ರವರೆಗಿನ ಅವಧಿಯಲ್ಲಿ ಪ್ರತಿ ಸಾವಿರ ರೂಪಾಯಿಗೆ ಪ್ರತಿವರ್ಷಕ್ಕೆ 80 ನಂತೆ ಮಧ್ಯಂತರ ಲಾಭಾಂಶ ಘೋಷಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ.

**62 ಅಪರಾಧ ಪ್ರಕರಣಗಳು ವಾಪಸ್:** ರಾಜ್ಯದ ವಿವಿಧ ಪೊಲೀಸ್ ಠಾಣೆಗಳಲ್ಲಿ ದಾಖಲಾಗಿರುವ ಮತ್ತು ನ್ಯಾಯಾಲಯಗಳಲ್ಲಿ ವಿಚಾರಣೆಗೆ ಬಾಕಿಯಿರುವ ಅಪರಾಧ ಪ್ರಕರಣಗಳನ್ನು ವಾಪಸ್ ಪಡೆಯಲು ಸಚಿವ ಸಂಪುಟ ಸಭೆಯು ಒಪ್ಪಿಗೆ ನೀಡಿದೆ. ರಸ್ತೆ ತಡೆ, ಪ್ರತಿಭಟನೆ, ಸರ್ಕಾರಿ ನೌಕರ-ಅಧಿಕಾರಿಗಳ ಕರ್ತವ್ಯಕ್ಕೆ ಅಡ್ಡಿಪಡಿಸಿದಂತಹ ಪ್ರಕರಣಗಳು ಇದರಲ್ಲಿ ಸೇರಿದ ರೈತ ಸಂಘ, ಸರ್ಕಾರಿ ನೌಕರರ ಹೋರಾಟ ಸಮಿತಿಗಳು, ಖಾಸಗಿ ವ್ಯಕ್ತಿಗಳ ವಿರುದ್ಧ ದಾಖಲಾಗಿದ್ದ ಪ್ರಕರಣಗಳ ರಸ್ತೆ ಕೋರಿ ವೈಯಕ್ತಿಕ ಅರ್ಜಿಗಳು ಸಲ್ಲಿಕೆಯಾಗಿದ್ದವು.

ಜತೆಗೆ ಹಿಂದಿನ ಗೃಹ ಸಚಿವರು ನೀಡಿದ್ದ ಟಿಪ್ಪಣಿ, ಹಾಗೂ ಜನಪ್ರತಿನಿಧಿಗಳು ಸಲ್ಲಿಸಿದ್ದ ಮನವಿಯನ್ನು ಪರಿಗಣಿಸಿ ಪ್ರಕರಣಗಳನ್ನು ವಾಪಸ್ ಪಡೆಯಲಾಗಿದೆ ಎಂದು ಸಂಪುಟ ಸಭೆಯು ತಿಳಿಸಿದೆ. ಹಾಲಿ ಜನಪ್ರತಿನಿಧಿಗಳ ವಿರುದ್ಧವಾದ ಪ್ರಕರಣಗಳನ್ನು ವಾಪಸ್ ಪಡೆಯಬಾರದು ಎಂಬ ಸುಪ್ರೀಂ ಕೋರ್ಟ್ ಮತ್ತು ಹೈಕೋರ್ಟ್ ತೀರ್ಪು, ನಿರ್ದೇಶನಗಳನ್ನು ಪಾಲಿಸಲಾಗಿದೆ ಎಂದೂ ಸಭೆಯು ವಿವರಿಸಿದೆ.

### ಇತರ ಯೋಜನೆಗಳು

ಹೆಬ್ಬಾರ್ ಗ್ರಾಮದ ಗಂಗೊಳ್ಳಿ ನದಿಗೆ 33 ಕೋಟಿ ರೂ. ವೆಚ್ಚದ ಸೇತುವೆ ನಿರ್ಮಾಣ, ಬೆಳಗಾವಿಯ ಕರ್ನಾಟಕ ಜರ್ಮನ್ ತಾಂತ್ರಿಕ ಸಂಸ್ಥೆಗೆ ಉಪಕರಣ ಖರೀದಿ, ಮಾಗಡಿ ನಿರಾಶ್ರಿತರ ಪುನರ್ವಸತಿ ಕೇಂದ್ರಕ್ಕೆ ಭೂಮಿ, ಮತ್ತು ಹಾವೇರಿಯ ನಾಗನೂರು, ತೆವರಮಳ್ಳಿಹಳ್ಳಿ, ಮೋತಿ ತಲಾಬ ಕೆರೆಗಳ ಅಭಿವೃದ್ಧಿಗೆ ಒಟ್ಟು 350 ಕೋಟಿ ರೂ.ಗಿಂತ ಹೆಚ್ಚಿನ ಅನುದಾನ. ಸಭೆಯಲ್ಲಿ 40ಕ್ಕೂ ಹೆಚ್ಚು ವಿಷಯಗಳ ಬಗ್ಗೆ ಚರ್ಚೆ ನಡೆದಿದ್ದು, ಉಪಖನಿಜ ರಿಯಾಯಿತಿ ತಿದ್ದುಪಡಿ ನಿಯಮಕ್ಕೆ ಒಪ್ಪಿಗೆ ನೀಡಲಾಗಿದೆ. ಇದರಿಂದ ಮಣ್ಣು, ಮರಳು ತೆಗೆಯುವಿಕೆಯನ್ನು ಸರಳೀಕರಣಗೊಳಿಸಿ ಜನರಿಗೆ ಅನುಕೂಲ ಕಲ್ಪಿಸಲಾಗುವುದು. ಇದೇ ವೇಳೆ, ಸರ್ಕಾರಿ ಕಾರ್ಯಕ್ರಮಗಳ ಆಹ್ವಾನ ಪತ್ರಿಕೆಗಳಲ್ಲಿ ಗಣ್ಯರ ಹೆಸರು ಸೇರಿಸುವ ಪ್ರೋಟೋಕಾಲ್ ಮಾರ್ಗಸೂಚಿಯನ್ನು ಪರಿಷ್ಕರಿಸಲಾಗಿದ್ದು, ಇನ್ಮುಂದೆ ಕೇವಲ 9 ಗಣ್ಯರನ್ನು ಆಹ್ವಾನಿಸಲು ಅವಕಾಶವಿರುತ್ತದೆ.

1. ಸಿಎಂ ಸಿದ್ದರಾಮಯ್ಯ ಅಧ್ಯಕ್ಷತೆಯ ಕ್ಯಾಬಿನೆಟ್ ಸಭೆ
2. ರಾಜ್ಯದ ಅಭಿವೃದ್ಧಿಗೆ ಸಂಬಂಧಿಸಿದ ಅನೇಕ ಮಹತ್ವದ ತೀರ್ಮಾನ
3. ಅನರ್ಹ ಬಿಪಿಎಲ್ ಕಾರ್ಡ್‌ಗಳನ್ನು ರದ್ದುಪಡಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಸಿಎಂ ಖಡಕ್ ಸೂಚನೆ

### ಸಂಪುಟ ಸಭೆಯ ಇತರ ಪ್ರಮುಖ ನಿರ್ಧಾರಗಳು

- **ಉಪಖನಿಜ ರಿಯಾಯಿತಿ ತಿದ್ದುಪಡಿ:** ಮಣ್ಣು ಮತ್ತು ಮರಳು ತೆಗೆಯುವಿಕೆಯನ್ನು ಸರಳೀಕರಣಗೊಳಿಸಲು ಕರ್ನಾಟಕ ಉಪಖನಿಜ ಅಧಿನಿಯಮದಲ್ಲಿ ತಿದ್ದುಪಡಿಗೆ ಒಪ್ಪಿಗೆ.
- **ಆಸ್ಪತ್ರೆಗಳ ನವೀಕರಣ:** ಕೊರಟಗೆರೆ, ಜಗಳೂರು, ಮಾಗಡಿ, ಕುಶಾಲನಗರ, ಸವಣೂರು, ಮಾಲೂರು, ರಾಮದುರ್ಗ, ವೆನ್ಲಾಕ್, ಮತ್ತು ದಾವಣಗೆರೆ ಜಿಲ್ಲಾ ಆಸ್ಪತ್ರೆಗಳ ನವೀಕರಣಕ್ಕೆ 540 ಕೋಟಿ ರೂ. ಅನುದಾನ.
- **ಲೇಬರ್ ಸೆಸ್ ತಂತ್ರಾಂಶ:** ಕಾರ್ಮಿಕ ಇಲಾಖೆಗಾಗಿ ಟ್ರಾಕಿಂಗ್ ಮತ್ತು ಮಾನಿಟರಿಂಗ್ ಸಾಫ್ಟ್‌ವೇರ್ ಅಭಿವೃದ್ಧಿಗೆ 28.11 ಕೋಟಿ ರೂ. ವೆಚ್ಚಕ್ಕೆ ಸಮ್ಮತಿ.
- **ಪ್ರೋಟೋಕಾಲ್ ಮಾರ್ಗಸೂಚಿ:** ಸರ್ಕಾರಿ ಕಾರ್ಯಕ್ರಮಗಳ ಆಹ್ವಾನ ಪತ್ರಿಕೆಗಳಲ್ಲಿ ಗಣ್ಯರ ಸಂಖ್ಯೆಯನ್ನು 9ಕ್ಕೆ ಸೀಮಿತಗೊಳಿಸಲು ನಿರ್ಧಾರ.

### ವೈದ್ಯಕೀಯ ಕಾಲೇಜು

ರಾಮನಗರ ಜಿಲ್ಲೆಯ ಕನಕಪುರ ತಾಲ್ಲೂಕಿನಲ್ಲಿ ಒಂದು ಹೊಸ ವೈದ್ಯಕೀಯ ಕಾಲೇಜು ಸ್ಥಾಪಿಸಲು ಮೊದಲನೆ ಹಂತದಲ್ಲಿ ಕರ್ನಾಟಕ ಗೃಹ ಮಂಡಳಿಯಿಂದ 65 ಕೋಟಿ ರೂ.ಗಳ ವೆಚ್ಚದಲ್ಲಿ 25 ಎಕರೆ ಜಮೀನು ಖರೀದಿಸಲು ಆಡಳಿತಾತ್ಮಕ ಅನುಮೋದನೆ. ಸರಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ 1 ರಿಂದ 10ನೆ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಾಯಿ ಶೂರ್ ರಾಗಿ ಹೆಲ್ತ್ ಮಿಕ್ಸ್ ಪುಡಿಯನ್ನು ಬಿಸಿ ಹಾಲಿನೊಂದಿಗೆ ವಾರದಲ್ಲಿ ಐದು ದಿನಗಳಿಗೆ ಮಿಶ್ರಣ ಮಾಡಿ ನೀಡಲು ರಾಜ್ಯ ಸರಕಾರದಿಂದ ಭರಿಸಬೇಕಾಗಿರುವ ಶೇ.25ರಷ್ಟು ವೆಚ್ಚದ ಅಂದಾಜು ಮೊತ್ತ 20.53 ಕೋಟಿ ರೂ.ಗಳನ್ನು ಪಾವತಿಸಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಮತ್ತು ಅಂದಾಜು ಸಾಗಾಣಿಕಾ ವೆಚ್ಚ 6.49 ಕೋಟಿ ರೂ.ಗಳನ್ನು ಕರ್ನಾಟಕ ಹಾಲು ಮಹಾಮಂಡಳಿಗೆ ಪಾವತಿಸಲು ಅನುಮೋದನೆ ನೀಡಲಾಗಿದೆ.

### ಜಿಪಿಎಸ್ ಟ್ರ್ಯಾಕರ್ ಅಳವಡಿಕೆಗೆ ಸೂಚನೆ

ಪರಿಶಿಷ್ಟ ಜಾತಿ ಮತ್ತು ಪಂಗಡದ ಸಮುದಾಯದವರಿಗೆ ಹೊಸ ನ್ಯಾಯ ಬೆಲೆ ಅಂಗಡಿಗಳನ್ನು ಆದ್ಯತೆ ಮೇಲೆ ನೀಡಲು ಕ್ರಮ ಕೈಗೊಳ್ಳಬೇಕು. ಆಹಾರ ಧಾನ್ಯಗಳನ್ನು ಸರಬರಾಜು ಮಾಡುತ್ತಿರುವ ವಾಹನಗಳಿಗೆ ಜಿಪಿಎಸ್ ಟ್ರ್ಯಾಕರ್‌ಗಳನ್ನು ಅಳವಡಿಸಬೇಕು. ರಾಜ್ಯದಲ್ಲಿರುವ ಎಲ್ಲಾ ಗೋದಾಮುಗಳಲ್ಲಿ ಸಿಸಿಟಿವಿ ಅಳವಡಿಸಲು ಕ್ರಮ ಕೈಗೊಳ್ಳಬೇಕು. ಕನಿಷ್ಠ ಬೆಂಬಲ ಯೋಜನೆಯಡಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಸ್ವಸಹಾಯ ಸಂಘಗಳ ಸಹಯೋಗದೊಂದಿಗೆ ಆಹಾರಧಾನ್ಯಗಳ ಖರೀದಿ ಪ್ರಕ್ರಿಯೆ ನಡೆಸಬೇಕು. ಪ್ರಥಮ ಬಾರಿಗೆ 0.29 ಲಕ್ಷ ಮೆಟ್ರಿಕ್ ಟನ್ ಕಿರು ಸಿರಿಧಾನ್ಯಗಳನ್ನು ಖರೀದಿಸಲಾಗುತ್ತಿದೆ. ಆಹಾರ ಮತ್ತು ನಾಗರಿಕ ಸರಬರಾಜು ನಿಗಮದಲ್ಲಿ ಖಾಲಿಯಿರುವ ಅಗತ್ಯ ಸಿಬ್ಬಂದಿ ನೇಮಕಾತಿಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

# ಶಿಕ್ಷಣ ಮತ್ತು ಉದ್ಯೋಗದಲ್ಲಿ ಎಸ್‌ಸಿ, ಎಸ್‌ಟಿ ಮೀಸಲು ಹೆಚ್ಚಳ

### ಕಾಯಿದೆಯ ಅಡಿಎಸ್‌ಸಿ ವರ್ಗಕ್ಕೆ ಮೀಸಲು ಶೇ.15ರಿಂದ 17ಕ್ಕೆ, ಎಸ್‌ಟಿ ಶೇ. 3ರಿಂದ 7ಕ್ಕೆ ಹೆಚ್ಚಳ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಎಸ್‌ಸಿ-ಎಸ್‌ಟಿ ವರ್ಗಗಳಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲು ಹೆಚ್ಚಳಕ್ಕೆ ಸರಕಾರ ಜಾರಿಗೊಳಿಸಿರುವ ಕರ್ನಾಟಕ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳು ಮತ್ತು ಸರಕಾರದ ಅಧೀನ ಸೇವೆಗಳಲ್ಲಿನ ನೇಮಕ ಅಥವಾ ಹುದ್ದೆಗಳಲ್ಲಿ ಮೀಸಲು) ಕಾಯಿದೆ-2022 ಪ್ರಶ್ನಿಸಿ ಸಲ್ಲಿಸಿರುವ ಅರ್ಜಿ ಸಂಬಂಧ ಹೈಕೋರ್ಟ್, ರಾಜ್ಯ ಸರಕಾರಕ್ಕೆ ನೋಟಿಸ್ ಜಾರಿಗೊಳಿಸಿದೆ.

ಅಲ್ಲದೆ, ಬಿಬಿಎಂಪಿಯಲ್ಲಿನ 92 ಸಹಾಯಕ ಸಿವಿಲ್ ಎಂಜಿನಿಯರ್‌ಗಳ ನೇಮಕಕ್ಕೆ ಕರ್ನಾಟಕ ಲೋಕಸೇವಾ ಆಯೋಗವು ನಡೆಸುತ್ತಿರುವ ನೇಮಕ ಪ್ರಕ್ರಿಯೆ ಮುಂದುವರಿಸಬಹುದು. ಆದರೆ, ನ್ಯಾಯಾಲಯದ ಅನುಮತಿಯಿಲ್ಲದೆ ನೇಮಕದ ಅಂತಿಮ ಫಲಿತಾಂಶ ಪ್ರಕಟಿಸುವಂತಿಲ್ಲ ಎಂದು ನಿರ್ದೇಶನ ನೀಡಿದೆ.

**ಮೀಸಲಾತಿ ಹೆಚ್ಚಳಕ್ಕೆ ವಿರೋಧ**

ಸಹಾಯಕ ಸಿವಿಲ್ ಎಂಜಿನಿಯರ್ ಹುದ್ದೆಗೆ ಅರ್ಹರಾಗಿರುವ ಬಿ.ಇ. ಸಿವಿಲ್ ಪದವೀಧರರಾದ ತುಮಕೂರು ಜಿಲ್ಲೆಯ ಎಚ್. ಆರ್. ಸಾಗರ್, ಮೈಸೂರಿನ ಡಿ.ಪ್ರಜ್ವಲ್ ಕುಮಾರ್ ಮತ್ತು ಜಿ.ಎಂ. ಪುರುಷೋತ್ತಮಗೌಡ ಸಲ್ಲಿಸಿರುವ ತಕರಾರು ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಚ್.ಟಿ. ನರೇಂದ್ರಪ್ರಸಾದ್ ಅವರಿದ್ದ ಏಕಸದಸ್ಯ ಪೀಠ ಗುರುವಾರ ಈ ಆದೇಶ ನೀಡಿತು.




ಅಲ್ಲದೆ, ಅರ್ಜಿ ಸಂಬಂಧ ರಾಜ್ಯ ಸರಕಾರದ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಪ್ರಧಾನ ಕಾರ್ಯದರ್ಶಿ, ನಗರಾಭಿವೃದ್ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿ ಮತ್ತು ಬಿಬಿಎಂಪಿ ಮುಖ್ಯ ಆಯುಕ್ತರಿಗೆ ನೋಟಿಸ್ ಜಾರಿಗೊಳಿಸಿ ವಿಚಾರಣೆ ಮುಂದೂಡಿತು.

**ಮೀಸಲು ಪ್ರಮಾಣ ಮಿತಿ ದಾಟಿದೆ**

ಉಳಿಕೆ ಮೂಲ ವೃಂದದಲ್ಲಿ 92 ಸಹಾಯಕ ಸಿವಿಲ್ ಎಂಜಿನಿಯರ್ ಹುದ್ದೆಗಳ ಭರ್ತಿಗೆ ಅಸೂಚನೆ ಹೊರಡಿಸಲಾಗಿದೆ. ಅದರಲ್ಲಿ41 ಹುದ್ದೆಗಳನ್ನು ಸಾಮಾನ್ಯ ಕೆಟಗರಿ ಹಾಗೂ 51 ಹುದ್ದೆಗಳನ್ನು ಮೀಸಲು ಕೆಟಗರಿಗೆ ನಿಗದಿಪಡಿಸಲಾಗಿದೆ. ಮೀಸಲು ಹುದ್ದೆಗಳ ಶೇಕಡಾವಾರು ಪ್ರಮಾಣ ಶೇ.56ರಷ್ಟು ಆಗಲಿದ್ದು, ಸಾಮಾನ್ಯ ವರ್ಗಕ್ಕೆ ಶೇ.44ರಷ್ಟು ಹುದ್ದೆ ಮೀಸಲಿಟ್ಟಂತಾಗಲಿದೆ.

ಇದು ಮೀಸಲು ಪ್ರಮಾಣ ಶೇ.50ರಷ್ಟು ಮೀರಬಾರದೆಂಬ ಸುಪ್ರೀಂಕೋರ್ಟ್‌ನ ಮಿತಿ ದಾಟಿದೆ. ಆದ್ದರಿಂದ ಕಾಯಿದೆ ಸಂವಿಧಾನ ಬಾಹಿರವೆಂದು ಘೋಷಿಸಬೇಕು ಹಾಗೂ ನೇಮಕ ಅಧಿಸೂಚನೆ ರದ್ದುಪಡಿಸಬೇಕು ಎಂದು ಅರ್ಜಿದಾರರ ಪರ ವಕೀಲರು ಮನವಿ ಮಾಡಿದ್ದರು. 2022ರ ಕಾಯಿದೆಯಡಿ ಎಸ್‌ಸಿ ವರ್ಗಗಳ ಮೀಸಲನ್ನು ಶೇ.15ರಿಂದ 17ಕ್ಕೆ ಹಾಗೂ ಎಸ್‌ಟಿ ವರ್ಗದ ಮೀಸಲನ್ನು ಶೇ.3ರಿಂದ 7ಕ್ಕೆ ಹೆಚ್ಚಿಸಿರುವುದನ್ನು ಪ್ರಶ್ನಿಸಲಾಗಿದೆ.

### ಅಲೆಮಾರಿ ಸಮುದಾಯಕ್ಕೆ ಶೇ.1ರಷ್ಟು ಮೀಸಲಾತಿ ನೀಡಿ

ಅಲೆಮಾರಿ ಸಮುದಾಯಕ್ಕೆ ಮೀಸಲಾತಿ ನೀಡಿ ಕಲಬುರಗಿ ಒಳಮೀಸಲಾತಿ ಜಾರಿಗೆ ತಂದಿರುವ ರಾಜ್ಯ ಸರಕಾರದ ಕ್ರಮಕ್ಕೆ ಸ್ವಾಗತಾರ್ಹ. ಆದರೆ, ಅಲೆಮಾರಿ ಸಮುದಾಯಗಳನ್ನು ಬಲಾಢ್ಯ ಸಮುದಾಯಗಳೊಂದಿಗೆ ಸೇರಿಸಿರುವುದರಿಂದ ಅವರಿಗೆ ನ್ಯಾಯ ಸಿಗಲು ಸಾಧ್ಯವಿಲ್ಲ. ಕೂಡಲೇ ಮುಖ್ಯಮಂತ್ರಿಗಳ ಅಲೆಮಾರಿ ಸಮುದಾಯಗಳಿಗೆ ಪ್ರತ್ಯೇಕ ಗುಂಪು ರಚಿಸಿ ಶೇ.1ರಷ್ಟು ಮೀಸಲಾತಿ ಕಲ್ಪಿಸಬೇಕು ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ(ಭೀಮವಾದ) ರಾಜ್ಯಾಧ್ಯಕ್ಷ ಡಾ.ಆರ್.ಮೋಹನರಾಜ ಒತ್ತಾಯಿಸಿದ್ದರು. ಈ ಬಗ್ಗೆ ಪ್ರತಿಭಟನೆ ಹೋರಾಟ ಮುಂದುವರೆದಿದೆ.

## ರಾಜ್ಯದಲ್ಲಿ ತಾಲಿಬಾನ್ ಸರ್ಕಾರವಿದೆ: ರೇಣುಕಾಚಾರ್ಯ

• ಉದಯವಾಹಿನಿ, ಮದ್ದೂರು



ಮೆರವಣಿಗೆ ಮೇಲೆ ಕಲ್ಲು ಎಸೆಯುವವರು ಶಾಂತಿಧೂತರ ಪಾಕಿಸ್ತಾನದ ಪರ ಘೋಷಣೆ ಕೂಗಿದವರ ವಿರುದ್ಧ ಕ್ರಮ ತೆಗೆದುಕೊಂಡಿಲ್ಲ. ಹಿಂದೂಗಳಿಗೆ ಡಿಜೆಗೆ ಅನುಮತಿ ಕೊಡುತ್ತಿಲ್ಲ.

ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಅಧಿಕಾರದಲ್ಲಿಲ್ಲ. ತಾಲಿಬಾನ್ ಸರ್ಕಾರವಿದೆ' ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಆರೋಪ ಮಾಡಿದರು.

ಮದ್ದೂರು ಘಟನೆಯಲ್ಲಿ ಗಾಯಗೊಂಡ ಚನ್ನೇಗೌಡ ಬಡಾವಣೆಯಲ್ಲಿರುವ ಮನೆಗಳಿಗೆ ಹೋಗಿ ಸಾಂತ್ವನ ಹೇಳಿದ ನಂತರ ಮಾಧ್ಯಮದವರೊಂದಿಗೆ ಅವರು ಮಾತನಾಡಿ, 'ಆಪರೇಷನ್ ಸಿಂಧೂರ ಕಾರ್ಯಾಚರಣೆ ಬಗ್ಗೆಯೂ ಟೀಕೆ ಮಾಡುತ್ತಾರೆ. ಕಾಂಗ್ರೆಸ್‌ಗೂ ಪಾಕಿಸ್ತಾನಕ್ಕೂ ನಂಟು ವ್ಯಾಮೋಹವಿದೆ. 'ಭಾರತ್ ಮಾತಾ ಕೀ ಜೈ' ಎಂದರೆ ಕೇಸು ಹಾಕ್ತಾರೆ. ಪಾಕಿಸ್ತಾನಕ್ಕೆ ಜೈ ಅಂದವನನ್ನು ಬ್ರದರ್ ಅಂತಾರೆ. ರಾಹುಲ್, ಸೋನಿಯಾಗಾಂಧಿ ಆಣತಿಯಂತೆ ಸರ್ಕಾರ ನಡೆಸುತ್ತಿದ್ದಾರೆ' ಎಂದು ಟೀಕಿಸಿದರು. 'ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್, ಪರಮೇಶ್ವರ್ ಹುಟ್ಟಿದ ಧರ್ಮಕ್ಕೆ ಅಪಮಾನ ಮಾಡ್ತಿದ್ದಾರೆ ಎಂದರು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹11,051/Gram24ct ₹10,130/Gram22ct | ಬೆಳ್ಳಿ: ₹129.00/Gram

## ಮಹಿಳೆ ಮೇಲೆ ಹಲ್ಲೆ; ಬಿಎಂಟಿಸಿ ಡ್ರೈವರ್ ತಾತ್ಕಾಲಿಕ ವಜಾ

• ಉದಯವಾಹಿನಿ, ಬೆಂಗಳೂರು

ಮಹಿಳೆ ಮೇಲೆ ಹಲ್ಲೆ ನಡೆಸಿದ್ದ ಆರೋಪದ ಹಿನ್ನೆಲೆಯಲ್ಲಿ ಬಿಎಂಟಿಸಿ ಬಸ್ ಚಾಲಕ ರವಿ ಎಂಬಾತನನ್ನು ತಾತ್ಕಾಲಿಕವಾಗಿ ವಜಾ ಮಾಡಲಾಗಿದೆ. ಚಾಲಕ, ಮಹಿಳಾ ಪ್ರಯಾಣಿಕರ ನಡುವೆ ತೀವ್ರ ಜಗಳವಾಗಿದ್ದು ನಂತರ ಚಾಲಕ ಮಹಿಳೆ ಕಪಾಳಕ್ಕೆ ಹೊಡೆದಿದ್ದಾನೆ. ಈ ವಿಡಿಯೋ ಇದೀಗ ಸಖತ್ ವೈರಲ್ ಆಗಿದೆ. ಮೊದಲಿಗೆ ಮಹಿಳೆ ಚಾಲಕನ ಮೇಲೆ ಕೈ ಎತ್ತಿದ್ದಾಳೆ ಕೂಡಲೇ ಚಾಲಕ ತಡಮಾಡದೆ ಮಹಿಳೆಗೆ ಹೊಡೆದಿದ್ದಾನೆ. ಇದರಿಂದಾಗಿ ವಾತಾವರಣ ಉದ್ವಿಗ್ನಗೊಳ್ಳುತ್ತದೆ. ಈ ಸಂಪೂರ್ಣ ಘಟನೆಯನ್ನು ಬಸ್‌ನ ಹೊರಗೆ ಇದ್ದ ವ್ಯಕ್ತಿಯೊಬ್ಬರು ಕ್ಯಾಮೆರಾದಲ್ಲಿ ರೆಕಾರ್ಡ್ ಮಾಡಿದ್ದಾರೆ. ಬಸ್‌ನ ಹೊರಗಿನಿಂದ ರೆಕಾರ್ಡ್ ಮಾಡಲಾದ ಈ ವೀಡಿಯೋದಲ್ಲಿ, ವಾಹನ ಸಂಖ್ಯೆ KA51AK4276 ಎಂದು ಬರೆಯಲಾಗಿದೆ.

ವೀಡಿಯೋ ವೈರಲ್ ಆಗುತ್ತಿದ್ದಂತೆ ಬಿಎಂಟಿಸಿ ಇದನ್ನು ಗಂಭೀರವಾಗಿ ಪರಿಗಣಿಸಿದ್ದು ಚಾಲಕ ರವಿಯನ್ನು ತಾತ್ಕಾಲಿಕವಾಗಿ ವಜಾ ಮಾಡಿದೆ.

## ಶಾಸಕ ಸತೀಶ್ ಸೈಲ್‌ಗೆ 7 ದಿನಗಳ ಮಧ್ಯಂತರ ಜಾಮೀನು ಮಂಜೂರು

• ಉದಯವಾಹಿನಿ, ಬೆಂಗಳೂರು

ಅಕ್ರಮ ಹಣ ವರ್ಗಾವಣೆ ಆರೋಪದಡಿ ಬಂಧನವಾಗಿರುವ ಕಾರವಾರ ಕಾಂಗ್ರೆಸ್ ಶಾಸಕ ಸತೀಶ್ ಸೈಲ್‌ಗೆ ಜನಪ್ರತಿನಿಧಿಗಳ ನ್ಯಾಯಾಲಯ 7 ದಿನಗಳ ಕಾಲ ಮಧ್ಯಂತರ ಜಾಮೀನು ಮಂಜೂರು ಮಾಡಿದೆ. ಬುಧವಾರವಷ್ಟೇ ವಿಚಾರಣೆ ನಡೆಸಿದ ನ್ಯಾಯಾಲಯ ಸತೀಶ್ ಸೈಲ್ ಅವರನ್ನು 2 ದಿನ ಇಡಿ ಕಸ್ಟಡಿಗೆ ನೀಡಿ ಆದೇಶ ಹೊರಡಿಸಿತ್ತು. ಅನಾರೋಗ್ಯದ ಹಿನ್ನೆಲೆಯಲ್ಲಿ ಮಧ್ಯಂತರ ಜಾಮೀನು ಮಂಜೂರು ಮಾಡಲಾಗಿದೆ. ಸತೀಶ್ ಸೈಲ್ ಉಸಿರಾಟದ ಸಮಸ್ಯೆ, ಡಯಾಬಿಟಿಸ್‌ನಿಂದ ಬಳಲುತ್ತಿದ್ದು, ಕಸ್ಟಡಿಯಲ್ಲಿ ಇದ್ದಾಗ ಅನಾರೋಗ್ಯ ಹಿನ್ನಲೆ ಜಾಮೀನು ಮಂಜೂರು ಮಾಡಿದೆ. ಇತ್ತೀಚೆಗೆ ಅವರ ಮನೆ ಮೇಲೆ ದಾಳಿ ನಡೆಸಿದ್ದ ಇಡಿ ಕೋಟ್ಯಂತರ ರೂ. ಹಣ ಹಾಗೂ ಚಿನ್ನದ ಬಿಸ್ಕೆಟ್‌ಗಳನ್ನು ವಶಕ್ಕೆ ಪಡೆದಿತ್ತು. 1.68 ಕೋಟಿ ನಗದು, 6.75 ಕೆಜಿ ಚಿನ್ನದ ಬಿಸ್ಕೆಟ್‌ಗಳು, 14.13 ಕೋಟಿ ಹಣ ಹೊಂದಿರುವ ಬ್ಯಾಂಕ್ ಖಾತೆಯನ್ನು ಜಾರಿ ನಿರ್ದೇಶನಾಲಯ ಸೀಜ್ ಮಾಡಿತ್ತು. ಅಕ್ರಮ ಅದಿರು ಪ್ರಕರಣದಲ್ಲಿ ಜಾಮೀನಿನ ಮೇಲೆ ಶಾಸಕ ಸತೀಶ್ ಸೈಲ್ ಹೊರಗಿದ್ದರು. ಆ.13 ಮತ್ತು 14 ರಂದು ಇ.ಡಿ ಅಧಿಕಾರಿಗಳು, ಶಾಸಕರ ಮನೆ ಮೇಲೆ ದಾಳಿ ನಡೆಸಿ ಪರಿಶೀಲಿಸಿದ್ದರು. ಈ ವೇಳೆ ಅಪಾರ ದಾಖಲೆಗಳನ್ನು ವಶಕ್ಕೆ ಪಡೆದಿದ್ದರು. ಪ್ರಕರಣಕ್ಕೆ ಸಂಬಂಧಿಸಿದಂತೆ ಸತೀಶ್ ಸೈಲ್ ಅವರನ್ನು ಇಡಿ ಅಧಿಕಾರಿಗಳು ಬಂಧಿಸಿದ್ದರು.

## ಮಲ್ಲೇಶ್ವರದಲ್ಲಿ ಬೇಕರಿಗೆ ನುಗ್ಗಿದ ಲಾರಿ : ತಪ್ಪಿದ ಭಾರೀ ದುರಂತ

• ಉದಯವಾಹಿನಿ, ಬೆಂಗಳೂರು

ನಿಯಂತ್ರಣ ತಪ್ಪಿ ಲಾರಿಯೊಂದು ಬೇಕರಿಗೆ ನುಗ್ಗಿದ ಘಟನೆ ಮಲ್ಲೇಶ್ವರದಲ್ಲಿರುವ ಲಿಂಕ್ ರಸ್ತೆಯಲ್ಲಿ ನಡೆದಿದೆ. ಬೆಳಗಿನ ಜಾವದಲ್ಲಿ ಈ ಘಟನೆ ನಡೆದಿದ್ದರಿಂದ ಅದೃಷ್ಟವಶಾತ್ ಸಾವು ನೋವು ಸಂಭವಿಸಿಲ್ಲ. ಹಗಲಿನಲ್ಲಿ ಘಟನೆ ನಡೆದಿದ್ದರೆ ಭಾರೀ ದುರಂತ ಸಂಭವಿಸುವ ಸಾಧ್ಯತೆ ಇತ್ತು. ಬೆಳಗಿನ ಜಾವ 4:30ಕ್ಕೆ ಈ ಘಟನೆ ನಡೆದಿದೆ. ಲಾರಿ ಗುದ್ದಿದ ಪರಿಣಾಮ ಬೇಕರಿಯ ಬಾಗಿಲು ಜಖಂಗೊಂಡು ಗೋಡೆ ಹಾಳಾಗಿದೆ. ಫುಟ್‌ಪಾತ್ ಕಾಂಕ್ರಿಟ್ ಕುಸಿದಿದೆ. ಮಲ್ಲೇಶ್ವರಂ ಪೊಲೀಸರು ಲಾರಿ ಮತ್ತು ಚಾಲಕನ ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಚಾಲಕನ ನಿಯಂತ್ರಣ ತಪ್ಪಿ ಈ ಘಟನೆ ಸಂಭವಿಸಿದ್ಯಾ ಅಥವಾ ಬ್ರೇಕ್ ಫೇಲ್ ಆಗಿ ಈ ಘಟನೆ ನಡೆದಿದ್ಯಾ ಎನ್ನುವುದರ ಬಗ್ಗೆ ಈಗ ತನಿಖೆ ನಡೆಯುತ್ತಿದೆ.

## ಬೆಂಗಳೂರಿನಲ್ಲಿ ಸೇರಿ ಹಲವೆಡೆ ಭಾರೀ ಮಳೆ: ಧರೆಗುರುಳಿದ ಬೃಹತ್ ಮರ

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿ ಸೇರಿದಂತೆ ರಾಜ್ಯದ ಹಲವೆಡೆ ರಾತ್ರಿಯಿಡೀ ಸುರಿದ ಭಾರೀ ಮಳೆಗೆ ಹಲವು ಅವಾಂತರಗಳು ಸೃಷ್ಟಿಯಾಗಿವೆ. ಬೆಂಗಳೂರಿನ ರಾಜಾಜಿನಗರ 4ನೇ ಬ್ಲಾಕ್‌ನಲ್ಲಿ ಬೃಹತ್ ಮರವೊಂದು ಧರೆಗುರುಳಿದ್ದು, 5 ಕಾರ್, ಟಾಟಾ ಏಸ್, ಮೂರ್ನಾಲ್ಕು ಬೈಕ್, 2 ಮನೆಗಳ ಮನೆ ಬಿದ್ದಿದೆ. ಚಂದ್ರಮ್ಮ, ಪೀಟರ್ ಎಂಬುವರ ಮನೆಗೆ ದಿಗ್ಬಂಧನ ಹಾಕಿದಂತಾಗಿದ್ದು, ಪರಿಣಾಮ ಮನೆಯಿಂದ ಹೊರಬರಲಾರದೆ ಅಸಹಾಯಕ ಸ್ಥಿತಿಯಲ್ಲಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದರೂ ಕೂಡ ಬಿಬಿಎಂಪಿ ಸಿಬ್ಬಂದಿ ಸ್ಥಳಕ್ಕೆ ಬಾರದೇ ನಿರ್ಲಕ್ಷಿಸಿದ್ದಾರೆ. ವಿದ್ಯುತ್ ಕಂಬ ಕೂಡ ಬಾಗಿದ್ದು, ಬೆಸ್ಕಾಂ ಸಿಬ್ಬಂದಿ ಕರೆಂಟ್ ಸಂಪರ್ಕವನ್ನು ಕೂಡ ಕಡಿತಗೊಳಿಸಿಲ್ಲ. ಇನ್ನೂ ಕಳೆದ ಕೆಲವು ದಿನಗಳಿಂದ ರಾಜ್ಯದಲ್ಲಿ ಮಳೆ ಕೊಂಚ ಬಿಡುವು ನೀಡಿತ್ತು. ಇದೀಗ ಮತ್ತೆ ಮಳೆ ಚುರುಕಾಗಿದ್ದು, 8 ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ನಿರೀಕ್ಷೆ ಇದೆ. ಮಂಡ್ಯ, ಮೈಸೂರು, ಯಾದಗಿರಿ, ವಿಜಯಪುರ, ರಾಯಚೂರು, ಕೊಪ್ಪಳ, ಕಲಬುರಗಿ, ಬೀದರ್, ಬೆಳಗಾವಿ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಬೆಂಗಳೂರಿನಲ್ಲಿ ಕೂಡ ಬುಧವಾರ ರಾತ್ರಿಯಿಂದ ಗುರುವಾರ ಬೆಳಗ್ಗೆಯವರೆಗೂ ಗುಡುಗು ಸಹಿತ ಮಳೆಯಾಗಿದೆ. ಎಚ್‌ಎಎಲ್‌ನಲ್ಲಿ 30.5 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 20.5 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ನಗರದಲ್ಲಿ 29.2ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 20.6 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ, ಕೆಐಎಎಲ್‌ನಲ್ಲಿ 30.3 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 29.6 ಡಿಗ್ರಿ ಸೆಲ್ಸಿಯಸ್ 29.6 ಡಿಗ್ರಿ ಸೆಲ್ಸಿಯಸ್ ಗರಿಷ್ಠ ಉಷ್ಣಾಂಶ, 19.8 ಡಿಗ್ರಿ ಸೆಲ್ಸಿಯಸ್ ಕನಿಷ್ಠ ಉಷ್ಣಾಂಶ ದಾಖಲಾಗಿದೆ

## ಬೆಂಗಳೂರಿನ ಶಿವಾಜಿನಗರ ಮೆಟ್ರೋ ಹೆಸರು ಬದಲಾವಣೆಗೆ ಮಹಾರಾಷ್ಟ್ರ ಸಿಎಂ ವಿರೋಧ

• ಉದಯವಾಹಿನಿ, ಬೆಂಗಳೂರು

ಇಲ್ಲಿನ ಶಿವಾಜಿನಗರ ಮೆಟ್ರೋ ನಿಲ್ದಾಣದ ಹೆಸರು ಬದಲಾವಣೆಗೆ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ವಿರೋಧ ವ್ಯಕ್ತಪಡಿಸಿದ್ದಾರೆ. ಕರ್ನಾಟಕದ ಕಾಂಗ್ರೆಸ್ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಇತ್ತೀಚೆಗೆ ಸೇಂಟ್ ಮೇರಿಸ್ ಬೆಸಿಲಿಕಾದಲ್ಲಿ ನಡೆದ ವಾರ್ಷಿಕ ಹಬ್ಬದ ಸಂದರ್ಭದಲ್ಲಿ ಮಾಡಿದ ವಿನಂತಿಯ ಮೇರೆಗೆ ಬೆಂಗಳೂರಿನ ಶಿವಾಜಿನಗರ ಮೆಟ್ರೋ ನಿಲ್ದಾಣವನ್ನು ಸೇಂಟ್ ಮೇರಿ ಎಂದು ಮರುನಾಮಕರಣ ಮಾಡಲು ಸರ್ಕಾರ ಪರಿಗಣಿಸುವುದಾಗಿ ಸಿಎಂ ಸಿದ್ದರಾಮಯ್ಯ ಭರವಸೆ ನೀಡಿದ್ದರು. ಈ ವಿಚಾರವಾಗಿ ಸುದ್ದಿಗಾರರೊಂದಿಗೆ ಮಾತನಾಡಿದ ಫಡ್ನವೀಸ್, ಬೆಂಗಳೂರಿನ ಶಿವಾಜಿನಗರ ಮೆಟ್ರೋ ನಿಲ್ದಾಣವನ್ನು ಸೇಂಟ್ ಮೇರಿ ಎಂದು ಮರುನಾಮಕರಣ ಮಾಡಿದ ಕರ್ನಾಟಕ ಸರ್ಕಾರದ



ಕ್ರಮವನ್ನು ನಾನು ಖಂಡಿಸುತ್ತೇನೆ. ಇದು ಛತ್ರಪತಿ ಶಿವಾಜಿ ಮಹಾರಾಜರಿಗೆ ಮಾಡಿದ ಅವಮಾನ ಎಂದು ತಿಳಿಸಿದ್ದಾರೆ.

ನೆಹರೂ ಅವರ ಕಾಲದಿಂದಲೂ ಕಾಂಗ್ರೆಸ್ ಮರಾಠಾ ಯೋಧ ರಾಜನನ್ನು ಅವಮಾನಿಸುವ ಸಂಪ್ರದಾಯವನ್ನು ಮುಂದುವರೆಸಿದೆ. ನೆಹರೂ ಅವರು ತಮ್ಮ ಡಿಸ್ಕವರಿ ಆಫ್ ಇಂಡಿಯಾ' ಪುಸ್ತಕದಲ್ಲಿ ಶಿವಾಜಿ ಮಹಾರಾಜರ ವಿರುದ್ಧ ಹೇಳಿಕೆ ನೀಡಿದ್ದಾರೆ. ಧರ್ಮವನ್ನು ಆಧರಿಸಿದ ಮತ್ತು ಮರಾಠಾ ಯೋಧ ರಾಜನ ವಿರುದ್ಧದ ನಿರ್ಧಾರವನ್ನು ಸಿದ್ದರಾಮಯ್ಯ ಮುಂದುವರಿಸದಂತೆ ದೇವರು ಅವರಿಗೆ ಬುದ್ಧಿ ನೀಡಲಿ ಎಂದು ಪ್ರಾರ್ಥಿಸುತ್ತಿದ್ದೇನೆ ಎಂದು ಫಡ್ನವೀಸ್ ಬೇಸರ ವ್ಯಕ್ತಪಡಿಸಿದ್ದಾರೆ. ನೇಪಾಳದಲ್ಲಿ ಪ್ರಸ್ತುತ ನಡೆಯುತ್ತಿರುವ ಮತ್ತು ಶ್ರೀಲಂಕಾ ಹಾಗೂ ಬಾಂಗ್ಲಾದೇಶದಲ್ಲಿ ಕಂಡು ಬಂದಂತಹ ನಾಗರಿಕ ಅಶಾಂತಿಯನ್ನು ಭಾರತವೂ ಎದುರಿಸಬಹುದು ಎಂಬ ಕೆಲವು ವಿರೋಧ ಪಕ್ಷದ ನಾಯಕರ ಹೇಳಿಕೆಗಳಿಗೆ ಪ್ರತಿಕ್ರಿಯಿಸಿದ ಫಡ್ನವೀಸ್, ನೀವು ಸರ್ಕಾರದ ಕಾರ್ಯಕ್ರಮಗಳು ಮತ್ತು ನೀತಿಗಳನ್ನು ಟೀಕಿಸಬಹುದು. ಆದರೆ, ಸಮಾಜ ಮತ್ತು ದೇಶವನ್ನು ಅಲ್ಲ ಎಂದು ತಿಳಿಸಿದ್ದಾರೆ.

# ಗ್ರೇಟರ್ ಬೆಂಗಳೂರು ಚುನಾವಣೆ: ಪಕ್ಷದ ಶಾಸಕರು, ಸಚಿವರಿಗೆ ಸೂಚನೆ

### ಮೂಲಸೌಕರ್ಯದ ಕೊರತೆ, ರಸ್ತೆ ಗುಂಡಿ, ಟ್ರಾಫಿಕ್ ದಟ್ಟಣೆ ಮುಂತಾದ ಸಮಸ್ಯೆಗಳ ಕುರಿತು ಚರ್ಚೆ

• ಉದಯವಾಹಿನಿ, ಬೆಂಗಳೂರು

ಹೊಸದಾಗಿ ಅಸ್ತಿತ್ವಕ್ಕೆ ಬಂದಿರುವ ಗ್ರೇಟರ್ ಬೆಂಗಳೂರು ಪ್ರಾಧಿಕಾರದಡಿ ಬೆಂಗಳೂರಿನ ಜನತೆಗೆ ಉತ್ತಮ ಆಡಳಿತದ ಜತೆಗೆ ಅಭಿವೃದ್ಧಿ ಕಾರ್ಯಗಳಿಗೂ ಒತ್ತು ನೀಡಬೇಕು. ಮುಂದೆ ನಡೆಯುವ ಚುನಾವಣೆಯಲ್ಲಿ ಐದು ಪಾಲಿಕೆಯಲ್ಲಿ ಪಕ್ಷ ಗೆಲುವು ಸಾಧಿಸುವ ರೀತಿಯಲ್ಲಿ ಕಾರ್ಯ ನಿರ್ವಹಿಸಬೇಕು ಎಂದು ಬೆಂಗಳೂರಿನ ಸಚಿವರು, ಕಾಂಗ್ರೆಸ್ ಶಾಸಕರಿಗೆ ಸೂಚಿಸಿರುವ ಸಿದ್ದರಾಮಯ್ಯ ಅವರು, ನಗರದ ಅಭಿವೃದ್ಧಿಗೆ ಅಗತ್ಯವಿರುವ ಅನುದಾನ ಒದಗಿಸುವ ಭರವಸೆಯನ್ನೂ ನೀಡಿದ್ದಾರೆ. ವಿಧಾನಸೌಧದಲ್ಲಿ ಬೆಂಗಳೂರಿನ ಸಚಿವರು, ಪಕ್ಷದ ಶಾಸಕರೊಂದಿಗೆ ಸಭೆ ನಡೆಸಿದ ಸಿಎಂ, ಶಾಸಕರ ನಿರೀಕ್ಷೆ, ಬೆಂಗಳೂರಿನ ಸಮಸ್ಯೆ, ಸವಾಲು ಹಾಗೂ ಅಭಿವೃದ್ಧಿ ಕುರಿತಂತೆ ಸಮಾಲೋಚಿಸಿದರು.

ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆಯಾದ ಬಳಿಕ ಜನರಿಗೆ ಸಾಕಷ್ಟು ನಿರೀಕ್ಷೆಗಳಿವೆ. ನಾಗರಿಕ ಸೇವೆ-ಸೌಲಭ್ಯಗಳ ಜತೆಗೆ ಮೂಲಸೌಕರ್ಯವೂ ವೃದ್ಧಿಸುವ ಅಪೇಕ್ಷೆಯಲ್ಲಿದ್ದಾರೆ. ಆ ಹಿನ್ನೆಲೆಯಲ್ಲಿ ಸುಧಾರಿತ ಆಡಳಿತ ಸೇವೆ ಸಿಗುವಂತಾಗಬೇಕು. ಪಾಲಿಕೆಯಲ್ಲಿ ಜನಪ್ರತಿನಿಧಿಗಳಿಲ್ಲದ ಕಾರಣ ಜನರ ಸಮಸ್ಯೆ ಹಾಗೂ ನಿರೀಕ್ಷೆಗಳಿಗೆ ಸ್ಪಂದಿಸುವ ಮೂಲಕ ನೆರವಾಗಬೇಕು




ಉದಯವಾಹಿನಿ ಚಿತ್ರ

ಎಂದು ಸಿಎಂ ಸೂಚಿಸಿದ್ದಾರೆ ಎಂದು ಗೊತ್ತಾಗಿದೆ.

**ಪಾಲಿಕೆ ಚುನಾವಣೆ ಬಗ್ಗೆ ಚರ್ಚೆ:** ಹೊಸದಾಗಿ ರಚನೆಯಾಗಿರುವ 5 ಪಾಲಿಕೆಗಳ ಚುನಾವಣೆ ಬಗ್ಗೆಯೂ ಸಭೆಯಲ್ಲಿ ಚರ್ಚೆಯಾಯಿತು. ಎಲ್ಲಾ ಪಾಲಿಕೆಗಳಲ್ಲೂ ಕಾಂಗ್ರೆಸ್ ಅಧಿಕಾರ ಹಿಡಿಯುವ ನಿಟ್ಟಿನಲ್ಲಿ ಈಗಿನಿಂದಲೇ ಎಲ್ಲಾರೂ ಸಂಘಟಿತವಾಗಿ ಕಾರ್ಯ ನಿರ್ವಹಿಸಬೇಕು. ಸರಕಾರ ಜಿಬಿಎ ಪ್ರಾಧಿಕಾರದ ಸುಧಾರಣಾ ಕ್ರಮಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸಿ ವಿಶ್ವಾಸ ಹೆಚ್ಚಿಸಿಕೊಳ್ಳಲು ಒತ್ತು ನೀಡುವ ಬಗ್ಗೆಯೂ ಸಮಾಲೋಚನೆ ನಡೆಯಿತು ಎನ್ನಲಾಗಿದೆ.

ಬೆಂಗಳೂರು ಉಸ್ತುವಾರಿ ಸಚಿವರಾದ



**ಪಾಲಿಕೆಗಳ ಉಸ್ತುವಾರಿಗೆ ಒತ್ತು**

**ಬೆಂಗಳೂರು ಪೂರ್ವ ಪಾಲಿಕೆಗೆ ಕೃಷ್ಣ ಬೈರೇಗೌಡ, ಪಶ್ಚಿಮಕ್ಕೆ ಬಿ.ಎಸ್. ಸುರೇಶ್, ಉತ್ತರಕ್ಕೆ ಕೆ.ಜೆ. ಜಾರ್ಜ್, ದಕ್ಷಿಣಕ್ಕೆ ರಾಮಲಿಂಗಾರೆಡ್ಡಿ ಹಾಗೂ ಬೆಂಗಳೂರು ಕೇಂದ್ರ ಪಾಲಿಕೆಗೆ ದಿನೇಶ್ ಗುಂಡೂರಾವ್, ಜಮೀರ್ ಅಹಮದ್ ಖಾನ್ ಅವರನ್ನು ಪಕ್ಷದ ವತಿಯಿಂದ ಉಸ್ತುವಾರಿಯನ್ನಾಗಿ ನೇಮಿಸಲಾಗಿದೆ. ಸುಗಮ ಆಡಳಿತ ವ್ಯವಸ್ಥೆ ಕಲ್ಪಿಸಲು ಸಚಿವರು ಸಂಬಂಧಪಟ್ಟ ಪಾಲಿಕೆಗಳಲ್ಲಿ ನಿರಂತರವಾಗಿ ಮೇಲ್ವಿಚಾರಣೆ ನಡೆಸುವಂತೆಯೂ ಸಿಎಂ ಸೂಚನೆ ನೀಡಿದ್ದಾರೆ.**

ಡಿಕೆಶಿ ಸೇರಿದಂತೆ ಬೆಂಗಳೂರಿನ ಸಚಿವರು, ಶಾಸಕರು ಪಾಲ್ಗೊಂಡಿದ್ದರು. ಸಚಿವ ಕೆ.ಜೆ. ಜಾರ್ಜ್ ಅವರು ಗೈರಾಗಿದ್ದರು. ಬಿಜೆಪಿಯಿಂದ ಉಚ್ಚಾಟನೆಗೊಂಡಿರುವ ಶಾಸಕ ಎಸ್.ಟಿ. ಸೋಮಶೇಖರ್ ಭಾಗವಹಿಸಿದ್ದರು.


**ಬೆಂಗಳೂರಿನಲ್ಲಿ ಮೂಲಸೌಕರ್ಯದ ಕೊರತೆ, ರಸ್ತೆ ಗುಂಡಿ, ಟ್ರಾಫಿಕ್ ದಟ್ಟಣೆ ಸೇರಿದಂತೆ ಇತರೆ ಸಮಸ್ಯೆಗಳ ಬಗ್ಗೆ ಹಲವು ಶಾಸಕರು ಪ್ರಸ್ತಾಪಿಸಿದರು. ಮಳೆಗಾಲದಲ್ಲಿ ಉಂಟಾಗಬಹುದಾದ ಅನಾಹುತಗಳ ತಡೆಗೆ ಕೈಗೊಳ್ಳಬೇಕಾದ ಕ್ರಮಗಳು, ರಸ್ತೆಗಳ ಅಭಿವೃದ್ಧಿ, ಬೆಂಗಳೂರಿನ ಅಭಿವೃದ್ಧಿಗೆ ಸಂಬಂಧಪಟ್ಟ ಇಲಾಖೆ, ಸಂಸ್ಥೆಗಳ ನಡುವೆ ಸಮನ್ವಯದ ಕುರಿತಂತೆಯೂ ಚರ್ಚೆಯಾಯಿತು ಎಂದು ಗೊತ್ತಾಗಿದೆ. ಶಾಸಕರ ಅಭಿಪ್ರಾಯ, ಅಳಲು ಆಲಿಸಿದ ಸಿಎಂ ಬೆಂಗಳೂರಿನ ವರ್ಚಸ್ಸು ಹೆಚ್ಚಿಸುವ ನಿಟ್ಟಿನಲ್ಲಿ ಅಗತ್ಯವಿರುವ ಎಲ್ಲಾ ರೀತಿಯ ನೆರವು, ಅನುದಾನ ಒದಗಿಸಲಾಗುವುದು. ಸಚಿವರು, ಶಾಸಕರೆಲ್ಲಾ ಒಟ್ಟಾಗಿ ಕಾರ್ಯ ನಿರ್ವಹಿಸಿ ಪಕ್ಷ ಹಾಗೂ ಸರಕಾರದ ವರ್ಚಸ್ಸು ಹೆಚ್ಚಿಸುವ ಜತೆಗೆ ಬೆಂಗಳೂರಿನಲ್ಲಿ ಆಡಳಿತ ವ್ಯವಸ್ಥೆಯಲ್ಲಿ ಹೊಸ ಬದಲಾವಣೆ ತರಲು ಪ್ರಯತ್ನಿಸುವಂತೆ ಸಿಎಂ ಸೂಚಿಸಿದ್ದಾರೆ.**

## ಶಾಲಾ ಮಕ್ಕಳೊಂದಿಗೆ 501 ಗಿಡ ನೆಡುವ ಕಾರ್ಯಕ್ರಮ

• ಉದಯವಾಹಿನಿ, ಕೆ.ಆರ್.ಪುರ

ಭವಿಷ್ಯದ ಮಕ್ಕಳಿಗೆ ಶುದ್ಧ ಗಾಳಿ ನೀರು ದೊರೆಯುವುದೆ ಇಂದು ದುರ್ಬಲವಾಗಿದೆ ಎಂದು ಮಹದೇವಪುರ ಟಾಸ್ಕ್ ಫೋರ್ಸ್ ಪಡೆಯ ಆರೋಗ್ಯ ವಿಪತ್ತು ಘಟಕದ ಅಧ್ಯಕ್ಷ ಎಸ್. ಮಾರಪ್ಪ ಹೇಳಿದರು. ಮಹದೇವಪುರ ಕ್ಷೇತ್ರದ ಕಾಡುಗುಡಿ ಎಕೆಜಿ ಕಾಲೋನಿ ಸರ್ಕಾರಿ ಶಾಲಾ ಅಂಗದಲ್ಲಿ ಮಿಡಿತ ಫೌಂಡೇಷನ್, ಭಾರತೀಯ ಸ್ತ್ರೀ ಶಕ್ತಿ ಸಂಘಟನಾ ಟ್ರಸ್ಟ್ ಆಯೋಜಿಸಿದ ಶಾಲಾ ಮಕ್ಕಳೊಂದಿಗೆ 501 ಗಿಡ ನೆಡುವ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮತನಾಡಿದ ಅವರು.

ಕಾಡು, ವನ್ಯಜೀವಿಗಳ ಉಳಿವಿನಿಂದ ಪರಿಸರ ಸುಭದ್ರವಾಗಿರುತ್ತದೆ. ಪರಿಸರ ಉಳಿವಿಗೆ ಹೆಚ್ಚು ಗಿಡಮರಗಳು ನೆಟ್ಟು ಬೆಳಸಿ, ಪೋಷಿಸಿದಾಗ ಮಾತ್ರ ಮುಂದಿನ ದಿನಗಳಲ್ಲಿ ಉತ್ತಮ ಗುಣಮಟ್ಟದ ವಾಯು, ಜಲ ಸಿಗಲು ಸಾಧ್ಯ ಎಂದರು. ಬಿಜೆಪಿ


ಉದಯವಾಹಿನಿ ಚಿತ್ರ

ಪರಿಷತ್ ಸದಸ್ಯ ಎಲ್. ರಾಜೇಶ್ ಮಾತನಾಡಿ, ಕಾಂಕ್ರೀಟಿಕಾರಣದ ಪ್ರಭಾವದಿಂದ ಪರಿಸರಕ್ಕೆ ಧಕ್ಕೆ ಉಂಟಾಗಿ, ತಾಪಮಾನ- ಮಾಲಿನ್ಯ ಹೆಚ್ಚಿ ಮರಗಳು ನಾಶವಾಗುತ್ತಿರುವ ಕಾರಣ ಪರಿಸರಕ್ಕೆ ಮತ್ತು ಆರೋಗ್ಯಕ್ಕೆ ಗಂಡಾಂತರ ಎದುರಾಗಿದೆ. ಇದನ್ನು ಸರಿಪಡಿಸಲು ಮಗುವಿಗೊಂದು ಗಿಡ ಎಂಬಂತೆ ಪ್ರತಿಯೊಬ್ಬರು ತಲೆಗೊಂದು ಗಿಡ ನೆಟ್ಟು ಘೋಷಿಸುವ ಅವಶ್ಯಕವಿದೆ ಎಂದು ನುಡಿದರು.

ಕಾರ್ಯಕ್ರಮದ ನೇತೃತ್ವವಹಿಸಿ ಮಾತನಾಡಿದ ಪರಿಸರ ಮಂಜು, ಶಾಲೆಯ ಸುತ್ತಮುತ್ತಲ್ಲು 1ಎಕ್ಕರೆ ಖಾಲಿಯಿದ ಸ್ಥಳದಲ್ಲಿ ಮಕ್ಕಳೊಂದಿಗೆ ಕಿರು ಅರಣ್ಯ ನಿರ್ಮಿಸಲಾಗಿದೆ, ಇದರಿಂದ ಮಕ್ಕಳು ಗಿಡಗಳ ಬಗ್ಗೆ ತಿಳಿದು, ಪರಿಸರದ ಬಗ್ಗೆ ಹೆಚ್ಚಿನ ಒಲವು ಮೂಡಿದಂತಂದಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಭಾರತೀಯ ಸ್ತ್ರೀ ಶಕ್ತಿ ಸಂಘಟನಾ ಟ್ರಸ್ಟಿನ ರಾಜ್ಯಾಧ್ಯಕ್ಷೆ ಭಾಗ್ಯಸರ್ವನ್, ಭೀಮ್ ಪ್ರಜಾ ಸಂಘದ ರಾಜ್ಯಾಧ್ಯಕ್ಷ ವೈಟ್ ಫೀಲ್ಡ್ ಮುರುಗೇಶ್, ಶಾಲಾ ಮುಖ್ಯಶಿಕ್ಷಕಿ ಪ್ರೇಮಾ ಕುಮಾರಿ, ಸೇರಿದಂತೆ ಸ್ಥಳೀಯ ಮುಖಂಡರು ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಪರಪ್ಪನ ಅಗ್ರಹಾರ ಜೈಲಿನ ವಾರ್ಡನ್‌ಬಂಧನ

• ಉದಯವಾಹಿನಿ, ಬೆಂಗಳೂರು

ಕಾರಾಗೃಹದಲ್ಲಿರುವ ವಿಚಾರಣಾಧೀನ ಹಾಗೂ ಸಜಾ ಕೈದಿಗಳಿಗೆ ಕದ್ದುಮುಚ್ಚಿ ಮೊಬೈಲ್ ಪೂರೈಕೆ ಸೇರಿದಂತೆ ಇತ್ತೀಚಿಗಿನ ನಟ ದರ್ಶನ್‌ಗೆ ದೊರಕುತ್ತಿದ್ದ ರಾಜಾತಿಥ್ಯ ವಿಚಾರವಾಗಿ ಪರಪ್ಪನ ಅಗ್ರಹಾರ ಸಾಕಷ್ಟು ಸುದ್ದಿಗೆ ಗ್ರಾಸವಾಗಿತ್ತು. ಇದೀಗ ಪರಪ್ಪನ ಅಗ್ರಹಾರ ಮತ್ತೆ ಸುದ್ದಿಯಲ್ಲಿದ್ದು ಜೈಲು ವಾರ್ಡನ್‌ನಿಂದಲೇ ಕೈದಿಗಳಿಗೆ ಮಾದಕ ವಸ್ತುಗಳ ಪೂರೈಕೆ ಮಾಡಲಾಗಿದೆ ಎಂಬುದು ಬಹಿರಂಗಗೊಂಡಿದೆ.

ಕೈದಿಗಳಿಗೆ ಮಾದಕ ವಸ್ತುಗಳ ಪೂರೈಕೆ ಮಾಡಿದ್ದ ಜೈಲಿನ ವಾರ್ಡನ್ ಕಲ್ಲಪ್ಪ ಹೆಚ್ ಅಬಾಚಿ ಎಂಬಾತನನ್ನು ಬಂಧನಕ್ಕೊಳಪಡಿಸಲಾಗಿದೆ. ಈತನಿಂದ 1 ಲಕ್ಷ ರೂ. ಮೌಲ್ಯದ 100 ಗ್ರಾಂ ಆಶಿಶ್ ಆಯಿಲ್ ಜಪ್ತಿ ಮಾಡಲಾಗಿದೆ. ಮಾಜಿ ಸೈನಿಕನಾಗಿರುವ ಕಲ್ಲಪ್ಪ, ಭಾರತೀಯ ಸೇನೆಯಿಂದ ಸ್ವಯಂಪ್ರೇರಿತ ನಿವೃತ್ತಿ



**ರಾತ್ರಿ ಜೈಲಿನ ಡ್ಯೂಟಿಗೆ ಬರುವ ವೇಳೆ ಸಿಐಎಸ್‌ಎಫ್ ಸಿಬ್ಬಂದಿಗಳಿಂದ ಪ್ರವೇಶ ದ್ವಾರದ ಬಳಿ ಕಲ್ಲಪ್ಪ ಅವರನ್ನು ಪರಿಶೀಲನೆ ಮಾಡಲಾಗಿದ್ದು, ಈ ವೇಳೆ ಜೇಬಿನಲ್ಲಿ ತಂಬಾಕು, ಆಶಿಶ್ ಆಯಿಲ್ ಪತ್ತೆ ಆಗಿದೆ. ಬಳಿಕ ಕಲ್ಲಪ್ಪನನ್ನು ಬಂಧಿಸಿದ ಪೊಲೀಸರು ಆತನಿಂದ 100 ಗ್ರಾಂ ಆಶಿಶ್ ಆಯಿಲ್ ಜಪ್ತಿ ಮಾಡಿದ್ದಾರೆ.**

ಪಡೆದು 2018 ರಲ್ಲಿ ಮಾಜಿ ಸೈನಿಕ ಕೋಟಾದಡಿಯಲ್ಲಿ ಕಾರಾಗೃಹ ಸೇವೆಗೆ ಸೇರ್ಪಡೆಗೊಂಡಿದ್ದ. ಈತ ಈ ಹಿಂದೆ ಧಾರವಾಡ ಜೈಲಿನಲ್ಲಿ ವಾರ್ಡರ್ ಆಗಿ ಸೇವೆ ಸಲ್ಲಿಸಿದ್ದು, ಮೂರು ತಿಂಗಳ ಹಿಂದಷ್ಟೇ ಬೆಂಗಳೂರು ಕೇಂದ್ರ ಕಾರಾಗೃಹಕ್ಕೆ ವರ್ಗಾವಣೆಗೊಂಡಿದ್ದ ಎಂದು ತಿಳಿದುಬಂದಿದೆ.

## ಹಿರಿಯ ನಾಗರಿಕರ ಕಾಯ್ದೆಯಡಿ 10,000 ರೂ. ಮಿತಿ ಪರಿಷ್ಕರಿಸುವಂತೆ ಕೇಂದ್ರಕ್ಕೆ ಹೈಕೋರ್ಟ್ ಶಿಫಾರಸು

• ಉದಯವಾಹಿನಿ, ಬೆಂಗಳೂರು

ದೇಶಾದ್ಯಂತ ವೃದ್ಧರಿಗೆ ಪ್ರಯೋಜನಕಾರಿಯಾದ ಕ್ರಮದಲ್ಲಿ, ಜೀವನ ವೆಚ್ಚದಲ್ಲಿನ ಹೆಚ್ಚಳವನ್ನು ಪರಿಗಣಿಸಿ, ಪೋಷಕರು ಮತ್ತು ಹಿರಿಯ ನಾಗರಿಕರ ನಿರ್ವಹಣೆ ಮತ್ತು ಕಲ್ಯಾಣ ಕಾಯ್ದೆ 2007ರ ಸೆಕ್ಷನ್ 9 ಅನ್ನು ಮರುಪರಿಶೀಲಿಸುವಂತೆ ಕರ್ನಾಟಕ ಹೈಕೋರ್ಟ್ ಕೇಂದ್ರಕ್ಕೆ ಶಿಫಾರಸು ಮಾಡಿದೆ.

ಇಷ್ಟು ಕಡಿಮೆ ನಿರ್ವಹಣೆಯು ಕಾಯ್ದೆಯ ಉದ್ದೇಶಗಳನ್ನು ಈಡೇರಿಸಬಹುದೇ ಸೆಕ್ಷನ್ 9 ರ ಮಿತಿಯೊಳಗೆ ನಾಗರಿಕನು ಘನತೆ, ಜೀವನಾಧಾರ ಮತ್ತು ವೈದ್ಯಕೀಯ ಸಹಾಯವನ್ನು ಪಡೆಯಬಹುದೇ ಈ ಬಗ್ಗೆ ಚಿಂತನೆಯ ಅಗತ್ಯವಿದೆ. ಇಲ್ಲದಿದ್ದರೆ ಆ ಹಿರಿಯ ನಾಗರಿಕರ ಅಸ್ತಿತ್ವವನ್ನು ಕೇವಲ ಪ್ರಾಣಿಗಳ ಮಟ್ಟಕ್ಕೆ ಇಳಿಸುತ್ತದೆ ಎಂದು ಹೈಕೋರ್ಟ್ ಕಿಡಿ ಕಾರಿದೆ.




**ಈ ನ್ಯಾಯಾಲಯವು ಕೇಂದ್ರ ಸರ್ಕಾರ, ಸೆಕ್ಷನ್ 9 ಅನ್ನು ಮರುಪರಿಶೀಲಿಸುವಂತೆ ಮತ್ತು ಜೀವನ ವೆಚ್ಚ ಸೂಚ್ಯಂಕಕ್ಕೆ ಅನುಗುಣವಾಗಿ ಮಿತಿಯನ್ನು ಪರಿಷ್ಕರಿಸುವಂತೆ ಶಿಫಾರಸು ಮಾಡುವುದು ಸೂಕ್ತವೆಂದು ಪರಿಗಣಿಸುತ್ತದೆ. ವೃದ್ಧಾಪ್ಯದಲ್ಲಿ ಘನತೆಯ ಜೀವನ ಖಾತರಿಪಡಿಸಿಕೊಳ್ಳಬೇಕು ಎಂದು ಹೇಳಿದೆ. ಈ ಕಾಯ್ದೆ ಜಾರಿಗೆ ಬಂದು 18 ವರ್ಷವಾದರೂ ಮಿತಿಯನ್ನು ಹೆಚ್ಚಿಸಲಾಗಿಲ್ಲ. 2007-08ರಲ್ಲಿ, ವೆಚ್ಚ ಹಣದುಬ್ಬರ ಸೂಚ್ಯಂಕವು 129 ರಷ್ಟಿತ್ತು; ಅದು 363 ಕ್ಕೆ ಏರಿದೆ. ಹೀಗಾಗಿ, 2007ರಲ್ಲಿ 100 ರೂ.ಗೆ ಖರೀದಿಸಬಹುದಾದ ವಸ್ತು ಖರೀದಿಸಲು ಈಗ 1,000 ರೂ.ಗಳ ಅಗತ್ಯವಿದೆ ಎಂದು ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರು ತೀವ್ರ ಅಸಮಾಧಾನವ ವ್ಯಕ್ತಪಡಿಸಿದರು.**

ಈ ನ್ಯಾಯಾಲಯವು ಶಾಸನ ಮಾಡಲು ಸಾಧ್ಯವಿಲ್ಲ; ಇದು ಸೆಕ್ಷನ್ 9 ಅನ್ನು ಪುನಃ ಬರೆಯಲು ಸಾಧ್ಯವಿಲ್ಲ. ಆದರೆ 2007 ರಲ್ಲಿ ಅರ್ಥಪೂರ್ಣವಾಗಿದ್ದ ಈ ನಿಬಂಧನೆಯು ಈಗ 2025 ರಲ್ಲಿ ಅದನ್ನು ಅಣಕಿಸುವಂತಿದೆ ಎಂದ ಹೈಕೋರ್ಟ್, ಕೇಂದ್ರ ಸರ್ಕಾರ ಸಂವೇದನಾಶೀಲಗೊಳಿಸುವ ಜವಾಬ್ದಾರಿಯನ್ನು ಹೊಂದಿದೆ ಎಂದು ಹೇಳಿದೆ.

ಆಹಾರ, ವಸತಿ, ಔಷಧ ಬೆಲೆ ಏರಿಕೆಯಾಗಿದೆ ಎಂದು ನ್ಯಾಯಾಲಯ ತಿಳಿಸಿದೆ.

## ABVP ಕಾರ್ಯಕ್ರಮದಲ್ಲಿ ಭಾಗಿಯಾದ ವಿಚಾರ: ಪರಂ ಹೇಳಿದ್ದೇನು

• ಉದಯವಾಹಿನಿ, ಬೆಂಗಳೂರು

ನಾನು ಎಬಿವಿಪಿ ಕಾರ್ಯಕ್ರಮದಲ್ಲಿ ಭಾಗಿಯಾಗಿಲ್ಲ. ಐ ಯಾಮ್ ಎ ಟ್ರೂ ಕಾಂಗ್ರೆಸ್ ಮ್ಯಾನ್ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಬಿಜೆಪಿ ಬೆಂಬಲಿತ ವಿದ್ಯಾರ್ಥಿ ಸಂಘಟನೆಯಾದ ಅಖಿಲ ಭಾರತ ವಿದ್ಯಾರ್ಥಿ ಪರಿಷತ್ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ಪರಮೇಶ್ವರ್ ವಿವಾದಕ್ಕೆ ಕಾರಣವಾಗಿದ್ದಾರೆ.

ಈ ಕುರಿತು ಸದಾಶಿವನಗರದ ತಮ್ಮ ನಿವಾಸದ ಬಳಿ ಪ್ರತಿಕ್ರಿಯಿಸಿದ ಪರಮೇಶ್ವರ್, ನಾನು ಎಬಿವಿಪಿ ಕಾರ್ಯಕ್ರಮದಲ್ಲಿ ಭಾಗಿಯಾಗಿಲ್ಲ. ನಾನು ದಾರಿಯಲ್ಲಿ ಬರುತ್ತಿದ್ದೆ. ಅಲ್ಲಿ ರಾಣಿ ಅಬ್ಬಕ್ಕ ಮೆರವಣಿಗೆ ಹೊರಟಿತ್ತು. ಅಬ್ಬಕ್ಕನಿಗೆ ಹೂ ಹಾಕಿದ್ದೇವಷ್ಟೇ.

ಈ ವೇಳೆ ಶಾಸಕ ಷಡಕ್ಷರಿ ನಾನೂ ಒಟ್ಟಿಗೆ ಇದ್ದೆವು. ನಾನು ಯಾವ ಎಬಿವಿಪಿ ಕಾರ್ಯಕ್ರಮವನ್ನೂ ಅಟೆಂಡ್ ಮಾಡಿಲ್ಲ ಎಂದು ಸ್ಪಷ್ಟನೆ ನೀಡಿದರು. ವಿವಾದ ಮಾಡುವುದಾದರೆ ಮಾಡಿಕೊಳ್ಳಲಿ. ನನಗೇನೂ ತೊಂದರೆ ಇಲ್ಲ. ನಾನು


ಉದಯವಾಹಿನಿ ಚಿತ್ರ

ನನ್ನ ಐಡಿಯಾಲಜಿಗೆ ಬದ್ಧತೆ ಇರುವವನು. ಅದನ್ನು ಯಾರೂ ಪ್ರಶ್ನೆ ಮಾಡುವ ಹಾಗಿಲ್ಲ.

ಐ ಯಾಮ್ ಎ ಟ್ರೂ ಕಾಂಗ್ರೆಸ್ ಮ್ಯಾನ್. ಐ ಆಮ್ ಎ ಡೈ ಹಾರ್ಡ್ ಕಾಂಗ್ರೆಸ್ ಮ್ಯಾನ್. ನಮಗೂ ರಾಜಕೀಯ ವಿರೋಧಿಗಳು ಇರುತ್ತಾರೆ. ಅವರು ಏನು ಬೇಕಾದರೂ ಮಾಡುತ್ತಿರಬಹುದು. ಪಕ್ಷದ ಒಳಗೆ, ಹೊರಗೂ ಇರಬಹುದು. ಇಂತಹ ಚೀಪ್ ಟ್ರಿಕ್ಸ್

**ಇದೇ ವಿಚಾರವಾಗಿ ಪ್ರತಿಕ್ರಿಯಿಸಿದ ಕೆಪಿಸಿಸಿ ಅಧ್ಯಕ್ಷರು ಆಗಿರುವ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಈ ವಿವಾದದ ಬಗ್ಗೆ ನನಗೇನೂ ಗೊತ್ತಿಲ್ಲ. ಮಾಹಿತಿ ಪಡೆದು ಮಾತನಾಡುತ್ತೇನೆ ಎಂದು ಹೇಳಿದರು. ಇತ್ತೀಚೆಗೆ ಡಿಕೆ ಶಿವಕುಮಾರ್ ಕೂಡಾ ವಿಧಾನಸಭೆಯಲ್ಲಿ ಆರ್ ಎಸ್ ಎಸ್ ಪ್ರಾರ್ಥನಾ ಗೀತೆ ಹಾಡುವ ಮೂಲಕ ವಿವಾದಕ್ಕೆ ಗುರಿಯಾಗಿದ್ದರು. ಇದಕ್ಕೆ ಪಕ್ಷದೊಳಗೆ ತೀವ್ರ ಟೀಕೆಗಳು ಕೇಳಿಬಂದ ನಂತರ ಕ್ಷಮೆಯಾಚಿಸಿದ್ದರು.**

ಜನರಿಗೆ ಗೊತ್ತಾಗುತ್ತದೆ. ಪರಮೇಶ್ವರ್ ಏನು ಅಂತ ಇಡೀ ರಾಜ್ಯಕ್ಕೆ ಗೊತ್ತು. ಕಳೆದ 35 ವರ್ಷಗಳಿಂದ ರಾಜಕೀಯದಲ್ಲಿದ್ದೇನೆ. ರಾಜಕೀಯ ಏನು ಅಂತ ನನಗೂ ಗೊತ್ತಿದೆ. ನಾನು ಅದನ್ನು ಪದೇ ಪದೇ ಸಾಬೀತು ಮಾಡಬೇಕಿಲ್ಲ ಎಂದರು.

## ಹುತಾತ್ಮರಿಗೆ 50 ಲಕ್ಷ ರೂ. ಪರಿಹಾರ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ವೀರಪ್ಪನ್ ವಿರುದ್ಧ ಕಾರ್ಯಾಚರಣೆ, ಕಳ್ಳಬೇಟೆಗಾರರ ಹತ್ತಿಕ್ಕುವ ವೇಳೆ, ಕಾಡ್ಗಿಚ್ಚು ನಂದಿಸುವ ವೇಳೆ, ಮಾನವ ಪ್ರಾಣಿಗಳ ಸಂಘರ್ಷದ ವೇಳೆ ಬಲಿಯಾದವರಿಗೆ 50 ಲಕ್ಷ ರೂ. ಪರಿಹಾರ ನೀಡುವುದಾಗಿ ಸಚಿವ ಈಶ್ವರ್ ಖಂಡ್ರೆ ಹೇಳಿದ್ದಾರೆ. ಮಲ್ಲೇಶ್ವರಂನ ಅರಣ್ಯ ಭವನದಲ್ಲಿ ಹುತಾತ್ಮರ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, 62 ಜನ ಹುತಾತ್ಮರಾಗಿದ್ದಾರೆ. ಹುತಾತ್ಮರಾದವರಿಗೆ 50 ಲಕ್ಷ ಪರಿಹಾರ ನೀಡಲಿದ್ದೇವೆ ಎಂದು ಭರವಸೆ ನೀಡಿದರು. ಈಗ ಹವಾಮಾನ ಬದಲಾವಣೆ ದೊಡ್ಡ ಮಟ್ಟದ ಸಮಸ್ಯೆಯಾಗುತ್ತಿದೆ. ಏಕಾಏಕಿ ಮೇಘಸ್ಫೋಟ, ಅತಿಯಾದ ಮಳೆ ಬರುತ್ತಿದೆ. ಮನುಕುಲವೇ ನಾಶವಾಗುವ ಪರಿಸ್ಥಿತಿ ಉಂಟಾಗುತ್ತಿದೆ.

# ಸುರಂಗ ಮಾರ್ಗಕ್ಕೆ ಹಸಿರು ನ್ಯಾಯಮಂಡಳಿಯಿಂದ ನೋಟಿಸ್

### ಸಿಲ್ಕ್ ಬೋರ್ಡ್‌ವರೆಗೆ 16.74 ಕಿ.ಮೀ ಉದ್ದದ ಸುರಂಗ ರಸ್ತೆ ನಿರ್ಮಾಣಕ್ಕೆ ಪರಿಸರವಾದಿಗಳು ವಿರೋಧ ವ್ಯಕ್ತಪಡಿಸಿದ್ದಾರೆ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಮಹತ್ವಾಕಾಂಕ್ಷಿ ಯೋಜನೆ ಸುರಂಗ ಮಾರ್ಗ (ಟನೆಲ್ ರೋಡ್) ಗೆ ವ್ಯಾಪಕ ವಿರೋಧ ವ್ಯಕ್ತವಾಗಿರುವ ಬೆನ್ನಲ್ಲೇ ಇದೀಗ ಎನ್‌ಜಿಟಿ , ರಾಷ್ಟ್ರೀಯ ಹಸಿರು ನ್ಯಾಯಮಂಡಳಿ ನೋಟಿಸ್ ಜಾರಿ ಮಾಡಿದೆ.

ಸಂಚಾರ ದಟ್ಟಣೆ ನಿವಾರಣೆಗೆ ಪ್ರಸ್ತಾಪಿಸಿದರುವ ಹೆಬ್ಬಾಳದಿಂದ ಸಿಲ್ಕ್ ಬೋರ್ಡ್‌ವರೆಗೆ ಒಟ್ಟು 16.74 ಕಿ.ಮೀ ಉದ್ದದ ಸುರಂಗ ರಸ್ತೆ ನಿರ್ಮಾಣಕ್ಕೆ ಪರಿಸರವಾದಿಗಳಿಂದ ತೀವ್ರ ವಿರೋಧ ವ್ಯಕ್ತವಾಗಿತ್ತು. ಇದೀಗ ಈ ಯೋಜನೆಯು ಪರಿಸರ ನಿಯಮಗಳನ್ನು ಉಲ್ಲಂಘಿಸಿದೆ ಎಂದು ಆರೋಪಿಸಿ ರಾಷ್ಟ್ರೀಯ ಹಸಿರು ನ್ಯಾಯಮಂಡಳಿ ರಾಜ್ಯ ಸರ್ಕಾರಕ್ಕೆ ಮತ್ತು ಹಲವು ಏಜೆನ್ಸಿಗಳಿಗೆ ನೋಟಿಸ್ ನೀಡಿದೆ. 19,000 ಕೋಟಿ ರೂಪಾಯಿ ವೆಚ್ಚದ ಈ ಯೋಜನೆಯನ್ನು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಪ್ರಾರಂಭಿಸಿ, ಜಾಗತಿಕ ಟೆಂಡರ್ ಕರೆಯಲಾಗಿತ್ತು. ಆದರೆ, ಇದು ಅವೈಜ್ಞಾನಿಕ ಮತ್ತು ಪರಿಸರಕ್ಕೆ ಹಾನಿಕಾರಕ ಎಂದು ತಜ್ಞರು ಟೀಕಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಎನ್‌ಜಿಟಿ ಈ ಕ್ರಮ ಕೈಗೊಂಡಿದೆ.

**ರಾಜಕೀಯ ಪ್ರೇರಿತ ಯೋಜನೆ ಎಂದು ಟೀಕೆ:** ಬೆಂಗಳೂರು ಪ್ರಜಾ ವೇದಿಕೆ, ಸಿವಿಕ್ ಸಂಸ್ಥೆಯ ಕಾತ್ಯಾಯಿನಿ ಚಾಮರಾಜ್ ಮತ್ತು ಪರಿಸರವಾದಿ ದತ್ತಾತ್ರೇಯ ದೇವರೆಯವರು ಈ ಯೋಜನೆಯನ್ನು ರಾಜಕೀಯ ಪ್ರೇರಿತ ಯೋಜನೆ ಎಂದು ವಿರೋಧಿಸಿದ್ದಾರೆ. ಸರ್ಕಾರ, ಗ್ರೇಟರ್ ಬೆಂಗಳೂರು ಪ್ರಾಧಿಕಾರ (GBA), ರಾಜ್ಯ ಪರಿಸರ ಪರಿಣಾಮ ಮೌಲ್ಯಮಾಪನ ಪ್ರಾಧಿಕಾರ, ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ, ಬೆಂಗಳೂರು ಸ್ಮಾರ್ಟ್ ಇನ್ಫ್ರಾಸ್ಟ್ರಕ್ಚರ್ ಲಿಮಿಟೆಡ್ ಮತ್ತು ರೋಡಿಕ್ ಕನ್ಸಲ್ಟೆನ್ಸಿ ಪ್ರೈವೇಟ್ ಲಿಮಿಟೆಡ್‌ಗೆ ಮಂಡಳಿಯು ನೋಟಿಸ್ ನೀಡಿದೆ.


ಉದಯವಾಹಿನಿ ಚಿತ್ರ

**ಸುರಂಗ ರಸ್ತೆ ನಿರ್ಮಾಣಕ್ಕೆ ಪರಿಸರವಾದಿಗಳಿಂದ ತೀವ್ರ ವಿರೋಧ**

ಸುರಂಗ ಮಾರ್ಗ ಹಾದು ಹೋಗುವ ಸ್ಥಳದ ನಿರ್ದಿಷ್ಟ ಭೂವೈಜ್ಞಾನಿಕ ಅಧ್ಯಯನಗಳು, ಜಲ ವೈಜ್ಞಾನಿಕ ಮತ್ತು ಪ್ರವಾಹ-ಅಪಾಯದ ನಕ್ಷೆಗಳು, ಜೀವವೈವಿಧ್ಯ ಮೌಲ್ಯಮಾಪನ ಮರಗಳ ಪಟ್ಟಿ ಇಲ್ಲ. ಸುರಂಗದಲ್ಲಿ ಸಂಚರಿಸುವ ವಾಹನಗಳ ವರ್ಗಗಳನ್ನು ಹೊರಗಿಡಲಾಗಿದೆ ಎಂದು ವರದಿಯಲ್ಲಿ ಹೇಳಲಾಗಿದೆ. ಈ ಸುರಂಗ ಮಾರ್ಗವು ಲಾಲ್‌ಬಾಗ್‌ನ ಪೆನಿನ್ಸುಲರ್ ಗ್ನೈಸ್ ರಚನೆ ಮತ್ತು ಹೆಬ್ಬಾಳ ಕಣಿವೆಯ ಮಳೆನೀರಿನ ಚರಂಡಿಯಂತಹ ಪರಿಸರ ಸೂಕ್ಷ್ಮ ಪ್ರದೇಶಗಳ ಮೂಲಕ ಹಾದುಹೋಗುತ್ತದೆ. ಇದರಿಂದ ಅಂತರ್ಜಲ ಬತ್ತಿಹೋಗುತ್ತದೆ, ಮಣ್ಣು ಸಡಿಲಗೊಳ್ಳುತ್ತದೆ ಮತ್ತು ಪ್ರವಾಹದ ಅಪಾಯ ಹೆಚ್ಚಾಗುತ್ತದೆ ಎಂದು ಅರ್ಜಿದಾರರು ಎಚ್ಚರಿಸಿದ್ದಾರೆ. ಯಾವುದೇ ರಾಜ್ಯ ಸರ್ಕಾರಿ ಸಂಸ್ಥೆ ಈ ಸುರಂಗ ರಸ್ತೆ ಯೋಜನೆಯ ಬಗ್ಗೆ ಎಚ್ಚರಿಕೆ ನೀಡಲು ಸಿದ್ಧವಿರಲಿಲ್ಲ. ಆದ್ದರಿಂದ ನಾವು ಎನ್‌ಜಿಟಿ ಬಾಗಿಲು ತಟ್ಟಬೇಕಾಯಿತು

**ಸರ್ಕಾರವು ಪರಿಸರ ಪರಿಣಾಮ ಮೌಲ್ಯಮಾಪನ ಸಾರ್ವಜನಿಕ ಸಮಾಲೋಚನೆಯನ್ನು ತಪ್ಪಿಸಿದೆ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ. ಇದು 2017ರಲ್ಲಿ ರದ್ದುಗೊಂಡ ಉಕ್ಕಿನ ಮೇಲ್ಸೇತುವೆ ಯೋಜನೆಯನ್ನು ನೆನಪಿಸುತ್ತದೆ. ಅದೇ ಮಾರ್ಗದಲ್ಲಿ ಮೆಟ್ರೋ ರೈಲು ಉತ್ತಮ ಪರ್ಯಾಯವಾಗಿದೆ ಎಂದು ಅರ್ಜಿದಾರರು ವಾದಿಸಿದ್ದಾರೆ. ಟೆಂಡರ್ ಪ್ರಕ್ರಿಯೆಯನ್ನು ರದ್ದುಗೊಳಿಸಬೇಕು, ಯೋಜನೆಯನ್ನು ಕೈಬಿಡಬೇಕು ಮತ್ತು ನಾಗರಿಕರ ಮೂಲಭೂತ ಹಕ್ಕನ್ನು ಎತ್ತಿಹಿಡಿಯಬೇಕು ಎಂದು ಅವರು ಎನ್‌ಜಿಟಿಗೆ ಮನವಿ ಮಾಡಿದ್ದರು.**

ಎಂದು ದತ್ತಾತ್ರೇಯ ದೇವರು ಹೇಳಿದ್ದಾರೆ.

ಯೋಜನೆಯೊಂದಿಗೆ ಕುರಿತ ಸರಕಾರದ ಐಎಎಸ್ ಅಧಿಕಾರಿಯೊಬ್ಬರು, ಈ ಬಗ್ಗೆ ಚರ್ಚಿಸಿ ನೋಟಿಸ್‌ಗೆ ಉತ್ತರ ನೀಡುತ್ತೇವೆ ಎಂದು ಹೇಳಿದ್ದಾರೆ.

# ಗಣೇಶೋತ್ಸವಕ್ಕೆ ಅಡ್ಡಿ; ರಾಜ್ಯಪಾಲರಿಗೆ ದೂರು

• ಉದಯವಾಹಿನಿ, ಕೋಲಾರ

ಸ್ವಾತಂತ್ರ್ಯ ಹೋರಾಟದಲ್ಲಿ ಬ್ರಿಟಿಷರ ವಿರುದ್ಧ ಹೋರಾಡಲು ದೇಶಭಕ್ತರನ್ನು ಸಂಘಟಿಸಿದ, ಹಿಂದೂಗಳ ಆಧ್ಯಾತ್ಮಿಕ ಹಿನ್ನೆಲೆ ಇರುವ ಗಣೇಶೋತ್ಸವ ಆಚರಣೆಗೆ ರಾಜ್ಯ ಸರಕಾರ ಅಡ್ಡಿ ಹಾಗೂ ವಿಹಿಂಪ ಸಹ ಕಾರ್ಯದರ್ಶಿ ಶರಣ್‌ಪಂಪ್‌ವೆಲ್ ಅವರು ಉತ್ಸವದಲ್ಲಿಪಾಲ್ಗೊಳ್ಳಲು ಚಿತ್ರದುರ್ಗ ಜಿಲ್ಲೆಪ್ರವೇಶಕ್ಕೆ ನಿರ್ಬಂಧ ಹೇರಿರುವುದನ್ನು ಖಂಡಿಸಿ ವಿಶ್ವ ಹಿಂದೂ ಪರಿಷತ್ ಮತ್ತು ಬಜರಂಗದಳ ಕಾರ್ಯಕರ್ತರು ತಾಲ್ಲೂಕು ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

**ಕಾಂಗ್ರೆಸ್‌ನಿಂದ ಅಡ್ಡಿ:** ಮನವಿ ಸಲ್ಲಿಸಿ ಮಾತನಾಡಿದ ವಿಹಿಂಪ, ಬಜರಂಗದಳ ಮುಖಂಡರು, ದೇಶದ ಸ್ವಾತಂತ್ರ್ಯಕ್ಕಾಗಿ ಜನರನ್ನು ಒಗ್ಗೂಡಿಸಲು ಬಾಲಗಂಗಾಧರ ತಿಲಕ್ ಅವರು ಸಾರ್ವಜನಿಕ ಗಣೇಶೋತ್ಸವ ಆಚರಣೆಗೆ ಕಾರಣರಾಗಿದ್ದು, ಅಂದಿನಿಂದ ಇಂದಿನವರೆಗೂ ಉತ್ಸವ ಸಾರ್ವಜನಿಕ ಸ್ಥಳಗಳಲ್ಲಿ ವಿಜೃಂಭಣೆಯಿಂದ ನಡೆದುಕೊಂಡು ಬಂದಿದೆ ಎಂದು ತಿಳಿಸಿದರು. ಆದರೆ ಈ ಬಾರಿ ಪ್ರತಿ ಹಂತದಲ್ಲೂ ಗಣೇಶೋತ್ಸವಕ್ಕೆ ಅಡ್ಡಿಪಡಿಸಿದ ರಾಜ್ಯದ ಕಾಂಗ್ರೆಸ್ ಸರಕಾರ, ವಿಘ್ನನಿವಾರಕನ ಉತ್ಸವಕ್ಕೆ ಅನೇಕ ವಿಘ್ನಗಳನ್ನು ತಂದೊಡ್ಡಿದೆ. ಅನಗತ್ಯ ನಿಯಮಗಳನ್ನು ಜಾರಿ ಮಾಡಿ ಗಣೇಶೋತ್ಸವ ತಡೆಯಲು ಪ್ರಯತ್ನ ಹೇರಿದ್ದು, ತನ್ನ ನಿಯಮಗಳನ್ನು ಗಣೇಶ ಭಕ್ತರ ಮೇಲೆ ಹೇರಿದೆ ಎಂದು ದೂರಿದರು.



**ಕಲ್ಲುತೂರಾಟದ ವಿರುದ್ಧ ಕಿಡಿ:** ಕೆಲವು ಕಡೆ ಧ್ವನಿವರ್ಧಕ ಬಳಸಲು ನಿಷೇಧ ಹೇರಿದೆ, ನಮ್ಮ ರಾಜ್ಯದ ಮದ್ದೂರು, ಸಾಗರ ಸೇರಿದಂತೆ ಹಲವು ಸ್ಥಳಗಳಲ್ಲಿ ಗಣೇಶ ಶೋಭಾಯಾತ್ರೆ ಮತ್ತು ವಿಸರ್ಜನಾ ಮೆರವಣಿಗೆಯ ಮೇಲೆ ಅಲ್ಪಸಂಖ್ಯಾತರೆಂಬ ಹಣೆಪಟ್ಟಿ ಹೊತ್ತಿರುವ ಕಿಡಿಗೇಡಿಗಳಿಂದ ಕಲ್ಲುತೂರಾಟ ನಡೆಯುತ್ತಿದೆ. ಇದರ ವಿರುದ್ಧ ರಾಜ್ಯದ ಪೊಲೀಸರು ಯಾವುದೇ ಕಠಿಣ ಕ್ರಮ ಕೈಗೊಳ್ಳಲು ವಿಫಲರಾಗಿದ್ದು, ಹಿಂದುಗಳ ಮೇಲೆ ದಬ್ಬಾಳಿಕೆ ನಡೆಯುತ್ತಿದೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ವಿಶ್ವ ಹಿಂದೂ ಪರಿಷತ್ ಮುಖಂಡರ ಮೇಲೆ ವಿಧಿಸಿರುವ ಜಿಲ್ಲಾಪ್ರವೇಶ ನಿರ್ಬಂಧವನ್ನು ಕೂಡಲೇ ಹಿಂಪಡೆಯಬೇಕು, ಗಣೇಶ ಶೋಭಾಯಾತ್ರೆ ಮೇಲೆ ಕಲ್ಲುತೂರಿದ ದುಷ್ಕರ್ಮಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು, ಮದ್ದೂರಿನಲ್ಲಿ ಕಲ್ಲುತೂರಾಟ ನಡೆಸಿದ ಕಡೆಗಳಲ್ಲಿ ಡ್ರೋಣ್ ಕ್ಯಾಮೆರಾ ಅಳವಡಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿಬಜರಂಗದಳ, ವಿಹಿಂಪ ಮುಖಂಡರಾದ ಬಾಲಾಜಿ, ಬಾಬು, ಮುಂಜುನಾಥ್ ಮುದ್ದಪ್ಪ, ಜಿಲ್ಲಾಸಂಚಾಲಕ ಆರ್.ವಿಶ್ವನಾಥ್, ಗ್ರಾಮಾಂತರ ಸಂಚಾಲಕ ಶ್ರೀಧರ್, ನಗರ ಘಟಕದ ವಿಶ್ವನಾಥ್, ಮುಳಬಾಗಿಲು ವಿಶ್ವ, ಮಣಿ, ಬಂಗಾರಪೇಟೆ ವಿಶ್ವ, ಭವಾನಿ, ವಿನಯ್, ಕಾಶಿ, ಗೋವಿಂದ, ಲಡ್ಡು, ಸಾಯಿಮೌಳಿ, ಮಂಜು, ಮಹೇಶ್, ಅಡಿಕೆ ನಾಗ, ಓಂಪ್ರಕಾಶ್ ಭಾಗವಹಿಸಿದ್ದರು.

**ಮದ್ದೂರಿನಲ್ಲಿ ಕಲ್ಲು ತೂರಾಟ:** ಮದ್ದೂರಿನಲ್ಲಿ ಗಣೇಶ ಮೂರ್ತಿ ವಿಸರ್ಜನೆ ವೇಳೆ ಮಸೀದಿಯಿಂದ ಕಲ್ಲು ತೂರಾಟ ನಡೆದಿತ್ತು. ಇದರಿಂದ ಮದ್ದೂರಿನಲ್ಲಿ ಪ್ರಕ್ಷುಬ್ಧ ವಾತಾವರಣ ಸೃಷ್ಟಿಯಾಗಿತ್ತು. ಸದ್ಯ ಪರಿಸ್ಥಿತಿ ತಹಬದಿಗೆ ಬಂದಿದೆ. ಬಿಜೆಪಿ ನಾಯಕರು ಮದ್ದೂರು ಚಲೋ ಮಾಡಿದ್ದರು. ಬುಧವಾರ ಸಾಮೂಹಿಕವಾಗಿ ಗಣೇಶ ವಿಸರ್ಜನೆ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು. ಜೊತೆಗೆ ಕಲ್ಲು ತೂರಾಟದಲ್ಲಿ ಗಾಯಗೊಂಡ ಗಾಯಾಳುಗಳನ್ನು ಭೇಟಿ ಮಾಡಿ ಅವರ ಆರೋಗ್ಯ ವಿಚಾರಿಸಿದರು.

## ಸಿಬ್ಬಂದಿ ಕೂಡಿ ಹಾಕಿದ್ದಕ್ಕೆ ರೈತರ ಮೇಲೆ ಎಫ್‌ಐಆರ್ ಅರಣ್ಯ ಇಲಾಖೆ ಕ್ರಮಕ್ಕೆ ವ್ಯಾಪಕ ಆಕ್ರೋಶ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಾಮರಾಜನಗರ

ಹುಲಿ, ಚಿರತೆ ಉಪಟಳಕ್ಕೆ ಬೇಸತ್ತು ಅರಣ್ಯ ಇಲಾಖೆ ಸಿಬ್ಬಂದಿಯನ್ನೇ ಬೋನಿನಲ್ಲಿ ಬಂಧಿಸಿ ಆಕ್ರೋಶ ಹೊರಹಾಕಿದ್ದ ಘಟನೆಗೆ ಸಂಬಂಧಿಸಿದಂತೆ ಐವರು ರೈತರ ಮೇಲೆ ಎಫ್‌ಐಆರ್ ದಾಖಲಾಗಿದೆ. ಇದಕ್ಕೆ ಪರಿಸರವಾದಿಗಳು, ರೈತ ಹೋರಾಟಗಾರರು ತೀವ್ರ ಆಕ್ರೋಶ ಹೊರಹಾಕಿದ್ದಾರೆ. ಗುಂಡ್ಲುಪೇಟೆ ತಾಲ್ಲೂಕಿನ ಬೊಮ್ಮಲಾಪುರ ಗ್ರಾಮದ ರಘು, ಪ್ರಸಾದ್, ದೀಪು, ಗಂಗಾಧರ ಸ್ವಾಮಿ, ರೇವಣ್ಣ ಎಂಬುವರ ವಿರುದ್ಧ ಸರ್ಕಾರಿ ಕರ್ತವ್ಯಕ್ಕೆ ಅಡ್ಡಿಪಡಿಸಿದ ಹಾಗೂ ಜೀವ ಬೆದರಿಕೆ ಹಾಕಿದ ಆರೋಪದಡಿ ಗುಂಡ್ಲುಪೇಟೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಅರಣ್ಯ ಇಲಾಖೆಯ ದೂರೇನು:** ಗುಂಡ್ಲುಪೇಟೆ ಬಫರ್ ವಲಯ ವ್ಯಾಪ್ತಿಗೆ ಬರುವ ಬೊಮ್ಮಲಾಪುರ ಗ್ರಾಮದಲ್ಲಿ ಕಾಡುಪ್ರಾಣಿಗಳ ಕೂಂಬಿಂಗ್ ಕಾರ್ಯಾಚರಣೆಗೆ ವಿಶೇಷ ಹುಲಿ ಸಂರಕ್ಷಣಾ ದಳದ ಪ್ಲಟೂನ್-1 ರ ಉಪ ವಲಯ ಅರಣ್ಯಾಧಿಕಾರಿಗಳಾದ ಜ್ಞಾನಶೇಖರ್, ಕಾರ್ತಿಕ್ ಯಾದವ್, ವಿನಯ್, ಗಸ್ತು ಪಾಲಕರಾದ ಬಸವೇಗೌಡ, ಸುಚಿತ್ರಾ, ಇಲಾಖೆಯ ವಾಹನದಲ್ಲಿ ಹೋಗುವಾಗ ಅವರನ್ನು ಅಡ್ಡಗಟ್ಟಿದ ಸ್ಥಳೀಯರು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದರು.

## ಟೇಕಾಫ್ ಆಗದ ತುಮಕೂರು ಕ್ರಿಕೆಟ್ ಸ್ಟೇಡಿಯಂ! 2 ವರ್ಷದಲ್ಲಿ ನಿರ್ಮಾಣ ನಿರೀಕ್ಷೆ ಹುಸಿ

# ಕೆಎಸ್‌ಸಿಎ ಚುನಾವಣೆ ಬಳಿಕವೇ ವೇಗ

• ಉದಯವಾಹಿನಿ, ತುಮಕೂರು

ತುಮಕೂರಲ್ಲಿ ಅಂತಾರಾಷ್ಟ್ರೀಯ ದರ್ಜೆಯ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣ ಕಾರ್ಯ ಇನ್ನೂ ಟೇಕಾಫ್‌ಆಗಿಲ್ಲ. 2026-2027ರ ವೇಳೆಗೆ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣವಾಗುತ್ತದೆಂಬ ನಿರೀಕ್ಷೆ ಹುಸಿಯಾಗಿದೆ. 2024ರ ಡಿ. 2ರಂದು ಸಿಎಂ ಸಿದ್ದರಾಮಯ್ಯ, ವಸಂತನರಸಾಪುರ ಕೈಗಾರಿಕಾ ಪ್ರದೇಶ ವ್ಯಾಪ್ತಿಯ ಸೋರೆಕುಂಟೆಯಲ್ಲಿ ಅಂತರ ರಾಷ್ಟ್ರೀಯ ಗುಣಮಟ್ಟದ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿ, ಕರ್ನಾಟಕ ಸ್ಟೇಟ್ ಕ್ರಿಕೆಟ್ ಅಸೋಸಿಯೇಷನ್ (ಕೆಎಸ್‌ಸಿಎ)ಗೆ ಭೂಮಿ ಮಂಜೂರಾತಿ ಆದೇಶ ಪತ್ರವನ್ನೂ ನೀಡಿದ್ದರು. ಆ ವೇಳೆ 2 ವರ್ಷದಲ್ಲಿ ಕಾಮಗಾರಿ ಪೂರ್ಣಗೊಳ್ಳುವ ವಿಶ್ವಾಸವನ್ನು ಕೆಎಸ್‌ಸಿಎ, ಸರಕಾರವೂ ವ್ಯಕ್ತಪಡಿಸಿತ್ತು. ಆದರೆ ಶಂಕುಸ್ಥಾಪನೆ ಮುಗಿದು ವರ್ಷ ಸಮೀಪಿಸುತ್ತಿದ್ದರೂ ಕಾಮಗಾರಿ ಆರಂಭವಾಗಿಲ್ಲ. ಹೀಗಾಗಿ ಎರಡು ವರ್ಷಕ್ಕೆ ಸ್ಟೇಡಿಯಂ ನಿರ್ಮಾಣ ಕನಸು ಕನಸಾಗಿಯೇ ಉಳಿಯಲಿದೆ.

**ಜನ ಮಾತ್ರ ಹಿಂದೆ ಬಿದ್ದಿಲ್ಲ**

**ಸಾಲು ಸಾಲು ಅಡ್ಡಿ:** ಕೆಎಸ್‌ಸಿಎ ಶ್ರೀಮಂತ ಕ್ರಿಕೆಟ್ ಅಸೋಸಿಯೇಷನ್. ಸ್ಟೇಡಿಯಂ ನಿರ್ಮಾಣಕ್ಕೆ ದುಡ್ಡಿಗಂತೂ ಕೊರತೆಯಿಲ್ಲ. ಶಂಕುಸ್ಥಾಪನೆ ಬಳಿಕ ವಿನ್ಯಾಸ, ರೂಪುರೇಷೆ ಸಿದ್ಧಪಡಿಸುವ ವಿಚಾರದಲ್ಲಿ ಸಹಜವಾದ ಆರಂಭದಲ್ಲೇ ನಿಧಾನವಾಯಿತು. ಆ ನಂತರ ಐಪಿಎಲ್ ಶುರುವಾಯಿತು. ಆರ್‌ಸಿಬಿ ಸಂಭ್ರಮಾಚರಣೆಯಲ್ಲಿ ಘಟಿಸಿದ ಕಾಲ್ತುಳಿತ ದುರಂತದಿಂದ ಸ್ಟೇಡಿಯಂ ನಿರ್ಮಾಣದ ಬಗ್ಗೆ ಕೆಎಸ್‌ಸಿಎ ಯೋಚಿಸಲೂ ಆಗಲಿಲ್ಲ.



ಉದಯವಾಹಿನಿ ಚಿತ್ರ

**ಕಾಮಗಾರಿ ಪ್ರಾರಂಭವಾಗುವ ಸಾಧ್ಯತೆ**

**ತುಮಕೂರಿನ ವಸಂತನರಸಾಪುರದಲ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣ ಇನ್ನು ಆರಂಭವಾಗಿಯೇ ಇಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯನವರು 2024ರ ಡಿಸೆಂಬರ್‌ನಲ್ಲೇ ಶಂಕುಸ್ಥಾಪನೆ ನೆರವೇರಿಸಿದ್ದರೂ, ಆ ಬಳಿಕ ಯಾವುದೇ ಪ್ರಗತಿ ಕಂಡುಬಂದಿಲ್ಲ. ಕೆಎಸ್‌ಸಿಎ ಚುನಾವಣೆಗಳು ಮುಗಿದ ನಂತರವೇ ಕಾಮಗಾರಿ ಪ್ರಾರಂಭವಾಗುವ ಸಾಧ್ಯತೆಯಿದೆ ಎಂದು ಹೇಳಲಾಗ್ತಿದೆ.**

**ಸದ್ಯ ಕಾಪೌಂಡ್ ನಿರ್ಮಾಣಕ್ಕೆ ಟೆಂಡರ್ ಆಗಿದೆ. ಬಿಸಿಸಿಐ ಮತ್ತು ಕೆಎಸ್‌ಸಿಎ ಚುನಾವಣೆ ಬಳಿಕ ಕ್ರಿಕೆಟ್ ಸ್ಟೇಡಿಯಂ ಕಾಮಗಾರಿ ಆರಂಭವಾಗಲಿದೆ. ನವೆಂಬರ್ ಒಳಗೆ ಕೆಎಸ್‌ಸಿಎ ಚುನಾವಣೆ ನಡೆಯಲಿದೆ.**

**-ಬಿ.ಎಸ್.ಸುನೀಲ್ ಪಟೇಲ್, ಜಿಲ್ಲಾಮುಖ್ಯಸ್ಥರು, ಕೆಎಸ್‌ಸಿಎ, ತುಮಕೂರು**

**ಬಿಸಿಸಿಐ, ಕೆಎಸ್‌ಸಿಎ ಚುನಾವಣೆ ಬಳಿಕ:** ಮಾಸಾಂತ್ಯದಲ್ಲಿ ಬಿಸಿಸಿಐ ಚುನಾವಣೆ ನಡೆಯಲಿದ್ದು, ಆ ಬಳಿಕ ಕೆಎಸ್‌ಸಿಎ ಚುನಾವಣೆ ನಡೆಯಲಿದೆ. ಆ ಬಳಿಕವಷ್ಟೇ ಸ್ಟೇಡಿಯಂ ಕೆಲಸವನ್ನು ಕೆಎಸ್‌ಸಿಎ ಕೈಗೆತ್ತಿಕೊಳ್ಳುವುದು. ಅಲ್ಲಿಯವರೆಗಂತೂ ಸ್ಟೇಡಿಯಂ ಕಾಮಗಾರಿ ಪ್ರಸ್ತಾಪ ಇರುವುದಿಲ್ಲ.

**ನೂತನ ಕ್ರಿಕೆಟ್ ಸ್ಟೇಡಿಯಂ ಎಲ್ಲಿ? :** ಸೋರೆಕುಂಟೆ

**ಮಾರ್ಗ, ದೂರ :** ತಮಕೂರಿನಿಂದ ಶಿರಾ ಮಾರ್ಗದಲ್ಲಿ 21 ಕಿ.ಮೀ.

**ಎಷ್ಟು ಎಕರೆ ಜಾಗ:** 41 ಎಕರೆ

**ಶಂಕುಸ್ಥಾಪನೆ ನೆರವೇರಿದ್ದು:** 2024ರ ಡಿಸೆಂಬರ್ 2 (ಸಿಎಂ ಸಿದ್ದರಾಮಯ್ಯ ಅವರಿಂದ)

# ಮಸೀದಿಯಿಂದ ಕಲ್ಲು ಹೊಡೆದಿಲ್ಲ, ಹೊಡೆದಿದ್ದು ಬಿಜೆಪಿ

• ಉದಯವಾಹಿನಿ, ಮೈಸೂರು

ಮದ್ದೂರಿನಲ್ಲಿ ಗಣೇಶ ವಿಸರ್ಜನರ ವೇಳೆ ಗಲಾಟೆ ಎಬ್ಬಿಸಬೇಕು ಎಂದೇ ಗೂಂಡಾಗಳನ್ನು ಕರೆಸಿ ಬಿಜೆಪಿಯವರು ಕುತಂತ್ರ ನಡೆಸಿದ್ದರು ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಗಂಭೀರ ಆರೋಪ ಮಾಡಿದರು. ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಮ್ ರಹೀಮ್ ನಗರದ ಮಸೀದಿ ರಸ್ತೆಯಲ್ಲಿ 144 ಸೆಕ್ಷನ್ ಜಾರಿ ಮಾಡಿದ್ದರೂ ಬೇಕು ಎಂದೇ ಅಲ್ಲಿ ಮೆರವಣಿಗೆ ಹೋಗಿ ಗಲಾಟೆ ಎಬ್ಬಿಸಿದ್ದಾರೆ. ಮಸೀದಿಯಿಂದ ಕಲ್ಲು ಹೊಡೆದಿಲ್ಲ ಎಂದು ಐಜಿಪಿ ಬೋರಲಿಂಗಯ್ಯ ಅವರೇ ಸ್ಪಷ್ಟಪಡಿಸಿದ್ದಾರೆ. ಅಲ್ಲಿ ಕಲ್ಲು ಹೊಡೆದಿರುವುದು ಬಿಜೆಪಿಯವರು. ಗಣೇಶ ವಿಸರ್ಜನೆಗೂ ಮುನ್ನ ಅಲ್ಲಿಗೆ ಬಂದವರಿಗೆ ಬಿಜೆಪಿಯವರು ಕೇಸರಿ ಶಾಲು, ಒಂದು ಕ್ವಾಟ್ರು ಎಣ್ಣೆ ಮತ್ತು ಬಿರಿಯಾನಿ ನೀಡಿ ಗೂಂಡಾಗಳನ್ನು ಕರೆಸಿ ಗಲಾಟೆಗೆ ತಯಾರಿ ಮಾಡಿದ್ದಾರೆ. ಅಲ್ಲಿ ಮೆರವಣಿಗೆ ಹೋಗುವ ಸಂದರ್ಭದಲ್ಲಿ ಇವರೇ ಕಲ್ಲನ್ನು ಹೊಡೆದು ಕೋಮು ಗಲಭೆ ಸೃಷ್ಟಿ ಮಾಡಲು ಯತ್ನಿಸಿದ್ದಾರೆ. ಮಂಡ್ಯವನ್ನು ಕಬ್ಜ ಮಾಡಿಕೊಳ್ಳಬೇಕು ಎಂದು ಅಲ್ಲಿ ಶಾಂತಿ ಕದಡುತ್ತಿದ್ದಾರೆ ಎಂದು ದೂರಿದರು. ಕರ್ನಾಟಕದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಒಳ್ಳೆಯ ಆಡಳಿತ ನೀಡಿ ಶಾಂತಿ ಕಾಪಾಡುತ್ತಿದ್ದಾರೆ. ಇದನ್ನು ಸಹಿಸದ ಬಿಜೆಪಿ ಕೇಂದ್ರ ನಾಯಕರು ಅಮಿತ್ ಶಾ ಸೂಚನೆಯಂತೆ ಕರ್ನಾಟಕದಲ್ಲಿ ಗಲಾಟೆ ಎಬ್ಬಿಸಿ ಅಶಾಂತಿ ಸೃಷ್ಟಿಸಿ ಅಧಿಕಾರ ಪಡೆಯಬೇಕು ಎಂಬ ಸಂಚು ರೂಪಿಸಿದ್ದಾರೆ ಎಂದರು. ಬಿಜೆಪಿಯವರು ಮೇಲ್ವರ್ಗದವರನ್ನು ಗಲಾಟೆಗೆ ಬಿಟ್ಟುಕೊಳ್ಳದೆ, ಹಿಂದುಳಿದವರು, ದಲಿತರನ್ನು ಮುಂದೆ ಬಿಟ್ಟುಕೊಂಡು ಗಲಾಟೆ ನಡೆಸುತ್ತಿದ್ದಾರೆ. ಬಾವಿಗೆ ತಳ್ಳಿ ಆಳ ನೋಡುವ ಕೆಲಸ ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮೈಸೂರಿನಲ್ಲೂ ಚಾಮುಂಡಿ ಚಲೋ ಹೆಸರಿನಲ್ಲಿ ಗಲಾಟೆ ಎಬ್ಬಿಸಲು ಪ್ರಯತ್ನಪಟ್ಟರು ಅದು ಸಾಧ್ಯವಾಗಲಿಲ್ಲ. ಈ ಎರಡು ಘಟನೆಗಳನ್ನು ಎನ್‌ಐಎ, ಸಿಬಿಐ ಗೆ ವಹಿಸಿ ಎಂದು ಬಿಜೆಪಿಯವರು ಒತ್ತಾಯ ಮಾಡುತ್ತಾರಾ ಎಂದು ಪ್ರಶ್ನಿಸಿದರು.



ಉದಯವಾಹಿನಿ ಚಿತ್ರ

ಚಾಮುಂಡಿ ಚಲೋ ನಡೆಸಿ ಮೈಸೂರನ್ನು ಕರಾವಳಿ ಮಾಡಬೇಕು ಎಂಬ ಉದ್ದೇಶ ಬಿಜೆಪಿಯವರಿಗಿತ್ತು. ಆದರೆ ನಮ್ಮ ಮೈಸೂರು ಪೊಲೀಸರು ನಾಕಾ ಬಂಧಿ ಹಾಕಿ ಎಲ್ಲರನ್ನೂ ಮುಂಜಾಗ್ರತಾ ಕ್ರಮವಾಗಿ ಬಂಧಿಸಿದರು. ಇಲ್ಲದಿದ್ದರೆ ನಿನ್ನೆ ಮೈಸೂರಿನಲ್ಲಿ ದೊಡ್ಡ ಗಲಾಟೆಯನ್ನೇ ಸೃಷ್ಟಿ ಮಾಡುತ್ತಿದ್ದರು ಎಂದು ಆಕ್ರೋಶ ವ್ಯಕ್ತಪಡಿಸಿದರು. ಬಿಜೆಪಿಯವರು ಈ ಎರಡೂ ಘಟನೆಗಳ ಬಗ್ಗೆ ಎನ್.ಐ.ಎ ಅಥವಾ ಸಿಬಿಐಗೆ ವಹಿಸಿ ಎಂದು ಒತ್ತಾಯ ಮಾಡಲಿ ನೋಡೋಣ ಎಂದು ಸವಾಲು ಹಾಕಿದರು.

**ಶ್ರೀರಂಗಪಟ್ಟಣ, ನಾಗಮಂಗಲ, ಈಗ ಮದ್ದೂರು. ಹೀಗೆ ಒಂದೊಂದಾಗಿ ಬಿಜೆಪಿಯವರು ಮಂಡ್ಯದಲ್ಲಿ ಬೇರು ಬಿಡಲು ಯತ್ನಿಸುತ್ತಿದ್ದಾರೆ. ಕುಮಾರಸ್ವಾಮಿ ಕೇಂದ್ರದಲ್ಲಿ ಮಂತ್ರಿ ಮಾಡಿದರು ಎಂದು ಮಂಡ್ಯವನ್ನು ಬಿಜೆಪಿಗೆ ಅಡವಿಟ್ಟು ಬಿಟ್ಟಿದ್ದಾರೆ. ಮುಂದೊಂದು ದಿನ ಇವರು ಜೆಡಿಎಸ್ ಪಕ್ಷವನ್ನೇ ನುಂಗಿ ಬಿಡುತ್ತಾರೆ ಎಂದು ಹೇಳಿದರು.**

# ಸಿಎಸ್‌ಆರ್ ಹಣದಿಂದ ಸರ್ಕಾರಿ ಶಾಲೆ ನಿರ್ಮಾಣ

• ಉದಯವಾಹಿನಿ, ಕನಕಪುರ

ಶಿಕ್ಷಕರಿಗೆ ವಿಶ್ವದಲ್ಲೇ ವಿಶೇಷವಾದ ಸ್ಥಾನಮಾನವಿದ್ದು, ಬೇರೆ ಯಾರಿಗೂ ಅದು ಸಿಗುವುದಿಲ್ಲ. ಜಗತ್ತಿನಲ್ಲಿ ಶಿಕ್ಷಕರು ಅಷ್ಟು ಶ್ರೇಷ್ಠವಾದವರು ಎಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹೇಳಿದರು. ತಾಲ್ಲೂಕು ಕ್ರೀಡಾಂಗಣದಲ್ಲಿ ಜಿಲ್ಲಾ ಪಂಚಾಯಿತಿ ಹಾಗೂ ಶಾಲಾ ಶಿಕ್ಷಣ ಇಲಾಖೆಯಿಂದ ಆಯೋಜಿಸಿದ್ದ ತಾಲ್ಲೂಕು ಮಟ್ಟದ ಶಿಕ್ಷಕರ ದಿನಾಚರಣೆಯಲ್ಲಿ ಮಾತನಾಡಿದರು.

ಮನುಷ್ಯನಿಗೆ ವಿದ್ಯೆ, ವಿನಯ, ಉದ್ಯೋಗ, ಹಣ, ಧರ್ಮ, ಸುಖ ಇವೆಲ್ಲವೂ ವಿದ್ಯೆಯಿಂದಲೇ ಲಭಿಸುತ್ತದೆ. ವಿದ್ಯೆಗೆ ಪರ್ಯಾಯವಾದ ಮತ್ತೊಂದು ವಸ್ತು ಜಗತ್ತಿನಲ್ಲಿ ಯಾವುದು ಇಲ್ಲ. ಸಮಾಜದಲ್ಲಿ ನ್ಯಾಯ ನೀತಿ ಧರ್ಮದಿಂದ ಅವರು ಬಾಳಲು ಶಿಕ್ಷಣ ಮುಖ್ಯ ಎಂದರು. ವಿದ್ಯೆ ನೀರಿನಲ್ಲಿ ನೆನೆಯದ, ಅಗ್ನಿಯಲ್ಲಿ ಸುಡದ ಗುಪ್ತ ನಿಧಿ. ಮಕ್ಕಳಿಗೆ ಜಾಗತಿಕ ಮಟ್ಟದಲ್ಲಿ ಶಿಕ್ಷಣವನ್ನು ನೀಡಲು ತಾಲ್ಲೂಕಿನ ಶಿಕ್ಷಕರು ಸಿದ್ಧರಾಗಬೇಕು. ತಾಯಿ ಉಸಿರನ್ನು ನೀಡುತ್ತಾಳೆ, ತಂದೆ ಹೆಸರನ್ನು ನೀಡುತ್ತಾನೆ, ಗುರು ಉಸಿರು ಇರುವ ತನಕ ಹೆಸರು ಇರುವಂತೆ ಮಾಡುತ್ತಾನೆ. ಶಿಕ್ಷಕರು ಮಾರ್ಗದರ್ಶಕರಾಗಬೇಕೆಂದು ಕರೆ ನೀಡಿದರು.

ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೂ ಗುಣಮಟ್ಟದ ಶಿಕ್ಷಣ ಸಿಗಬೇಕು. ಖಾಸಗಿ ಶಾಲೆಗಳ ಸಮಾನವಾಗಿ ಮೂಲಸೌಕರ್ಯಗಳು ದೊರಕಬೇಕು ಎಂಬ ಉದ್ದೇಶದಿಂದ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಸಿಎಸ್‌ಆರ್ ಹಣದಿಂದ ಸರ್ಕಾರಿ ಹೈಟೆಕ್ ಶಾಲೆಗಳನ್ನು ನಿರ್ಮಾಣ ಮಾಡಲಾಗುತ್ತಿದೆ. ತಾಲ್ಲೂಕಿನಲ್ಲೂ ಶಾಲಾ ಕಟ್ಟಡಗಳ ನಿರ್ಮಾಣ ಪ್ರಾರಂಭವಾಗಿದೆ ಎಂದರು.



ಉದಯವಾಹಿನಿ ಚಿತ್ರ

**ಸರ್ಕಾರಿ ಶಾಲೆಗಳ ಉನ್ನತೀಕರಣಕ್ಕೆ ಸರ್ಕಾರದಿಂದಲೇ ಹೊಸ ರೂಪುರೇಷೆಗಳನ್ನು ಸಿದ್ಧಪಡಿಸಲಾಗಿದೆ. ಕಾರ್ಪೊರೇಟ್ ಕಂಪನಿಗಳ ಲಾಭದ ಶೇಕಡ ಎರಡರಷ್ಟು ಮೊತ್ತವನ್ನು ಸೇವಾ ಕಾರ್ಯ ಬಳಕೆ ಮಾಡಲು ಕಾಯ್ದೆ ರೂಪಿಸಲಾಗಿದೆ. ಅಲ್ಲದೆ ಸರ್ಕಾರಿ ಶಾಲೆಗಳನ್ನು ದೊಡ್ಡ ದೊಡ್ಡ ಶಿಕ್ಷಣ ಸಂಸ್ಥೆಗಳು ದತ್ತು ತೆಗೆದುಕೊಂಡು ನಿರ್ವಹಣೆ ಮಾಡಲಿವೆ ಎಂದರು.**

ಬೆಂಗಳೂರಿನಲ್ಲಿ 25 ಲಕ್ಷ ಐಟಿ ತಜ್ಞರು ಇದ್ದಾರೆ. ಅಮೆರಿಕದಲ್ಲಿ 13 ಲಕ್ಷ ಇದ್ದಾರೆ. ಬೆಂಗಳೂರಿಗೆ ಜಾಗತಿಕ ಮಟ್ಟದಲ್ಲಿ ವಿದ್ಯಾರ್ಥಿಗಳನ್ನು ತಯಾರು ಮಾಡುವ ಜವಾಬ್ದಾರಿ ನಮ್ಮದಾಗಿದೆ. ತಾಲ್ಲೂಕಿನ ಮಕ್ಕಳು ಇದರಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಇರುವಂತೆ ನೋಡಿಕೊಳ್ಳಬೇಕೆಂದು ಶಿಕ್ಷಕರಿಗೆ ಸೂಚನೆ ನೀಡಿದರು.

ಶಿಕ್ಷಕರ ದಿನಾಚರಣೆ ಅಂಗವಾಗಿ ಪ್ರಾಥಮಿಕ, ಪ್ರೌಢ ಶಿಕ್ಷಣ ವಿಭಾಗದಲ್ಲಿ ರಸಪ್ರಶ್ನೆ ಕಾರ್ಯಕ್ರಮ ಆಯೋಜನೆ ಮಾಡಲಾಗಿತ್ತು. ವಿಜೇತರಿಗೆ, 2024-25ನೇ ಸಾಲಿನಲ್ಲಿ ನಿವೃತ್ತಿಯಾದ 75 ಶಿಕ್ಷಕರನ್ನು ಗೌರವಿಸಲಾಯಿತು.

ಶಿಕ್ಷಕರ ದಿನಾಚರಣೆ ಅಂಗವಾಗಿ ಲಯನ್ಸ್ ಮತ್ತು ಲಿಯೊ ಸಂಸ್ಥೆಯಿಂದ ರಕ್ತದಾನ ಶಿಬಿರ ಏರ್ಪಡಿಸಲಾಗಿತ್ತು ಶಿಕ್ಷಕರು ಸೇರಿದಂತೆ ಸಾರ್ವಜನಿಕರು ಸ್ವಯಂ ಪ್ರೇರಣೆಯಿಂದ ರಕ್ತದಾನ ಮಾಡಿದರು.

## ಜಮೀನಲ್ಲಿ ಟಿ.ಸಿ ಅಳವಡಿಸಲು 12 ವರ್ಷ ಸತಾಯಿಸಿದ ಬೆಸ್ಕಾಂ ಎಂಜಿನಿಯರ್‌ಗೆ ದಂಡ

• ಉದಯವಾಹಿನಿ, ತುಮಕೂರು

ರೈತರೊಬ್ಬರ ಜಮೀನಿನಲ್ಲಿ ವಿದ್ಯುತ್ ಟ್ರಾನ್ಸ್‌ಫಾರ್ಮರ್ (ಟಿ.ಸಿ) ಅಳವಡಿಸಲು 12 ವರ್ಷಗಳ ಕಾಲ ಸತಾಯಿಸಿದ ಬೆಸ್ಕಾಂ ಶಿರಾ ವಿಭಾಗದ ಸಹಾಯಕ ಕಾರ್ಯಪಾಲಕ ಎಂಜಿನಿಯರ್‌ಗೆ (ಎಇಇ) ದಂಡ ವಿಧಿಸಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಆದೇಶಿಸಿದೆ. ಶಿರಾ ತಾಲ್ಲೂಕು ಕಳ್ಳಂಬೆಳ್ಳ ಹೋಬಳಿಯ ಹುಂಜನಾಳ ಗ್ರಾಮದಲ್ಲಿರುವ ರೈತ ಶಂಕರಪ್ಪ ಅವರ ಜಮೀನಿನಲ್ಲಿ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಅಳವಡಿಸಬೇಕು. ಸೇವಾ ಲೋಪಕ್ಕಾಗಿ 10 ಸಾವಿರ ಹಾಗೂ ನ್ಯಾಯಾಲಯದ ವೆಚ್ಚವಾಗಿ 6 ಸಾವಿರ ಸೇರಿ ಒಟ್ಟು 16 ಸಾವಿರ ದಂಡ ಪಾವತಿಸುವಂತೆ ಆದೇಶಿಸಲಾಗಿದೆ.

**ಪ್ರಕರಣದ ವಿವರ:** ಶಿರಾ ತಾಲ್ಲೂಕು ಬೈರೇನಹಳ್ಳಿ ಗ್ರಾಮದ ಜವನಮ್ಮ ಎಂಬುವರು ಹುಂಜನಾಳ ಗ್ರಾಮದಲ್ಲಿ ಜಮೀನು ಹೊಂದಿದ್ದರು. ಕೊಳವೆ ಬಾವಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಅಕ್ರಮ- ಸಕ್ರಮ ಯೋಜನೆಯನ್ನು ಬೆಸ್ಕಾಂ ಜಾರಿ ಮಾಡಿತ್ತು. ಅದರಂತೆ ಜವನಮ್ಮ ಟ್ರಾನ್ಸ್‌ಫಾರ್ಮರಗಾಗಿ ಅರ್ಜಿ ಸಲ್ಲಿಸಿ, ಬೆಸ್ಕಾಂ ಜತೆಗೆ 2012 ಜನವರಿ 18ರಂದು ಒಪ್ಪಂದ ಮಾಡಿಕೊಂಡಿದ್ದರು. ಅದಕ್ಕಾಗಿ 13,030 ಹಣವನ್ನು ಬೆಸ್ಕಾಂಗೆ ಪಾವತಿ ಮಾಡಿದ್ದರು.

ಆದರೂ ಟ್ರಾನ್ಸ್‌ಫಾರ್ಮರ್ ಅವಳವಡಿಸಲಿಲ್ಲ. ಕೋವಿಡ್ ಸಮಯದಲ್ಲಿ (2020ರಲ್ಲಿ) ಜವನಮ್ಮ ನಿಧನ ಹೊಂದಿದರು. ತಾಯಿ ನಿಧನದ ನಂತರ ಅವರ ಪುತ್ರ ಶಂಕರಪ್ಪ ಜಮೀನನ್ನು ತಮ್ಮ ವಶಕ್ಕೆ ತೆಗೆದುಕೊಂಡರು. ವಿದ್ಯುತ್ ಟ್ರಾನ್ಸ್‌ಫಾರ್ಮರ್ ಅಳವಡಿಸುವಂತೆ ಕೋರಿ ಮತ್ತೆ ಬೆಸ್ಕಾಂಗೆ ಮನವಿ ಸಲ್ಲಿಸಿದರು. ಸಾಕಷ್ಟು ಬಾರಿ ಮನವಿ ಮಾಡಿದರೂ ಬೆಸ್ಕಾಂ ಅಧಿಕಾರಿಗಳು ಸ್ಪಂದಿಸಿಲ್ಲ. ಇದರಿಂದ ಕೃಷಿ ಚಟುವಟಿಕೆ ಕೈಗೊಳ್ಳಲು ಸಾಧ್ಯವಾಗದೆ ಸಾಕಷ್ಟು ಪ್ರಮಾಣದಲ್ಲಿ ನಷ್ಟ ಉಂಟಾಗಿದ್ದು, 2 ಲಕ್ಷ ಪರಿಹಾರ ಕೊಡಿಸಬೇಕು ಎಂದು ಕೋರಿ ಆಯೋಗಕ್ಕೆ ಮನವಿ ಮಾಡಿಕೊಂಡಿದ್ದರು.



ಉದಯವಾಹಿನಿ ಚಿತ್ರ

ವಿಚಾರಣೆ ನಡೆಸಿದ ಆಯೋಗವು ಶಿರಾ ಸಹಾಯಕ ಕಾರ್ಯಪಾಲಕ ಎಂಜಿನಿಯರ್‌ಗೆ ನೋಟಿಸ್ ಜಾರಿ ಮಾಡಿತ್ತು. ಸಮರ್ಪಕವಾಗಿ ವಿವರಣೆ ನೀಡುವಲ್ಲಿ ಎಂಜಿನಿಯರ್ ವಿಫಲವಾಗಿರುವುದನ್ನು ಆಯೋಗ ವಿಚಾರಣೆ ಸಮಯದಲ್ಲಿ ಗಮನಿಸಿದೆ. ಸೇವಾ ನ್ಯೂನತೆ ಕಂಡು ಬಂದಿರುವುದರಿಂದ ಟಿ.ಸಿ ಅಳವಡಿಸಿ, 16 ಸಾವಿರ ಪರಿಹಾರ ನೀಡುವಂತೆ ಆಯೋಗದ ಅಧ್ಯಕ್ಷೆ ಜಿ.ಟಿ.ವಿಜಯಲಕ್ಷ್ಮಿ, ಸದಸ್ಯೆ ನಿವೇದಿತಾ ರವೀಶ್ ನೇತೃತ್ವದ ಪೀಠ ಆದೇಶಿಸಿದೆ.


# ಜಿಲ್ಲೆಯಲ್ಲಿ 2 ವರ್ಷದಲ್ಲಿ 34ಕೋಟಿ ಸೌಲಭ್ಯ: ಸಂತೋಷ್ ಲಾಡ್

## ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಿಸಿದ ಕಾರ್ಮಿಕ ಸಚಿವ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ವಿವಿಧ ಯೋಜನೆಗಳಡಿ 52,000 ನೋಂದಾಯಿತ ಕಾರ್ಮಿಕರಿಗೆ 34 ಕೋಟಿ ಸೌಲಭ್ಯಗಳನ್ನು ನೀಡಲಾಗಿದೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ತಿಳಿಸಿದರು. ಕಾರ್ಮಿಕ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಮತ್ತು ಸಾರಿಗೆ ಇಲಾಖೆ ಸಹಯೋಗದಲ್ಲಿ ಬುಧವಾರ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ನಗರದಲ್ಲಿ ನಡೆದ ಸ್ಮಾರ್ಟ್ ಕಾರ್ಡ್ ವಿತರಣೆ ಮತ್ತು ಅರಿವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ದೇಶದ ಯಾವ ರಾಜ್ಯದಲ್ಲೂ ಜಾರಿ ಮಾಡದ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ 'ಗಿಗ್' ಜಾರಿಗೊಳಿಸಲಾಗಿದೆ. ಕಾರ್ಮಿಕ ಇಲಾಖೆ ಕಳೆದ ಎರಡು ವರ್ಷಗಳಲ್ಲಿ ದೇಶದಲ್ಲಿಯೇ ಮೊದಲು ಎನಿಸಿರುವ ಕಾರ್ಮಿಕರ ಪರವಾದ ಮೂರು ಯೋಜನೆಗಳನ್ನು ಜಾರಿಗೊಳಿಸಿದೆ ಎಂದರು. ದ್ವಿಚಕ್ರ ವಾಹನ ಸೇರಿದಂತೆ ವಿವಿಧ ಸಾರಿಗೆ ವ್ಯವಸ್ಥೆಯ ಮೂಲಕ ಆಹಾರ ಪೂರೈಕೆ ಮತ್ತಿತರ ಸೇವೆಗಳನ್ನು ನೀಡುತ್ತಿರುವ ಸ್ವಿಗ್ಗಿ, ಜೊಮ್ಯಾಟ್ ಇನ್ನಿತರ ಕಂಪನಿಗಳ ಕಾರ್ಮಿಕರ ಅನುಕೂಲಕ್ಕಾಗಿ 'ಗಿಗ್' ಎಂಬ ವಿಶಿಷ್ಟ ಯೋಜನೆ ಜಾರಿ ಮಾಡಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪಂಗಡದ ನಿರುದ್ಯೋಗಿ ಯುವಜನರಿಗೆ ಖಾಸಗಿ ವಲಯದಲ್ಲಿ ಉದ್ಯೋಗಾವಕಾಶಗಳನ್ನು ಕಲ್ಪಿಸಲು ಖಾಸಗಿ ಉದ್ಯೋಗದಾತರು, ಮಾಲೀಕರನ್ನು ಉತ್ತೇಜಿಸುವ ಆಶಾದೀಪ ಯೋಜನೆಯನ್ನು ಜಾರಿಗೊಳಿಸಿದೆ ಎಂದು ಹೇಳಿದರು. ಅಂಬೇಡ್ಕರ್ ಸಹಾಯ ಹಸ್ತ ಯೋಜನೆ ಜಾರಿ ಮಾಡಿದೆ. ರಾಜ್ಯದಲ್ಲಿ 91 ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರನ್ನು ಗುರುತಿಸಲಾಗಿದೆ. ಅವರ ಮಕ್ಕಳಿಗೆ ಶೈಕ್ಷಣಿಕವಾಗಿ ಪ್ರೋತ್ಸಾಹ ಧನ, ಅಪಘಾತ ವಿಮೆ, ಜೀವ ವಿಮೆ ಮುಂತಾದ ಯೋಜನೆಗಳನ್ನು ಜಾರಿ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಗೃಹಕೆಲಸ ಕಾರ್ಮಿಕರಿಗಾಗಿ ಹಾಗೂ ಸಿನಿಮಾ ಕ್ಷೇತ್ರದಲ್ಲಿ ಕೆಲಸ ಮಾಡುವ ಕಾರ್ಮಿಕರಿಗಾಗಿ ವಿಶೇಷ ಯೋಜನೆ ಜಾರಿ ಮಾಡಲಾಗುವುದು ಎಂದು ಹೇಳಿದರು.



ಉದಯವಾಹಿನಿ ಚಿತ್ರ

**ನಾಟಕ, ನೃತ್ಯದ ಮೂಲಕ ಅರಿವು**

ಆಶಾ ದೀಪ ಯೋಜನೆಯಡಿ ಈವರೆಗೆ 17.45 ಕೋಟಿ ಒದಗಿಸಲಾಗಿದೆ. 6,345 ನಿರುದ್ಯೋಗಿ ಯುವಜನರು ಫಲಾನುಭವಿಗಳಾಗಿದ್ದಾರೆ ಎಂದರು. ಅಪಘಾತದಲ್ಲಿ ಮೃತಪಟ್ಟ ಅಸಂಘಟಿತ ಕಾರ್ಮಿಕರ ಕುಟುಂಬಗಳಿಗೆ ಅಪಘಾತ ವಿಮೆ, ಜೀವವಿಮೆ, ಶೈಕ್ಷಣಿಕ ಪ್ರೋತ್ಸಾಹಧನ, ಅಂಗವಿಕಲ ಪ್ರೋತ್ಸಾಹಧನ, ಪರಿಹಾರದ ಚೆಕ್ಕು, ಸ್ಮಾರ್ಟ್ ಕಾರ್ಡ್‌ಗಳನ್ನು ಸಂತೋಷ್ ಲಾಡ್ ವಿತರಿಸಿದರು.

ವಿತರಿಸಿದರು. ಶಾಸಕ ಪ್ರದೀಪ್ ಈಶ್ವರ್ ಮಾತನಾಡಿ, ಕಾರ್ಮಿಕ ಇಲಾಖೆಯಲ್ಲಿ ಸಚಿವರು ಕ್ರಾಂತಿಕಾರಕ ಬದಲಾವಣೆ ತಂದಿದ್ದಾರೆ.

**ಸೊಸೈಟಿ ಸ್ಥಾಪನೆ**

**ವಿವಿಧ ಸರ್ಕಾರಿ ಕಚೇರಿಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಕೆಲಸ ಮಾಡುತ್ತಿರುವ ಕಾರ್ಮಿಕರಿಗೆ ವೇತನ ನೀಡಲು ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ಸೊಸೈಟಿ ಸ್ಥಾಪಿಸಲಾಗುವುದು ಎಂದು ಸಂತೋಷ್ ಲಾಡ್ ತಿಳಿಸಿದರು. ಆ ಮೂಲಕ ನೇರವಾಗಿ ಸಂಬಂಧಪಟ್ಟ ನೌಕರರ ಖಾತೆಗೆ ವೇತನ ಜಮೆ ಮಾಡಲಾಗುವುದು. ಇದರಿಂದ ಹೊರಗುತ್ತಿಗೆ ನೌಕರರ ವೇತನ ಮತ್ತು ಸೌಲಭ್ಯಗಳನ್ನು ಮಧ್ಯವರ್ತಿ ಏಜೆನ್ಸಿಗಳು ದುರುಪಯೋಗ ಮಾಡಿಕೊಳ್ಳುವುದನ್ನು ತಡೆಯಲಾಗುವುದು ಎಂದರು.**

ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ನೋಂದಾಯಿತರಾದರೆ ಸೌಲಭ್ಯಗಳು ದೊರೆಯುತ್ತವೆ ಎಂದರು. ಪ್ರತಿ ಹೆಣ್ಣು ಮಕ್ಕಳಿಗೆ ಗ್ಯಾರಂಟಿ ಯೋಜನೆಯಿಂದ 2 ಸಾವಿರ ನೀಡುತ್ತಿದ್ದೇವೆ. ಈ ಹಣವು ಹಲವು ಕುಟುಂಬಗಳ ಬದುಕಿಗೆ ಆಧಾರವಾಗಿದೆ ಎಂದು ಹೇಳಿದರು. ಗ್ರಾಮೀಣ ಯುವ ಕಲಾ ಸಂಘದ ಗೊಟ್ಟಗುಂಟೆ ವೆಂಕಟರಮಣಪ್ಪ ನೇತೃತ್ವದಲ್ಲಿ ಅಸಂಘಟಿತ ಕಾರ್ಮಿಕರಿಗೆ ಸರ್ಕಾರದಿಂದ ಇರುವ ಸೌಲಭ್ಯಗಳ ಕುರಿತು ನಾಟಕ, ನೃತ್ಯದ ಮೂಲಕ ಅರಿವು ಮೂಡಿಸಲಾಯಿತು.

# ಮಿನಿ ನ್ಯೂಸ್

## ಗಣೇಶ ವಿಸರ್ಜನೆ ವೇಳೆ ಲಾಠಿ ಏಟು ತಿಂದಿದ್ದ ಮಹಿಳೆ ವಿರುದ್ಧ ಎಫ್‌ಐಆರ್

• ಉದಯವಾಹಿನಿ, ಮಂಡ್ಯ

ಗಣೇಶ ವಿಸರ್ಜನೆ ವೇಳೆ ಲಾಠಿ ಏಟು ತಿಂದಿದ್ದ ಮಹಿಳೆ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಸಿಎಂ ಹಾಗೂ ಮುಸ್ಲಿಮರ ವಿರುದ್ಧ ಅವಹೇಳನಕಾರಿ ಹೇಳಿಕೆ ಕೊಟ್ಟ ಹಿನ್ನೆಲೆ ಶಿವಪುರ ನಿವಾಸಿ ಜ್ಯೋತಿ ಅವರ ವಿರುದ್ಧ ಮದ್ದೂರು ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ. ಮದ್ದೂರು ಠಾಣೆಯ ಇನ್ಸ್‌ಪೆಕ್ಟರ್ ಶಿವಕುಮಾರ್ ದೂರಿನ ಅನ್ವಯ ಪ್ರಕರಣ ದಾಖಲಾಗಿದೆ. ಅನ್ಯಧರ್ಮದ ವಿಚಾರವಾಗಿ ಆಕ್ಷೇಪಾರ್ಹ ಪದ ಬಳಕೆ ಮಾಡಿದ್ದಾರೆ. ಪರಸ್ಪರ ಕೋಮುಗಳ ನಡುವೆ ವೈಮನಸ್ಸು, ವೈರತ್ವಕ್ಕೆ ಉತ್ತೇಜನ ನೀಡುವ ಆರೋಪದಲ್ಲಿ ಎಫ್‌ಐಆರ್ ಆಗಿದೆ.

ಮದ್ದೂರಿನಲ್ಲಿ ಗಣೇಶ ವಿಸರ್ಜನೆ ವೇಳೆ ಕಲ್ಲುತೂರಾಟ ನಡೆದಿತ್ತು. ಈ ಘಟನೆ ಉದ್ವಿಗ್ನತೆಗೆ ಕಾರಣವಾಗಿತ್ತು. ಮಾರನೇ ದಿನ ಸಾವಿರಾರು ಸಂಖ್ಯೆಯಲ್ಲಿ ಹಿಂದೂ ಕಾರ್ಯಕರ್ತರು ಜಮಾಯಿಸಿ ಪ್ರತಿಭಟನೆ ನಡೆಸಿದ್ದರು. ಈ ವೇಳೆ ಪೊಲೀಸರು ಲಾಠಿ ಚಾರ್ಜ್ ನಡೆಸಿದ್ದರು. ಆಗ ಮಹಿಳೆ ಜ್ಯೋತಿ ಕೂಡ ಲಾಠಿ ಏಟು ತಿಂದಿದ್ದರು. ಈ ದೃಶ್ಯದ ವಿಡಿಯೋ ಎಲ್ಲೆಡೆ ವೈರಲ್ ಆಗಿತ್ತು. ಪೊಲೀಸರ ನಡೆಗೆ ವ್ಯಾಪಕ ಖಂಡನೆ ವ್ಯಕ್ತವಾಗಿತ್ತು.

## ನೇಪಾಳದಲ್ಲಿ ಸಿಲುಕಿದ್ದಾರೆ ರಾಮನಗರದ 4 ಮಂದಿ ಪ್ರವಾಸಿಗರು

• ಉದಯವಾಹಿನಿ, ರಾಮನಗರ

ನೇಪಾಳದಲ್ಲಿ ಹಿಂಸಾತ್ಮಕ ಪ್ರತಿಭಟನೆಯ ಬಳಿಕ ಪರಿಸ್ಥಿತಿ ಉದ್ವಿಗ್ನಗೊಂಡಿದ್ದು, ಪ್ರವಾಸಕ್ಕೆಂದು ತೆರಳಿದ್ದ ರಾಮನಗರದ 4 ಮಂದಿ ಪ್ರವಾಸಿಗರು ನೇಪಾಳದಲ್ಲಿ ಸಿಲುಕಿದ್ದಾರೆ. ಪ್ರವಾಸಿಗರು ಬೆಂಗಳೂರಿನ 50 ಜನರ ಜೊತೆ ನೇಪಾಳ ಪ್ರವಾಸ ಕೈಗೊಂಡಿದ್ದರು. ನೇಪಾಳದ ಕಠ್ಮಂಡುವಿನ ಹೋಟೆಲ್‌ನಲ್ಲಿ ಕರ್ನಾಟಕದ 50 ಮಂದಿ ಪ್ರವಾಸಿಗರು ಸಿಲುಕಿದ್ದಾರೆ. ಇಂದು ಕಠ್ಮಂಡುವಿನಿಂದ ಜನಕ್ ಪುರ್‌ದ ಡಿಯೊಗರ್ ವಿಮಾನ ನಿಲ್ದಾಣಕ್ಕೆ ಪ್ರವಾಸಿಗರು ಪ್ರಯಾಣಿಸಲಿದ್ದಾರೆ.

ಸೆ. 1ರಂದು ಬೆಂಗಳೂರಿನ ಏರ್‌ಪೋರ್ಟ್‌ನಿಂದ ಪ್ರವಾಸಿಗರು ನೇಪಾಳಕ್ಕೆ ಪ್ರಯಾಣ ಬೆಳೆಸಿದ್ದರು. 13ದಿನಗಳ ಪ್ರವಾಸಕ್ಕೆಂದು ತೆರಳಿದ್ದ ಕನ್ನಡಿಗರು, ಬೆಂಗಳೂರಿಂದ ವಾರಣಾಸಿ, ಅಯೋಧ್ಯೆ ಬಳಿಕ ನೇಪಾಳ ಬಾರ್ಡರ್ ತಲುಪಿದ್ದರು. ನೇಪಾಳದ ಸೋನಾಲಿ ಬಾರ್ಡರ್‌ಗೆ ತಲುಪಿ ಸೆ.8ರಂದು ಪೊಕ್ರಾದಿಂದ ಕಠ್ಮಂಡು ಕಡೆ ಪ್ರಯಾಣ ಬೆಳೆಸಿದ್ದರು. ಮನೋಕಾಮನಾ ದೇವಿ ದರ್ಶನ ಮುಗಿಸಿ ಹೊರಟಾಗ ಅಲ್ಲಿನ ಗಲಾಟೆ ಬಗ್ಗೆ ಮಾಹಿತಿ ದೊರೆತಿದೆ. ಸದ್ಯ ಕಠ್ಮಂಡುವಿನ ಪ್ರೈಮ್‌ಶೂಟ್ ಹೋಟೆಲ್‌ನಲ್ಲಿ ಕನ್ನಡಿಗರು ವಾಸ್ತವ್ಯ ಹೂಡಿದ್ದಾರೆ. ಕಠ್ಮಂಡುವಿನ ಪಶುಪತಿನಾಥ ದೇವರ ದರ್ಶನ ಪಡೆದು ಹೊರ ಬರುವಾಗ ಗಲಾಟೆ ಆರಂಭವಾಗಿದೆ. ಸೆ.9ರಂದು 11 ಗಂಟೆಗೆ ಗಲಾಟೆ ಆರಂಭವಾಗಿದ್ದು, ಪ್ರವಾಸಿಗರು ಆತಂಕಕ್ಕೆ ಒಳಗಾಗಿದ್ದಾರೆ. ಸದ್ಯ ಪರಿಸ್ಥಿತಿ ಸುಧಾರಿಸುತ್ತಿದ್ದು, ಸೆ.13ರಂದು ಪ್ರವಾಸಿಗರು ವಾಪಸ್ ಆಗಲಿದ್ದಾರೆ.

## ನೀರಿನ ತಗಾದೆ ಕೊಲೆಯಲ್ಲಿ ಅಂತ್ಯ, ಗೂಡ್ಸ್‌ಹರಿಸಿ ವ್ಯಕ್ತಿಯ ಹತ್ಯೆ

• ಉದಯವಾಹಿನಿ,ತುಮಕೂರು

ನೀರಿನ ವಿಚಾರಕ್ಕೆ ನಡೆದ ಜಗಳ ವ್ಯಕ್ತಿಯ ಕೊಲೆಯಲ್ಲಿ ಅಂತ್ಯವಾದ ಘಟನೆ ತುಮಕೂರು ಜಿಲ್ಲೆಯಲ್ಲಿ ನಡೆದಿದೆ. ತುಮಕೂರು ಜಿಲ್ಲೆಯ ಮದುವೆ ತಾಲ್ಲೂಕಿನ ಕೊಡಿಗೇನಹಳ್ಳಿ ಹೋಬಳಿಯ ಪೊಲೇನಳ್ಳಿಯಲ್ಲಿ ಗೂಡ್ಸ್ ವಾಹನ ಹರಿಸಿ ಆನಂದ್ ಎನ್ನುವ ವ್ಯಕ್ತಿಯನ್ನು ನಾಗೇಶ್ ಎಂಬಾತ ಭೀಕರವಾಗಿ ಕೊಲೆ ಮಾಡಿದ್ದಾನೆ. ಘಟನೆ ಬಳಿಕ ತಾನೇ ಪೊಲೀಸ್ ಠಾಣೆಗೆ ಬಂದು ಶರಣಾಗಿದ್ದಾನೆ. ಪೊಲೀಸರು ಆರೋಪಿಯನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಿದ್ದಾರೆ.

ಕೊಡಿಗೇನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ನೀರಿನ ವಿಚಾರವಾಗಿ ಎರಡು ಕುಟುಂಬಗಳ ನಡುವೆ ಗಲಾಟೆ ನಡೆದಿತ್ತು. ಆನಂದನ ಮನೆಯ ಟ್ಯಾಂಕ್ ತುಂಬಿ ನೀರು ಪೋಲಾಗುತ್ತಿತ್ತು.

ಈ ವೇಳೆ ಸ್ಥಳಕ್ಕೆ ಬಂದ ನಾಗೇಶ್ ತಂದೆ ರಾಮಕೃಷ್ಣ ನೀರು ಪೋಲಾಗುತ್ತಿದ್ದುದನ್ನು ಆಕ್ಷೇಪಿಸಿದ್ದಾರೆ. ಈ ವೇಳೆ ಆನಂದನ ಕುಟುಂಬ ಮತ್ತು ನಾಗೇಶನ ಕುಟುಂಬದ ಮಧ್ಯೆ ಗಲಾಟೆ ಆಗಿದೆ. ಈ ಸಂದರ್ಭದಲ್ಲಿ ನಾಗೇಶ್ ತಾಯಿಯ ಮೇಲೆ ಆನಂದ್ ಹಲ್ಲೆ ಮಾಡಿದ್ದಾನೆ. ತಾಯಿಯ ಮೇಲಿನ ಹಲ್ಲೆಯ ವಿಚಾರ ತಿಳಿದು ಹೊರಗಡೆ ಕೆಲಸಕ್ಕೆ ಹೋಗಿದ್ದ ನಾಗೇಶ್ ಗ್ರಾಮಕ್ಕೆ ಬಂದಿದ್ದಾನೆ. ಮನೆಗೆ ಬರುತ್ತಿದ್ದ ನಾಗೇಶ್ ರಸ್ತೆ ಬದಿ ನಿಂತಿದ್ದ ಆನಂದ್‌ನಿಗೆ ಗೂಡ್ಸ್ ಅನ್ನು ಡಿಕ್ಕಿ ಹೊಡೆಸಿದ್ದಾನೆ. ಆನಂದ ಸ್ಥಳದಲ್ಲಿಯೇ ಸಾವನ್ನಪ್ಪಿದ್ದು, ಘಟನೆಯ ಬಳಿಕ ನಾಗೇಶ್ ಠಾಣೆಗೆ ಹೋಗಿ ಶರಣಾಗಿದ್ದಾನೆ.

## 26ರಂದು ಅರಣ್ಯ ಭವನದ ಎದುರು ಅಹೊರಾತ್ರಿ ಧರಣಿ

• ಉದಯವಾಹಿನಿ, ಮಡಿಕೇರಿ

ಮುಕ್ಕೋಡ್ಲು ಗ್ರಾಮದ ಕಾಳಚಂಡ ನಾಣಿಯಪ್ಪ ಅವರು ಎರಡು ಎಕರೆ ಪ್ರದೇಶದಲ್ಲಿ ಬೆಳೆದಿದ್ದ ಕಾಫಿ, ಏಲಕ್ಕಿ ಗಿಡಗಳನ್ನು ಅಮಾನವೀಯವಾಗಿ ಕತ್ತರಿಸಿದ ಅರಣ್ಯ ಇಲಾಖೆಯ ಸಿಬ್ಬಂದಿಯನ್ನು ವಜಾಗೊಳಿಸಬೇಕು ಹಾಗೂ ನಾಣಿಯಪ್ಪ ಅವರಿಗೆ 30 ಲಕ್ಷ ಪರಿಹಾರ ನೀಡಬೇಕು ಎಂದು ಆಗ್ರಹಿಸಿ ಸೆ. 26ರಂದು ಇಲ್ಲಿನ ಅರಣ್ಯ ಭವನದ ಮುಂಭಾಗ ಅಹೋರಾತ್ರಿ ಪ್ರತಿಭಟನೆ ನಡೆಸಲಾಗುವುದು ಎಂದು ಕೊಡಗು ಜಿಲ್ಲಾ ರೈತ ಹೋರಾಟ ಸಮಿತಿಯ ಅಧ್ಯಕ್ಷ ಸುರೇಶ್ ಚಕ್ರವರ್ತಿ ತಿಳಿಸಿದರು. ಕಾಳಚಂಡ ನಾಣಿಯಪ್ಪ ಅವರು ಪೈಸಾರಿ ಜಾಗದಲ್ಲಿ ತೋಟ ಮಾಡಿಕೊಂಡು ಜೀವನ ಕಟ್ಟಿಕೊಂಡಿದ್ದರು. ಯಾವುದೇ ಜಂಟಿ ಸರ್ವೇ ನಡೆಸದೇ ಏಕಾಏಕಿ ತೋಟವನ್ನು ನಾಶಪಡಿಸಲಾಗಿದೆ. ಇದೊಂದು ಅಮಾನವೀಯ ಕ್ರಮ ಎಂದು ಅವರು ಸುದ್ದಿಗೋಷ್ಠಿಯಲ್ಲಿ ಆರೋಪಿಸಿದರು.

ಅರಣ್ಯ ಇಲಾಖೆಯೇ ಎಲ್ಲಾ ವಿಧದ ಕ್ರಮಗಳನ್ನು ಕೈಗೊಳ್ಳುತ್ತದೆ ಎನ್ನುವುದಾದರೆ ಇತರ ಇಲಾಖೆಗಳಾದರೂ ಏಕೆ ಬೇಕು ಎಂದು ಪ್ರಶ್ನಿಸಿದ ಅವರು, ಸರ್ವೇ ಇಲಾಖೆ, ಅರಣ್ಯ ಇಲಾಖೆ, ಕಂದಾಯ ಇಲಾಖೆ ಹೀಗೆ ಜಂಟಿ ಸರ್ವೆ ಮಾಡಬೇಕು ಎಂದು ಸ್ಪಷ್ಟವಾದ ಆದೇಶ ಇದ್ದಾಗ್ಯೂ ಅವುಗಳನ್ನೆಲ್ಲ ಬದಿಗೊತ್ತಿ ಅರಣ್ಯ ಇಲಾಖೆ ಏಕಪಕ್ಷೀಯ ತೀರ್ಮಾನ ಕೈಗೊಂಡಿದೆ' ಎಂದು ಹರಿಹಾಯ್ದರು. ನಾವು ತೆರಿಗೆ ಪಾವತಿಸಿದರೆ ಸಿಬ್ಬಂದಿಗೆ ಸಂಬಳ ಬರುತ್ತದೆ ಎನ್ನುವುದನ್ನು ಮರೆಯಬಾರದು. ಬೆಳೆದು ನಿಂತ, ಫಸಲು ಬಿಡಲು ತಯಾರಾದ ಗಿಡಗಳನ್ನು ಕತ್ತರಿಸಲು ಮನಸ್ಸಾದರೂ ಹೇಗೆ ಬಂತು ಎಂದು ಅಸಮಾಧಾನ ವ್ಯಕ್ತಪಡಿಸಿದರು. ನಾವು ಸಿ ಮತ್ತು ಡಿ ಭೂಮಿ ಸಂಬಂಧ ಸೋಮವಾರಪೇಟೆ ಬಂದ್ ನಡೆಸಿದ ಕೆಲವೇ ದಿನಗಳಲ್ಲಿ ಈ ಕೃತ್ಯ ನಡೆದಿದೆ. ಬಂದ್ ನಡೆಸಿದಾಗ ಜಿಲ್ಲಾಡಳಿತ ಏಕಪಕ್ಷೀಯ ತೀರ್ಮಾನ ಕೈಗೊಳ್ಳುವುದಿಲ್ಲ ಎಂದು ಭರವಸೆ ನೀಡಿತ್ತು. ಆದರೆ, ಈಗ ಅರಣ್ಯ ಇಲಾಖೆ ಏಕಪಕ್ಷೀಯ ತೀರ್ಮಾನ ಕೈಗೊಂಡಿದೆ ಎಂದು ದೂರಿದರು.

ಅಂತರಾಳದಿಂದ... EDITORIAL

# ಯುವಶಕ್ತಿಯ ಆಕ್ರೋಶ ಸ್ಫೋಟ; ಮಗ್ಗುಲು ಬದಲಿಸಿದ ನೇಪಾಳ

ಪ್ರತಿಭಟನಕಾರರ ಮೇಲೆ ಪೊಲೀಸರು ಕೈಗೊಂಡ ಕ್ರಮದಿಂದಾಗಿ ಅಪಾರ ಸಾವು ನೋವು ಸಂಭವಿಸಿದೆ. ಸೆಪ್ಟೆಂಬರ್ 9ರಂದು ಸೇನೆ ಪರಿಸ್ಥಿತಿಯನ್ನು ತನ್ನ ತಹಬಂದಿಗೆ ತೆಗೆದುಕೊಳ್ಳುವ ಮೊದಲು ಕಂಡು, ಪೊಖಾರ ಸೇರಿದಂತೆ ಹಲವು ಭಾಗಗಳಲ್ಲಿ ಎರಡು ದಿನಗಳ ಕಾಲ ಸಂಭವಿಸಿದ ಹಿಂಸಾಚಾರದಲ್ಲಿ ನೇಪಾಳ ನಲುಗಿದೆ. ಸಂಸತ್ ಭವನ, ಪ್ರಮುಖ ರಾಜಕಾರಣಿಗಳ ಮನೆಗಳು, ರಾಜಕೀಯ ಪಕ್ಷಗಳ ಕಚೇರಿಗಳಿಗೆ ಪ್ರತಿಭಟನಕಾರರು ಬೆಂಕಿ ಹಚ್ಚಿದ್ದಾರೆ. ಅರಾಜಕ ಪರಿಸ್ಥಿತಿ ತಲೆದೋರಿ, ಸಾರ್ವಜನಿಕ ಆಸ್ತಿ ದೊಡ್ಡಮಟ್ಟದಲ್ಲಿ ಹಾನಿಗೊಂಡಿದೆ. ಸಾಮಾಜಿಕ ಜಾಲತಾಣಗಳನ್ನು ನಿರ್ಬಂಧಿಸುವ ವಿವೇಚನಾರಹಿತ ನಿರ್ಧಾರಕ್ಕೆ ಪ್ರಧಾನಿ ಕೆ.ಪಿ. ಶರ್ಮಾ ಓಲಿ ಬೆಲೆ ತೆತ್ತಿದ್ದಾರೆ. 2015ರಲ್ಲಿ ಮೊದಲ ಬಾರಿಗೆ ಅಧಿಕಾರಕ್ಕೆ ಬಂದಿದ್ದ ಓಲಿ ಅವರು, ಪ್ರಧಾನಿಯಾಗಿ ತಮ್ಮ ನಾಲ್ಕನೇ ಅವಧಿ ಮುಗಿಸುವ ಮೊದಲೇ ಅಧಿಕಾರ ಸ್ಥಾನದಿಂದ ನಿರ್ಗಮಿಸಿದ್ದಾರೆ. ಸಾಮಾಜಿಕ ಮಾಧ್ಯಮದ ಮೇಲೆ ಹೇರಿದ ನಿರ್ಬಂಧ ಸರ್ಕಾರದ ಪತನಕ್ಕೆ ಮೇಲ್ನೋಟದ ಕಾರಣವಾಗಿದ್ದರೂ. ಜನರ ಮನಸ್ಸಿನಾಳದ ಸಿಟ್ಟು ಮತ್ತು ಹತಾಶೆ ಪ್ರತಿಭಟನೆ ತೀವ್ರಗೊಳ್ಳಲು ಕಿಡಿಗಳಾಗಿ ಪರಿಣಮಿಸಿವೆ. ಭ್ರಷ್ಟ ಸ್ವಾರ್ಥಿ ಜನಪ್ರತಿನಿಧಿಗಳ ಬಗೆಗಿನ ಜನಾಕ್ರೋಶ ಕಿಚ್ಚಾಗಿ ಪರಿಣಮಿಸಿದೆ.



ಶ್ರೀಲಂಕಾ ಮತ್ತು ಬಾಂಗ್ಲಾದೇಶದ ನಂತರ ದಕ್ಷಿಣ ಏಷ್ಯಾದಲ್ಲಿನ ಮತ್ತೊಂದು ದೇಶದ ನೇಪಾಳದ ಸರ್ಕಾರ ಸಾರ್ವಜನಿಕರ ಭಾರೀ ಪ್ರತಿಭಟನೆಯ ಆಕ್ರೋಶಕ್ಕೆ ಸಿಲುಕಿ ಪತನಗೊಂಡಿದೆ. ಪ್ರಧಾನಮಂತ್ರಿ ಅಧಿಕಾರದಿಂದ ಕೆಳಗಿಳಿದಿದ್ದಾರೆ. ಡಿಜಿಟಲ್ ತಂತ್ರಜ್ಞಾನವನ್ನು ತೀವ್ರವಾಗಿ ಹಚ್ಚಿಕೊಂಡಿರುವ ಜೆನ್ ಝೀ ಯುವಶಕ್ತಿ ಪ್ರತಿಭಟನೆಯಲ್ಲಿ ನಿರ್ಣಾಯಕ ಪಾತ್ರವಹಿಸಿದೆ.

ಸ್ವಹಿತಾಸಕ್ತಿಯಷ್ಟೇ ಮುಖ್ಯವಾದ ನಾಯಕರ ಶ್ರೀಮಂತಿಕೆ ನಿರಂತರವಾಗಿ ಒಂದೆಡೆ ಹೆಚ್ಚುತ್ತಿದ್ದರೆ, ಇನ್ನೊಂದೆಡೆ ಅಸಮಾನತೆ, ಬಡತನ ಹಾಗೂ ನಿರುದ್ಯೋಗದಂಥ ಸಮಸ್ಯೆಗಳು ಉಲ್ಬಣಗೊಳ್ಳುತ್ತಿರುವ ವಿರೋಧಾಭಾಸ ನೇಪಾಳದ್ದಾಗಿದೆ. ಸಮಸ್ಯೆಗಳಿಂದ ರೋಸಿಹೋಗಿರುವ ಜನ ಬೀದಿಗಿಳಿಯಲು ಸಾಮಾಜಿಕ ಜಾಲತಾಣಗಳ ನಿರ್ಬಂಧ ನೇರ ಕಾರಣವಾಗಿ ಒದಗಿಬಂದಿದೆ. ನೇಪಾಳದ ನಾಗರಿಕರ ಪಾಲಿಗೆ ಸಾಮಾಜಿಕ ಮಾಧ್ಯಮ ಬರೀ ಮನರಂಜನೆಗೆ ಸೀಮಿತವಾಗಿ ಉಳಿದಿಲ್ಲ.

ಸುದ್ದಿಮೂಲವಾಗಿ, ವಾಣಿಜ್ಯ ವಹಿವಾಟಿನ ವೇದಿಕೆಯಾಗಿ, ಜೀವನೋಪಾಯದ ದಾರಿಯಾಗಿಯೂ ಬಹಳಷ್ಟು ನೇಪಾಳೀಯರಿಗೆ ಅತ್ಯವಶ್ಯವಾದ ಸಂಪರ್ಕ ಕೊಂಡಿಯಾಗಿದೆ. ರಾಜಕಾರಣಿಗಳು ಮತ್ತು ಅವರ ಪ್ರಭಾವದಡಿ ಗುರ್ತಿಸಿಕೊಂಡ ಮಕ್ಕಳ ಭ್ರಷ್ಟಾಚಾರ ಮತ್ತು ಲೋಲುಪ ಜೀವನವನ್ನು ಬಯಲು ಮಾಡುವ ಮಾಹಿತಿ ಮತ್ತು ವೀಡಿಯೊಗಳನ್ನು ಹಂಚಿಕೊಳ್ಳುವ ಮಾಧ್ಯಮವಾಗಿಯೂ ನೇಪಾಳದ ಜನಸಾಮಾನ್ಯರಿಗೆ ಸಾಮಾಜಿಕ ಜಾಲತಾಣಗಳು ಒದಗಿಬಂದಿವೆ. ಸರ್ಕಾರದ ವೈಫಲ್ಯ, ರಾಜಕಾರಣಿಗಳ ಸಮಯಸಾಧಕತನ, ದೇಶದಲ್ಲಿನ ಆರ್ಥಿಕ ಬಿಕ್ಕಟ್ಟು ಮತ್ತು ಸಮಾಜದಲ್ಲಿನ ಅಸಮಾನತೆಯನ್ನು ಬಯಲು ಮಾಡುವುದರಲ್ಲಿಯೂ ಸಾಮಾಜಿಕ ಮಾಧ್ಯಮಗಳದು ಪ್ರಮುಖ ಪಾತ್ರವಾಗಿದೆ. ಸಾಮಾಜಿಕ ಜಾಲತಾಣಗಳ ಮೂಲಕ ಅನಾವರಣಗೊಂಡ ಸಮಾಜದ ವಾಸ್ತವವನ್ನು ಅರ್ಥ ಮಾಡಿಕೊಳ್ಳಬೇಕಾಗಿದ್ದ ಓಲಿ ನೇತೃತ್ವದ ಸರ್ಕಾರ, ಮಾಧ್ಯಮ ಹಾಗೂ ಅದರ ಬಳಕೆದಾರರನ್ನು ಹತ್ತಿಕ್ಕಲು ಮುಂದಾಯಿತು. ಸರ್ಕಾರದ ಈ ಕ್ರಮ ಜನಮಾನಸದಲ್ಲಿದ್ದ ದೀರ್ಘಕಾಲದ ಅಸಮಾಧಾನ ಪ್ರತಿಭಟನೆಯ ರೂಪದಲ್ಲಿ ಸ್ಫೋಟಗೊಳ್ಳಲು ಕಾರಣವಾಯಿತು. ಆ ಪ್ರತಿಭಟನೆಗಳನ್ನು ಹತ್ತಿಕ್ಕಲು ಮುಂದಾದ ಸರ್ಕಾರ ಕೊನೆಗೆ ಅಧಿಕಾರದಿಂದ ಕೆಳಗಿಳಿಯುವ ಸ್ಥಿತಿ ತಂದುಕೊಂಡಿದೆ. ನೇಪಾಳದಲ್ಲಿನ ಚುನಾಯಿತ ಸರ್ಕಾರವು ಯಾವುದೇ ಅನುಕಂಪಕ್ಕೆ ಅರ್ಹವಲ್ಲದ ದುಃಸ್ಥಿತಿಯನ್ನು ತನ್ನಷ್ಟಕ್ಕೆ ಆಹ್ವಾನಿಸಿಕೊಂಡಿದೆ. ಸದ್ಯದ ಬಿಕ್ಕಟ್ಟಿನ ಸಂದರ್ಭ ರಾಜಕೀಯ ಕಿಡಿಗೇಡಿತನದ ಚಟುವಟಿಕೆಗಳಿಗೆ ಅವಕಾಶ ಕಲ್ಪಿಸುವಂತಿದೆ ಹಾಗೂ ಬಹುಪಕ್ಷೀಯ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ದಮನಗೊಳಿಸಲು ರಾಜಪರಿವಾರಕ್ಕೆ ಆಸ್ಪದ ಒದಗಿಸುವಂತಿದೆ. ಇಂತಹ ಪ್ರಯತ್ನಗಳಿಗೆ ವಿದೇಶಿ ಶಕ್ತಿಗಳ ನೆರವು ಕೂಡ ರಾಜಪರಿವಾರಕ್ಕೆ ದೊರೆಯುವ ಸಾಧ್ಯತೆ ಇದ್ದೇ ಇದೆ. ನೇಪಾಳದಲ್ಲಿನ ಅಸ್ಥಿರತೆ ಮತ್ತು ಆಡಳಿತದಲ್ಲಿನ ಬದಲಾವಣೆ, ಭಾರತ ಮತ್ತು ಚೀನಾಗಳ ಮೇಲೆ ಉಂಟು ಮಾಡಬಹುದಾದ ಪರಿಣಾಮ ಗೌಣವಾದುದು. ನೇಪಾಳದಲ್ಲಿನ ಗೊಂದಲದ ಪರಿಸ್ಥಿತಿ ಮತ್ತು ಆಡಳಿತದಲ್ಲಿನ ಬದಲಾವಣೆಯನ್ನು ಭಾರತ ಸಹಾನುಭೂತಿಯಿಂದ ನೋಡಬೇಕಾಗಿದೆ. ಎಚ್ಚರದಿಂದ ಗಮನಿಸಬೇಕಾಗಿದೆ ಹಾಗೂ ರಾಜತಾಂತ್ರಿಕ ಜಾಣ್ಮೆಯಿಂದ ವ್ಯವಹರಿಸಬೇಕಾಗಿದೆ. ಪ್ರಜಾಪ್ರಭುತ್ವ ವಿರೋಧಿ ಶಕ್ತಿಗಳು ಅಧಿಕಾರಕ್ಕೆ ಬಾರದಂತೆ ನೋಡಿಕೊಳ್ಳುವುದು ಹಾಗೂ ಭ್ರಷ್ಟರನ್ನು ಏಕಾಂಗಿಗಳನ್ನಾಗಿಸುವುದು ಎಲ್ಲಾರ ಆದ್ಯತೆ ಆಗಬೇಕಾಗಿದೆ. ಬಹುಪಕ್ಷೀಯ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬೆಂಬಲಿಸುವುದರ ಜೊತೆಗೆ ನೇಪಾಳದ ಆರ್ಥಿಕ ಸ್ಥಿತಿಯ ಪುನರುಜ್ಜೀವನಕ್ಕೆ ಅಗತ್ಯವಾದ ನೆರವು ನೀಡುವುದು ಹಾಗೂ ದಕ್ಷಿಣ ಏಷ್ಯಾದ ವ್ಯವಹಾರಗಳಲ್ಲಿ ಪಶ್ಚಿಮ ದೇಶಗಳ ಹಸ್ತಕ್ಷೇಪವನ್ನು ತಡೆಯುವುದು ನೆರೆಯ ದೇಶವಾಗಿ ಭಾರತದ ಕರ್ತವ್ಯವಾಗಿದೆ.



# ತುಟಿಯ ಬಣ್ಣ ಕಪ್ಪಾಗೋಗಿದ್ಯಾ ಹಾಗಾದ್ರೆ ಟೆನ್ಶನ್ ಬಿಡಿ ಕೆಂಬಣ್ಣಕ್ಕೆ ತಿರುಗಲು ಜಸ್ಟ್ ಹೀಗೆ ಮಾಡಿ!



ಮುಖದ ಅಂದ ಹೆಚ್ಚಿಸಲು ಹಲವಾರು ಸೌಂದರ್ಯವರ್ಧಕಗಳನ್ನು ಬಳಕೆ ಮಾಡುತ್ತೇವೆ. ಆದರೆ ತುಟಿಗಳ ಬಗ್ಗೆ ಕಾಳಜಿವಹಿಸಲು ಮರೆಯುತ್ತೇವೆ ಹೀಗಾಗಿ ಹೆಚ್ಚಿನವರ ತುಟ್ಟಿ ತುಂಬಾನೇ ಕಪ್ಪಾಗಿ ಕಾಣಿಸುತ್ತದೆ ಈ ರೀತಿಯ ಕಪ್ಪು ತುಟಿಗಳ ಸಮಸ್ಯೆಗೆ ಇಲ್ಲಿದೆ ನೋಡಿ ಸಿಂಪಲ್ ಮನೆ ಮದ್ದುಗಳು ತುಟಿಗಳ ಸೌಂದರ್ಯವು ಮುಖದ ಅಂದವೂ ಕೂಡ ಹೆಚ್ಚಾಗುತ್ತದೆ ಎನ್ನುವ ಮಾತಿದೆ. ಯಾಕೆಂದ್ರೆ, ಮುಖಕ್ಕೆ ಯಾವುದೇ ಬ್ರ್ಯಾಂಡ್‌ನ ಮೇಕಪ್ ಅಥವಾ ಪೌಡರ್ ಹಚ್ಚಿದರೂ ಕೂಡ, ಕೊನೆಗೆ ಮುಖ ಸುಂದರವಾಗಿ ಕಾಣುವುದು ತುಟಿಗಳಿಗೆ ಹಚ್ಚಿದ ಲಿಪ್ ಸ್ಟಿಕ್ ಮೇಲೆಯೇ. ಹಾಗಾಗಿ ತುಟಿಗಳನ್ನು ಆರೋಗ್ಯಕರವಾಗಿ ನೋಡಿಕೊಳ್ಳಬೇಕು! ಆದರೆ ತುಟಿಗಳ ಚರ್ಮವು ಕಪ್ಪಾಗಲು ಪ್ರಾರಂಭಿಸಿದರೆ, ಅದು ಇಡೀ ನೋಟದ ಮೇಲೆ ನಕಾರಾತ್ಮಕ ಪರಿಣಾಮ ಬೀರುತ್ತದೆ. ಕಪ್ಪಾಗುವ ತುಟಿಗಳಿಂದಾಗಿ ಮುಖದ ಸೌಂದರ್ಯವು ಮಸುಕಾಗಲು ಪ್ರಾರಂಭಿಸುತ್ತದೆ.

ಹೆಚ್ಚಿನ ಮಹಿಳೆಯರು ಪುರುಷರು ತಮ್ಮ ತುಟಿಗಳನ್ನು ಸುಂದರಗೊಳಿಸಲು ಲಿಪ್ ಬಾಮ್ ಅಥವಾ ಇತರ ಬ್ಯೂಟಿ ಪ್ರಾಡೆಕ್ಟ್‌ಗಳನ್ನು ಬಳಸುತ್ತಾರೆ ಆದರೆ ಇದರಿಂದ ಸೈಡ್ ಎಫೆಕ್ಟ್ ತುಂಬಾನೇ ಇರುವುದರಿಂದ, ಈ ಬಗ್ಗೆ ಜಾಗರೂಕತೆ ವಹಿಸಬೇಕು ಎಂದು ಬ್ಯೂಟಿ ಎಕ್ಸ್ ಫರ್ಟ್ ಸಲಹೆ ನೀಡುತ್ತಾರೆ ಸಕ್ಕರೆ, ನಿಂಬೆ ಮತ್ತು ಆಲಿವ್ ಎಣ್ಣೆಯ ಪೇಸ್ಟ್ ಒಂದು ಬೌಲ್‌ನಲ್ಲಿ 1-2 ಚಮಚ ಸಕ್ಕರೆಯನ್ನು ತೆಗೆದುಕೊಂಡು ಅದಕ್ಕೆ ಕೆಲವು ಹನಿ ನಿಂಬೆ ರಸ ಸೇರಿಸಿ, ಜೊತೆಗೆ ಇದಕ್ಕೊಂದು ಚಮಚದಷ್ಟು ಆಲಿವ್ ಎಣ್ಣೆಯನ್ನು ಬೆರೆಸಿ ಪೇಸ್ಟ್ ರೀತಿ ಮಾಡಿಕೊಳ್ಳಿ. ಇನ್ನು ಈ ಪೇಸ್ಟ್ ಅನ್ನು ಪ್ರತಿದಿನ ತುಟಿಗಳ ಮೇಲೆ ಹಚ್ಚಿ, ಕೈಬೆರಳುಗಳ ಸಹಾಯದಿಂದ ವೃತ್ತಾಕಾರವಾಗಿ ಮಸಾಜ್ ಮಾಡಿ ಸುಮಾರು ಅರ್ಧಗಂಟೆ ಹಾಗೆಯೇ ಬಿಟ್ಟು ನಂತರ ತಣ್ಣೀರಿನಿಂದ ತೊಳೆಯಿರಿ. ಇದು ಚರ್ಮದ ಮೇಲಿನ ಡೆಡ್ ಸ್ಕಿನ್ ತೆಗೆದುಹಾಕುವುದರ ಜೊತೆಗೆ,ತುಟಿಗಳ ಕಪ್ಪು ಬಣ್ಣವು ಕ್ರಮೇಣ ಕಡಿಮೆಯಾಗುತ್ತದೆ.

**ಅಲೋವೆರಾ ಜೆಲ್:** ಕಪ್ಪಾದ ತುಟಿಗಳ ಸಮಸ್ಯೆಗೆ ಅಲೋವೆರಾ ಜೆಲ್ ಹೆಚ್ಚುವ ಅಭ್ಯಾಸ ಇಟ್ಟುಕೊಂಡರೆ ಬಹಳ ಒಳ್ಳೆಯದು. ಇದು ಶುಷ್ಕತೆ, ಚರ್ಮದ ಕಾಂತಿಯನ್ನು ಹೆಚ್ಚಿಸುವಲ್ಲಿ ನೆರವಿಗೆ ಬರುತ್ತದೆ. ರಾತ್ರಿ ಮಲಗುವ ಮುನ್ನ ಇದನ್ನು ನಿಮ್ಮ ತುಟಿಗಳಿಗೆ ಅಲೋವೆರಾ ಜೆಲ್ ಹಚ್ಚಿ ರಾತ್ರಿಯಿಡೀ ಬಿಡಿ.ಈ ಅಭ್ಯಾಸ ವಾರಗಳವರೆಗೆ ಮುಂದುವರೆಸಿ. ಇದರಿಂದ ತುಟಿಗಳ ಬಗ್ಗೆ ಗುಲಾಬಿ ಬಣ್ಣಕ್ಕೆ ತಿರುಗುವುದರ ಜೊತೆಗೆ ಅಂದವೂ ಕೂಡ ಹೆಚ್ಚಾಗುತ್ತದೆ

**ರೋಸ್ ವಾಟರ್:** ಗುಲಾಬಿ ನೀರು ಅಥವಾ ರೋಸ್ ವಾಟರ್ ಹೈಪರ್ ಪಿಗ್ಮೆಂಟೇಶನ್ ಅನ್ನು ಕಡಿಮೆ ಮಾಡುತ್ತದೆ. ತುಟಿಗಳ ನೈಸರ್ಗಿಕ ಬಣ್ಣವನ್ನು ಕಾಪಾಡಿಕೊಳ್ಳುತ್ತದೆ. ಹತ್ತಿಯ ಸಹಾಯದಿಂದ ತುಟಿಗಳಿಗೆ ರೋಸ್ ವಾಟರ್ ಹಚ್ಚಿ 2-2 ನಿಮಿಷಗಳ ನಂತರ ತೊಳೆಯಿರಿ.

**ಆಲಿವ್ ಎಣ್ಣೆ, ಸಕ್ಕರೆ ಸ್ಕಬ್:** ಒಂದು ಚಮಚದಷ್ಟು ಆಲಿವ್ ಎಣ್ಣೆಯನ್ನು ತೆಗೆದುಕೊಂಡು, ಅದಕ್ಕೆ ಒಂದು ಚಮಚ ಸಕ್ಕರೆ ಸೇರಿಸಿ ನಿಮ್ಮ ತುಟಿಗಳಿಗೆ ಸ್ಕಬ್ ಮಾಡಿ. ಈ ಪರಿಹಾರವು ತುಟಿಗಳ ಕಪ್ಪು ಬಣ್ಣವನ್ನು ಕಡಿಮೆ ಮಾಡುತ್ತದೆ ಮತ್ತು ಮೃದುತ್ವವನ್ನು ತರುತ್ತದೆ. ವಾರಕ್ಕೆ ಎರಡು ಬಾರಿ ಮಾತ್ರ ಈ ವಿಧಾನವನ್ನು ಅಳವಡಿಸಿಕೊಳ್ಳುವ ಮೂಲಕ, ನೀವು ಪರಿಣಾಮವನ್ನು ನೋಡಬಹುದು.

**ಬೀಟ್ರೂಟ್ ರಸ :** ಬೀಟ್ರೂಟ್ ರಸ ಅಥವಾ ಅದರ ಪೇಸ್ಟ್ ಅನ್ನು ತುಟಿಗಳಿಗೆ ಹಚ್ಚುವುದರಿಂದ ತುಟಿಗಳು ಗುಲಾಬಿ ಬಣ್ಣಕ್ಕೆ ತಿರುಗುತ್ತವೆ. ಇದನ್ನು 15-20 ನಿಮಿಷಗಳ ಕಾಲ ತುಟಿಗಳ ಮೇಲೆ ಬಿಡಿ, ನಂತರ ಸಾಮಾನ್ಯ ನೀರಿನಿಂದ ತುಟಿಗಳನ್ನು ತೊಳೆಯಿರಿ.


**ತೆಂಗಿನ ಎಣ್ಣೆ:** ತುಟಿಗಳಿಗೆ ತೆಂಗಿನ ಎಣ್ಣೆ ಹಚ್ಚುವುದರಿಂದ ನೈಸರ್ಗಿಕ ತೇವಾಂಶ ದೊರೆಯುತ್ತದೆ. ಪ್ರತಿದಿನ ರಾತ್ರಿ ಮಲಗುವ ಮುನ್ನ ಈ ಎಣ್ಣೆಯಿಂದ ತುಟಿಗಳಿಗೆ ಲಘುವಾಗಿ ಮಸಾಜ್ ಮಾಡುವುದರಿಂದ ಪರಿಣಾಮವನ್ನು ಕಾಣಬಹುದು. ಕೆಲವು ದಿನಗಳಲ್ಲಿ ತುಟಿಗಳು ಗುಲಾಬಿ ಮತ್ತು ಹೊಳೆಯುವಂತೆ ಕಾಣಲು ಪ್ರಾರಂಭಿಸುತ್ತವೆ.

**ಬಾದಾಮಿ ಎಣ್ಣೆ, ಜೇನುತುಪ್ಪ:** ವಿಟಮಿನ್-ಇ ಸಮೃದ್ಧವಾಗಿರುವ ಬಾದಾಮಿ ಎಣ್ಣೆಯೊಂದಿಗೆ ಜೇನುತುಪ್ಪವನ್ನು ಬೆರೆಸಿ ತುಟಿಗಳಿಗೆ ಹಚ್ಚುವುದರಿಂದ ತುಟಿಗಳ ಬಣ್ಣ ತಿಳಿಗೊಳ್ಳುತ್ತದೆ.

**ಸೌತೆಕಾಯಿ:** ಹೈಡ್ರೇಟಿಂಗ್ ಗುಣವನ್ನು ಹೊಂದಿದೆ ಅದಕ್ಕಾಗಿಯೇ ವೈದ್ಯರು ಇದನ್ನು ತಿನ್ನಲು ಮತ್ತು ಚರ್ಮದ ಆರೈಕೆಗಾಗಿ ಬಳಸಲು ಶಿಫಾರಸು ಮಾಡುತ್ತಾರೆ. ತುಟಿ ಆರೈಕೆಗಾಗಿ ಸೌತೆಕಾಯಿಯನ್ನು ಬಳಸಲು, ಅದರ ರಸವನ್ನು ಹೊರತೆಗೆದು ಫ್ರಿಡ್ಜ್‌ನಲ್ಲಿ ಇರಿಸಿ. ರಸದಲ್ಲಿ ಹತ್ತಿಯನ್ನು ನೆನೆಸಿ ತುಟಿಗಳಿಗೆ ಹಚ್ಚಿ. ಸೌತೆಕಾಯಿಯನ್ನು ದಿನಕ್ಕೆ ಎರಡು ಬಾರಿಯಾದರೂ ತುಟಿಗಳಿಗೆ ಹಚ್ಚಬೇಕು.

### ಗುಲಾಬಿ ಹೂವಿನ ದಳಗಳು

**ಕೆಂಪು ಅಥವಾ ಗುಲಾಬಿ ದಳಗಳು ತುಟಿಗಳನ್ನು ಗುಲಾಬಿ ಬಣ್ಣಕ್ಕೆ ತಿರುಗಿಸಲು ಸಹಾಯ ಮಾಡುತ್ತದೆ. ಗುಲಾಬಿ ದಳಗಳನ್ನು ಹೇಗಾದರೂ ಪುಡಿಮಾಡಿ ರಸವನ್ನು ಹೊರತೆಗೆದು ಫ್ರೀಜರ್ ನಲ್ಲಿ ಇರಿಸಿ. ಈಗ ಈ ಪೇಸ್ಟ್ ಅನ್ನು ತುಟಿಗಳಿಗೆ ಹಚ್ಚಿ ಒಣಗಲು ಬಿಡಿ. ತುಟಿಗಳನ್ನು ಗುಲಾಬಿ ಬಣ್ಣಕ್ಕೆ ತಿರುಗಿಸುವ ಈ ವಿಧಾನವು ಸುಲಭ ಉತ್ತಮವಾಗಿದೆ. ಪ್ರತಿದಿನ ಈ ಪರಿಹಾರವನ್ನು ಅಳವಡಿಸಿಕೊಳ್ಳುವ ಮೂಲಕ, ನೀವು ಕೆಲವು ದಿನಗಳಲ್ಲಿ ವ್ಯತ್ಯಾಸವನ್ನು ನೋಡಲು ಸಾಧ್ಯವಾಗುತ್ತದೆ.**




# ಗೆದ್ದೆತ್ತಿನ ಬಾಲ



ಸಾಮಾಜಿಕ ಕಳಕಳಿ
**ಹೆಚ್.ಎಸ್. ಪ್ರತಿಮಾ**
ಲೇಖಕರು
ಸಾಮಾಜಿಕ ಚಿಂತಕಿ ಹಾಗೂ ಶಿಕ್ಷಕಿ, ಹಾಸನ

• ಉದಯವಾಹಿನಿ, ವಿಶೇಷ

ಚೌರ್ಯವ ಮಾಡುವವರಿಗಿರುವ ಬೆಲೆಯೂ
ಅನುಭವ ಅರಿತು ಕಾರ್ಯಮಾಡಿದವರಿಗಿಲ್ಲ
ಸನ್ಮಾನ ಅವರಿಗೆ ಹೊರತು ಗಮನಿಸಿರಿ
ಕಷ್ಟಪಡುವವರಿಗಿಲ್ಲ, ಸಮೀಕ್ಷೆ ಮಾಡಿದವರಿಗಿಲ್ಲ....
ಗೆದ್ದೆತ್ತಿನ ಬಾಲ ಹಿಡಿದು ಹೋಗುವವರು ಎಲ್ಲಾ
ಶಾಶ್ವತವೂ ಅದಕ್ಕಿಲ್ಲ ಎಂಬುದೇ ತಿಳಿದಿಲ್ಲ
ಅರಿತು ನಡೆದರೆ ಜೀವನವೆಂಬುದ ಮರೆತಿಹರಲ್ಲ
ಜೀವನವೆಂಬುದು ಅಮೂಲ್ಯ ಕಾಣಿಕೆ ತಿಳಿಯಿರೆಲ್ಲ....
ಡೊಂಬರಾಟದ ಬದುಕು ಪ್ರಚಾರಕ್ಕೆ ಎಲ್ಲಾ
ವಿಚಾರ ತಿಳಿದು ಬಾಳುವವರೇ ಇಲ್ಲ
ಬೇಕು ಬೇಡಗಳನು ಆಲಿಸುವವರಂತೆ
ನಟಿಸುವವರು ಜನರ ಮಧ್ಯೆ ಮೆಲ್ಲ
ಜೀವನದಿ ಒಳಿತನು ಅರಿತವರಿಲ್ಲ
ಅರಿತಿದ್ದರೆ ಒಳ್ಳೆಯದೇ ಆಗುತ್ತಿತ್ತಲ್ಲ
ಜನರ ಮುಂದೆ ನಾಟಕೀಯ ಬದುಕಾಗಿದೆಯಲ್ಲ
ಇನ್ನು ಏನೇನು ನೋಡಬೇಕಿದೆ ತಿಳಿದಿಲ್ಲ....
ಮುಂದಾದರು ಬದಲಾವಣೆಯಾಗಲಿ
ಮನದ ಕಲ್ಮಶವೂ ತೊಲಗಲಿ
ಸರಿಯಾದ ಬುದ್ಧಿಕಲಿಯುವಂತಾಗಲಿ
ಸಮಾಜವು ಏಳಿಗೆಯನು ಕಾಣಲಿ.......



# ತ್ರಿಪಿಂಡಿ ಶ್ರಾದ್ಧ ಮಾಡುವ ಉದ್ದೇಶ, ವಿಧಿ, ಪದ್ಧತಿ



• ಶ್ರೀ. ವಿನೋದ ಕಾಮತ್,

ತೀರ್ಥಕ್ಷೇತ್ರಗಳಲ್ಲಿ ಪಿತೃಗಳನ್ನು ಉದ್ದೇಶಿಸಿ ಮಾಡುವ ಶ್ರಾದ್ಧಕ್ಕೆ ತ್ರಿಪಿಂಡಿ ಶ್ರಾದ್ಧ ಎಂದು ಹೇಳುತ್ತಾರೆ. ನಮಗೆ ತಿಳಿಯದೇ ಇರುವ, ನಮ್ಮ ವಂಶದಲ್ಲಿ ಸದ್ಗತಿ ಸಿಗದಿರುವವರ ಅಥವಾ ದುರ್ಗತಿಗೆ ಹೋಗಿರುವವರ ಮತ್ತು ನಮ್ಮ ಕುಲದವರನ್ನು ಪೀಡಿಸುವ ಪಿತೃಗಳಿಗೆ, ಅವರ ಪ್ರೇತತ್ವವು ದೂರವಾಗಿ ಸದ್ಗತಿಯು ಸಿಗಲು ಅಂದರೆ ಭೂಮಿ, ಅಂತರಿಕ್ಷ ಮತ್ತು ಆಕಾಶ ಈ ಮೂರು ಕಡೆಗಳಲ್ಲಿರುವ ಆತ್ಮಗಳಿಗೆ ಮುಕ್ತಿಯು ಸಿಗಲು ತ್ರಿಪಿಂಡಿ ಶ್ರಾದ್ಧವನ್ನು ಮಾಡುವ ಪದ್ಧತಿಯಿದೆ. ಎಂದಿನಂತೆ ಮಾಡುವ ಶ್ರಾದ್ಧಗಳು ಒಬ್ಬರನ್ನು ಉದ್ದೇಶಿಸಿ ಅಥವಾ ವಸು-ರುದ್ರ- ಆದಿತ್ಯ ಈ ಶ್ರಾದ್ಧ ದೇವತೆಗಳ ಪಿತೃಗಣದಲ್ಲಿನ ತಂದೆ, ತಾತ, ಮುತ್ತಾತ ಈ ತ್ರಯಿಗಳನ್ನು ಉದ್ದೇಶಿಸಿ ಮಾಡಿದ ಶ್ರಾದ್ಧಗಳು 3 ಪೀಳಿಗೆಗಳಿಗೆ ಸೀಮಿತವಾಗಿರುತ್ತವೆ. ಆದರೆ ತ್ರಿಪಿಂಡಿ ಶ್ರಾದ್ಧದಿಂದ ಅದಕ್ಕೂ ಮೊದಲಿನ ಪೀಳಿಗೆಗಳಲ್ಲಿನ ಪಿತೃಗಳಿಗೂ ತೃಪ್ತಿ ಸಿಗುತ್ತದೆ. ಪ್ರತಿಯೊಂದು ಕುಟುಂಬದಲ್ಲಿ ಈ ವಿಧಿಯನ್ನು ಪ್ರತಿ 12 ವರ್ಷಗಳಿಗೊಮ್ಮೆ ಮಾಡಬೇಕು ಅಥವಾ ಪಿತೃಗಳಿಂದ ತೊಂದರೆಯಾಗುತ್ತಿರುವ ಕುಟುಂಬಗಳು ಈ ವಿಧಿಯನ್ನು ದೋಷ ನಿವಾರಣೆಗಾಗಿ ಮಾಡಬೇಕು.

**ವಿಧಿಯನ್ನು ಮಾಡಲು ಯೋಗ್ಯ ಕಾಲ :** ತ್ರಿಪಿಂಡಿ ಶ್ರಾದ್ಧಕ್ಕಾಗಿ ಅಷ್ಟಮಿ, ಏಕಾದಶಿ, ಚತುರ್ದಶಿ, ಅಮಾವಾಸ್ಯೆ, ಹುಣ್ಣಿಮೆ ಈ ತಿಥಿಗಳು ಮತ್ತು ಸಂಪೂರ್ಣ ಪಿತೃಪಕ್ಷವು ಯೋಗ್ಯವಾಗಿರುತ್ತದೆ. ಗುರು ಶುಕ್ರಾಸ್ತ, ಗಣೇಶೋತ್ಸವ ಮತ್ತು ಶಾರದಾ ನವರಾತ್ರಿಯಲ್ಲಿ (ಶರನ್ನವರಾತ್ರಿ) ಈ ವಿಧಿಯನ್ನು ಮಾಡಬಾರದು. ಹಾಗೆಯೇ ಕುಟುಂಬದಲ್ಲಿ ಮಂಗಲಕಾರ್ಯವಾದ ಮೇಲೆ ಮತ್ತು ಅಶುಭ ಘಟನೆಗಳಾದ ಮೇಲೆ 1 ವರ್ಷದವರೆಗೆ ತ್ರಿಪಿಂಡಿ ಶ್ರಾದ್ಧವನ್ನು ಮಾಡಬಾರದು.

ಅನಿವಾರ್ಯವಾಗಿದ್ದರೆ ಉದಾ. ಒಂದು ಮಂಗಲಕಾರ್ಯ ಆದ ಕೆಲವು ತಿಂಗಳುಗಳ ನಂತರ ಇನ್ನೊಂದು ಮಂಗಲಕಾರ್ಯವಿದ್ದರೆ ಇವೆರಡರ ಮಧ್ಯಕಾಲದಲ್ಲಿ ತ್ರಿಪಿಂಡಿ ಶ್ರಾದ್ಧವನ್ನು ಮಾಡಬೇಕು.

**ವಿಧಿಯನ್ನು ಮಾಡಲು ಯೋಗ್ಯ ಸ್ಥಳ :** ತ್ರ್ಯಂಬಕೇಶ್ವರ, ಗೋಕರ್ಣ ಮಹಾಬಲೇಶ್ವರ, ಗರುಡೇಶ್ವರ, ಹರಿಹರೇಶ್ವರ (ದಕ್ಷಿಣ ಕಾಶಿ), ಕಾಶಿ ಈ ಸ್ಥಳಗಳು ತ್ರಿಪಿಂಡಿಶ್ರಾದ್ಧವನ್ನು ಮಾಡಲು ಯೋಗ್ಯ ಸ್ಥಳಗಳಾಗಿವೆ.

**ಪದ್ಧತಿ :** ಮೊದಲು ತೀರ್ಥಕ್ಷೇತ್ರದಲ್ಲಿ ಸ್ನಾನ ಮಾಡಿ ಶ್ರಾದ್ಧದ ಸಂಕಲ್ಪವನ್ನು ಮಾಡಬೇಕು. ನಂತರ ಮಹಾವಿಷ್ಣುವಿನ ಮತ್ತು ಶ್ರಾದ್ಧಕ್ಕಾಗಿ ಕರೆದಿರುವ ಬ್ರಾಹ್ಮಣರಿಗೆ ಶ್ರಾದ್ಧವಿಧಿಯ ಪ್ರಕಾರ ಪೂಜೆ ಮಾಡಬೇಕು. ನಂತರ ಜವೆಗೋಧಿ, ಅಕ್ಕಿ ಮತ್ತು ಎಳ್ಳು ಇವುಗಳ ಹಿಟ್ಟಿನ ಪ್ರತಿಯೊಂದರ ಒಂದೊಂದು ಪಿಂಡವನ್ನು ತಯಾರು ಮಾಡಬೇಕು. ದರ್ಭೆಯನ್ನು ಹಾಸಿ ಅದರ ಮೇಲೆ ತಿಲೋದಕವನ್ನು ಸಿಂಪಡಿಸಿ ಪಿಂಡದಾನ ಮಾಡಬೇಕು.


**ಜವೆಗೋಧಿಯ ಪಿಂಡ (ಧರ್ಮಪಿಂಡ) :** ತಾಯಿಯ ವಂಶದಲ್ಲಿನ ಮತ್ತು ತಂದೆಯ ವಂಶದಲ್ಲಿನ ಉತ್ತರಕ್ರಿಯೆ ಆಗದಿರುವವರು, ಸಂತಾನ ಇಲ್ಲವೆಂದು ಯಾರ ಪಿಂಡದಾನವಾಗಿಲ್ಲವೋ ಅವರು ಅಥವಾ ಜನ್ಮತಃ ಅಂಗವಿಕಲರು ಅಂಗವಿಕಲರಾಗಿರುವುದರಿಂದ ಮದುವೆ ಆಗಿರದೇ ಸಂತಾನರಹಿತವಾಗಿದ್ದವರು, ಇಂತಹ ಪಿತೃಗಳ ಪ್ರೇತತ್ವವು ನಾಶವಾಗಿ ಸದ್ಗತಿ ಸಿಗಲೆಂದು ಜವೆಗೋಧಿಯ ಪಿಂಡವನ್ನು ಕೊಡುತ್ತಾರೆ. ಇದಕ್ಕೆ ಧರ್ಮಪಿಂಡ ಎಂಬ ಹೆಸರು ಇದೆ.

**ಮಧುರತ್ರಯಯುಕ್ತ ಅನ್ನದ ಪಿಂಡ :** ಪಿಂಡದ ಮೇಲೆ ಸಕ್ಕರೆ, ಜೇನುತುಪ್ಪ ತುಪ್ಪ ಇವುಗಳ ಮಿಶ್ರಣವನ್ನು ಹಾಕುವುದಕ್ಕೆ ಮಧುರತ್ರಯೀ ಎನ್ನುತ್ತಾರೆ. ಇದನ್ನು ಕೊಡುವುದರಿಂದ ಅಂತರಿಕ್ಷದಲ್ಲಿರುವ ಪಿತೃಗಳಿಗೆ ಸದ್ಗತಿ ಸಿಗುತ್ತದೆ.

**ಎಳ್ಳು ಪಿಂಡ:** ಭೂಮಿಯ ಮೇಲೆ ಕ್ಷುದ್ರಯೋನಿಯಲ್ಲಿದ್ದು ಇತರರಿಗೆ ತೊಂದರೆ ಕೊಡುವ ಪಿತೃಗಳಿಗೆ ಎಳ್ಳು ಪಿಂಡದಿಂದ ಸದ್ಗತಿಯು ಪ್ರಾಪ್ತವಾಗುತ್ತದೆ. ಈ ಮೂರು ಪಿಂಡಗಳಿಗೆ ತಿಲೋದಕ ಕೊಡಬೇಕು. ನಂತರ ಪಿಂಡಗಳ ಪೂಜೆಯನ್ನು ಮಾಡಿ ಅರ್ಘ್ಯವನ್ನು ಅರ್ಪಿಸಬೇಕು. ಶ್ರೀವಿಷ್ಣುವಿಗೆ ತರ್ಪಣ ಕೊಡಬೇಕು. ಬ್ರಾಹ್ಮಣರಿಗೆ ಭೋಜನವನ್ನು ನೀಡಿ ದಕ್ಷಿಣೆಯೆಂದು ವಸ್ತ್ರ, ಪಾತ್ರೆ, ಬೀಸಣಿಗೆ, ಪಾದರಕ್ಷೆಗಳನ್ನು ಕೊಡಬೇಕು.

**ಪಿತೃದೋಷವಿದ್ದರೆ ತಾಯಿ-ತಂದೆ ಜೀವಂತವಿರುವಾಗಲೇ ಮಗನು ವಿಧಿಯನ್ನು ಮಾಡುವುದು ಯೋಗ್ಯವಾಗಿದೆ :** ಶ್ರಾದ್ಧಕರ್ತನ ಜಾತಕದಲ್ಲಿ ಪಿತೃದೋಷವಿದ್ದರೆ ಅದರ ನಿವಾರಣೆಗಾಗಿ ತಾಯಿ-ತಂದೆ ಜೀವಂತ ಇರುವಾಗಲೇ ಈ ವಿಧಿಯನ್ನು ಮಾಡಬೇಕು. ಶ್ರಾದ್ಧ ಕರ್ತನ ತಂದೆಯು ಜೀವಂತವಿಲ್ಲದಿದ್ದರೆ ಅವನು ವಿಧಿಯನ್ನು ಮಾಡುವಾಗ ಕೂದಲುಗಳನ್ನು ತೆಗೆಯಬೇಕು. ತಂದೆಯು ಜೀವಂತವಿರುವ ಶ್ರಾದ್ಧಕರ್ತನಿಗೆ ಕೂದಲುಗಳನ್ನು ತೆಗೆಯುವ ಆವಶ್ಯಕತೆ ಇರುವುದಿಲ್ಲ. ತ್ರಿಪಿಂಡಿ ಶ್ರಾದ್ಧದಲ್ಲಿ ಶ್ರಾದ್ಧಕರ್ತನಿಗೆ ಮಾತ್ರ ಅಶೌಚವಿರುತ್ತದೆ. ಮನೆಯಲ್ಲಿನ ಇತರರಿಗೆ ಇರುವುದಿಲ್ಲ. ಆದುದರಿಂದ ಮನೆಯಲ್ಲಿನ ಒಬ್ಬರು ವಿಧಿಯನ್ನು ಮಾಡುವಾಗ ಇತರರು ಪೂಜೆ ವಗೈರೆಗಳನ್ನು ನಿಲ್ಲಿಸುವ ಅವಶ್ಯಕತೆಯಿಲ್ಲ.

# ರಾಮಾಯಣ



## ಹೇಮಂತ ತುವಿನ ವರ್ಣನೆ

• ಹಿಂದಿನ ಸಂಚಿಕೆಯಿಂದ — 119 ನೆಯ ಅಧ್ಯಾಯ

ಶ್ರೀರಾಮನಿರುವುದಕ್ಕೆ ವಿಶಾಲವಾದ ಪರ್ಣಶಾಲೆಯನ್ನೂ ನಿರ್ಮಿಸಿದನು. ಆಮೇಲೆ ಲಕ್ಷ್ಮಣನು ಗೋದಾವರೀ ನದಿಯಲ್ಲಿ ಸ್ನಾನವನ್ನು ಮಾಡಿ ಅಲ್ಲಿ ವಿಕಸಿತವಾದ ಪುಷ್ಪಗಳನ್ನು ತಂದು ಆ ಪರ್ಣಶಾಲೆಗೆ ಮಾಡಬೇಕಾದ ಪುಷ್ಪಬಲಿಯೇ ಮುಂತಾದ ಶಾಂತಿಕರ್ಮಗಳನ್ನು ವಿಧ್ಯುಕ್ತವಾಗಿ ನಡೆಸಿ ರಾಮನನ್ನು ಕರೆತಂದು ತೋರಿಸಿದನು. ರಾಮನು ಅದನ್ನು ನೋಡಿ ಅತ್ಯಂತ ಹರ್ಷಪಟ್ಟು ಲಕ್ಷ್ಮಣನನ್ನು ತಬ್ಬಿಕೊಂಡು ಸೀತಾಸಮೇತನಾಗಿ ಒಳಗೆ ಪ್ರವೇಶಿಸಿದನು. ಅಲ್ಲಿ ಲಕ್ಷ್ಮಣನನ್ನು ಕುರಿತು ಗಂಭೀರ ವಚನಗಳಿಂದ ಲಕ್ಷ್ಮಣ, ನೀನು ಅತಿಪ್ರಯಾಸದಿಂದ ಈ ಪರ್ಣಶಾಲೆಯನ್ನು ನಿರ್ಮಿಸಿದೆ. ನಾನು ಇದಕ್ಕೆ ಮೆಚ್ಚಿದೆನು. ನಿನಗೆ ಕೊಡುವ ಪಾರಿತೋಷಿಕವಿದೆಂದು ನಿನ್ನನ್ನು ಆಲಿಂಗಿಸಿಕೊಂಡಿದ್ದೇನೆ. ನೀನು ಧರ್ಮಜ್ಞನಾಗಿ ನನ್ನ ಅಂತರಂಗವನ್ನರಿತು ನನ್ನ ಮನಸ್ಸಿಗೆ ಹರ್ಷವಾಗುವಂತೆ ನಡೆಯುವುದರಿಂದ ನನ್ನ ತಂದೆಯು ಸ್ವರ್ಗಸ್ಥನಾಗಲಿಲ್ಲವೆಂದೇ ನನ್ನ ಮನಸ್ಸಿಗೆ ತೋರುತ್ತಿದೆ ಎಂದು ನುಡಿದು ಸ್ವರ್ಗದಲ್ಲಿ ದೇವೇಂದ್ರ ನಿರುವಂತೆ ಕೆಲವುಕಾಲ ಪಂಚವಟೀ ಕ್ಷೇತ್ರದಲ್ಲಿದ್ದನು. ಈ ಪ್ರಕಾರದಲ್ಲಿ ಶ್ರೀರಾಮನು ಪಂಚವಟೀ ಕ್ಷೇತ್ರದಲ್ಲಿ ಸೀತಾಲಕ್ಷ್ಮಣ ಸಮೇತನಾಗಿ ಸುಖವಾಗಿರುವ ಸಮಯದಲ್ಲಿ ಸಮಸ್ತ ಪ್ರಾಣಿಗಳಿಗೂ ಪ್ರಿಯವೆನಿಸುವ ಹೇಮಂತಋತುವು ಪ್ರಾಪ್ತವಾಯಿತು. ಆ ಸಮಯದಲ್ಲಿ ಒಂದು ದಿವಸ ಶ್ರೀರಾಮನು ಸ್ನಾನಾರ್ಥವಾಗಿ ಗೋದಾವರೀ ನದಿಗೆ ಹೊರಟನು. ಆಗ ದೇವಪೂಜಾರ್ಥವಾಗಿ ಅರ್ಘೋದಕವನ್ನು ತರುವುದಕ್ಕಾಗಿ ಕೈಯಲ್ಲಿ ಕಲಶವನ್ನು ತೆಗೆದುಕೊಂಡು ವಿನಯದಿಂದ ಹಿಂದೆ ಹೋಗುತ್ತಿದ್ದ ಲಕ್ಷ್ಮಣನು ಸೀತಾಸವಂತನಾದ ಶ್ರೀರಾಮನನ್ನು ಕುರಿತು ಈ ಪ್ರಕಾರ ನುಡಿದನು ಶ್ರೀರಾಮ ನಿನಗೆ ಪ್ರಿಯವಾದ ಹೇಮಂತ ಕಾಲವು ಪ್ರಾಪ್ತವಾಯಿತು. ಈ ಕಾಲದಲ್ಲಿ ಮಂಜಿನಿಂದ ಜನಗಳ ದೇಹವು ಬಿರಿದು ಸ್ವಾಭಾವಿಕವಾದಮೃದುತ್ವವನ್ನು ಕಳೆದುಕೊಂಡಿರುವುದು.

ಎಲ್ಲಿ ನೋಡಿದರೂ ಭೂಮಿಯು ಫಲಿತವಾದ ಸಸ್ಯಾದಿಗಳಿಂದ ಒತ್ತಿರುವುದು. ಉದಕಪಾನವು ಅಶಕ್ಯವಾಗಿರುವುದು. ಅಗ್ನಿಸೇವೆಯು ಭೋಗಯೋಗ್ಯವಾಗಿರುವುದು. ಈ ಹೇಮಂತಕಾಲದಲ್ಲಿ ದೀಕ್ಷಿತರು ಆಗಯಣೇಷ್ಟಿಯೆಂಬ ಸತ್ಕರ್ಮದಿಂದ ಪಿತೃಗಳನ್ನೂ ದೇವತೆಗಳನ್ನೂ ಸಂತೋಷಪಡಿಸಿ ತಮ್ಮಪಾವಗಳನ್ನು ಕಳೆದುಕೊಳ್ಳುತ್ತಿರುವರು.

ಅರಸರು ಶತ್ರುಗಳಮೇಲೆ ದಂಡೆತ್ತಿ ಹೋಗುವುದಕ್ಕೆ ಇದು ಯೋಗ್ಯವಾದ ಕಾಲವೆಂದು ದಂಡಯಾತ್ರೆಯನ್ನು ಮಾಡುವರು. ಸೂರ್ಯನು ತೆಂಕಣದಿಕ್ಕಿಗೆ ಹೊರಟಿರುವುದರಿಂದ ಬಡಗಣದಿಕ್ಕು ಲಲಾಟದಲ್ಲಿ ತಿಲಕ ವಿಲ್ಲದ ಸ್ತ್ರೀಯಂತೆ ಕಾಣುತ್ತಿದೆ. ಸ್ವಭಾವದಿಂದ ಮಂಜುಮುಸುಕಿದ ಹಿಮವತ್ಪರ್ವತವು ಸೂರ್ಯನು ದೂರವಾಗಿರುವುದರಿಂದಾಗಿ ಮತ್ತಷ್ಟು ಮಂಜಿನಿಂದ ತುಂಬಿ ಹಿಮವದ್ಗಿರಿಯೆಂಬ ಹೆಸರಿನಿಂದ ಸಾರ್ಥಕವಾಗಿರುವುದು. ಈ ಕಾಲದಲ್ಲಿ ಮಧ್ಯಾಹ್ನದಲ್ಲಿಯೂ ಶೈತ್ಯವಿರುವುದು.

ಮುಂದುವರಿಯುವುದು...

# ಬೆಳಗ್ಗೆ ತಿಂಡಿಗೆ ಹೊಸ ರೀತಿಯ ಮಸಾಲ ಇಡ್ಲಿ: ಮಾಡೋದು ಹೀಗೆ!

ನೀವು ಬೆಳಗ್ಗೆ ತಿಂಡಿಗೆ ಅದ್ಭುತ ರುಚಿಯ ಇಡ್ಲಿ ಮಾಡಿ ಸವಿಯುವುದು ಕಾಮನ್ ಅದ್ರಲ್ಲೂ ಇಡ್ಲಿ ಅಂದ್ರೆ ಎಲ್ಲಾರಿಗೂ ಇಷ್ಟವಾಗುವ ಖಾದ್ಯ. ಆರೋಗ್ಯದ ದೃಷ್ಟಿಯಿಂದಲೂ ಇಡ್ಲಿ ಬಹಳ ಉತ್ತಮ. ಕಡಿಮೆ ಎಣ್ಣೆ ಬಳಸಿ ಮಾಡುವ ಇಡ್ಲಿಯೂ ಕೂಡ ಆರೋಗ್ಯಕ್ಕೆ ಬಹಳ ಉತ್ತಮ. ಇಡ್ಲಿಯಲ್ಲಿ ಹಲವು ರೀತಿಯ ಬಗೆಗಳಿವೆ. ಅದ್ರಲ್ಲಿ ಹಲವು ಬಗೆಯನ್ನು ನೀವು ಕೂಡ ಮನೆಯಲ್ಲಿ ಮಾಡಿ ಸವಿದಿರುತ್ತೀರಿ. ಇನ್ನು ಮನೆಯಲ್ಲಿ ಇಡ್ಲಿ ಮಾಡಿ ಸವಿಯುವಾಗ ಅದು ಬಹಳ ಮೃದುವಾಗಿ ಬರಲಿ ಎಂಬುದಷ್ಟೇ ಹಲವರ ಬೇಡಿಕೆ ಆಗಿರಲಿದೆ. ಆದ್ರೆ ಮತ್ತೆ ಕೆಲವರು ಹೊಸ ರೀತಿಯಲ್ಲಿ ಇಡ್ಲಿ ಮಾಡಿ ಸವಿಯಲು ಮುಂದಾಗುತ್ತಾರೆ.

ಹಾಗೆ ನಾವಿಂದು ಇಡ್ಲಿಯಲ್ಲಿ ಅತ್ಯಂತ ರುಚಿಕರ ಹಾಗೆ ವಿಶೇಷ ಬಗೆಯ ಇಡ್ಲಿ ವಿಧಾನವನ್ನು ಮಾಡಿ ಸವಿಯುವುದು ಹೇಗೆ ಅನ್ನೋದನ್ನು ತಿಳಿದುಕೊಳ್ಳೋಣ. ಅದ್ರಲ್ಲು ವಿಶೇಷವಾಗಿ ರವೆಯನ್ನು ಬಳಸಿ ಮಸಾಲ ಇಡ್ಲಿ ಮಾಡಿದ್ರೆ ಎಲ್ಲಾರಿಗೂ ಇಷ್ಟವಾಗುತ್ತೆ. ಹಾಗಾದ್ರೆ ಹೊಸ ರೀತಿಯ ಸ್ಪೆಷಲ್ ಇಡ್ಲಿ ಮಾಡೋದು ಹೇಗೆ ಮಾಡಲು ಯಾವೆಲ್ಲಾ ಪದಾರ್ಥಗಳು ಬೇಕು ಎಷ್ಟು ಸಮಯ ಇದಕ್ಕೆ ಹಿಡಿಯಲಿದೆ ಹಿಟ್ಟು ಹೇಗೆ ರೆಡಿ ಮಾಡಿಕೊಳ್ಳಬೇಕು ಎಂಬುದನ್ನು ನಾವಿಂದು ತಿಳಿದುಕೊಳ್ಳೋಣ.

**ಹೊಸ ರೀತಿಯ ಇಡ್ಲಿ ಮಾಡುವ ಸುಲಭದ ವಿಧಾನವಿದು:** ಮೊದಲು ಒಂದು ಬಾಣಲೆಯನ್ನು ಒಲೆ ಮೇಲೆ ಇಟ್ಟು ಅದಕ್ಕೆ ತುಪ್ಪ ಹಾಕಿಕೊಂಡು ಬಳಿಕ ಗೋಡಂಬಿ ಹಾಕಿ ಫ್ರೈ ಮಾಡಿ ತೆಗೆದಿಟ್ಟುಕೊಳ್ಳಿ. ಈಗ ಇದಕ್ಕೆ ಸಾಸಿವೆ, ಜೀರಿಗೆ, ಇಂಗು ಹಾಕಿಕೊಂಡು ಬಳಿಕ ಕಡಲೆ ಬೇಳೆ, ಉದ್ದಿನ ಬೇಳೆ ಹಾಕಿಕೊಂಡು ಫ್ರೈ ಮಾಡಿ. ಅನಂತರ ಸಣ್ಣದಾಗಿ ಹೆಚ್ಚಿಕೊಂಡಿರುವ ಹಸಿ ಮೆಣಸು ಹಾಕಿ.

ಅನಂತರ ಕರಿಬೇವು ಹಾಕಿ ಬಳಿಕ 1 ಕಪ್ ಬಾಂಬೆ ರವೆ ಹಾಕಿಕೊಂಡು ಚೆನ್ನಾಗಿ ಮಿಕ್ಸ್ ಮಾಡಿ ಹುರಿದುಕೊಳ್ಳಿ. 3 ನಿಮಿಷ ಸಣ್ಣ ಉರಿಯಲ್ಲಿ ಹುರಿದುಕೊಳ್ಳಬೇಕು. ಈಗ ಈ ಎಲ್ಲಾ ವಸ್ತುಗಳನ್ನು ತೆಗೆದು ಒಂದು ಪಾತ್ರೆಗೆ ಹಾಕಿಕೊಳ್ಳಿ. ಈಗ ಒಂದು ಕಪ್ ಮೊಸರು ಹಾಗೆ ಸಣ್ಣದಾಗಿ ಹೆಚ್ಚಿಕೊಂಡಿರುವ ಶುಂಠಿಯನ್ನು ಸಹ ಹಾಕಿ. ಸ್ವಲ್ಪ ನೀರು ಹಾಕಿಕೊಂಡು ಉಪ್ಪು, ಅಡುಗೆ ಸೋಡಾ ಹಾಕಿಕೊಂಡು ಮಿಕ್ಸ್ ಮಾಡಿಕೊಳ್ಳಿ. ಇದು ದಪ್ಪ ಚಟ್ನಿಯಂತೆ ಕಾಣಿಸಬೇಕು. ಈ ಹಿಟ್ಟು ಸ್ವಲ್ಪ ದಪ್ಪವಾಗಿ ಹುಡಿ ಹುಡಿಯಾಗಿರಲಿ. ಈಗ ಸಣ್ಣದಾಗಿ ಕತ್ತರಿಸಿಕೊಂಡಿರುವ ಕೊತ್ತಂಬರಿ ಸೊಪ್ಪನ್ನು ಕೂಡ ಹಾಕಿಕೊಳ್ಳಿ.



ನಂತರ 10 ನಿಮಿಷ ಹಾಗೆಯೆ ಹಿಟ್ಟನ್ನು ಬಿಡಿ. 10 ನಿಮಿಷ ಬಿಟ್ಟು ನೋಡಿದಾಗ ಹಿಟ್ಟು ಗಟ್ಟಿಯಾಗಿದ್ದರೆ ಸ್ವಲ್ಪ ನೀರು ಹಾಕಿ ಮಿಕ್ಸ್ ಮಾಡಿಕೊಳ್ಳಿ.

ಇಲ್ಲದಿದ್ದರೆ ಸಾಮಾನ್ಯ ಇಡ್ಲಿ ಮಾಡುವಂತೆಯೇ ಕ್ರಮ ಅಥವಾ ವಿಧಾನದ ಮೂಲಕ ಇಡ್ಲಿ ಮಾಡಿಕೊಳ್ಳಿ. ಇಷ್ಟಾದರೆ ನಿಮ್ಮ ಮುಂದೆ ಹೊಸ ರುಚಿಯ ಮಸಾಲ ಇಡ್ಲಿ ರೆಡಿಯಾಗುತ್ತದೆ. ನೀವು ಕೂಡ ಈ ಇಡ್ಲಿ ಮಾಡಿ ಸವಿದು ನೋಡಿ. ಬೆಳಗ್ಗೆ ತಿಂಡಿಗೆ ಇದು ಅದ್ಭುತ ರುಚಿ ನೀಡಲಿದೆ. ಇಡ್ಲಿ ಹಿಟ್ಟು ಅಚ್ಚುಗಳಿಗೆ ಹಾಕಿಕೊಳ್ಳುವ ಮುನ್ನ ತುಪ್ಪದಲ್ಲಿ ಹುರಿದುಕೊಂಡಿದ್ದ ಗೋಡಂಬಿಯನ್ನು ಕೆಳಗೆ ಇಟ್ಟು ಅದರ ಮೇಲೆ ಹಿಟ್ಟು ಹಾಕಿಕೊಳ್ಳಿ. ಈ ಇಡ್ಲಿ ಮನೆ ಮಂದಿಗೆಲ್ಲಾ ಇಷ್ಟವಾಗುತ್ತೆ. ನೀವು ಕೂಡ ಒಮ್ಮೆ ಆದರೂ ಇದನ್ನು ಮನೆಯಲ್ಲಿ ಮಾಡಿ ನೋಡಿ.

### ಹೊಸ ರೀತಿಯ ಇಡ್ಲಿ ಮಾಡಲು ಬೇಕಾಗುವ ವಸ್ತುಗಳು

- ರವೆ
- ಗೋಡಂಬಿ
- ತುಪ್ಪ
- ಕರಿಬೇವು
- ಕೊತ್ತಂಬರಿ ಸೊಪ್ಪು
- ಅಡುಗೆ ಸೋಡಾ
- ಉಪ್ಪು
- ಉದ್ದಿನ ಬೇಳೆ
- ಕಡಲೆ ಬೇಳೆ
- ಸಾಸಿವೆ
- ಜೀರಿಗೆ
- ಶುಂಠಿ
- ಮೊಸರು



## ಬೀದಿ ವ್ಯಾಪಾರಸ್ಥರಿಗೆ ಪಾರ್ಕಿಂಗ್ ಶುಲ್ಕ ತಾತ್ಕಾಲಿಕ ರದ್ದು


ಉದಯವಾಹಿನಿ ಚಿತ್ರ

• ಉದಯವಾಹಿನಿ ಹುಬ್ಬಳ್ಳಿ

ನಗರದ ದುರ್ಗದ ಬೈಲ್ ಸುತ್ತಮುತ್ತ ಬೀದಿ ವ್ಯಾಪಾರಸ್ಥರಿಗೆ ಹಾಗೂ ಸಾರ್ವಜನಿಕರಿಗೆ ಸಮಸ್ಯೆಯಾಗದ ರೀತಿ ವಾಹನ ನಿಲುಗಡೆಗೆ ವ್ಯವಸ್ಥೆ ಮಾಡುವ ಕುರಿತು ಆಯುಕ್ತರ ಜೊತೆ ಚರ್ಚಿಸಲಾಗುವುದು. ಅಲ್ಲಿಯವರೆಗೆ ಪಾರ್ಕಿಂಗ್ ಶುಲ್ಕ ಸಂಗ್ರಹಿಸಲು ಟೆಂಡರ್ ಪಡೆದವರು ಶುಲ್ಕ ವಸೂಲಿ ಮಾಡಬಾರದು ಎಂದು ಮೇಯರ್ ಜ್ಯೋತಿ ಪಾಟೀಲ ಹೇಳಿದರು. ಟೆಂಡರ್ ಪಡೆದವರು ಬೀದಿ ವ್ಯಾಪಾರಸ್ಥರ ಮೇಲೆ ಹಲ್ಲೆ ನಡೆಸಿ, ಪಾಲಿಕೆ ಆಯುಕ್ತರಿಗೆ ಹಾಗೂ ಸದಸ್ಯರಿಗೆ ಅವಾಚ್ಯವಾಗಿ ನಿಂದಿಸಿದ್ದಾರೆ' ಎಂದು ಆರೋಪಿಸಿ ಬೀದಿ ಬದಿ ವ್ಯಾಪಾರಸ್ಥರು ಪ್ರತಿಭಟನೆ ನಡೆಸಿದ್ದರು. ಅಲ್ಲದೆ, ಪಾರ್ಕಿಂಗ್ ಶುಲ್ಕ ಸಂಗ್ರಹಿಸಲು ನೀಡಿರುವ ಟೆಂಡರ್ ರದ್ದಾಗಬೇಕು ಎಂದು ಆಗ್ರಹಿಸಿ ಪಟ್ಟು ಹಿಡಿದಿದ್ದರು.

ಮೇಯರ್ ಜ್ಯೋತಿ ಪಾಟೀಲ, ಉಪ ಮೇಯರ್ ಸಂತೋಷ ಚವ್ಹಾಣ್, ಮಹಾನಗರ ಪಾಲಿಕೆ ಆಯುಕ್ತ ರುದ್ರೇಶ ಘಾಳಿ ದುರ್ಗದಬೈಲ್ ಮಾರುಕಟ್ಟೆ ಪ್ರದೇಶಕ್ಕೆ ಭೇಟಿ ನೀಡಿ ವ್ಯಾಪಾರಸ್ಥರ ಅಳಲು ಆಲಿಸಿದರು. ಒಂದು ವಾರದಲ್ಲಿ ಪೊಲೀಸ್ ಅಧಿಕಾರಿಗಳು, ಬೀದಿ ಬದಿ ವ್ಯಾಪಾರಸ್ಥರು ಹಾಗೂ ಆಯುಕ್ತರ ಜತೆ ಸಭೆ ನಡೆಸಿ ಸೂಕ್ತ ನಿರ್ಧಾರ ತೆಗೆದುಕೊಳ್ಳಲಾಗುವುದು. ಸಮಸ್ಯೆ ಇತ್ಯರ್ಥ ಆಗುವವರೆಗೂ ಹಣ ವಸೂಲಿ ಮಾಡಬಾರದು' ಎಂದು ಮೇಯರ್ ಸೂಚಿಸಿದರು. ಮಹಾನಗರ ಪಾಲಿಕೆ ಸದಸ್ಯ ಶಿವು ಮೆಣಸಿನಕಾಯಿ, ವಿನಾಯಕ ಲದ್ವಾ ಹಾಗೂ ಬೀದಿ ಬದಿ ವ್ಯಾಪಾರಸ್ಥರು ಇದ್ದರು.

### ಇಂಧನ ಇಲಾಖೆ ಅಧಿಕಾರಿಗಳು, ಜನಪ್ರತಿನಿಧಿಗಳ ಜೊತೆ ಪ್ರಗತಿ ಪರಿಶೀಲನಾ ಸಭೆ

# 2.50 ಲಕ್ಷ ಅಕ್ರಮ ಕೃಷಿ ಪಂಪ್‌ಸೆಟ್‌ಗಳು ಸಕ್ರಮ

• ಉದಯವಾಹಿನಿ ಗದಗ

ಈ ಹಿಂದೆ 4.50 ಲಕ್ಷ ಅಕ್ರಮ ಕೃಷಿ ಪಂಪ್‌ಸೆಟ್‌ಗಳು ಇದ್ದವು. 2023ರಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ 2.50 ಲಕ್ಷ ಅಕ್ರಮ ಕೃಷಿ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸಿ ಮೂಲ ಸೌಕರ್ಯ ಒದಗಿಸಲಾಗಿದೆ' ಎಂದು ಇಂಧನ ಖಾತೆ ಸಚಿವ ಕೆ.ಜೆ.ಜಾರ್ಜ್ ತಿಳಿಸಿದರು. ಇಲ್ಲಿನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಇಂಧನ ಇಲಾಖೆಗೆ ಸಂಬಂಧಿಸಿದಂತೆ ಜಿಲ್ಲೆಯ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳೊಂದಿಗಿನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದರು.

'ಇನ್ನೊಂದು ವರ್ಷದಲ್ಲಿ ಉಳಿದ ಪಂಪ್‌ಸೆಟ್‌ಗಳನ್ನೂ ಸಕ್ರಮಗೊಳಿಸುವ ಕಾರ್ಯಪೂರ್ಣಗೊಳ್ಳಲಿದೆ. ಇದರ ಜತೆಗೆ ತ್ವರಿತವಾಗಿ ವಿದ್ಯುತ್ ಸಂಪರ್ಕ ಪಡೆಯಲು ಬಯಸಿದ ರೈತರಿಗಾಗಿ ನವೀಕೃತ ಶೀಘ್ರ ಸಂಪರ್ಕ ಯೋಜನೆ ಜಾರಿಗೆ ತಂದಿದ್ದೇವೆ. ರೈತರು ಸ್ವಂತ ಖರ್ಚಿನಲ್ಲಿ ವಿದ್ಯುತ್ ಜಾಲ ಸೇರಿದಂತೆ ಮೂಲಸೌಕರ್ಯ ಕಲ್ಪಿಸಿಕೊಂಡರೆ ಎಸ್ಕಾಂಗಳಿಂದ ಟ್ರಾನ್ಸ್ ಫಾರ್ಮರ್‌ಗಳನ್ನು ನೀಡಲಾಗುತ್ತಿದೆ' ಎಂದು ತಿಳಿಸಿದರು.

'ರೈತರ ಪಂಪ್‌ಸೆಟ್‌ಗಳಿಗೆ ಸುಲಭ ಮತ್ತು ಸಮರ್ಪಕ ವಿದ್ಯುತ್ ಸರಬರಾಜು ದೃಷ್ಟಿಯಿಂದ ಬೇಡಿಕೆ ಇರುವಷ್ಟು ಟ್ರಾನ್ಸ್ ಫಾರ್ಮರಗಳನ್ನು ಪೂರೈಸಲಾಗುವುದು. ಇದಕ್ಕಾಗಿ ಟ್ರಾನ್ಸ್ ಫಾರ್ಮರ್ ಬ್ಯಾಂಕ್ ಮಾಡಿದ್ದೇವೆ. ರೈತರಿಗೆ ಹೊರೆಯಾಗದಂತೆ ಇಲಾಖೆಯ ವಾಹನದಲ್ಲಿಯೇ ಟ್ರಾನ್ಸ್‌ಫಾರ್ಮರ್ ಸಾಗಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ' ಎಂದು ತಿಳಿಸಿದರು.

ಸಮರ್ಪಕ ವಿದ್ಯುತ್ ಪೂರೈಕೆಗಾಗಿ ರಾಜ್ಯದಲ್ಲಿಮೂಲ ಸೌಕರ್ಯ ಹೆಚ್ಚಿಸಲಾಗುತ್ತಿದ್ದು, ಕೆಪಿಟಿಸಿಎಲ್ ವತಿಯಿಂದ ಹೊಸದಾಗಿ 100 ವಿದ್ಯುತ್ ಉಪಕೇಂದ್ರಗಳನ್ನು ನಿರ್ಮಾಣ ಮಾಡಲಾಗುತ್ತಿದೆ. ಪ್ರತಿ ವರ್ಷವೂ ಹೆಚ್ಚೆಚ್ಚು ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸಲು ಯೋಜಿಸಲಾಗಿದೆ. ಪವನ ಹಾಗೂ ಸೌರ ವಿದ್ಯುತ್‌ನ್ನು ಬ್ಯಾಟರಿ ಮೂಲಕ ಸಂಗ್ರಹ ಮಾಡುವ ಕೆಲಸವನ್ನು ಮಾಡಲಾಗುತ್ತಿದೆ ಎಂದರು. ಸಮರ್ಪಕ ವಿದ್ಯುತ್ ಪೂರೈಕೆಗಾಗಿ ರಾಜ್ಯದಲ್ಲಿಮೂಲ ಸೌಕರ್ಯ ಹೆಚ್ಚಿಸಲಾಗುತ್ತಿದ್ದು, ಕೆಪಿಟಿಸಿಎಲ್ ವತಿಯಿಂದ ಹೊಸದಾಗಿ 100 ವಿದ್ಯುತ್ ಉಪಕೇಂದ್ರಗಳನ್ನು ನಿರ್ಮಾಣ ಮಾಡಲಾಗುತ್ತಿದೆ. ಪ್ರತಿ ವರ್ಷವೂ ಹೆಚ್ಚೆಚ್ಚು ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸಲು ಯೋಜಿಸಲಾಗಿದೆ. ಪವನ ಹಾಗೂ ಸೌರ ವಿದ್ಯುತ್‌ನ್ನು ಬ್ಯಾಟರಿ ಮೂಲಕ ಸಂಗ್ರಹ ಮಾಡುವ ಕೆಲಸವನ್ನು ಮಾಡಲಾಗುತ್ತಿದೆ ಎಂದರು.

ಹೆಸ್ಕಾಂ ಅಧ್ಯಕ್ಷ ಸೈಯದ್ ಅಜೀಮ್ ಪೀರ್ ಎಸ್. ಖಾದ್ರಿ, ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಪಂಕಜ್ ಕುಮಾರ ಪಾಂಡೆ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಧ್ಯಕ್ಷ ಅಕ್ಷರಸಾಬ ಬಬರ್ಜಿ ಸೇರಿದಂತೆ ಹೆಸ್ಕಾಂ, ಕೆ.ಪಿ.ಟಿ.ಸಿ.ಎಲ್ ಅಧಿಕಾರಿಗಳು ಇದ್ದರು.


ಉದಯವಾಹಿನಿ ಚಿತ್ರ

**ಕುಸುಮ್- ಬಿ ಯೋಜನೆಯಡಿ ಸೋಲಾರ್ ವಿದ್ಯುತ್**

**ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಜ್ಯೋತಿ ರಾಜ್ಯದಲ್ಲಿ ಶೇ 99ರಷ್ಟು ಸಾಧನೆಯಾಗಿದೆ. ಗದಗ ಜಿಲ್ಲೆಯಲ್ಲಿ ಒಟ್ಟು ಶೇ. 98.49ರಷ್ಟು ಸಾಧನೆ ಮಾಡಲಾಗಿದೆ. -ಕೆ.ಜೆ.ಜಾರ್ಜ್, ಸಚಿವ**

**ಗದಗ ಜಿಲ್ಲೆಯಲ್ಲಿ ಪ್ರಸಕ್ತ ವರ್ಷ ಮಳೆಯಿಂದಾಗಿ ಕೆಲವೆಡೆ ವಿದ್ಯುತ್ ಕಂಬ ತಂತಿಗಳು ವಾಲಿವೆ. ಅವುಗಳನ್ನು ಸರಿಪಡಿಸಬೇಕು. ಪರೀಕ್ಷಾ ಸಂದರ್ಭದಲ್ಲಿ ರಾತ್ರಿ ಹೊತ್ತಿನಲ್ಲಿ ವಿದ್ಯುತ್ ನೀಡಬೇಕು. -ಸಿ.ಸಿ.ಪಾಟೀಲ ಶಾಸಕ**

**ನಿರಂತರ ಏಳು ತಾಸು ವಿದ್ಯುತ್**

**'ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಹಗಲು ಹೊತ್ತಿನಲ್ಲೇ ನಿರಂತರ ಏಳು ಗಂಟೆ ವಿದ್ಯುತ್ ನೀಡುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಕುಸುಮ್ ಬಿ ಹಾಗೂ ಕುಸುಮ್ ಸಿ ಯೋಜನೆಗಳಿಗೆ ಆದ್ಯತೆ ನೀಡುತ್ತಿದೆ' ಎಂದು ಇಂಧನ ಖಾತೆ ಸಚಿವ ಕೆ.ಜೆ.ಜಾರ್ಜ್ ತಿಳಿಸಿದರು. 'ವಿದ್ಯುತ್ ಮಾರ್ಗ ಜಾಲದಿಂದ 500 ಮೀ. ವ್ಯಾಪ್ತಿಯ ಹೊರಗಿರುವ ಪಂಪ್‌ಸೆಟ್‌ಗಳಿಗೆ ಕುಸುಮ್- ಬಿ ಯೋಜನೆಯಡಿ ಸೋಲಾರ್ ವಿದ್ಯುತ್ ಕಲ್ಪಿಸಲಾಗುವುದು. ಈ ಯೋಜನೆಗೆ ನಮ್ಮ ಸರ್ಕಾರದಿಂದ ನೀಡಲಾಗುವ ರಿಯಾಯಿತಿಯನ್ನು ಶೇ 30ರಿಂದ ಶೇ 50ಕ್ಕೆ ಹೆಚ್ಚಳ ಮಾಡಿದೆ. ಅದೇರೀತಿ ಕುಸುಮ್ ಸಿ ಯೋಜನೆಯಡಿ ಕೃಷಿ ಫೀಡರ್‌ಗಳ ಸೌರೀಕರಣ ಕಾರ್ಯ ನಡೆಯುತ್ತಿದ್ದು ಇದರಿಂದಾಗಿ ಹಗಲು ವೇಳೆ ರೈತ ಕೃಷಿ ಪಂಪ್ ಸೆಟ್‌ಗಳಿಗೆ 7 ಗಂಟೆ ವಿದ್ಯುತ್ ಪೂರೈಸಲು ಸಾಧ್ಯವಾಗುತ್ತದೆ' ಎಂದರು.**

## ಧಾರಾಕಾರ ಮಳೆ: ಸೇತುವೆಗಳು ಜಲಾವೃತ, ಜನಜೀವನ ಅಸ್ತವ್ಯಸ್ತ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನಾದ್ಯಂತ ಎರಡು ದಿನಗಳಿಂದ ಸತತವಾಗಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ರೈತರು ಬೆಳೆದ ಬೆಳೆಗಳಲ್ಲಿ ಸಂಪೂರ್ಣವಾಗಿ ನೀರು ನಿಂತು ಜಲಾವೃತವಾದರೆ ಮತ್ತೊಂದೆಡೆ ಕೆಲ ಗ್ರಾಮಗಳ ಚಿಕ್ಕ ಸೇತುವೆಗಳು ಜಲಾವೃತವಾಗಿ ಗ್ರಾಮಗಳ ಮನೆಗಳಲ್ಲಿ ನೀರು ನುಗ್ಗಿವೆ.

ತಾಲ್ಲೂಕಿನ ಕೊಳ್ಳೂರ ಗ್ರಾಮದಲ್ಲಿ ಸತತವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಗ್ರಾಮದ ಮನೆಗಳಿಗೆ ನೀರು ನುಗ್ಗಿವೆ ಹಾಗೂ ನಾಗಾಯಿದ್ಲಾಯಿ ಗ್ರಾಮದಲ್ಲಿ ಮನೆಗಳಲ್ಲಿ ನೀರು ನುಗ್ಗಿದಲ್ಲದೆ ಸೇತುವೆ ಜಲಾವೃತವಾಗಿರುವುದರಿಂದ ಹೊಸ ಮತ್ತು ಹಳೆ ಊರಿಗೆ ಹೋಗುವ ರಸ್ತೆ ಸಂಪರ್ಕ ಕೆಲಹೊತ್ತು ಕಡಿತಗೊಂಡಿರುವುದರಿಂದ ಜನಜೀವನ ಅಸ್ತವ್ಯಸ್ತಗೊಂಡಿದೆ ಎಂದು ನಾಗಾಯಿದ್ಲಾಯಿ ಗ್ರಾಮಸ್ಥ ಉದಯಪಾಟೀಲ ತಿಳಿಸಿದ್ದಾರೆ.

ನಾಗಾಯಿದ್ಲಾಯಿ ಗ್ರಾಮದಲ್ಲಿ ಧಾರಾಕಾರವಾಗಿ ಸುರಿದ ಭಾರಿ ಮಳೆಗೆ ರೈತ ಬೆಳೆದ ಹೊಲಕ್ಕೆ ನೀರು ನುಗ್ಗಿ ಬೆಳೆ ಸಂಪೂರ್ಣವಾಗಿ ಜಲಾವೃತವಾಗಿ ಹಾನಿಯಾಗಿದೆ ಅಧಿಕಾರಿಗಳು ತಕ್ಷಣ ಸರ್ವೆ ನಡೆಸಿ ಸರ್ಕಾರದಿಂದ ಪರಿಹಾರ ನೀಡಬೇಕು ಎಂದು ರೈತ ಸಂಗಮೇಶ ಪಾಟೀಲ ಅಳಲುತೋಡಿಕೊಂಡರು. ಪಟ್ಟಣದ ವೀರೇಂದ್ರ ಪಾಟೀಲ ಪಬ್ಲಿಕ್ ಶಾಲೆಯಲ್ಲಿ ಸತತವಾಗಿ ಸುರಿಯುತ್ತಿರುವ ಮಳೆಯಿಂದಾಗಿ


ಉದಯವಾಹಿನಿ ಚಿತ್ರ

ಶಾಲೆಯ ಆಟದ ಆವರಣದ ತುಂಬಾ ನೀರಿನಿಂದ ಜಲಾವೃತವಾಗಿದೆ.

ಹೀಗೆ ತಾಲ್ಲೂಕಿನಾದ್ಯಂತ ಕಳೆದ 2 ದಿನಗಳಿಂದ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ರೈತರು ಬೆಳೆಗಳು ಹಾನಿ ಹಾಗೂ ಮನೆಗಳಲ್ಲಿ ನೀರು ನುಗ್ಗಿವೆ ಸರ್ಕಾರ ಶೀಘ್ರದಲ್ಲೇ ಸರ್ವೇ ನಡೆಸಿ ಹಾನಿಯಾದ ಬೆಳೆಗಳಿಗೆ ಪರಿಹಾರ ನೀಡಬೇಕು,ಮನೆಗಳಲ್ಲಿ ನುಗ್ಗಿ ಹಾನಿಯಾದ ಧವಸಧಾನ್ಯಗಳು ಸರ್ವೇ ನಡೆಸಿ ಪರಿಹಾರ ನೀಡಬೇಕು ಮತ್ತು ಮನೆಗಳಲ್ಲಿ ನೀರು ನುಗ್ಗದಂತೆ ಸ್ಥಳೀಯ ಗ್ರಾಮ ಪಂಚಾಯತ್, ತಾಲ್ಲೂಕಾ ಪಂಚಾಯತ್,ಪುರಸಭೆ ಇಲಾಖೆಗಳು ಸೂಕ್ತ ಕ್ರಮ ಕೈಗೊಂಡು ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು ಎಂಬುವುದೆ ಗ್ರಾಮಸ್ಥರು ನ್ಯಾಮತ್ ಹುಸೇನ್, ಗಣೇಶ, ಕುಪೇಂದ್ರ, ಪಂಚಾಳ,ಶಿವರಾಜ್ ಸಿಂದೂಲ್ ಒತ್ತಾಯಿಸಿದರು.

## ಸರ್ಕಾರದ ವಿರುದ್ಧ ಮುಗಿಬಿದ್ದ ಬಿಜೆಪಿ ಮುಖಂಡರು

• ಉದಯವಾಹಿನಿ, ಚಿತ್ರದುರ್ಗ

ವಿಶ್ವ ಹಿಂದೂ ಪರಿಷತ್, ಬಜರಂಗದಳದ ವತಿಯಿಂದ ಇದೇ ಸೆ. 13 ರಂದು ನಡೆಯಲಿರುವ ಹಿಂದೂ ಮಹಾ ಗಣೇಶೋತ್ಸವ ಶೋಭಾಯಾತ್ರೆಗೆ ಸರ್ಕಾರ ತೊಂದರೆ ನೀಡುತ್ತಿದೆ ಎಂದು ಆರೋಪಿಸಿ ಸಂಘಟನೆಗಳ ಕಾರ್ಯಕರ್ತರು, ಬಿಜೆಪಿ ಮುಖಂಡರು ನಗರದಲ್ಲಿ ಪ್ರತಿಭಟನೆ ನಡೆಸಿದರು.

ಜೈನಧಾಮದ ಗಣೇಶ ಮಂಟಪದಿಂದ ಜಿಲ್ಲಾಧಿಕಾರಿ ಕಚೇರಿವರೆಗೂ ಮೆರವಣಿಗೆ ನಡೆಸಿದ ನೂರಾರು ಕಾರ್ಯಕರ್ತರು ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಮೆರವಣಿಗೆಯಲ್ಲಿ ಕೇಸರಿ ಧ್ವಜಗಳು ರಾರಾಜಿಸಿದವು. ವಿಶ್ವಹಿಂದೂ ಪರಿಷತ್ ಸಹ ಕಾರ್ಯದರ್ಶಿ ಶರಣ್ ಪಂಪ್‌ವೆಲ್ ಜಿಲ್ಲಾ ಪ್ರವೇಶಕ್ಕೆ ನಿರ್ಬಂಧ ಹೇರಿರುವುದು ಖಂಡನೀಯ. ಶೋಭಾಯಾತ್ರೆಯಲ್ಲಿ ನಡೆಯುವ ಧಾರ್ಮಿಕ ಚಟುವಟಿಕೆಗಳು ಎಲ್ಲರಿಗೂ ಕೇಳಲಿ ಎಂಬ ಉದ್ದೇಶದಿಂದ ಹೆಚ್ಚುವರಿಯಾಗಿ ಧ್ವನಿ ವರ್ಧಕ ಅಳವಡಿಸಲು ಅವಕಾಶ ಕೇಳಲಾಗುತ್ತಿದೆ. ಆದರೆ ಇದಕ್ಕೆ ಸಮ್ಮತಿ ನೀಡಬೇಕು ಎಂದು ಒತ್ತಾಯಿಸಿದರು.

**ಪ್ರತಿಭಟನಾ ಸಭೆ:** ಇದಕ್ಕೂ ಮೊದಲು ಗಣೇಶೋತ್ಸವದ ಪೆಂಡಾಲ್‌ನಲ್ಲಿ ಪ್ರತಿಭಟನಾ ಸಭೆ ನಡೆಯಿತು. ಈ ವೇಳೆ ಮಾತನಾಡಿದ


ಉದಯವಾಹಿನಿ ಚಿತ್ರ

**ಜಿಲ್ಲಾಡಳಿತದ ವಿರುದ್ಧ ಆಕ್ರೋಶ**

ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಗಣೇಶೋತ್ಸವ ಆಚರಣೆಗೆ ಸರ್ಕಾರ ವಿನಾಕಾರಣ ತೊಂದರೆ ನೀಡುತ್ತಿದೆ. ಮದ್ದೂರು ಕಲ್ಲು ತೂರಾಟದ ಘಟನೆ ಓಲೈಕೆ ರಾಜಕಾರಣವಾಗಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹಾಳಾಗಿದೆ' ಎಂದರು. 'ಭಾರತೀಯ ಸಂವಿಧಾನದ ಅಡಿಯಲ್ಲಿ ಅಧಿಕಾರಿಗಳು ಕೆಲಸ ಮಾಡಬೇಕು. ಯಾವುದೇ ಪಕ್ಷದ ಗುಲಾಮರ ರೀತಿಯಲ್ಲಿ ವರ್ತಿಸಬಾರದು. ಭದ್ರಾವತಿ ಶಾಸಕ ಸಂಗಮೇಶ್ ಅವರು ಮುಂದಿನ ಜನ್ಮದಲ್ಲಿ ಮುಸ್ಲಿಂ ಆಗಿ ಹುಟ್ಟುವೆ ಎಂದು ಹೇಳಿದ್ದಾರೆ. ಈಗಲೇ ಮತಾಂತರವಾದರೆ ಬಹಳ ಒಳ್ಳೆಯದು. ಹಿಂದುತ್ವದ ರಕ್ಷಣೆ ನಮ್ಮ ಬದ್ಧತೆಯಾಗಿದೆ ಎಂದರು.

## ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ಮನವಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕಲಬುರಗಿ

ಸಂವಿಧಾನದ 371ನೇ (ಜೆ) ಅಡಿ ಖಾಲಿ ಹುದ್ದೆಗಳ ಭರ್ತಿ ಸೇರಿದಂತೆ ಗುಲಬರ್ಗಾ ವಿ.ವಿ ಅಭಿವೃದ್ಧಿಗೆ ಸಚಿವ ಪ್ರಿಯಾಂಕ್ ಖರ್ಗೆರಿಗೆ ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಪ್ರಮುಖರು ಮನವಿ ಸಲ್ಲಿಸಿದರು.

ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಗ್ರಾಮೀಣ ಅಭಿವೃದ್ಧಿ ಪಂಚಾಯತ್ ರಾಜ್ ಐಟಿಬಿಟಿ, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ 371ನೇ ಜೇ ಕಲಂ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪ್ರಿಯಾಂಕ್ ಖರ್ಗೆ ಭೇಟಿ ಮಾಡಿ ಕಲ್ಯಾಣ ಕರ್ನಾಟಕದ ಅಭಿವೃದ್ಧಿ ವಿಷಯಗಳ ಬಗ್ಗೆ ಚರ್ಚಿಸಿ ಮನವಿ ಪತ್ರ ಸಲ್ಲಿಸಲಾಯಿತು. ಎಲ್ಲಾ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿ, ವಿಶೇಷವಾಗಿ ಕಲ್ಯಾಣದ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ತುರ್ತಾಗಿ ಶಿಕ್ಷಕರ ನೇಮಕಾತಿ, ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಖಾಯಂ ಕುಲಪತಿಗಳ ನೇಮಕಾತಿಗೆ ಪೂರಕವಾಗಿ ವಿಶ್ವವಿದ್ಯಾಲಯದಲ್ಲಿ ಖಾಲಿ ಹುದ್ದೆಗಳ ಭರ್ತಿ ಸೇರಿದಂತೆ ಗುಲಬರ್ಗಾ ವಿಶ್ವವಿದ್ಯಾಲಯದ ಸರ್ವಾಂಗೀಣ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಲು, ಎಲ್ ಅಂಡ್ ಟಿ ನಾಗರಿಕರ ಮೇಲೆ ನೀರು ಸರಬರಾಜಿಗೆ ಸಂಬಂಧಿಸಿ ಹಿಂದಿನ ಬಾಕಿ ಹೆಸರಿನಲ್ಲಿ ದುಬಾರಿ ಹಣ ವಸೂಲಿ ಮಾಡುತ್ತಿರು ಏಕ ಪಕ್ಷಿಯ ಧೋರಣೆಯ ಬಗ್ಗೆ ತಕ್ಷಣ ಗಮನ ಹರಿಸಲು, ಕಲಬುರಗಿ ನಗರದ ರಸ್ತೆಗಳ ನಿರ್ಮಾಣ ಸೇರಿದಂತೆ ಮೂಲಭೂತ ಸೌಕರ್ಯ ಅಭಿವೃದ್ಧಿಗೆ ಗಮನ ಹರಿಸಲು, ಬರುವ ದಿನಗಳಲ್ಲಿ 371ನೇ ಜೇ ಕಲಂ ಅನುಷ್ಠಾನ ಸಮಿತಿಯ ಸಂಪುಟ ಉಪ ಸಮಿತಿಯ ಸಭೆ ಕಲಬುರಗಿಯಲ್ಲಿ ನಡೆಸಲು ಅದರಂತೆ ಕಲ್ಯಾಣ ಕರ್ನಾಟಕದ ಪ್ರವಾಸಿ ತಾಣಗಳ ಅಭಿವೃದ್ಧಿ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

## ಸಂತ್ರಸ್ತರಿಗೆ ಅನ್ಯಾಯವಾಗದಂತೆ ಸೂಕ್ತ ಕ್ರಮ: ಮನಗೂಳಿ


ಉದಯವಾಹಿನಿ ಚಿತ್ರ

• ಉದಯವಾಹಿನಿ ಸಿಂದಗಿ

ಪಟ್ಟಣದ ಸೋಂಪೂರ ರಸ್ತೆಯ ಸರ್ವೇ ನಂ.842 ಸ್ಥಳದಲ್ಲಿರುವ ಸಂತ್ರಸ್ತರಿಗೆ ಅನ್ಯಾಯವಾಗದಂತೆ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಪುರಸಭೆ ಅಧ್ಯಕ್ಷ ಡಾ.ಶಾಂತೂ ಮನಗೂಳಿ ಹೇಳಿದರು.

ಪಟ್ಟಣದ ಪುರಸಭೆಯ ಸಭಾಭವನದಲ್ಲಿ ಹಮ್ಮಿಕೊಂಡ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 20 ವರ್ಷಗಳಿಂದ ಈ ಪ್ರಕರಣ ಕೆಳಹಂತದ ನ್ಯಾಯಾಲಯದಿಂದ ಈಗ ಉಚ್ಚ ನ್ಯಾಯಾಲಯದವರೆಗೂ ಹೋಗಿದೆ. ಇದಕ್ಕಾಗಿ ಸಂತ್ರಸ್ತರ ಹಿತ ಕಾಪಾಡಲು ಲಕ್ಷಾಂತರ ರೂ. ವ್ಯಯ ಮಾಡಲಾಗಿದೆ. ಆದರೂ ಪುರಸಭೆ ವಿರುದ್ದವಾಗಿ ಉಚ್ಚ ನ್ಯಾಯಾಲಯದಿಂದ ತೀರ್ಪು ಬಂದಿದ್ದರಿಂದ ಅನಿವಾರ್ಯವಾಗಿ ತೆರವು ಕಾರ್ಯಾಚರಣೆ ಮಾಡಲಾಗಿದೆಯೆ ವಿನಃ ಇದರಲ್ಲಿ ಯಾವುದೇ ದುರುದ್ದೇಶ ಇಲ್ಲ. ತೆರವು ಕಾಯಾಚರಣೆ ಮಾಡುವುದಕ್ಕಿಂತ ಮುಂಚೆ ಶಾಸಕರು ಅನೇಕ ಬಾರಿ ಮನವೊಲಿಸಲು ಯತ್ನಿಸಿದ್ದಾರೆ. ಸ್ಥಳದ ಮಾಲೀಕ ಮತ್ತು ಸಂತ್ರಸ್ಥರ ನಡುವೆ ರಾಜಿ ಸಂದಾನ ಮಾಡಿ ಬಡ ಸಂತ್ರಸ್ಥರ ಹಿತ ಕಾಪಾಡಲು ಅವಿರತ ಶ್ರಮಿಸಿದ್ದಾರೆ. ಆದರೂ ಕೆಲವರು ಶಾಸಕರ ತಜೋವಧೆ ಮಾಡಲು ಪ್ರಯತ್ನಿಸುತ್ತಿದ್ದಾರೆ ಎಂದರು.

**ಪರ್ಯಾಯ ವ್ಯವಸ್ಥೆ**

**ಪಟ್ಟಣದ ರಾಂಪೂರ ರಸ್ತೆಯ ಸಮೀಪ ಪುರಸಭೆಗೆ ಸಂಬಂಧಿಸಿದ 13 ಎಕರೆ ಸ್ಥಳವಿದ್ದು ಅದರಲ್ಲಿ 3 ಎಕರೆ ಪ್ರದೇಶದಲ್ಲಿ ಎಲ್ಲಾ ಸಂತ್ರಸ್ಥರಿಗೆ 30+40 ಅಳತೆಯ ನಿವೇಶನ ನೀಡಲು ತಿರ್ಮಾನಿಸಲಾಗಿದೆ. ಈಗಾಗಲೆ ಆಶ್ರಯ ಸಮಿತಿಯೊಂದಿಗೆ ಸಭೆ ನಡೆಸಿ ಅಲ್ಲಿ ಸುಸಜ್ಜಿತ ರಸ್ತೆ, ನೀರು, ವಿದ್ಯುತ್ ಸೇರಿದಂತೆ ಮೂಲಭೂತ ಸೌಲಭ್ಯ ಒದಗಿಸಲಾಗುವುದು ಅಲ್ಲದೆ 84 ಫಲಾನುಭವಿಗಳಲ್ಲಿ ಈಗಾಗಲೆ ಮನೆ ಕಟ್ಟಿಕೊಂಡು ಈಗ ಕಾರ್ಯಾಚರಣೆಯಲ್ಲಿ ಮನೆ ಕಳೆದುಕೊಂಡಿರುವ 14 ಫಲಾನುಭವಿಗಳಿಗೆ ಮನೆ ಕಟ್ಟಿಕೊಡುವ ತೀರ್ಮಾನಕ್ಕೆ ಪುರಸಭೆ ಬದ್ದವಾಗಿದೆ ಅಲ್ಲದೆ ಈ ಕುರಿತು ಬೆಂಗಳೂರಲ್ಲಿ ಶಾಸಕರು ಸಹ ವಸತಿ ಸಚಿವರ ಜೊತೆ ಚರ್ಚೆ ನಡೆಸಿದ್ದು ಒಟ್ಟಾರೆ ಸಂತ್ರಸ್ಥರ ಹಿತಕ್ಕೆ ಧಕ್ಕೆಯಾಗದಂತೆ ಕ್ರಮ ಕೈಗೊಳ್ಳಲಾಗುವುದು ಇದಕ್ಕಾಗಿ ಕಾಲಾವಕಾಶ ಬೇಕು ಎಂದರು.**

## ಕ್ಷೇತ್ರದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮಿಂಚಿನ ಸಂಚಾರ

• ಉದಯವಾಹಿನಿ ಬೆಳಗಾವಿ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಬೆಳಿಗ್ಗೆ, ಗ್ರಾಮೀಣ ವಿಧಾನಸಭಾ ಕ್ಷೇತ್ರದ ವಿವಿಧೆಡೆ ಮಿಂಚಿನ ಸಂಚಾರ ನಡೆಸಿ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದರು.

ಗಣೇಶಪುರ ಗ್ರಾಮದಲ್ಲಿ ಸುಮಾರು 2.10 ಕೋಟಿ ವೆಚ್ಚದಲ್ಲಿ ಕೈಗೊಳ್ಳಲಾದ ಉದ್ಯಾನ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದರು. ಸರಸ್ವತಿ ನಗರದ ಸಿದ್ಧಿ ವಿನಾಯಕ ದೇವಾಲಯ ಆವರಣದಲ್ಲಿ ನಡೆಯುತ್ತಿರುವ ಉದ್ಯಾನ ಕಾಮಗಾರಿಯನ್ನು ವೀಕ್ಷಿಸಿ ಗುತ್ತಿಗೆದಾರರಿಗೆ ಸಲಹೆ, ಸೂಚನೆ ಸೂಚನೆ ನೀಡಿದರು.

ಫ್ರೀಡಂ ಫೈಟರ್ಸ್ ಕಾಲೊನಿ ಹಾಗೂ


ಉದಯವಾಹಿನಿ ಚಿತ್ರ

**ಅಭಿವೃದ್ಧಿ ಕಾಮಗಾರಿಗಳ ಪರಿಶೀಲನೆ**

ಇನ್ನುಳಿದ ಎರಡು ಉದ್ಯಾನ, ಪ್ರೆಸ್ ಕಾಲೊನಿಯ ಉದ್ಯಾನ ವೀಕ್ಷಿಸಿ, ಅಲ್ಲಿನ ನಾಗರಿಕರಿಗಾಗಿ ಹಸಿರಿನಿಂದ ಕೂಡಿದ ಸುಂದರ ಉದ್ಯಾನ ನಿರ್ಮಾಣ ಮಾಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ನಂತರ ಹಿಂಡಲಗಾ ಗ್ರಾಮದಲ್ಲಿ 2.15 ಕೋಟಿ ವೆಚ್ಚದಲ್ಲಿ ಕೈಗೊಳ್ಳಲಾದ ವಿವಿಧ ಉದ್ಯಾನಗಳ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದರು. ಗ್ರಾಮದಲ್ಲಿನ ಮರಾಠಾ ಕಾಲೊನಿ, ವಿನಾಯಕ ನಗರ, ವಿದ್ಯಾನಗರ ಹೌಸಿಂಗ್ ಕಾಲೊನಿ, ಎಂ.ಇ.ಎಸ್. ಕಾಲೊನಿ, ಡಿಫೆನ್ಸ್ ಕಾಲೊನಿಗಳಲ್ಲಿ ನಡೆಯುತ್ತಿರುವ ಉದ್ಯಾನ ಕಾಮಗಾರಿಗಳನ್ನು ಶೀಘ್ರ ಮುಗಿಸುವಂತೆ ತಾಕೀತು ಮಾಡಿದರು.

ಬಳಿಕ, ಸಹ್ಯಾದ್ರಿ ನಗರದ ಸಮಗ್ರ ಅಭಿವೃದ್ಧಿಯ ನಿಟ್ಟಿನಲ್ಲಿ 6.14 ಕೋಟಿ ಅನುದಾನದಲ್ಲಿ ನಡೆಯುತ್ತಿರುವ ವಿವಿಧ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿದರು. ರಸ್ತೆ ನಿರ್ಮಾಣ, ಚರಂಡಿ ಕಾಮಗಾರಿ ಹಾಗೂ ಪ್ರಗತಿ ಪರಿಶೀಲನೆ ನಡೆಸಿ ಮಾಹಿತಿ ಪಡೆದರು.

## ನಿಯಮ ಪಾಲಿಸದ ವಾಹನಗಳ ಮೇಲೆ ಕ್ರಮ

• ಉದಯವಾಹಿನಿ ಔರಾದ್

ಟ್ರಾಫಿಕ್ ಹಾಗೂ ಸುರಕ್ಷತಾ ನಿಯಮಗಳನ್ನು ಪಾಲಿಸದೆ ಇರುವ ಖಾಸಗಿ ಶಾಲಾ ವಾಹನಗಳಿಗೆ ಆರ್‌ಟಿಇ ಅಧಿಕಾರಿಗಳು ಬಿಸಿ ಮುಟ್ಟಿಸಿದ್ದಾರೆ. ಆರ್‌ಟಿಒ ಜಿ.ಕೆ ಬಿರಾದಾರ್ ಮಾರ್ಗದರ್ಶನದಲ್ಲಿ ಇನ್‌ಸ್ಪೆಕ್ಟರ್ ಹುಸೇನ್ ನದಾಫ್ ದಾಳಿ ನಡೆಸಿ ಪಟ್ಟಣದ ಪ್ರಮುಖ ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ವೇಳೆ ಕಾನೂನು ಪ್ರಕಾರ ನಿಯಮ ಪಾಲಿಸದ ವಾಹನಗಳ ವಿರುದ್ಧ ಯಾವುದೇ ಮುಲ್ಲಜಿಲ್ಲದೇ ಬಿಸಿ ಮುಟ್ಟಿಸಿದ ಆರ್‌ಟಿಒ ಅಧಿಕಾರಿಗಳು ಪ್ರಮುಖ ಶಾಲಾ ಕಾಲೇಜಿನ ವಾಹನಗಳನ್ನು ಸೀಜ್ ಮಾಡಿದ್ದಾರೆ. ಮಕ್ಕಳನ್ನು ಬೇಕಾಬಿಟ್ಟಿಯಾಗಿ ಕೂಡಿಸಿಕೊಂಡು ಹೋಗುವುದು, ವಾಹನಗಳ ಪರವಾನಿಗೆ ಇಲ್ಲದಿರುವುದು, ಚಾಲಕರು ಡಿಎಲ್ ಇಲ್ಲದೆ ಸಂಚರಿಸುವುದು ಮುಂತಾದ ಅಪರಾಧಗಳನ್ನು ಗುರುತಿಸಲಾಗಿದ್ದು, ನಿಯಮ ಪಾಲಿಸದ ಶಾಲಾ ವಾಹನಗಳನ್ನು ಆರ್‌ಟಿಒ ಅಧಿಕಾರಿಗಳು ಜಪ್ತಿ ಮಾಡಿದ್ದಾರೆ.

ಶಾಲಾ ವಾಹನಗಳು ಶಾಲೆಯ ಹೆಸರಿನಲ್ಲಿ ನೋಂದಣಿ ಆಗಿರಬೇಕು. ಆದರೆ ಸಾಕಷ್ಟು ವಾಹನಗಳು ಯಾರದೋ ಹೆಸರಿನಲ್ಲಿ ನೋಂದಣಿ ಆಗಿವೆ. ಹಾಗಸಾಗಿ ಆರ್‌ಟಿಒ ಅಧಿಕಾರಿಗಳು ಎರಡು ದಿನದಲ್ಲಿ 11 ಶಾಲಾ ವಾಹನಗಳನ್ನು ಸೀಜ್ ಮಾಡಿದ್ದಾರೆ. ಶಾಲಾ-ಕಾಲೇಜು ವಾಹನಗಳ ಮೇಲೆ ಶಾಲೆ ಹೆಸರು ಮತ್ತು ವಿಳಾಸ, ದೂರವಾಣಿ ಸಂಖ್ಯೆ ಇರಬೇಕು. ವಾಹನದೊಳಗೆ ಸಿಸಿ ಕ್ಯಾಮರಾ, ಫ್ಯಾನಿಕ್ ಬಟನ್, ಫಸ್ಟ್ ಏಡ್ ಬಾಕ್ಸ್ ಇರಬೇಕು. ಈ ಯಾವ ನಿಯಮಗಳು ಕೂಡ ಪಾಲನೆಯಾಗಿಲ್ಲ ಇದರ ಬಗ್ಗೆ ಆಡಳಿತ ಮಂಡಳಿಯವರಿಗೆ ಹಾಗೂ ಶಾಲೆಯ ಪ್ರಾಂಶುಪಾಲರಿಗೆ ತಿಳಿಸಲಾಗಿದೆ ಎಂದು ಆರ್‌ಟಿಒ ಇನ್‌ಸ್ಪೆಕ್ಟರ್ ಹುಸೇನ್ ನದಾಫ್ ತಿಳಿಸಿದ್ದಾರೆ.

# ಒಳಮೀಸಲಾತಿ ಒಪ್ಪಲು ಸಾಧ್ಯವೇ ಇಲ್ಲ: ಸಂಸದ ಕಾರಜೋಳ

### • ಕ್ರಿಶ್ಚಿಯನ್ ಜಾತಿಯ ಹೆಸರು ತೆಗೆಯದೆ ಇದ್ದರೆ ಜಾತಿಗಣತಿ ಬಹಿಷ್ಕಾರ: ನಾರಾಯಣಸ್ವಾಮಿ

• ಉದಯವಾಹಿನಿ ಕೊಪ್ಪಳ

ಸುಪ್ರೀಂ ಕೋರ್ಟ್ ಆದೇಶದಂತೆ, ಜನಸಂಖ್ಯೆಗೆ ಅನುಗುಣವಾಗಿ, ನಾಗಮೋಹನದಾಸ್ ವರದಿಯಂತೆ ಅಥವಾ ಮಾಧುಸ್ವಾಮಿ ಆಯೋಗದ ಶಿಫಾರಸಿನಂತೆ ಒಳಮೀಸಲಾತಿ ವರ್ಗೀಕರಣ ಆಗಿಲ್ಲ, ಹೀಗಾಗಿ ಸರ್ಕಾರ ಈಗ ಮಾಡಿರುವ ಒಳಮೀಸಲಾತಿ ವರ್ಗೀಕರಣವನ್ನು ಒಪ್ಪಲು ಸಾಧ್ಯವೇ ಇಲ್ಲ ಎಂದು ಸಂಸದ ಗೋವಿಂದ ಕಾರಜೋಳ ಹೇಳಿದರು.

ತಾಲ್ಲೂಕಿನ ಮುನಿರಾಬಾದ್‌ನಲ್ಲಿ ಗುರುವಾರ ಒಳಮೀಸಲಾತಿಯ ಮುಂದಿನ ನಡೆಗಳ ಕುರಿತು ಚಿಂತನ ಮಂಥನ ಸಭೆ ನಡೆಸುವುದಕ್ಕೆ ಮೊದಲಾಗಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾವು ಯಾವುದೇ ಜನಾಂಗದ ವಿರೋಧಿಗಳಲ್ಲ. ಸುಪ್ರೀಂ ಕೋರ್ಟ್ ಹಿಂದುಳಿದವರನ್ನು ಗುರುತಿಸುವಿಕೆಯ ವಿಚಾರದಲ್ಲಿ ಸ್ಪಷ್ಟ ಮಾರ್ಗದರ್ಶನ ನೀಡಿದ್ದರೂ ಅದನ್ನು ಅನುಸರಿಸಿಲ್ಲ ಎಂಬುದೇ ನಮ್ಮ ಆಕ್ಷೇಪ ಎಂದರು. ರಾಜ್ಯದಲ್ಲಿ ಆಡಳಿತ ನಡೆಸಿದ ಬಿಜೆಪಿ ಸರ್ಕಾರಗಳು 2011ರಿಂದಲೂ ಒಳಮೀಸಲಾತಿ ಪರವಾಗಿಯೇ ಇದ್ದವು. ಆದರೆ ಸಿದ್ದರಾಮಯ್ಯ ಮತ್ತು ಅವರ ತಂಡದವರು ಜನರನ್ನು ತಪ್ಪುದಾರಿಗೆಳೆಯುವ ಪ್ರಯತ್ನ ಮಾಡುತ್ತಲೇ ಬಂದರು.

ನಾಗಮೋಹನದಾಸ್ ಆಯೋಗ ಬಹಳ ವೈಜ್ಞಾನಿಕವಾಗಿಯೇ ವರದಿ ಸಲ್ಲಿಸಿದ್ದರೂ ಅದನ್ನು ಒಪ್ಪಲು ಸಿದ್ಧವಿಲ್ಲದ ರಾಜ್ಯ ಸರ್ಕಾರ ಕೇವಲ ಮೂರು ವಿಭಾಗ ಮಾಡಿ ಅಲೆಮಾರಿಗಳಿಗೆ ಘೋರ ಅನ್ಯಾಯ ಮಾಡಿದೆ. ಇದು ಸುಪ್ರೀಂ ಕೋರ್ಟ್ ಆದೇಶಕ್ಕೆ ತೀರಾ ವಿರುದ್ಧವಾದುದು ಎಂದರು.


ಉದಯವಾಹಿನಿ ಚಿತ್ರ

**ಶೈಕ್ಷಣಿಕ ಪ್ರಗತಿಗೆ ಪ್ರಯತ್ನ**

**ನಾಗಮೋಹನದಾಸ್ ವರದಿಯಂತೆ ಮಾದಿಗ ಸಮುದಾಯದವರಲ್ಲಿ ಉನ್ನತ ಶಿಕ್ಷಣದಲ್ಲಿ ಕಾಲೇಜನ್ನು ಅರ್ಧದಲ್ಲೇ ಬಿಡುವವರ ಸಂಖ್ಯೆ ಶೇ 44ರಷ್ಟು ಇರುವುದು ಗೊತ್ತಾಗಿದೆ. ಇದು ಬಹಳ ಗಂಭೀರ ವಿಚಾರ. ಸರ್ಕಾರ ಶೈಕ್ಷಣಿಕ ವಾತಾವರಣ ನಿರ್ಮಾಣ ಮಾಡದಿರುವುದೇ ಇದಕ್ಕೆ ಕಾರಣ. ಮಾದಿಗ ಸಮುದಾಯದವರು ಎಸ್‌ಎಸ್‌ಎಲ್‌ಸಿ ಪಾಸ್ ಮಾಡಿಕೊಂಡು ಮುಂದೆ ಬಂದಾಗ, ಉನ್ನತ ಶಿಕ್ಷಣಕ್ಕೆ ಅವರಿಗೆ ನೆರವಾಗುವ ನಿಟ್ಟಿನಲ್ಲಿ ಸಮುದಾಯದ ಸುಶಿಕ್ಷಿತರು ಪ್ರಯತ್ನಿಸಬೇಕು ಎಂದರು.**

**ಜಾತಿಗಣತಿ ಬಹಿಷ್ಕಾರದ ಎಚ್ಚರಿಕೆ**

**ಕೇಂದ್ರದ ಮಾಜಿ ಸಚಿವ ಎ.ನಾರಾಯಣ ಸ್ವಾಮಿ ಮಾತನಾಡಿ, ಸೆ.22ರಿಂದ ಮತ್ತೊಮ್ಮೆ ಜಾತಿಗಣತಿ ನಡೆಯಲಿದೆ, ಹಿಂದುಳಿದ ಆಯೋಗದಿಂದ ಪ್ರತಿಯೊಂದು ಜಾತಿಗೂ ಕ್ರಿಶ್ಚಿಯನ್ ಜಾತಿಯ ಹೆಸರು ಸೇರಿಸಲಾಗಿದೆ. ಸೋನಿಯಾ ಗಾಂಧಿಯವರನ್ನು ಖುಷಿಪಡಿಸಲು ಮಾಡಿದಂತಹ ತಂತ್ರ ಇದು. ಹಿಂದೂ ಜಾತಿಗಳ ಹೆಸರಿನೊಂದಿಗೆ ಸೇರಿಸಲಾದ ಕ್ರಿಶ್ಚಿಯನ್ ಪದವನ್ನು ತಕ್ಷಣ ತೆಗೆದು ಸಮೀಕ್ಷೆಗೆ ಬರಬೇಕು, ಇಲ್ಲವಾದರೆ ಸಮೀಕ್ಷೆಯನ್ನು ಬಹಿಷ್ಕರಿಸಲು ಕರೆ ನೀಡಬೇಕಾಗುತ್ತದೆ ಎಂದು ಎಚ್ಚರಿಸಿದರು. ಇಡೀ ಹಿಂದೂ ಸಮಾಜವನ್ನು ಒಡೆಯುವ ತಂತ್ರಗಾರಿಕೆ ಈ ಕ್ರಿಶ್ಚಿಯನ್ ಪದ ಸೇರಿಸುವುದರ ಹಿಂದೆ ಇದೆ. ಪ್ರತಿಯೊಂದು ಹಿಂದೂ ಹಸರಿನೊಂದಿಗೆ ಕ್ರಿಶ್ಚಿಯನ್ ಹೆಸರು ಸೇರಿಸಿ ಹಿಂದೂಗಳ ಜನಸಂಖ್ಯೆಯ ಪ್ರಮಾಣವನ್ನು ಹೆಚ್ಚುಕಡಿಮೆ ಮಾಡಿಸುವ ಹುನ್ನಾರ ನಡೆದಿದೆ. ಈಗಿನ ಸ್ಥಿತಿಯಲ್ಲೇ ಮನೆ ಮನೆಗೆ ಸಮೀಕ್ಷೆ ನಡೆಸುವುದಾದರೆ ಅದನ್ನು ಜನ ಸಾರ್ವತ್ರಿಕವಾಗಿ ತಿರಸ್ಕರಿಸಬೇಕು ಎಂದು ನಾರಾಯಣಸ್ವಾಮಿ ಸೂಚಿಸಿದರು.**

## ಮಿನಿ ನ್ಯೂಸ್

### ಸೆಪ್ಟೆಂಬರ್ 13ಕ್ಕೆ ಲೋಕ್ ಅದಾಲತ್: ಸದುಪಯೋಗ ಪಡೆದುಕೊಳ್ಳಿ

• ಉದಯವಾಹಿನಿ, ಚಿಂಚೋಳಿ

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ಆದೇಶದ ಮೇರೆಗೆ ಸೆ. 13ರಂದು ರಾಷ್ಟ್ರೀಯ ಲೋಕ್ ಅದಾಲತ್ ಹಮ್ಮಿಕೊಳ್ಳಲಾಗಿದೆ ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬೇಕು ಎಂದು ತಾಲ್ಲೂಕಾ ಕಾನೂನು ಸೇವಾ ಸಮಿತಿಯ ಕಾರ್ಯದರ್ಶಿ, ನ್ಯಾಯಾಧೀಶರಾದ ದತ್ತುಕುಮಾರ ಜವಳಕರ್ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು,ನ್ಯಾಯಾಲಯದಲ್ಲಿ ವಿಚಾರಣೆ ಬಾಕಿ ಪ್ರಕರಣಗಳು ರಾಜೀ ಸಂಧಾನದ ಮೂಲಕ ಇತ್ಯರ್ಥವಾಗುವಂತಹ ಪ್ರಕರಣಗಳನ್ನು ಕಕ್ಷಿದಾರರು,ಸಾರ್ವಜನಿಕರು ಲೋಕ ಅದಾಲತನಲ್ಲಿ ಭಾಗವಹಿಸಿ ಇತ್ಯರ್ಥಗೊಳಿಸಿಕೊಳ್ಳಬಹುದು. ಚೆಕ್ ಅಮಾನ್ಯ ಪ್ರಕರಣಗಳನ್ನು,ಬ್ಯಾಂಕ್ ವಸೂಲಿ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ಕೇಳಿದ ಪ್ರಕರಣಗಳು, ಕಾರ್ಮಿಕ ವ್ಯಾಜ್ಯಗಳನ್ನು,ಕೌಟುಂಬಿಕ ನ್ಯಾಯಾಲಯದಲ್ಲಿನ ಕೆಲವು ಪ್ರಕರಣಗಳು,ಅಮಲ್ದಾರಿ ಪ್ರಕರಣಗಳು, ಲೋಕ ಅದಾಲತ್‌ನಲ್ಲಿ ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳಬಹುದು.

ಲೋಕ ಅದಾಲತ್ ನಲ್ಲಿ ವಕೀಲರ ಮೂಲಕ ಅಥವಾ ತಾವೇ ಖುದ್ದಾಗಿ ನೇರವಾಗಿ ಭಾಗವಹಿಸಬಹುದು,ಸೌಹಾರ್ದಯುತವಾಗಿ ಪ್ರಕರಣಗಳುನ್ನು ಇತ್ಯರ್ಥಗೊಳ್ಳುವುದರಿಂದ ಉತ್ತಮ ಬಾಂಧವ್ಯ ಉಳಿಯುವುದರ ಜೊತೆಗೆ ನೆಮ್ಮದಿ ಸಹ ಉಳಿಯಲಿದೆ,ಪ್ರಕರಣ ಇರುವ ಪ್ರದೇಶದಿಂದ ದೂರವಿದ್ದಲ್ಲಿ ಮುಂಚಿತವಾಗಿ ತಿಳಿಸಿ ಆನ್‌ಲೈನ್‌ನಲ್ಲಿ ಪಕ್ಷಾಗಾರರು ಲೋಕ್ ಅದಾಲತ್‌ನಲ್ಲಿ ಭಾಗವಹಿಸಬಹುದು ಎಂದು ತಿಳಿಸಿದ್ದಾರೆ.

### ವ್ಯಕ್ತಿ ಉನ್ನತ ಸ್ಥಾನ ಪಡೆಯುವಲ್ಲಿ ಶಿಕ್ಷಕರ ಪಾತ್ರ ಮಹತ್ತರ

• ಉದಯವಾಹಿನಿ ಬಾದಾಮಿ

ಯಾವುದೇ ವ್ಯಕ್ತಿ ಉನ್ನತ ಸ್ಥಾನ ಪಡೆಯುವಲ್ಲಿ ಶಿಕ್ಷಕರ ಪಾತ್ರ ಮಹತ್ತರವಾಗಿದೆ ಎಂದು ಪುರಸಭೆ ಅಧ್ಯಕ್ಷ ಪಾಂಡಪ್ಪ ಕಟ್ಟಿಮನಿ ಹೇಳಿದರು. ಅವರು ನಗರದ ಎಸ್.ವ್ಹಿ.ಪಿ.ಸಂಸ್ಥೆಯ ಬಸವಭವನದಲ್ಲಿ ಹಮ್ಮಿಕೊಂಡಿದ್ದ ಬಾದಾಮಿ ಹಾಗೂ ಗುಳೇದಗುಡ್ಡ ತಾಲ್ಲೂಕು ಮಟ್ಟದ ಶಿಕ್ಷಕರ ದಿನಾಚರಣೆ , ನಿವೃತ್ತ ಶಿಕ್ಷಕರ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಮಕ್ಕಳಲ್ಲಿ ಮಾನವೀಯ ಮೌಲ್ಯ, ಸಂಸ್ಕಾರ ಗುಣಮಟ್ಟದ ಶಿಕ್ಷಣ ಕೊಡುವಲ್ಲಿ ಶಿಕ್ಷಕರ ಶ್ರಮ ಅವಿಸ್ಮರಣೀಯ. ಶಿಕ್ಷಕರು ತಮ್ಮ ಜೀವನವನ್ನೆ ಕಲಿಕೆಗೆ ಮೀಸಲಿಟ್ಟಿರುತ್ತಾರೆ. ಗುರುಗಳು ಎಲ್ಲರಿಗೂ ಮಾರ್ಗದರ್ಶಕರಾಗಿದ್ದಾರೆ ಎಂದರು. ಶಾಸಕರ ತಾಯಿ ರತ್ನಾಬಾಯಿ ಚಿಮ್ಮನಕಟ್ಟಿ ಶಿಕ್ಷಕರ ದಿನಾಚರಣೆ ಪ್ರಯುಕ್ತ ಶಿಕ್ಷಕರಿಗೆ ಶುಭ ಕೋರಿದರು. ಶಿವಯೋಗಮಂದಿರ ಸಂಸ್ಥೆಯ ಉಪಾಧ್ಯಕ್ಷ ಸದಾಶಿವ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿ ಶಿಕ್ಷಕರ ಕುರಿತು ಮಾತನಾಡಿ ಮಕ್ಕಳಿಗೆ ಮೌಲ್ಯಯುತ ಶಿಕ್ಷಣ ನೀಡಿ, ಉತ್ತಮ ಪ್ರಜೆಗಳಾಗಿ ರೂಪಿಸಬೇಕು ಎಂದರು.

### ಬಸ್ ಸೌಕರ್ಯಕ್ಕೆ ಆಗ್ರಹಿಸಿ ಪ್ರತಿಭಟನೆ

• ಉದಯವಾಹಿನಿ ಮುರಗುಂಡಿ

ಗ್ರಾಮದ ವಿದ್ಯಾರ್ಥಿಗಳು, ವ್ಯಾಪಾರಿಗಳು ಹಾಗೂ ಪ್ರಯಾಣಿಕರು ಸಂಚರಿಸಲು ಸೂಕ್ತ ಸಮಯಕ್ಕೆ ಬಸ್ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿ, ಗ್ರಾಮದಲ್ಲಿ ದಲಿತ ವಿದ್ಯಾರ್ಥಿ ಪರಿಷತ್ ನೇತೃತ್ವದಲ್ಲಿ ಬುಧವಾರ ಗ್ರಾಮಸ್ಥರು ಬಸ್ ತಡೆದು ಪ್ರತಿಭಟನೆ ನಡೆಸಿದರು.

ಮುರಗುಂಡಿ ಗ್ರಾಮವು ಸುತ್ತಲಿನ 7 ಗ್ರಾಮಗಳ ಕೇಂದ್ರವಾಗಿದೆ. ಇಲ್ಲಿಂದ ವಿದ್ಯಾರ್ಥಿಗಳು, ರೈತರು, ಕಾರ್ಮಿಕರು, ಪ್ರವಾಸಿಗರು ಜಿಲ್ಲಾ ಕೇಂದ್ರವಾದ ಬೆಳಗಾವಿ, ಕೊಲ್ಲಾಪುರ, ಮೀರಜ್ ಮುಂತಾದ ಕಡೆಗೆ ಪ್ರತಿ ದಿನವೂ ಹೋಗುತ್ತಾರೆ. ಆದರೆ, ಗ್ರಾಮದಲ್ಲಿ ಬಸ್ ನಿಲ್ಲದ ಕಾರಣ ಪ್ರತಿ ದಿನ ಅಥಣಿಗೆ ಹೋಗಿ ಬಸ್ ಹಿಡಿಯಬೇಕಾದ ಪರಿಸ್ಥಿತಿ ಇದೆ. ಈ ಸಂಬಂಧ ಹಲವಾರು ಬಾರಿ ಕೆ.ಎಸ್.ಆರ್.ಟಿ.ಸಿ ವ್ಯವಸ್ಥಾಪಕರಿಗೆ ವಿನಂತಿಸಿದರೂ ಪ್ರಯೋಜನೆ ಆಗಿಲ್ಲ. ಆದ್ದರಿಂದ ಗ್ರಾಮದಲ್ಲಿ ಡಿವಿಪಿ ಜಿಲ್ಲಾ ಘಟಕದ ಅಧ್ಯಕ್ಷ ಆದರ್ಶ ಗಸ್ತಿ, ಮುಖಂಡರಾದ ಕುಮಾರ ಗಸ್ತಿ, ಆನಂದ ಸನದಿ, ರೋಹಿತ್ ಗಸ್ತಿ, ಅರುಣ್ ಹಾವರದ್ದಿ, ಆಕಾಶ ಕುಂಬಾರಗುತ್ತಿ, ರೋಹಿತ ಕುಶನಾಳೆ, ಮಾರುತಿ ಸಿಂಗಣವರ ಮುಂತಾದವರ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

### ಕಾಯಕದಲ್ಲಿ ಮೇಲು-ಕೀಳಿಲ್ಲ

• ಉದಯವಾಹಿನಿ ಬಾಗಲಕೋಟೆ

ಕಾಯಕದಲ್ಲಿ ಮೇಲು ಕೀಳಿಲ್ಲ. ಜಾತಿ ವ್ಯವಸ್ಥೆ ಸಾಮಾಜಿಕ ಅನಿಷ್ಟವಾಗಿದೆ. ಆರ್ಥಿಕ, ಸಾಮಾಜಿಕ ಸಮಾನತೆ ಸಾಧನೆಯಿಂದ ಜಾತಿ ವ್ಯವಸ್ಥೆ ನಿರ್ಮೂಲನೆಯಾಗುತ್ತದೆ ಎಂದು ಗದುಗಿನ ತೋಂಟದಾರ್ಯ ಮಠದ ತೋಂಟದ ಸಿದ್ದರಾಮ ಸ್ವಾಮೀಜಿ ಹೇಳಿದರು.

ಬಾಗಲಕೋಟೆಯ ಕಲಾಭವನದಲ್ಲಿ ಬಸವ ಸಂಸ್ಕೃತಿ ಅಭಿಯಾನ ಅಂಗವಾಗಿ ನಡೆದ ಸಂವಾದದಲ್ಲಿ ಮಾತನಾಡಿದ ಅವರು, ಜಾತಿ ಭೇದ ಹೊಡೆದು ಹಾಕಲು ಬಸವಣ್ಣ ಶ್ರಮಿಸಿದ್ದರು. ಮೀಸಲಾತಿಗಾಗಿ ಜಾತಿ ಮುಂದುವರೆದಿದೆ. ಅದರ ನಿರ್ಮೂಲನೆಗೆ ಎಲ್ಲರೂ ಶ್ರಮಿಸಬೇಕು ಎಂದರು. ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು ಮಾತನಾಡಿ, ಬಸವಣ್ಣ ನೀಡಿದ ಇಷ್ಟಲಿಂಗ ಪೂಜೆ ಮಾಡಬೇಕು. ಅದರೊಂದಿಗೆ ಧರ್ಮಗುರು ಬಸವಣ್ಣನಿಗೂ ಗೌರವ ಸೂಚಕವಾಗಿ ಪೂಜೆ ಸಲ್ಲಿಸಿದರೆ ತಪ್ಪೇನಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ದೆವ್ವ, ಭೂತ ಇಲ್ಲ. ಅದೊಂದು ಸುಳ್ಳು ಕಲ್ಪನೆ. ಕೆಲವರು ಮೂಢನಂಬಿಕೆಯ ಲಾಭ ಪಡೆದುಕೊಳ್ಳಲು ಯತ್ನಿಸುತ್ತಾರೆ. ಮಾನಸಿಕ ಕಾಯಿಲೆಯಾಗಿದೆ ಎಂದರು.

'ಬಸವಣ್ಣನವರು ದಯವೇ ಧರ್ಮದ ಮೂಲ ಎಂದಿದ್ದಾರೆ. ಎಲ್ಲರಿಗೂ ಲೇಸನೇ ಬಯಸಿದ್ದಾರೆ. ಗೋ ಹತ್ಯೆ ನಿಲ್ಲಿಸಲು ಧ್ವನಿ ಎತ್ತಬೇಕು. ಆಗಲೇ ನಿಲ್ಲುತ್ತದೆ ಎಂದು ಹೇಳಿದರು. ವಿಧವೆ ಹೆಣ್ಣು ಮಕ್ಕಳನ್ನು ಕೀಳಾಗಿ ಕಾಣುವ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ನಿಡಸೋಶಿ ಸಿದ್ದ ಸಂಸ್ಥಾನಮಠದ ಪಂಚಮ ಶಿವಲಿಂಗೇಶ್ವರ ಸ್ವಾಮೀಜಿ, ಪರಿವರ್ತನೆಗೆ ಮುಂದಾಗುವ ಅವಶ್ಯಕತೆ ಇದೆ. ಹೇಳುವುದಕ್ಕಿಂತ ಕೃತಿಯಲ್ಲಿ ಜಾರಿಗೆ ತರಬೇಕು. ಹಲವು ಮೂಢನಂಬಿಕೆಗಳ ನಿವಾರಣೆ ಮಾಡಿದ್ದೇವೆ. ಮಹಿಳೆಯರೂ ಜಾಗೃತರಾಗಬೇಕು ಎಂದರು.

ಮನುಷ್ಯರೆಲ್ಲರೂ ಒಂದು ಎನ್ನುವ ಭಾವ ಬೆಳೆಸಿಕೊಳ್ಳಬೇಕು. ವಿಧವೆಗೆ ಮದುವೆ ಮಾಡಿಸಿದ್ದೇವೆ. ನಿಮಗೆಲ್ಲ ಗೊತ್ತಾದರೆ, ಮುಂದೆ ನಮಸ್ಕಾರ ಹೇಳಿ, ಹಿಂದೆ ವಿರೋಧ ಮಾಡುತ್ತೀರಿ ಎಂದು ಹೇಳಿದರು.


ಉದಯವಾಹಿನಿ ಚಿತ್ರ

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ಇಂದು ನಿಮ್ಮ ದುಂದುಗಾರಿಕೆಯ ಮೇಲೆ ನಿಮ್ಮ ಸಂಗಾತಿ ನಿಮಗೆ ಮಾತುಗಳು ಹೇಳಬಹುದು. ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮ ಸುತ್ತಮುತ್ತಲಿನ ಪರಿಸರವನ್ನು ಬೆಳಗಿಸುತ್ತದೆ.

**ವೃಷಭ** ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟು ವಿಶ್ರಾಂತಿ ಪಡೆಯಲು ಪ್ರಯತ್ನಿಸಿ. ರಿಯಲ್ ಎಸ್ಟೇಟ್ ನಲ್ಲಿ ಹೂಡಿಕೆ ಲಾಭದಾಯಕವಾಗಬಹುದು.

**ಮಿಥುನ** ತೊಂದರೆಯಲ್ಲಿರುವ ಯಾರಿಗಾದರೂ ಸಹಾಯ ಮಾಡಲು ನಿಮ್ಮ ಶಕ್ತಿಯನ್ನು ಬಳಸಿ. ಲೋಕೋಪಕಾರಕ್ಕಾಗಲ್ಲದಿದ್ದಲ್ಲಿ ಈ ನಶ್ವರ ದೇಹದ ಉಪಯೋಗವಾದರೂ ಏನು.

**ಕರ್ಕಾಟಕ** ನೀವು ಕುಟುಂಬದ ಸದಸ್ಯರ ಜೊತೆ ಸ್ವಲ್ಪ ತೊಂದರೆ ಹೊಂದಿದ್ದರೂ ಇದು ನಿಮ್ಮ ಮನಶ್ಶಾಂತಿಯನ್ನು ಹಾಳು ಮಾಡಲು ಅವಕಾಶ ನೀಡಬೇಡಿ. ನಿಮ್ಮ ನಗು ಯಾವುದೇ ಅರ್ಥ ಹೊಂದಿಲ್ಲ.

**ಸಿಂಹ** ನಿಮ್ಮಲ್ಲಿ ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ನಿಮ್ಮ ತಾಯಿಯ ಬದಿಯಿಂದ ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.

**ಕನ್ಯಾ** ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ವ್ಯಾಪಾರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು.

**ತುಲಾ** ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ವಿವಾಹಿತ ಜನರು ಇಂದು ತಮ್ಮ ಮಕ್ಕಳ ಶಿಕ್ಷಣದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ.

**ವೃಶ್ಚಿಕ** ನಗು ನಿಮ್ಮ ಎಲ್ಲಾ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗಿರುವ ಪ್ರಯತ್ನವು ವಿಫಲವಾಗಬಹುದು, ಹೇಗಾದರೂ, ಅದರ ಬಗ್ಗೆ ಚಿಂತಿಸಬೇಕಾಗಿಲ್ಲ.

**ಧನಸ್ಸು** ನಿಮ್ಮ ಕುಟುಂಬ ಸದಸ್ಯರು ಹೇಳಿದ್ದೆಲ್ಲಕ್ಕೂ ನೀವು ಒಪ್ಪದಿರಬಹುದು. ಆದರೆ ನೀವು ಅವರ ಅನುಭವದಿಂದ ಕಲಿಯಲು ಪ್ರಯತ್ನಿಸಬೇಕು. ನಿಮ್ಮ ಪ್ರೀತಿಪಾತ್ರರ ಭಾವನೆಗಳನ್ನು ಇಂದು ಅರ್ಥಮಾಡಿಕೊಳ್ಳಿ.

**ಮಕರ** ಸ್ನೇಹ ಕಳೆದುಕೊಳ್ಳುವ ಸಾಧ್ಯತೆಗಳು ಇಂದು ಹೆಚ್ಚಾಗಿರುವುದರಿಂದ ಎಚ್ಚರಿಕೆಯಿಂದಿರಿ. ನೀವು ಕೆಲಸದಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ ಮತ್ತು ಪ್ರಭಾವವನ್ನು ಬಳಸಬೇಕಾಗುತ್ತದೆ.

**ಕುಂಭ** ಮನೆಯಲ್ಲಿ ಯಾವುದೇ ಕಾರ್ಯಕ್ರಮ ನಡೆಯುವ ಕಾರಣದಿಂದಾಗಿ ನೀವು ನಿಮ್ಮ ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗುತ್ತದೆ, ಕಾರಣದಿಂದಾಗಿ ನಿಮ್ಮ ಆರ್ಥಿಕ ಪರಿಸ್ಥಿತಿ ಹದಗೆಡಬಹುದು.

**ಮೀನ** ಇಂದು ನೀವು ನಿಜವಾಗಿಯೂ ಲಾಭ ಪಡೆಯಬಯಸಿದರೆ ಇತರರು ನೀಡಿದ ಸಲಹೆಯನ್ನು ಕೇಳಿ. ಈ ದಿನವು ಇಂದು ನಿಮ್ಮ ಸಂಗಾತಿಯ ಪ್ರಣಯದ ಉತ್ಕಟತೆಯನ್ನು ತೋರಿಸುತ್ತದೆ.

---

● ಜನಿವಾರ ಸಮಾಜಗಳ ಸ್ಮಶಾನಕ್ಕೆ ಕುತ್ತು ಗೌರವಯುತ ಅಂತ್ಯಕ್ರಿಯೆಗೆ ಆಪತ್ತು

# ಜನಿವಾರ ಸಮಾಜ ಜಾಗೆ ಸ್ಥಾನ ಪಲ್ಲಟ ಮತ್ತು ಒತ್ತುವರಿ

**ಉದಯವಾಹಿನಿ ವಿಶೇಷ**

• ಉದಯವಾಹಿನಿ ಮುದ್ದೇಬಿಹಾಳ

ಮುದ್ದೇಬಿಹಾಳ ಪಟ್ಟಣದ ವಿವಿಧ 18 ಜನಿವಾರ ಸಮಾಜಗಳಿಗೆ ನೀಡಿದ ಜಾಗೆ ಶಿರೋಳ ರಸ್ತೆಯ ಜಾಗೆ ಸರ್ವೆ ನಂ 49 ಬ 4 ಎಕರೆ ಜಾಗೆ ಒತ್ತುವರಿ ಮಾಡಿದ್ದರೆ ತಾಳಿಕೋಟಿ ರಸ್ತೆಯ ಸರ್ವೆ ನಂ 3 ಬ 10 ಗುಂಟೆಜಾಗೆ ಅದಲು ಬದಲು ಸ್ಥಾನಪಲ್ಲಟವಾಗಿದೆ ಇದರಿಂದ ಅಂತ್ಯಕ್ರಿಯೆ ಮಾಡಲು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು 18 ಜನಿವಾರ ಸಮಾಜಗಳ ಮುಖಂಡರು ಮಾಧ್ಯಮಗಳ ಮುಂದೆ ಅಳಲನ್ನು ತೋಡಿಕೊಂಡಿದ್ದಾರೆ

ಜನಿವಾರ ಸಮಾಜದ ಮುಖಂಡರಾದ ಮೋಹನ್ ಓಸ್ವಾಲ್, ನೇತಾಜಿ ನಲವಡೆ, ಪುಟ್ಟು ಕುಲಕರ್ಣಿ, ಉದಯಸಿಂಗ್ ರಾಯಚೂರು,ವೀರುಪಾಕ್ಷಿ ಪತ್ತಾರ ಮಾತನಾಡಿ ತಾಳಿಕೋಟಿ ರಸ್ತೆಯ ಜನಿವಾರ ಸಮಾಜದ ಸ್ಮಶಾನಕ್ಕೆ ಹಲವು ದಶಕಗಳಹಿಂದೆ ದಾನದ ರೂಪದಲ್ಲಿ ಸರ್ವೆ ನಂ 3 ಬ 10 ಗುಂಟೆ ಜಾಗದ ನೀಡಲಾಗಿತ್ತು ಕಳೆದ ಹಲವು ದಶಕಗಳಿಂದ ಅದೆ ಜಾಗದಲ್ಲಿ ದಹನಕ್ರಿಯೆ ಕ್ರಿಯಾಕರ್ಮಗಳನ್ನು ಮಾಡಿಕೊಂಡು ಬರಲಾಗುತ್ತಿತ್ತು ಪುರಸಭೆಯಿಂದ ಸ್ಮಶಾನ ಜೀರ್ಣೋದ್ಧಾರಕ್ಕಂತ ಅನುದಾನ ಬಂದವೇಳೆ ಪುರಸಭೆಯಿಂದ ಮೂಲ ಸ್ಮಶಾನವಿರುವ ಉತ್ತರ ದಿಕ್ಕಿನ ಜಾಗೆಯ ಬದಲು ಅದರ ಹಿಂದಿನ ದಕ್ಷಿಣ ಜಾಗೆಯಲ್ಲಿ ಸ್ಮಶಾನ ನಿರ್ಮಾಣ ಮಾಡಿದ್ದಾರೆ ಮಾತ್ರವಲ್ಲದೆ ಹತ್ತುಗುಂಟೆಯ ಜಾಗೆಯಲ್ಲಿ ಚಕ್ಕಡಿ ರಸ್ತೆಯನ್ನು ಸಾರ್ವಜನಿಕ ರಸ್ತೆ ನಿರ್ಮಾಣ ಮಾಡಿದ್ದಾರೆ ಆದರೆ ಈಗ ಪುರಸಭೆ ಮಾಡಿದ ಸ್ಮಶಾನ ನಿರ್ಮಾಣ ಖಾಸಗಿ ಮಾಲಿಕತ್ವದ ಜಾಗೆಯಲ್ಲಿ ಮಾಡಿದ್ದು ಮಾಲಿಕರು ಇದು ನಮ್ಮ ಜಾಗೆ ಎಂದು ಉತಾರೆ ತೋರಿಸಿದ್ದಾರೆ ನಮ್ಮ ಜಾಗೆ ಎಲ್ಲಿ ಹೋಯಿತೆಂದು ಪುರಸಭೆಯಿಂದ ಪುನಃ ಸರ್ವೆ ಮಾಡಲಾಗಿ ಅದು ಉತ್ತರ ದಿಕ್ಕಿನಲ್ಲಿ ಇದೆ ಹೀಗಾಗಿ ನಮಗೆ ನಮ್ಮ ಮೂಲ ಸ್ಮಶಾನ ಜಾಗೆ ಅಧಿಕೃತವಾಗಿ ಬಿಟ್ಟುಕೊಟ್ಟು ಸ್ಮಶಾನ ಜೀರ್ಣೋದ್ಧಾರ ಮಾಡಿಕೊಡಬೇಕು ಎಂದು ಒತ್ತಾಯಿಸಿದರು.



ಉದಯವಾಹಿನಿ ಚಿತ್ರ

> ಶಿರೋಳ ರಸ್ತೆಯ ಜನಿವಾರ ಸಮಾಜದ ಜಾಗೆ ಸರ್ವೆ ನಂ 49 ಬ 4 ಎಕರೆ ಜಾಗೆ ಒತ್ತುವರಿ ಮಾಡಲಾಗದೆ ಅಂತ್ಯಕ್ರಿಯೆ ಗೆ ಜಾಗೆ ಇರದಂತ ಪರಿಸ್ಥಿತಿ ನಿರ್ಮಾಣವಾಗಿದೆ , ತಾಳಿಕೋಟಿ ರಸ್ತೆಯ ಜನಿವಾರ ಸಮಾಜಗಳ ಸ್ಮಶಾನ ಜಾಗೆ 10 ಗುಂಟೆ ಸ್ಥಾನಪಲ್ಲಟವಾಗಿದೆ ಸರಕಾರದ ನಿಯಮದಂತೆ ಕರೆ ಕಟ್ಟೆ, ಸ್ಮಶಾನ ಉದ್ಯಾನವನಗಳು ಒತ್ತುವರಿ ಮಾಡಬಾರದು ಎಂಬ ನಿಯಮವಿದೆ ಇದೆಲವಲ್ಲೂ ಇಲ್ಲಿ ಆಗಿದೆ ಕೂಡಲೇ ಸ್ಮಶಾನ ಅತಿಕ್ರಮಣ ತೆರೆವು ಮತ್ತು ಸ್ಥಾನ ಅದಲು ಬದಲು ಸರಿಮಾಡಿ ಸರಹದ್ದು ಗುರುತಿಸಿಕೊಡಬೇಕು ಈ ಕುರಿತು 18 ಜನಿವಾರ ಸಮಾಜದ ಮನವಿಗೆ ಸ್ಪಂದಿಸಿದೆ ಇದ್ದಲ್ಲಿ ಉಗ್ರಸ್ವರೂಪದ ಹೋರಾಟ ಅನಿವಾರ್ಯವಾಗುತ್ತದೆ -ಪುಟ್ಟು ಕುಲಕರ್ಣಿ

**ಮಾಧ್ಯಮಗಳ ಮುಂದೆ ಅಳಲು**

ಈ ಕುರಿತು ಈಗಾಗಲೇ ಹಲವು ವರ್ಷಗಳಿಂದ ಸಂಬಂಧಿಸಿದ ಪುರಸಭೆ ಹಾಗೂ ತಾಲ್ಲೂಕು ಆಡಳಿತದ ಗಮನಕ್ಕೆ ಲಿಖಿತರೂಪದಲ್ಲಿ ಮನವಿ ಮಾಡಲಾಗಿದೆ ಮತ್ತು ಮಾಜಿ ಹಾಗೂ ಹಾಲಿಶಾಸಕರರಿಗೆ ಮನವಿ ಸಲ್ಲಿಸಿದ್ದೇವೆ ಆದರೆ ಇಲ್ಲಿಯವರೆಗೆ ಯಾವುದೇ ಸ್ಪಂದನೆ ಸಿಕ್ಕಿಲ್ಲ ಇದಕೆಲ್ಲಾ ಹೊಣೆ ಪುರಸಭೆಯವರೇ ಆಗಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

**ವಿವಿಧ ಜನಿವಾರ ಸಮಾಜಗಳು;** ಮರಾಠ ಕ್ಷತ್ರಿಯ ಸಮಾಜ, ವಿಪ್ರ ಬ್ರಾಹ್ಮಣ ಸಮಾಜ,ಸೂರ್ಯವಂಶ ಕ್ಷತ್ರಿಯ ಕಲಾಲ , ವಿಶ್ವಕರ್ಮ,ಜೈನದಿಗಂಬರ, ಜೈನ್ ಶ್ವೇತಾಂಬರ,ಸವಿತಾ, ಲೋಹಾರ ರಜಪುತ, ಬೈಲ್ ಪತ್ತಾರ ಕ್ಷತ್ರಿಯ, ಆರ್ಯವೈಶ್ಯ ಕ್ಷತ್ರಿಯ, ರಜಪುತ ,ಚಂದ್ರವಂಶಿ ಕ್ಷತ್ರಿಯ, ಬಾವಸಾರ ಕ್ಷತ್ರಿಯ, ಆರ್ಯವಂಶಿ ಕ್ಷತ್ರಿಯ, ಕೊಂಕಣಿ ಬ್ರಾಹ್ಮಣ,ನಾಥಪಂತ ಕ್ಷತ್ರಿಯ ಸೇರಿದಂತೆ ವಿವಿಧ ಜನಿವಾರ ಸಮಾಜದವರಿಗೆ ಗೌರವಯುತ ಅಂತ್ಯಕ್ರಿಯೆ ಮಾಡಲು ಸಮಸ್ಯೆ ಉಂಟಾಗಿದೆ.

ಈ ವೇಳೆ ವಿವಿಧ ಜನಿವಾರ ಸಮಾಜದ ಮುಖಂಡರಾದ ರಾವಸಾಬ ದೇಸಾಯಿ, ನಿಂಗರಾಜ ಮಹೇಂದ್ರಕರ, ಶ್ರೀನಿವಾಸ ಇಲ್ಲೂರ,ಪ್ರಕಾಶ ಪತ್ತಾರ ಪ್ರಕಾಶ ಇಲ್ಲೂರ,ಸತೀಶ್ ಕುಲಕರ್ಣಿ, ಯಶವಂತ ಕಲಾಲ, ಮಲ್ಲಣ್ಣ ಪತ್ತಾರ, ಮಳೆಪ್ಪ ಪತ್ತಾರ, ದೇವೆಂದ್ರ ಪತ್ತಾರ,ಆನಂದ ಪತ್ತಾರ, ಗುರು ಪತ್ತಾರ,ಹಣಮಂತ ನಲವಡೆ, ಅನಿಲ್ ತೇಲಂಗಿ, ನಾರಾಯಣ ದುರ್ವೆ ಶಿವಾನಂದ ನಂದರಗಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

---

## ಮಳೆ: ಕೊಚ್ಚಿ ಹೋದ ಸೇತುವೆ

• ಉದಯವಾಹಿನಿ ಕಮಲಾಪುರ

ತಾಲ್ಲೂಕಿನಾದ್ಯಂತ ಸುರಿದ ಧಾರಾಕಾರ ಮಳೆಗೆ ಪ್ರವಾಹ ಉಂಟಾಗಿ ಅಪಾರ ಹಾನಿಯಾಗಿದೆ. ಜೀವಣಗಿ ಮಾರ್ಗದಲ್ಲಿ ತಾತ್ಕಾಲಿಕವಾಗಿ ನಿರ್ಮಿಸಿದ ಸೇತುವೆ ಕಿತ್ತು ಹೋಗಿದ್ದು, ಇದರಿಂದಾಗಿ ಗ್ರಾಮದ ಸಂಪರ್ಕ ಕಡಿತಗೊಂಡಿತ್ತು. ಕೆಲವರು ಪ್ರವಾಹದಲ್ಲೇ ಹಳ್ಳ ದಾಟುವ ದುಸ್ಸಾಹಸ ಮಾಡಿದ್ದು, ಪ್ರಾಣಾಪಾಯದಿಂದ ಪಾರಾದರು. ಕಮಲಾಪುರ ಸರ್ಕಾರಿ ಪ್ರೌಢ ಶಾಲೆಯ ಆವರಣದಲ್ಲಿ ಮೊಳಕಾಲವರೆಗೆ ನೀರು ಸಂಗ್ರಹಗೊಂಡಿತ್ತು. ತರಗತಿ ಕೋಣೆಯಲ್ಲಿ ನೀರು ನುಗ್ಗಿ ಪಾಠ ಪ್ರವಚನ ಸ್ಥಗಿತಗೊಂಡಿತ್ತು. ಓಕಳಿ ಗ್ರಾಮದಲ್ಲಿ ಹಳ್ಳ ತುಂಬಿ ಹರಿದಿದ್ದು ಪ್ರವಾಹದ ನೀರು ರೈತರ ಜಮೀನಿಗೆ ನುಗ್ಗಿದೆ. ತೊಗರಿ, ಚೆಂಡು ಹೂ ಸಸೇರಿದಂತೆ ಅಪಾರ ಪ್ರಮಾಣದ ಬೆಳೆ ಹಾನಿಯಾಗಿದೆ.

ಕಳೆದ ವಾರ ಸುರಿದ ಮಳೆಗೆ ಅಪಾರ ಪ್ರಮಾಣದ ಬೆಳೆ ಹಾನಿಯಾಗಿದ್ದು, ಈ ಮಳೆಯಿಂದಾಗಿ ಅಳಿದುಳಿದ ಬೆಳೆಯೂ ಸಹ ಕೈಗೆ ಬರುವುದಿಲ್ಲ ಎಂದು ರೈತರು ಆತಂಕ ವ್ಯಕ್ತಪಡಿಸಿದರು.

## ಒಂಟಿ ಮಹಿಳೆಯರ ಸುಲಿಗೆ: ಇಬ್ಬರ ಬಂಧನ

• ಉದಯವಾಹಿನಿ ಕಲಬುರಗಿ

ದುಶ್ಚಟಗಳಿಗೆ ಹಣ ಹೊಂದಿಸಲು ಒಂಟಿ ಮಹಿಳೆಯರನ್ನು ಗುರಿಯಾಗಿಸಿ ಸುಲಿಗೆ ಮಾಡುತ್ತಿದ್ದ ಇಬ್ಬರನ್ನು ಬಂಧಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಡಣಿ ಗ್ರಾಮದ ಕಲ್ಲಾಲಿಂಗ ಅಲಿಯಾಸ್ ಕಲ್ಮೇಶ ತಂದೆ ಬಸವರಾಜ ದ್ಯಾಮನ್ (27) ಮತ್ತು ಕಡಣಿ ತಾಂಡಾದ ಮಹೇಶ ತಂದೆ ಪಾಂಡು ರಾಠೋಡ್ (27) ಎಂಬುವವರನ್ನು ಬಂಧಿಸಿ 2 ಲಕ್ಷ ರೂ.ಮೌಲ್ಯದ 20 ಗ್ರಾಂ.ತೂಕದ 2 ಬಂಗಾರದ ತಾಳಿ ಸರ ಹಾಗೂ ಕೃತ್ಯಕ್ಕೆ ಬಳಸಿದ ಬೈಕ್ ಮತ್ತು ಇತರೆ ವಸ್ತುಗಳನ್ನು ಜಪ್ತಿ ಮಾಡಿ ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ತಿಳಿಸಿದರು. ಇವರು ತಮ್ಮ ದುಶ್ಚಟಗಳಿಗೆ ಹಣ ಹೊಂದಿಸಲು ಬುರ್ಖಾ ಧರಿಸಿಕೊಂಡು ಒಂಟಿ ಮಹಿಳೆಯರನ್ನು ಸುಲಿಗೆ ಮಾಡುತ್ತಿದ್ದರು ಎಂದು ತಿಳಿಸಿದರು. ಕಡಣಿ ಗ್ರಾಮದ ಹೊಲದಲ್ಲಿ ಮಹಿಳೆಯೊಬ್ಬರು ತರಕಾರಿ ಕಡಿಯುತ್ತಿದ್ದಾಗ ಬುರ್ಖಾ ಧರಿಸಿಕೊಂಡು ಬಂದ ಅಪರಿಚಿತ ವ್ಯಕ್ತಿಯೊಬ್ಬ ಅವರ ಕೊರಳಲ್ಲಿನ 80 ಸಾವಿರ ರೂ.ಮೌಲ್ಯದ 12 ಗ್ರಾಂ.ಬಂಗಾರದ ಮಂಗಳಸೂತ್ರವನ್ನು ಕಸಿದುಕೊಂಡು ಹೋಗಿದ್ದ. ಈ ಸಂಬಂಧ ಫರಹತಾಬಾದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

## ಬಾವಿಗೆ ಬಿದ್ದ ಚಿರತೆ ಮರಿ ರಕ್ಷಣೆ

• ಉದಯವಾಹಿನಿ ಉಡುಪಿ

ಬಾವಿಗೆ ಬಿದ್ದ ಚಿರತೆ ಮರಿಯನ್ನು ರಕ್ಷಿಸಿರುವ ಘಟನೆ ಉಡುಪಿಯ ಮಣಿಪುರ ಗ್ರಾಮದ ಸಿ.ಎಸ್.ಐ.ಚರ್ಚ್ ಬಳಿ ನಡೆದಿದೆ. ಮಣಿಪುರ ಗ್ರಾಮ ಪಂಚಾಯತ್ ಉಪಾಧ್ಯಕ್ಷ ಜೋನ್ ಸಿಕ್ವೇರಾ ಅವರ ಸಹೋದರ ಜೇಕಬ್ ಸಿಕ್ಕೇರಾ ಅವರ ಮನೆಯ ತೋಟದ ಬಾವಿಯಲ್ಲಿ ಚಿರತೆ ಮರಿಯೊಂದು ಬಾವಿಗೆ ಬಿದ್ದಿದ್ದು, ಈ ಬಗ್ಗೆ ಅರಣ್ಯ ಇಲಾಖೆಗೆ ಮಾಹಿತಿಯನ್ನು ನೀಡಲಾಗಿತ್ತು. ಸ್ಥಳಕ್ಕೆ ಆಗಮಿಸಿದ ಅರಣ್ಯ ಇಲಾಖೆ ಅಧಿಕಾರಿಗಳು ಕಾರ್ಯಾಚರಣೆ ನಡೆಸಿ ಚಿರತೆಯನ್ನು ಬಾವಿಯಿಂದ ರಕ್ಷಿಸಿ ಸೋಮೇಶ್ವರ ಅಭಯಾರಣ್ಯಕ್ಕೆ ಬಿಡಲಾಗಿದೆ.

ಜೇಕಬ್ ಸಿಕ್ಕೇರ ಅವರ ತೋಟದ ಬಾವಿಯ ನೀರಿನ ಪಂಪ್ ಚಾಲೂ ಆಗದೆ ಇದ್ದ ಪರಿಣಾಮ ಮಧ್ಯಾಹ್ನದ ವೇಳೆ ತೆರಳಿ ಪರಿಶೀಲಿಸಿದಾಗ ಚಿರತೆ ಬಾವಿಯಲ್ಲಿ ಇರುವುದು ಕಂಡು ಬಂದಿದೆ. ಸುಮಾರು 2-3 ವರ್ಷ ಪ್ರಾಯದ ಹೆಣ್ಣು ಚಿರತೆ ಮರಿ ಇದಾಗಿದ್ದು, ಅರಣ್ಯ ಇಲಾಖೆಯವರು ಮತ್ತು ಎನ್ ಜಿ ಒ ಉಡುಪಿಯ ಅಕ್ಷಯ್ ಶೇಟ್ ಹಾಗೂ ಸ್ಥಳೀಯರ ಸಹಕಾರದಿಂದ 2 ಗಂಟೆಗಳ ಕಾಲ ಕಾರ್ಯಾಚರಣೆ ನಡೆಸಲಾಗಿತ್ತು.

---

## ಕಲುಷಿತ ನೀರು ಸೇವನೆ 20 ಜನ ಅಸ್ವಸ್ಥ

• ಉದಯವಾಹಿನಿ ನವಲಗುಂದ

ತಾಲ್ಲೂಕಿನ ಗುಡಿಸಾಗರ ಗ್ರಾಮದಲ್ಲಿ ಕೆರೆಯ ಕಲುಷಿತ ನೀರು ಸೇವಿಸಿ ಗ್ರಾಮದ 20ಕ್ಕೂ ಹೆಚ್ಚು ಜನರು ಅಸ್ವಸ್ಥಗೊಂಡು ನವಲಗುಂದ ಸರಕಾರಿ ಆಸ್ಪತ್ರೆಗೆ ದಾಖಲಾದ ಹಿನ್ನಲೆಯಲ್ಲಿ ಶಾಸಕ ಎನ್.ಹೆಚ್.ಕೋನರೆಡ್ಡಿ, ಜಿಲ್ಲಾಧಿಕಾರಿ ದಿವ್ಯಪ್ರಭು, ಜಿ ಪಂ ಸಿಇಓ ಭುವನೇಶ ಪಾಟೀಲ್ ಆಸ್ಪತ್ರೆಗೆ ಭೇಟಿ ನೀಡಿ ಅಸ್ವಸ್ಥಗೊಂಡಿರುವವರ ಆರೋಗ್ಯ ವಿಚಾರಿಸಿದರು. ನಂತರ ಗುಡಿಸಾಗರ ಗ್ರಾಮದ ಕೆರೆ ವೀಕ್ಷಣೆ ಮಾಡಿದರು ಈ ಗ್ರಾಮಸ್ಥರು ಕಲುಷಿತ ನೀರನ್ನು ಹೊರ ಹಾಕದೇ ಅದೇ ನೀರಿನಲ್ಲಿ ಹೊಸದಾಗಿ ಮಲಪ್ರಭಾ ನೀರು ತುಂಬಿಸಿದ್ದರಿಂದ ನೀರು ಮತ್ತಷ್ಟು ಕಲುಷಿತಗೊಂಡಿದೆ.

ಆ ನೀರನ್ನು ಕುಡಿದ ಕಾರಣ ಜನ ಅಸ್ವಸ್ಥರಾಗಿದ್ದಾರೆ ಎಂದು ಗ್ರಾಮಸ್ಥರು ಹೇಳಿದರು. ಗ್ರಾಮದ ಕೆರೆಯಲ್ಲಿರುವ ನೀರನ್ನು ನಲ್ಲಿಗಳ ಮೂಲಕ ಪೂರೈಸಲಾಗುತ್ತಿದ್ದರೂ ಕೆರೆ ನೀರಿನ ನಿರ್ವಹಣೆ ಹಾಗೂ ನೀರು ಶುದ್ಧೀಕರಣ ವ್ಯವಸ್ಥೆ ಇಲ್ಲ. ಮಹಿಳೆಯರು , ಮಕ್ಕಳು ಸೇರಿ ಒಟ್ಟು 20ಕ್ಕೂ ಜನ ನವಲಗುಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

## ನೂತನ ಕಟ್ಟಡ ವೈದ್ಯಕೀಯ ಕಾಲೇಜಿಗೆ ಹಸ್ತಾಂತರ ಕುರಿತು ಸಭೆ

• ಉದಯವಾಹಿನಿ ಚಿತ್ರದುರ್ಗ

ಬೆಂಗಳೂರಿನ ವಿಕಾಸ ಸೌಧದಲ್ಲಿ ಯೋಜನೆ ಹಾಗೂ ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರು, ಕಂದಾಯ ಸಚಿವ ಕೃಷ್ಣ ಬೈರೇಗೌಡ ಹಾಗೂ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಚಿತ್ರದುರ್ಗ ಜಿಲ್ಲಾಧಿಕಾರಿಗಳ ನೂತನ ಕಟ್ಟಡವನ್ನು ವೈದ್ಯಕೀಯ ಕಾಲೇಜಿಗೆ ಹಸ್ತಾಂತರಿಸುವ ಕುರಿತು ಚರ್ಚೆ ನಡೆಸಿದರು.

ಸವೈದ್ಯಕೀಯ ಶಿಕ್ಷಣ ಇಲಾಖೆಯ ನಿರ್ದೇಶಕರು ಸ್ಥಳ ಪರಿಶೀಲನೆ ನಡೆಸಿ, ತಮ್ಮ ಅಭಿಪ್ರಾಯವನ್ನು ಮಂಡಿಸಿದ ನಂತರ, ಈ ಕುರಿತು ಅಂತಿಮ ತೀರ್ಮಾನವನ್ನು ಮುಖ್ಯಮಂತ್ರಿಗಳು, ವೈದ್ಯಕೀಯ ಶಿಕ್ಷಣ ಸಚಿವರು, ಕಂದಾಯ ಸಚಿವರು ಹಾಗೂ ಚಿತ್ರದುರ್ಗ ಜಿಲ್ಲೆಯ ಎಲ್ಲಾ ಶಾಸಕರು ಮತ್ತು ಸಚಿವರ ಸಭೆಯಲ್ಲಿ ಕೈಗೊಳ್ಳಲು ನಿರ್ಧರಿಸಲಾಯಿತು. ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಯೊಂದಿಗೆ ಸಭೆ: ವೈದ್ಯಕೀಯ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮೊಹಮ್ಮದ್ ಮೊಹ್ಸಿನ್ ಅವರೊಂದಿಗೆ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಅವರು ಮಹತ್ವದ ಸಭೆ ನಡೆಸಿದರು. ಚಿತ್ರದುರ್ಗದ ನೂತನ ಜಿಲ್ಲಾಧಿಕಾರಿಗಳ ಕಟ್ಟಡವನ್ನು ವೈದ್ಯಕೀಯ ಶಿಕ್ಷಣ ಇಲಾಖೆಗೆ ಹಸ್ತಾಂತರಿಸುವುದು ಹಾಗೂ ಹಾಲಿ ಕಟ್ಟಡವನ್ನು ವೈದ್ಯಕೀಯ ಕಾಲೇಜಿನ ಬಳಕೆಗೆ ನೀಡುವ ಕುರಿತು ಸಭೆಯಲ್ಲಿ ಸವಿಸ್ತಾರವಾಗಿ ಚರ್ಚೆ ನಡೆಸಲಾಯಿತು.



ಉದಯವಾಹಿನಿ ಚಿತ್ರ

ಈ ಬಗ್ಗೆ ಈಗಾಗಲೇ ಕಂದಾಯ ಸಚಿವರೊಂದಿಗೆ ಚರ್ಚಿಸಿದಂತೆ, ವೈದ್ಯಕೀಯ ಶಿಕ್ಷಣ ಇಲಾಖೆಯ ನಿರ್ದೇಶಕರು ಹಾಗೂ ತಜ್ಞರ ತಂಡವನ್ನು ಸ್ಥಳ ವೀಕ್ಷಣೆಗೆ ಕಳುಹಿಸುವಂತೆ ಪ್ರಧಾನ ಕಾರ್ಯದರ್ಶಿಗಳಿಗೆ ಸಚಿವ ಡಿ.ಸುಧಾಕರ್ ಸೂಚನೆ ನೀಡಿದರು. ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಾಜೇಂದ್ರ ಸಿಂಗ್ ಕಟಾರಿಯ, ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಅಧ್ಯಕ್ಷ ಟಿ. ರಘುಮೂರ್ತಿ, ಚಿತ್ರದುರ್ಗ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ ಸಿಇಓ ಡಾ.ಎಸ್.ಆಕಾಶ್ ಇದ್ದರು.


---

## ಹಿಂದೂಳನ್ನು ಒಡೆದಾಳುವ ನೀತಿ ಕೈ ಬಿಡಬೇಕು
### ಬ್ರಾಹ್ಮಣ ಸಮಾಜದಲ್ಲಿ ಯಾವ ಉಪಜಾತಿ ಇಲ್ಲ

• ಉದಯವಾಹಿನಿ ಮುದ್ದೇಬಿಹಾಳ

ಸನಾತನ ಧರ್ಮ ಜಗತ್ತಿಗೆ ಆದರ್ಶವಾಗಿದೆ ಆದರೆ ಆಳುವ ಸರಕಾರಗಳು ತಮ್ಮ ಸ್ವಾರ್ಥಕ್ಕಾಗಿ ಜಾತಿ ಜಾತಿಗಳ ಮಧ್ಯೆ ಕಲಹ ಹಚ್ಚಿ ವಿಭಜಿಸುವ ಕೆಲಸ ಮಾಡುತ್ತಿವೆ ಎಂದು ತಾಲ್ಲೂಕ ಬ್ರಾಹ್ಮಣ ಸಮಾಜದ ಅಧ್ಯಕ್ಷ ಬಿ.ಪಿ.ಕುಲಕರ್ಣಿ ಹೇಳಿದರು ಅವರು ಗುರುವಾರ ತಾಲ್ಲೂಕು ಬ್ರಾಹ್ಮಣ ಸಮಾಜದ ವತಿಯಿಂದ ಮುಖ್ಯಮಂತ್ರಿ ಅವರಿಗೆ ತಹಶಿಲ್ದಾರ ಮೂಲಕ ಬ್ರಾಹ್ಮಣ ಸಮಾಜದ ಯಾವುದೇ ರೀತಿಯ ಉಪ ಇರುವುದಿಲ್ಲ ಜಾತಿ ಸಮೀಕ್ಷೆಯಲ್ಲಿ ಬ್ರಾಹ್ಮಣ ಕ್ರಿಶ್ಚಿಯನ್, ಬ್ರಾಹ್ಮಣ ಮುಜಾವರ ಮುಸ್ಲಿಂ , ವ್ಯಾಸ ಬ್ರಾಹ್ಮಣ ಕ್ರಿಶ್ಚಿಯನ್ ನಮೂದಿಸಿದ್ದು ಇದಕ್ಕೆ ಆಕೇಕ್ಷಪಣೆ ಇದೆ ಎಂದು ಮನವಿ ಸಲ್ಲಿಸಿ ಮಾತನಾಡಿದರು

ನಮ್ಮ ಬ್ರಾಹ್ಮಣ ಸಮಾಜದಲ್ಲಿ ಹಿಂದೂ ಬ್ರಾಹ್ಮಣ ಅಂತ ಮಾತ್ರವಿದೆ ಜಾತಿ ಸಮೀಕ್ಷೆ ಪಟ್ಟಿಯಲ್ಲಿ ಇಲ್ಲದ ಉಪಜಾತಿಗಳನ್ನು ಸೇರಿಸಲಾಗಿದೆ ಇದನ್ನು ಕೈ ಬಿಡಬೇಕು ಎಲ್ಲಾ ಬ್ರಾಹ್ಮಣ ಸಮಾಜದವರು ಕ್ರಮಸಂಖ್ಯೆ 210 ರಲ್ಲಿ ಹಿಂದೂ ಬ್ರಾಹ್ಮಣವೆಂದು ಬರೆಯಿಸಬೇಕೆಂದರು. ಈ ವೇಳೆ ಅರವಿಂದ ಕುಲಕರ್ಣಿ, ಪಿ.ಎನ್ ಕುಲಕರ್ಣಿ, ಪುಟ್ಟು ಕುಲಕರ್ಣಿ ಮಾತನಾಡಿ ಈ ತಿಂಗಳು22 ರಿಂದ ಜಾತಿ ಸಮೀಕ್ಷೆ ಮಾಡಲಾಗುತ್ತಿದೆ ನಮ್ಮ ಸಮಾಜದಲ್ಲಿ ಬ್ರಾಹ್ಮಣ ಕ್ರಿಶ್ಚಿಯನ್ ಬ್ರಾಹ್ಮಣ ಮುಜಾಮವರ ಮುಸ್ಲಿಂ ಅಂತ ಇಲ್ಲ ಇದನ್ನು ಕೈಬಿಡಬೇಕು ಸಮೀಕ್ಷೆಯಲ್ಲಿ ಹಿಂದೂ ಬ್ರಾಹ್ಮಣ ಅಂತ ನಮೂದಿಸಿಬೇಕು ಸರಕಾರಗಳು ಒಡೆದಾಳುವದನ್ನು ಕೈ ಬಿಡಬೇಕು ಎಂದರು.



ಉದಯವಾಹಿನಿ ಚಿತ್ರ

> ಪವಿತ್ರ ಕ್ಷೇತ್ರ ಧರ್ಮಸ್ಥಳದ ವಿರುದ್ಧ ವ್ಯವಸ್ಥಿತ ಪಿತೂರಿ ಮೂಲಕ ಅಪಪ್ರಚಾರ ಮಾಡಲಾಯಿತು ಈಗ ಜಾತಿ ಸಮೀಕ್ಷೆಯಲ್ಲಿ ಹಿಂದೂ ಸಮಾಜದ ಏಕತೆ ಒಡೆಯುವ ಕೆಲಸ ನಡೆದಿದೆ. - ಬಿ ಪಿ ಕುಲಕರ್ಣಿ

ಮನವಿ ಪತ್ರವನ್ನು ಶಿರಸ್ತೆದಾರ ಎಂ.ಎ ಬಾಗೇವಾಡಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸಮಾಜದ ಉಪಾಧ್ಯಕ್ಷ ಎಲ್ ಎಸ್ ದೇಶಪಾಂಡೆ,ವಿ ಎಸ್ ಕುಲಕರ್ಣಿ, ಎಂ ಆರ್ ದೇಶಪಾಂಡೆ, ಪಿ ಎಂ ದೇಶಪಾಂಡೆ, ಅನಿಲ್ ಕುಲಕರ್ಣಿ, ಗುರುರಾಜ ಕುಲಕರ್ಣಿ, ಪ್ರದೀಪ ಕುಲಕರ್ಣಿ, ಬಲವಂತರಾಯ ದೇಶಪಾಂಡೆ, ಎಂ ಕೆ ಕುಲಕರ್ಣಿ, ಸೇರಿದಂತೆ ಬ್ರಾಹ್ಮಣ ಸಮಾಜದ ಮುಖಂಡರು ಭಾಗವಹಿಸಿದ್ದರು.

## ಧಾರಕಾರ ಮಳೆಗೆ 15 ದಿನದಲ್ಲೇ 3 ಭಾರಿ ಸೇತುವೆ ಜಲಾವೃತ, ಜಮೀನಿಗೆ ನೀರು ನುಗ್ಗಿ ಬೆಳೆ ಹಾನಿ, ಸೂಕ್ತ ಪರಿಹಾರಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರಕ್ಕೆ ಉಮೇಶ ಕೆ. ಮುದ್ನಾಳ ಆಗ್ರಹ

• ಉದಯವಾಹಿನಿ ಯಾದಗಿರಿ

ಜಿಲ್ಲಾದ್ಯಂತ ಮಧ್ಯರಾತ್ರಿ ಸುರಿದ ಧಾರಕರ ಮಳೆಯಿಂದ ಸೇತುವೆಗಳು ಜಾಲಾವೃತಿ ಜನ ಜಾನುವಾರು ಪರದಾಡುವಸ್ಥಿತಿ ನಿರ್ಮಾಣವಾಗಿದೆ ಮತ್ತು ಸೇತುವೆ ಹಳ್ಳ ಕೊಳ್ಳಗಳು ಮೇಲದರ್ಜೆಗೆ ಹೇರಿಸಿ ರೈತರಿಗೆ ಬೆಳೆ ಪರಿಹಾರ ನೀಡಬೇಕು, ಜಲಾವೃತಿ ಸೇತುವೆ ಮತ್ತು ರೈತರ ಜಮೀನಿಗೆ ನೀರು ನುಗ್ಗಿದ ಸ್ಥಳಕ್ಕೆ ಬೇಟಿ ನೀಡಿ ಪತ್ರಿಕೆ ಹೇಳಿಕೆ ನೀಡಿರುವ ಸಾಮಾಜಿಕ ಹೋರಾಟಗಾರ ಉಮೇಶ ಕೆ. ಮುದ್ನಳರವರು ಕೇಂದ್ರ ಮತ್ತು ರಾಜ್ಯ ಸರ್ಕಾರಕ್ಕೆ ಸೂಕ್ತ ಪರಿಹಾರ ಮತ್ತು ಮೂಲಭೂತ ಸೌಕರ್ಯಕ್ಕಾಗಿ ಆಗ್ರಹಿಸಿದ್ದಾರೆ.

ಜಿಲ್ಲಾದ್ಯಂತ ರೈತರ ಬೆಳೆಯೆಲ್ಲಾ ಮಧ್ಯರಾತ್ರಿ ಸುರಿದ ಮಳೆಯಿಂದ ಬೆಳೆಗಳನ್ನು ಹಾಳು ಮಾಡಿ ಬಿಟ್ಟಿದೆ. ಯಾದಗಿರಿ ತಾಲ್ಲೂಕಿನ ಚಾಮನಹಳ್ಳಿ ಬಾಚವಾರ ಯರಗೋಳ ಗ್ರಾಮಗಳಲ್ಲಿ ಸೇತುವೆ ಜಲಾವೃತಿಯಾಗಿ ಪ್ರತಿವರ್ಷ ಮಳೆ ಬಂದರೇ ಸಾಕು ಮನೆಗಳಿಗೆ ನೀರು ನುಗ್ಗಿ ಜನ ಜಾನುವಾರಗಳು ಸೇತುವೆ ಮೇಲೆ ತಿರುಗಾಡದ ಪರಸ್ಥಿತಿ ನಿರ್ಮಾಣವಾಗಿದೆ. ಸಾರ್ವಜನಿಕರ ಸಂಚಾರಕ್ಕೆ ಸಂಪೂರ್ಣ ಬಂದಾಗಿರುವ ಪರಸ್ಥೀತಿ ಉಂಟಾಗಿದೆ ಶೀಘ್ರದಲ್ಲೆ ಸೇತುವೆ ಮೇಲದರ್ಜೆಗೆ ಎರಿಸಬೇಕು ಶಾಶ್ವತ ಪರಿಹಾರಕ್ಕೆ ಮುಂದಾಗಬೇಕು ಮತ್ತು ರೈತರ ಅಪಾರ ಬೆಳೆ ಹಾಳಾಗಿರುವುದರಿಂದ. ರೈತರು ಪ್ರಮುಖ ಬೆಳೆಯಾದ ಹೆಸರು, ಹತ್ತಿ, ತೊಗರಿ, ಭತ್ತ, ಬೆಳೆ ಈಗಾಗಲೇ ರೈತರು ಕೈ ಸಾಲ ಮಾಡಿ ಕೊಂಡು ಬೆಳೆ ಬೆಳೆದಿದ್ದಾರೆ. ಬೆಳೆ ಹಾಳಾಗಿ ಹೋಗಿದ್ದರಿಂದ ರೈತರು ಜಮೀನು ನೋಡದಂಥ ಸ್ಥಿತಿಯಲ್ಲಿದ್ದಾರೆ. ಸರ್ಕಾರ ಹಾಗೂ ಜಿಲ್ಲಾಡಳಿತ ಮುತುವರ್ಜಿಯಿಂದ ರೈತರಿಗೆ ಸೂಕ್ತ ಪರಿಹಾರ ನೀಡಬೇಕು. ಎಂದು ರೈತರ ಜಮೀನಿಗೆ ಮತ್ತು ಜಲಾವೃತಿಯಾರುವ ಸೇತುವೆಗೆ ಭೇಟಿ ನೀಡಿದ ಸಾಮಾಜಿಕ ಹೋರಾಟಗಾರ ಉಮೇಶ್ ಮುದ್ನಾಳ್ ರೈತರಿಗೆ ಸೂಕ್ತ ಪರಿಹಾರಕೆ ಒತ್ತಾಯಿಸಿದರು.



ಉದಯವಾಹಿನಿ ಚಿತ್ರ

> ಪ್ರತಿವರ್ಷ ಚಾಮನಹಳ್ಳಿ ಬಾಚವಾರ ಯರಗೋಳ ಗ್ರಾಮಗಳಲ್ಲಿ 15 ದಿನಗಳಲ್ಲೆ ಮೂರು ಭಾರಿ ಸೇತುವೆ ಜಲಾವೃತಿಯಾಗಿ ಸಾರ್ವಜನಿಕರ ಸಂಚಾರಕ್ಕೆ ಸಂಪೂರ್ಣ ಬಂದ್ದಾಗಿದ್ದು ಶೀಘ್ರದಲ್ಲೆ ಸೇತುವೆಯನ್ನು ಮೇಲ್ದರ್ಜೆಗೆ ಏರಿಸಿ ಶಾಶ್ವತ ಪರಿಹಾರಕ್ಕೆ ಮುಂದಾಗಬೇಕು, ಇನ್ನು ಮುಂದೆ ಯಾವುದೇ ಅನಾವುತ ಆದರೆ ನೇರ ರಾಜ್ಯ ಸರ್ಕಾರ ಮತ್ತು ರಾಜಕಾರಣಿಗಳೇ ನೇರ ಹೊಣೆ ಹೊರಬೇಕಾಗುತ್ತದೆ.
> - ಉಮೇಶ್ ಕೆ ಮದ್ನಾಳ್, ಸಾಮಾಜಿಕ ಹೋರಾಟಗಾರ

---

## ಮೆಗಾ ಡೇರಿಗೆ 15 ಎಕರೆ ಜಮೀನು ಮಂಜೂರು

• ಉದಯವಾಹಿನಿ ಬಳ್ಳಾರಿ

ಇಲ್ಲಿನ ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದಿಂದ ಸ್ಥಾಪಿಸಲು ಉದ್ದೇಶಿಸಿರುವ ಮೆಗಾ ಡೈರಿಗೆ ತಾಲ್ಲೂಕಿನ ಕೊಳಗಲ್ಲು ಗ್ರಾಮದ ಬಳಿಯ ಸರ್ವೆ ನಂ.139/ಬಿ ಪೈಕಿ 15 ಎಕರೆ ಕಂದಾಯ ಜಮೀನಿನ್ನು ಡಿಸಿ ಪ್ರಶಾಂತ್ ಕುಮಾರ್ ಮಿಶ್ರ ನಿನ್ನೆ ಹಲವು ಷರತ್ತುಗಳೊಂದಿಗೆ ಮಂಜೂರು ಮಾಡಿದ್ದಾರೆ. ಈ ಜಮೀನನ್ನುಜಮೀನನ್ನು ಖರೀದಿ ಮಾಡಲು ರೂ. 2,92,01,070 ಗಳನ್ನು ಬಳ್ಳಾರಿ ಡಿಸಿಗೆ ಪಾವತಿಸಿಸಿದೆ. ಮಂಜೂರಾತಿ ಪಡೆದ ಇಲಾಖೆಯು ಜಮೀನನ್ನು ಮಂಜೂರಾಗಿದೆಯೋ ಅದೇ ಉದ್ದೇಶಕ್ಕೆ ಉಪಯೋಗಿ ಸತಕ್ಕದ್ದು. ಉದ್ದೇಶ ಬದಲಾವಣೆಯಾದಲ್ಲಿ ಈ ಆದೇಶವು ತಂತಾನೇ ರದ್ದಾಗುತ್ತದೆ. ಈ ಜಮೀನು ಅಗತ್ಯ ಇರದೇ ಇದ್ದಲ್ಲಿ ಮರಳಿ ಕಂದಾಯ ಇಲಾಖೆಗೆ ವಾಪಾಸು ಮಾಡತಕ್ಕದ್ದು.

ಆದೇಶದ ದಿನಾಂಕದಿಂದ 2 ವರ್ಷಗಳ ಒಳಗಾಗಿ ಜಮೀನನ್ನು ಮಂಜೂರಾತಿ ಉದ್ದೇಶಕ್ಕೆ ಉಪಯೋಗಿ ಸತಕ್ಕದ್ದು ಈ. ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಯಾವದೇ ನೋಟೀಸು ನೀಡದೇ ಏಕ ಪಕ್ಷೀಯವಾಗಿ ವರ್ಗಾವಣೆಯನ್ನು ರದ್ದುಗೊಳಿಸಿ ಸರ್ಕಾರದ ವಶಕ್ಕೆ ಮರಳಿ ಪಡೆಯಲಾಗುವುದು ಎಂದಿದೆ.

## ಗ್ಯಾರಂಟಿ ಫಲಾನುಭವಿಗಳಿಗೆ ವಿಳಂಬವಿಲ್ಲದೆ ಸೌಲಭ್ಯ ತಲುಪಿಸಿ: ಭರತ್

• ಉದಯವಾಹಿನಿ ಮಂಗಳೂರು

ರಾಜ್ಯ ಸರ್ಕಾರದ ಪಂಚಗ್ಯಾರಂಟಿ ಯೋಜನೆಗಳ ಅನುಷ್ಠಾನವನ್ನು ಸಮರ್ಪಕವಾಗಿ ಮಾಡಬೇಕು. ಅರ್ಹ ಫಲಾನುಭವಿಗಳಿಗೆ ಯೋಜನೆಗಳ ಸೌಲಭ್ಯ ತಲುಪಿಸಲು ವಿಳಂಬ ಮಾಡಬಾರದು. ಈ ನಿಟ್ಟಿನಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮವಹಿಸಬೇಕು ಎಂದು ದಕ್ಷಿಣ ಕನ್ನಡ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಭರತ್ ಮುಂಡೋಡಿ ಹೇಳಿದ್ದಾರೆ.

ಅವರು ದ.ಕ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಫಲಾನುಭವಿಗಳಿಗೆ ಸೌಲಭ್ಯಗಳನ್ನು ನಿಗದಿತ ಸಮಯದಲ್ಲಿಯೇ ತಲುಪಿಸಬೇಕು. ಯೋಜನೆಗಳ ಸದುಪಯೋಗವನ್ನು ಎಲ್ಲಾ ಅರ್ಹ ಫಲಾನುಭವಿಗಳಿಗೆ ಮುಟ್ಟಿಸಲು ಅಧಿಕಾರಿಗಳು ಕ್ರಮವಹಿಸಬೇಕು ಎಂದು ಸೂಚಿಸಿದರು. ತಾಲ್ಲೂಕು ವ್ಯಾಪ್ತಿಗೆ ಒಳಪಡುವ ಜನರಿಗೆ ಯೋಜನೆಗಳ ಸೌಲಭ್ಯ ದೊರಕುತ್ತಿದೆಯೇ ಎಂಬ ಮಾಹಿತಿ ಪಡೆದು, ಸೌಲಭ್ಯಗಳು ಸಿಗದೇ ಇದ್ದಲ್ಲಿ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದು ಅವರು ಸೂಚಿಸಿದರು. ಗೃಹಲಕ್ಷ್ಮಿ ಯೋಜನೆಯಡಿ ಒಟ್ಟು ಪಡಿತರ ಚೀಟಿ ಹೊಂದಿರುವ ಫಲಾನುಭವಿಗಳ ಪೈಕಿ ಆಗಸ್ಟ್ 16 ರಿಂದ ಸೆಪ್ಟೆಂಬರ್ 8 ರವರೆಗೆ ಒಟ್ಟು 184 ಫಲಾನುಭವಿಗಳು ನೋಂದಾಯಿಸಿಕೊಂಡಿದ್ದು, ಒಟ್ಟಾರೆಯಾಗಿ 3,79,452 ಫಲಾನುಭವಿಗಳು ಯೋಜನೆಗೆ ನೋಂದಾಯಿಸಿಕೊಂಡಿರುತ್ತಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು. ಎಲ್ಲಾ ನ್ಯಾಯಬೆಲೆ ಅಂಗಡಿಗಳಿಗೆ ಅನ್ನ ಭಾಗ್ಯ ಯೋಜನೆಯ ಬ್ಯಾನರ್ಗಳನ್ನು ಸರಬರಾಜು ಮಾಡಬೇಕು. ಎಲ್ಲಾ ಕಡೆಗಳಲ್ಲಿ ಬ್ಯಾನರ್‌ಗಳನ್ನು ಅಳವಡಿಸಿರುವುದಿಲ್ಲ ಎಂದು ಮುಲ್ಕಿ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು ತಿಳಿಸಿದಾಗ, ಸರ್ಕಾರದಿಂದ ಬ್ಯಾನರ್‌ಗಳನ್ನು ನೀಡಲಾದ ಬಗ್ಗೆ ಪರಿಶೀಲನೆ ನಡೆಸುವಂತೆ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪ ನಿರ್ದೇಶಕರಿಗೆ ಸಭಾಧ್ಯಕ್ಷರು ಸೂಚಿಸಿದರು.




ಉದಯವಾಹಿನಿ ಚಿತ್ರ

---

# ಜಮೀನು ಅಕ್ರಮ-ಸಕ್ರಮಗೊಳಿಸಲು ಕೃಷಿಕರ ಮನವಿ
## ಪಟ್ಟಣದ ತಹಶೀಲ್ದಾರ್ ಕಚೇರಿ ಸಭಾಭವನದಲ್ಲಿ ಲೋಕಾಯುಕ್ತ ಅಧಿಕಾರಿಗಳು ಸಾರ್ವಜನಿಕರಿಂದ ಅಹವಾಲು ಸ್ವೀಕಾರ

• ಉದಯವಾಹಿನಿ ಶಿಗ್ಗಾವಿ

ಸುಮಾರು ವರ್ಷಗಳಿಂದ ತಾಲ್ಲೂಕಿನ ವಿವಿಧ ಗ್ರಾಮದಲ್ಲಿ ಕೃಷಿ ಕೂಲಿ ಮಾಡಿಕೊಂಡು ಬದುಕು ಸಾಗಿಸುವ ಕೃಷಿಕರ ಜಮೀನನ್ನು ಅಕ್ರಮ-ಸಕ್ರಮಗೊಳಿಸಬೇಕು. ಅದರಿಂದಾಗಿ ರೈತ ಕುಟುಂಬಗಳು ಬಾಳಿ ಬದುಕಲು ಸಾಧ್ಯವಾಗುತ್ತದೆ ಎಂದು ವಿವಿಧ ಗ್ರಾಮಗಳ ರೈತರು ಲೋಕಾಯುಕ್ತ ಅಧಿಕಾರಿಗಳು ಮನವಿ ಮೂಲಕ ಅಳಲು ವ್ಯಕ್ತಪಡಿಸಿದರು. ಪಟ್ಟಣದ ತಹಶೀಲ್ದಾರ್ ಕಚೇರಿ ಸಭಾಭವನದಲ್ಲಿ ಲೋಕಾಯುಕ್ತ ಅಧಿಕಾರಿಗಳು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವ ಸಂದರ್ಭದಲ್ಲಿ ತಮ್ಮ ಅಹವಾಲು ವ್ಯಕ್ತಪಡಿಸಿದರು.

ತಾಲ್ಲೂಕಿನಲ್ಲಿ ಕಳೆದ ಮೂರು ವರ್ಷಗಳಿಂದ ಮನೆ ಬಿದ್ದು ಹೋಗಿದೆ. ಕಂದಾಯ ಇಲಾಖೆ ಅಧಿಕಾರಿಗಳು ಜಿಪಿಎಸ್ ಪೋಟೋ ಮಾಡಿಕೊಂಡು ಹೋಗಿದ್ದಾರೆ. ಆದರೆ ಇವರೆಗೆ ಪರಿಹಾರಧನ ನೀಡಿಲ್ಲ, ಹೀಗಾಗಿ ಮನೆ ಕಟ್ಟಿಕೊಳ್ಳಲು ಸಾಧ್ಯವಾಗಿಲ್ಲ. ಅಲ್ಲಿ, ಇಲ್ಲಿ ವಾಸಿಸುತ್ತಿದ್ದೇವೆ. ಜಮೀನಿಗೆ ಮತ್ತು ಖಾಲಿ ಜಾಗೆಗೆ ಪಹಣಿ ಪತ್ರದಲ್ಲಿನ ತಿದ್ದಪಡಿ ಮಾಡಿಕೊಡಬೇಕು ತಕ್ಷಣ ಪರಿಹಾರ ನೀಡುವಂತೆ ತಾಲ್ಲೂಕಿನ ವಿವಿಧ ಗ್ರಾಮಗಳ ಫಲಾನುಭವಿಗಳು ತಮ್ಮ ಮನವಿ ಸಲ್ಲಿಸಿದರು.

**ತಾಲ್ಲೂಕು ಮಟ್ಟದ ಅಧಿಕಾರಿಗಳ ನಿರ್ಲಕ್ಷ್ಯ**

ತಾಲ್ಲೂಕಿನ ವನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಹಣ ದುರುಪಯೋಗವಾಗಿದ್ದು, 2023-24 ಮತ್ತು 2024-25ನೇ ಸಾಲಿನ 15ನೇ ಹಣಕಾಸಿನ ವಿವಿಧ ಕಾಮಗಾರಿಗಳಲ್ಲಿ ಹಣ ದುರುಪಯೋಗ ಮಾಡಿಕೊಂಡಿರುವುದು ಕಂಡು ಬಂದಿದ್ದು, ಸಂಪೂರ್ಣ ತನಿಖೆ ನಡೆಸಬೇಕು. ಸರ್ಕಾರದ ಹಣ ಮರಳಿ ಕಟ್ಟಿಸುವ ಮೂಲಕ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಸಮಾಜ ಸೇವಾ ಕಾರ್ಯಕರ್ತ ಮಂಜುನಾಥ ಶಿರಹಟ್ಟಿ ಲೋಕಾಯುಕ್ತ ಅಧಿಕಾರಿಗಳಿಗೆ ಮನವಿ ಮಾಡಿದರು. ಗ್ರಾಮ ಪಂಚಾಯಿತಿಗಳಲ್ಲಿ ಇ-ಸ್ವತ್ತು ಉತಾರಕ್ಕೆ ದರ ನಿಗದಿ ಪಡಿಸಬೇಕು. ತಾಲ್ಲೂಕಿನ ಗಂಗ್ಯಾನೂರ ಗ್ರಾಮಕ್ಕೆ ಸ್ಮಶಾನ ನೀಡಬೇಕು. ವಿವಿಧ ಗ್ರಾಮ ಪಂಚಾಯ್ತಿಯಲ್ಲಿ ಸುಮಾರು ವರ್ಷಗಳಿಂದ ಒಂದೇ ಕಡೆ ಕೆಲಸ ಮಾಡುತ್ತಿರುವ ಬಿಲ್ ಸಂಗ್ರಹಕಾರ ಮತ್ತು ಕಂಪ್ಯೂಟರ್ ಆಪರೇಟರಗಳನ್ನು ವರ್ಗಾಯಿಸಬೇಕು ಎಂದು ರಾಜ್ಯ ರೈತ ಸಂಘ ಹಾಗೂ ಹಸಿರು ಸೇವೆ ತಾಲ್ಲೂಕು ಘಟಕದ ಪದಾಧಿಕಾರಿಗಳು ಮನವಿ ಸಲ್ಲಿಸಿದರು. ಲೋಕಾಯುಕ್ತ ಅಧಿಕಾರಿ ಮಂಜುನಾಥ ಪಂಡಿತ್ ಮಾತನಾಡಿ, ಅರ್ಜಿ ಸಲ್ಲಿಸಿದ ಪ್ರತಿಯೊಂದನ್ನು ಪರಿಶೀಲಿಸಿ ಪರಿಹಾರ ನೀಡಲಾಗುತ್ತಿದೆ. ಕೆಲವು ಪ್ರಕರಣದಲ್ಲಿ ತಪ್ಪಿತಸ್ಥರಿಗೆ ಕಾನೂನು ಮೂಲಕ ಶಿಕ್ಷೆ, ದಂಡ ನೀಡಲಾಗುತ್ತಿದೆ. ಅಂತಹ ಪ್ರಕರಣಗಳು, ದೂರಗಳಿದ್ದರೆ ಸಾರ್ವಜನಿಕರು ಸಲ್ಲಿಸಿರಿ ಎಂದರು.




ಉದಯವಾಹಿನಿ ಚಿತ್ರ

ಲೋಕಾಯುಕ್ತ ಡಿ.ವೈ.ಎಸ್.ಪಿ ಮಧುಸೂಧನ ಸಿ., ಅಧಿಕಾರಿಗಳಾದ ವಿಶ್ವನಾಥ ಕದ್ದೂರಿ, ದಾದಾವಲಿ ಕೆ.ಎಚ್.. ತಹಶೀಲ್ದಾರ್ ಯಲ್ಲಪ್ಪ ಗೋಣೆಣ್ಣವರ, ಉಪತಹಶೀಲ್ದಾರ್ ವೆಂಕಟೇಶ, ಶಿರಸ್ತೆದಾರರಾದ ವಿಶ್ವನಾಥ ತತ್ತಿ, ವಿಲ್ಸನ್ ಚಾರ್ಜ, ತಾಲ್ಲೂಕು ಪಂಚಾಯಿತಿ ಯೋಜನಾಧಿಕಾರಿ ಶಿವಾನಂದ ಸಣ್ಣಕ್ಕಿ, ಲೋಕಾಯುಕ್ತ ಸಿಬ್ಬಂದಿಗಳಾದ ಸಿ.ಎಂ.ಬಾರ್ಕರ್, ಬಿ.ಎಂ. ಲಕ್ಷ್ಮೇಶ್ವರ, ಆರ್.ವೈ.ಗೆಜ್ಜೆಹಳ್ಳಿ, ಆನಂದ ಶೆಟ್ಟರ, ಬಸವರಾಜ ಸಂಕಣ್ಣವರ, ನಿರಂಜನ ಪಾಟೀಲ ಸೇರಿದಂತೆ ತಾಲ್ಲುಕು ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

### 10 ಅರ್ಜಿಗಳು ಸ್ವೀಕಾರ

ಲೋಕಾಯುಕ್ತ ಅಧಿಕಾರಿಗಳು ಒಂದು ದಿನ ಕಳೆದರೂ ತಾಲ್ಲೂಕಿನಾದ್ಯಂತ ಬರೀ 10 ಅರ್ಜಿಗಳು ಮಾತ್ರ ಸ್ವೀಕೃತವಾಗಿವೆ. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಈ ಕುರಿತು ಪ್ರಚಾರದ ಕೊರತೆಯಾಗಿದೆ. ಅದರಿಂದಾಗಿ ಅದೇಷ್ಟು ನೆನಗುದಿಗೆ ಬಿದ್ದಿರುವ ಸಮಸ್ಯೆಗಳಿವೆ. ಅವುಗಳ ಮಾಹಿತಿ ನೀಡುವಲ್ಲಿ ಸಾರ್ವಜನಿಕರಿಗೆ ಆಗಲಿಲ್ಲ. ಅದರಲ್ಲಿ ತಾಲ್ಲೂಕು ಮಟ್ಟದ ಅಧಿಕಾರಿಗಳ ನಿರ್ಲಕ್ಷ್ಯ ಕಾರಣವಾಗಿದೆ ಎಂದು ರೈತ ಸಂಘದ ಪದಾಧಿಕಾರಿಗಳು ದೂರಿದರು.

ರಾಮ ಮಂದಿರ ನೋಡಿ ಹೆಮ್ಮೆಪಡದವರು ಭಾರತೀಯರಲ್ಲ ಎಂದ ಯೋಗಿ ಆದಿತ್ಯನಾಥ್

# ಅಯೋಧ್ಯೆಗೆ ಬಂದು ಭಾರತದ ಆಧ್ಯಾತ್ಮಿಕ ಶಕ್ತಿಯ ಅನುಭೂತಿ ಪಡೆಯಬೇಕು

**ಗೋರಖ್‌ಪುರ:** ಹಿಂದುತ್ವ, ರಾಷ್ಟ್ರೀಯತೆಯ ಕುರಿತು ಪ್ರಖರ ಹೇಳಿಕೆಗಳಿಗೆ ಖ್ಯಾತರಾಗಿರುವ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಬಹಳ ದಿನಗಳ ಬಳಿಕ ಇಡೀ ದೇಶ ಚರ್ಚಿಸುವಂತ ಹೇಳಿಕೆಯೊಂದನ್ನು ನೀಡಿದ್ದಾರೆ. ಅಯೋಧ್ಯೆಯ ಶ್ರೀ ರಾಮ ಜನ್ಮಭೂಮಿಯಲ್ಲಿರುವ ಭವ್ಯ ದೇವಾಲಯವನ್ನು ನೋಡಿ ಯಾರಾದರೂ ಹೆಮ್ಮೆಪಡದಿದ್ದರೆ, ಅವರು ಭಾರತೀಯರಾಗಿರುವುದು ಅನುಮಾನಾಸ್ಪದ ಎಂದು ಉತ್ತರ ಪ್ರದೇಶದ ಸಿಎಂ ಯೋಗಿ ಆದಿತ್ಯನಾಥ್ ಅಭಿಪ್ರಾಯಪಟ್ಟಿದ್ದಾರೆ.



ಏಕೈಕ ಗುರುತು ಸನಾತನ ಧರ್ಮ

ಗೋರಖ್‌ನಾಥ್ ದೇವಾಲಯದ ಆವರಣದಲ್ಲಿ ಮಹಾಂತ ದಿಗ್ವಿಜಯನಾಥರ 56ನೇ ಪುಣ್ಯತಿಥಿ, ಮಹಾಂತ ಅವೈದ್ಯನಾಥರ 11ನೇ ಪುಣ್ಯತಿಥಿಯ ಸಾಪ್ತಾಹಿಕ ಶ್ರದ್ಧಾಂಜಲಿ ಸಮಾರೋಹದಲ್ಲಿ ಮಾತನಾಡಿದ ಯೋಗಿ ಆದಿತ್ಯನಾಥ್, ಅಯೋಧ್ಯೆಯ ಭವ್ಯ ರಾಮ ಮಂದಿರ ಭಾರತದ ಸಾಂಸ್ಕೃತಿಕ ಧರೋಹರದ ಪ್ರತೀಕವೆಂದು ಹೇಳಿದರು. ಇಂದು ಅಯೋಧ್ಯೆಯ ಶ್ರೀ ರಾಮ ಜನ್ಮಭೂಮಿಯಲ್ಲಿರುವ ಭವ್ಯ ರಾಮ ಮಂದಿರ ನೋಡಿ, ಸಮಸ್ತ ಭಾರತೀಯರು ಹೆಮ್ಮೆಪಡುತ್ತಿದ್ದಾರೆ.

ಅಯೋಧ್ಯೆಯ ಭವ್ಯತೆಯನ್ನು ನೋಡಿ ಹೆಮ್ಮೆಪಡದವರು ಭಾರತೀಯರಾಗಿರುವುದು ಅನುಮಾನಾಸ್ಪದ ಎಂದು ಯೋಗಿ ಆದಿತ್ಯನಾಥ್ ಮಾರ್ಮಿಕವಾಗಿ ಹೇಳಿದರು.

ಮಹಂತ್ ದಿಗ್ವಿಜಯನಾಥ್ ಅವರು ಗುಲಾಮಗಿರಿಯ ಸಂಕೇತಗಳನ್ನು ತೆಗೆದುಹಾಕಲು ಸಂಕಲ್ಪ ಮಾಡಿದ್ದರು. ಅವರು ಅಯೋಧ್ಯೆಯಲ್ಲಿ ವಿವಾದಿತ ಕಟ್ಟಡವನ್ನು ತೆಗೆದುಹಾಕಿ, ಭವ್ಯವಾದ ರಾಮ ಮಂದಿರವನ್ನು ನಿರ್ಮಿಸುವ ಕನಸು ಕಂಡಿದ್ದರು. ಈ ಮಹನೀಯರ ಕನಸು ಈಗ ನನಸಾಗಿದೆ. ಇದಕ್ಕಾಗಿ ಭಾರತೀಯರು ಹೆಮ್ಮೆಪಡಬೇಕು ಎಂದು ಉತ್ತರ ಪ್ರದೇಶ ಮುಖ್ಯಮಂತ್ರಿ ನುಡಿದರು. ಸಂಸ್ಕೃತದ ಸಾಲನ್ನು ಉಲ್ಲೇಖಿಸಿ, ಪ್ರತಿಯೊಬ್ಬ ವ್ಯಕ್ತಿಗೂ ಸಾಮರ್ಥ್ಯವಿದೆ. ಆತನಿಗೆ ಸರಿಯಾದ ಮಾರ್ಗದರ್ಶನದ ಅವಶ್ಯಕತೆ ಇದೆ. ಅಯೋಧ್ಯೆಯ ಪುಣ್ಯಭೂಮಿ ಇಂತಹ ಮಾರ್ಗದರ್ಶನಕ್ಕೆ ಕೇಂದ್ರವಾಗಿದೆ. ಅಯೋಧ್ಯೆಗೆ ಬಂದು ಭಾರತದ ಆಧ್ಯಾತ್ಮಿಕ ಶಕ್ತಿಯ ಅನುಭೂತಿ ಪಡೆಯಬೇಕು ಎಂದು ಯೋಗಿ ಆದಿತ್ಯನಾಥ್ ಕರೆ ನೀಡಿದರು. ದೇಶ, ಧರ್ಮಕ್ಕಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟ, ತಮ್ಮ ಬದ್ಧತೆ ಮತ್ತು ತ್ಯಾಗದ ಮೂಲಕ ಸಮಾಜ ಮತ್ತು ರಾಷ್ಟ್ರವನ್ನು ಮಾರ್ಗದರ್ಶನ ಮಾಡಿದ ಮಹಾಂತ ದಿಗ್ವಿಜಯನಾಥ ಮತ್ತು ಮಹಾಂತ ಅವೈದ್ಯನಾಥ ನಮಗೆ ದಾರಿದೀಪ. ಪ್ರತಿ ಸಂತ ಸಮಾಜವನ್ನು ತನ್ನ ಕುಟುಂಬವೆಂದು ಮತ್ತು ರಾಷ್ಟ್ರವನ್ನು ತನ್ನ ಕುಲವೆಂದು ಪರಿಗಣಿಸುತ್ತಾನೆ. ಆತನ ಏಕೈಕ ಗುರುತು ಸನಾತನ ಧರ್ಮ ಎಂದು ಉತ್ತರ ಪ್ರದೇಶ ಮುಖ್ಯಮಂತ್ರಿ ಹೇಳಿದರು.

### ದೇಶಾದ್ಯಂತ ಭಾರೀ ಚರ್ಚೆಗೆ ಗ್ರಾಸ

**ಪ್ರಖರ ಹೇಳಿಕೆಗಳಿಂದಲೇ ಸುದ್ದಿಯಾಗುವ ಉತ್ತರ ಪ್ರದೇಶ ಮುಖ್ಯಮಂತ್ರಿ, ಯೋಗಿ ಆದಿತ್ಯನಾಥ್, ಈ ಬಾರಿ ಅಯೋಧ್ಯೆ ರಾಮ ಮಂದಿರ ಕುರಿತು ಮತ್ತೊಂದು ಹೇಳಿಕೆ ನೀಡಿದ್ದಾರೆ. ಉತ್ತರ ಪ್ರದೇಶದ ಗೋರಖ್‌ನಾಥ್ ದೇವಾಲಯದ ಆವರಣದಲ್ಲಿ ಮಾತನಾಡಿದ ಯೋಗಿ ಆದಿತ್ಯನಾಥ್, ಅಯೋಧ್ಯೆಯ ರಾಮ ಮಂದಿರ ನೋಡಿ ಹೆಮ್ಮೆಪಡದವರು ಭಾರತೀಯರಾಗಿರುವುದೆ ಅನುಮಾನ.**

**-ಯೋಗಿ ಆದಿತ್ಯನಾಥ್, ಉತ್ತರ ಪ್ರದೇಶ ಮುಖ್ಯಮಂತ್ರಿ**

### ತಲೆ ಎತ್ತಿರುವ ಭವ್ಯ ರಾಮ ಮಂದಿರ

**ನಿಜವಾದ ಸಂತರು ಪ್ರತಿಜ್ಞೆ ಮಾಡಿದಾಗ, ಅದರ ಫಲಿತಾಂಶಗಳು ಖಂಡಿತವಾಗಿಯೂ ಕಂಡುಬರುತ್ತವೆ. ಅಯೋಧ್ಯೆಯಲ್ಲಿ ತಲೆ ಎತ್ತಿರುವ ಭವ್ಯ ರಾಮ ಮಂದಿರವು ಮಹಾಂತರ ದೃಢನಿಶ್ಚಯ, ಹೋರಾಟಕ್ಕೆ ಸಾಕ್ಷಿಯಾಗಿದೆ ಎಂದು ಅಭಿಪ್ರಾಯಪಟ್ಟರು. ಯೋಗಿ ಆದಿತ್ಯನಾಥ್ ಈ ಹಿಂದೆ ಸನಾತನ ಧರ್ಮ ಭಾರತದ ರಾಷ್ಟ್ರಧರ್ಮ, 2019ರಲ್ಲಿ ರಾಮಜನ್ಮಭೂಮಿ ಕುರಿತ ಸುಪ್ರೀಂಕೋರ್ಟ್ ತೀರ್ಪಿನ ಬಳಿಕ, ಜನವರಿ 22, 2024ರಂದು ಅಯೋಧ್ಯೆಯಲ್ಲಿ ರಾಮ ಮಂದಿರ ಉದ್ಘಾಟನೆಗೊಂಡಿತು.**

---

## ಪ್ರಧಾನಿ ಮೋದಿಯನ್ನು ಶ್ಲಾಘಿಸಿದ ನೇಪಾಳ ಮಧ್ಯಂತರ ಸರ್ಕಾರದ ಮುಖ್ಯಸ್ಥೆ ಸುಶೀಲಾ ಕರ್ಕಿ

**ಕಠ್ಮಂಡು:** ಸಾಮೂಹಿಕ ಪ್ರತಿಭಟನೆಗಳು ಸರ್ಕಾರವನ್ನು ಉರುಳಿಸಿದ ನಂತರ ಮಾಜಿ ಮುಖ್ಯ ನ್ಯಾಯಮೂರ್ತಿ ಸುಶೀಲಾ ಕರ್ಕಿ ನೇಪಾಳದ ಮಧ್ಯಂತರ ಪ್ರಧಾನಿಯಾಗಲು ಒಪ್ಪಿಕೊಂಡಿರುವ ಬೆನ್ನಲ್ಲೇ, ಭಾರತದ ಬೆಂಬಲವನ್ನು ಶ್ಲಾಘಿಸಿದ್ದಾರೆ. ಸುದ್ದಿ ವಾಹಿನಿಯೊಂದಕ್ಕೆ ನೀಡಿರುವ ವಿಶೇಷ ಸಂದರ್ಶನದಲ್ಲಿ ಮಾತನಾಡಿದ ಅವರು, ಮೇ ಮೋದಿಜಿ ಕೋ ನಮಸ್ಕರ್ ಕಾರ್ತಿ ಹೂಂ. ಮೋದಿಜಿ ಬಗ್ಗೆ ನನಗೆ ತುಂಬಾ ಒಳ್ಳೆಯ ಅನಿಸಿಕೆ ಇದೆ ಎಂದು ಕರ್ಕಿ ಹೇಳಿದ್ದಾರೆ.

ಜನರಲ್-ಝುಡ್ ಗುಂಪು ನೇಪಾಳದಲ್ಲಿ ಇತ್ತೀಚಿನ ಚಳವಳಿಯನ್ನು ಮುನ್ನಡೆಸಿತು. ಅಲ್ಪಾವಧಿಗೆ ಸರ್ಕಾರವನ್ನು ಮುನ್ನಡೆಸುವುದಾಗಿ ನನ್ನ ಮೇಲೆ ನಂಬಿಕೆ ಇಟ್ಟಿದ್ದಾರೆ. ಪ್ರತಿಭಟನೆಗಳಲ್ಲಿ ಪ್ರಾಣ ಕಳೆದುಕೊಂಡವರನ್ನು ಗೌರವಿಸುವುದು ತನ್ನ ಮೊದಲ ಆದ್ಯತೆ. ಈ ವೇಳೆ ಸಾವನ್ನಪ್ಪಿದ ಯುವಕರಿಗೆ ಏನಾದರೂ ಮಾಡುವುದು ನಮ ತಕ್ಷಣದ ಗಮನವಾಗಿರುತ್ತದೆ ಎಂದು ಹೇಳಿದ್ದಾರೆ. ಚಳವಳಿಯ ಯುವ ಸದಸ್ಯರು, ಹುಡುಗಿಯರು ಮತ್ತು ಹುಡುಗರು ತಮ ನಾಯಕತ್ವದ ಪರವಾಗಿ ಮತ ಚಲಾಯಿಸಿದ್ದಾರೆ. ಮಧ್ಯಂತರ ಸರ್ಕಾರ ಮುನ್ನಡೆಸುವ ಅವರ ವಿನಂತಿಯನ್ನು ನಾನು ಸ್ವೀಕರಿಸಿದ್ದೇನೆ ಎಂದು ಹೇಳಿದ್ದಾರೆ.



ನೇಪಾಳದ ಪ್ರಕ್ಷುಬ್ಧ ರಾಜಕೀಯ ಇತಿಹಾಸದ ಕುರಿತು ಕರ್ಕಿ ಮುಂದಿನ ಸವಾಲುಗಳನ್ನು ಒಪ್ಪಿಕೊಂಡರು. ನೇಪಾಳದಲ್ಲಿ ಹಿಂದಿನಿಂದಲೂ ಸಮಸ್ಯೆಗಳಿವೆ. ಈಗ ಪರಿಸ್ಥಿತಿ ತುಂಬಾ ಕಠಿಣವಾಗಿದೆ. ನೇಪಾಳದ ಅಭಿವೃದ್ಧಿಗಾಗಿ ನಾವು ಒಟ್ಟಾಗಿ ಕೆಲಸ ಮಾಡುತ್ತೇವೆ ಎಂದು ಅವರು ಹೇಳಿದರು. ದೇಶಕ್ಕೆ ಹೊಸ ಆರಂಭವನ್ನು ಸ್ಥಾಪಿಸಲು ನಾವು ಪ್ರಯತ್ನಿಸುತ್ತೇವೆ ಎಂದು ಜನತೆಗೆ ಅಭಯ ನೀಡಿದ್ದಾರೆ. 2016ರಲ್ಲಿ ನೇಪಾಳದ ಮೊದಲ ಮಹಿಳಾ ಮುಖ್ಯ ನ್ಯಾಯಮೂರ್ತಿಯಾಗಿದ್ದ ಕರ್ಕಿ ಅವರು ತಮ ದೇಶವನ್ನು ಬೆಂಬಲಿಸುವಲ್ಲಿ ಭಾರತದ ಪಾತ್ರವನ್ನು ಶ್ಲಾಘಿಸಿದ್ದಾರೆ. ಭಾರತದ ಬಗ್ಗೆ ಅಪಾರ ಗೌರವ ಮತ್ತು ಪ್ರೀತಿ ಇದೆ. ಭಾರತ ನೇಪಾಳಕ್ಕೆ ಸಾಕಷ್ಟು ಸಹಾಯ ಮಾಡಿದೆ ಎಂದು ನೆನೆಪಿಸಿಕೊಂಡಿದ್ದಾರೆ.

---

## ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್‌ರನ್ನು ಬಣ್ಣಿಸಿದ ಮೋದಿ

**ನವದೆಹಲಿ:** ಮೋಹನ್ ಭಾಗವತ್ ಅವರ ಬೌದ್ಧಿಕ ಆಳ ಮತ್ತು ಸಹಾನುಭೂತಿಯ ನಾಯಕತ್ವಕ್ಕಾಗಿ ಶ್ಲಾಘಿಸಿರುವ ಪ್ರಧಾನಿ ಮೋದಿ, 2009ರಿಂದ ಆರ್‌ಎಸ್‌ಎಸ್ ಮುಖ್ಯಸ್ಥರಾಗಿ ಅವರ ಅಧಿಕಾರಾವಧಿಯನ್ನು ಅದರ 100 ವರ್ಷಗಳ ಪ್ರಯಾಣದಲ್ಲಿ ಅತ್ಯಂತ ಪರಿವರ್ತನಾ ಅವಧಿ ಎಂದು ಪರಿಗಣಿಸಲಾಗುವುದು ಎಂದು ಹೇಳಿದ್ದಾರೆ.

ಭಾಗವತ್ ಅವರ 75ನೇ ಹುಟ್ಟುಹಬ್ಬದಂದು ಹಲವಾರು ಪತ್ರಿಕೆಗಳಲ್ಲಿ ಪ್ರಕಟವಾದ ಒಂದು ಉಜ್ವಲ ಲೇಖನದಲ್ಲಿ, ಅವರು ವಸುಧೈವ ಕುಟುಂಬಕಂನ ಜೀವಂತ ಉದಾಹರಣೆಯಾಗಿದ್ದು, ಸಾಮಾಜಿಕ ಪರಿವರ್ತನೆ ಮತ್ತು ಸಾಮರಸ್ಯ ಮತ್ತು ಭ್ರಾತೃತ್ವದ ಮನೋಭಾವವನ್ನು ಬಲಪಡಿಸಲು ತಮ್ಮ ಇಡೀ ಜೀವನವನ್ನು ಮುಡಿಪಾಗಿಟ್ಟಿದ್ದಾರೆ ಎಂದು ಮೋದಿ ಹೇಳಿದ್ದಾರೆ. ಈ ವರ್ಷ ರಾಷ್ಟ್ರೀಯ ಸ್ವಯಂಸೇವಕ ಸಂಘದ 100 ವರ್ಷಗಳ ಪ್ರಯಾಣವು ಮಹಾತ್ಮ ಗಾಂಧಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮ ದಿನಾಚರಣೆಯ ದಿನದಂದು ಬರುವುದು ಆಹ್ಲಾದಕರ ಕಾಕತಾಳೀಯ ಎಂದು ಹೇಳಿದ ಅವರು, ಹಿಂದುತ್ವ ಸಂಘಟನೆಯು ಭಾಗವತ್‌ನಲ್ಲಿ ಬಹಳ ಬುದ್ಧಿವಂತ, ಶ್ರಮಶೀಲ ನಾಯಕನನ್ನು ಹೊಂದಿದೆ



ಎಂದು ಹೇಳಿದರು. ಜನರು ಗಡಿಗಳನ್ನು ಮೀರಿ ಎಲ್ಲರನ್ನೂ ತಮ್ಮದೇ ಎಂದು ಪರಿಗಣಿಸಿದಾಗ, ಅದು ಸಮಾಜದಲ್ಲಿ ನಂಬಿಕೆ, ಸಹೋದರತ್ವ ಮತ್ತು ಸಮಾನತೆಯನ್ನು ಬಲಪಡಿಸುತ್ತದೆ ಎಂದು ಅವರು ತೋರಿಸಿದ್ದಾರೆ ಎಂದು ಪ್ರಧಾನಿ ಹೇಳಿದರು.

ಅವರ ಮೃದು ಸ್ವಭಾವವನ್ನು ಶ್ಲಾಘಿಸಿದ ಅವರು, ಭಾಗವತ್ ಅವರು ಅಸಾಧಾರಣ ಆಲಿಸುವ ಸಾಮರ್ಥ್ಯವನ್ನು ಹೊಂದಿದ್ದಾರೆ, ಇದು ಅವರಿಗೆ ಆಳವಾದ ದೃಷ್ಟಿಕೋನವನ್ನು ನೀಡುತ್ತದೆ, ಅವರ ವ್ಯಕ್ತಿತ್ವ ಮತ್ತು ನಾಯಕತ್ವಕ್ಕೆ ಸೂಕ್ಷ್ಮತೆ ಮತ್ತು ಘನತೆಯ ಪ್ರಜ್ಞೆಯನ್ನು ತರುತ್ತದೆ ಎಂದು ಹೇಳಿದರು.

ಸರಸಂಘಚಾಲಕ್ ಆಗಿರುವುದು ಸಾಂಸ್ಥಿಕ ಜವಾಬ್ದಾರಿಗಿಂತ ಹೆಚ್ಚಿನ ದಾಗಿದೆ ಎಂದರು, ಅಸಾಧಾರಣ ವ್ಯಕ್ತಿಗಳು ವೈಯಕ್ತಿಕ ತ್ಯಾಗ, ಉದ್ದೇಶದ ಸ್ಪಷ್ಟತೆ ಮತ್ತು ದೇಶಕ್ಕೆ ಅಚಲ ಬದ್ಧತೆಯ ಮೂಲಕ ಈ ಪಾತ್ರವನ್ನು ವ್ಯಾಖ್ಯಾನಿಸಿದ್ದಾರೆ. ಮೋಹನ್ ಜಿ, ಜವಾಬ್ದಾರಿಯ ಅಗಾಧತೆಗೆ ಸಂಪೂರ್ಣ ನ್ಯಾಯ ಒದಗಿಸುವುದರ ಜೊತೆಗೆ, ಅದಕ್ಕೆ ತಮ್ಮದೇ ಆದ ಶಕ್ತಿ, ಬೌದ್ಧಿಕ ಆಳ, ಸಹಾನುಭೂತಿಯ ನಾಯಕತ್ವವನ್ನು ತಂದಿದ್ದಾರೆ, ಇವೆಲ್ಲವೂ ರಾಷ್ಟ್ರ ಮೊದಲು ಎಂಬ ತತ್ವದಿಂದ ಪ್ರೇರಿತವಾಗಿವೆ ಎಂದು ಅವರು ಹೇಳಿದರು.

**ಮೋಹನ್ ಜಿ ಅವರು ತಮ್ಮ ಹೃದಯಕ್ಕೆ ಹತ್ತಿರವಾಗಿದ್ದ ಮತ್ತು ಅವರ ಕಾರ್ಯ ಶೈಲಿಯಲ್ಲಿ ಅಳವಡಿಸಿಕೊಂಡಿದ್ದ ಎರಡು ಗುಣಲಕ್ಷಣಗಳ ಬಗ್ಗೆ ನಾನು ಯೋಚಿಸಿದರೆ, ಅವು ನಿರಂತರತೆ, ಹೊಂದಾಣಿಕೆ, ಭಾಗವತ್ ಅವರು ಸಂಕೀರ್ಣ ಪ್ರವಾಹಗಳ ಮೂಲಕ ಸಂಸ್ಥೆಯನ್ನು ಮುನ್ನಡೆಸಿದ್ದಾರೆ, ಸಾರ್ವಜನಿಕ ಭಾಷಣದಲ್ಲಿ ತೊಡಗಿಸಿಕೊಳ್ಳುವುದು ಮತ್ತು ಜನರೊಂದಿಗೆ ಸಂವಹನ ನಡೆಸುವುದನ್ನು ಹೆಚ್ಚಾಗಿ ಕಾಣಬಹುದು, ಇದು ಇಂದಿನ ಕ್ರಿಯಾತ್ಮಕ ಮತ್ತು ಡಿಜಿಟಲ್ ಜಗತ್ತಿನಲ್ಲಿ ಬಹಳ ಪ್ರಯೋಜನಕಾರಿಯಾಗಿದೆ.**

**-ನರೇಂದ್ರ ಮೋದಿ, ಪ್ರಧಾನಿ**

---

# ತುಂಬಿದ ಸಭೆಯಲ್ಲೇ ಗುಂಡಿಟ್ಟು ಟ್ರಂಪ್ ಪರಮಾಪ್ತ ಚಾರ್ಲಿ ಕಿರ್ಕ್ ಬರ್ಬರ ಹತ್ಯೆ

**ವಾಷಿಂಗ್ಟನ್:** ಯುವ ರಿಪಬ್ಲಿಕನ್ ಮತದಾರರನ್ನು ಸೆಳೆಯುವಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಅಮೆರಿಕ ಅಧ್ಯಕ್ಷ ಟ್ರಂಪ್ ಅವರ ಪರಮಾಪ್ತ ಚಾರ್ಲಿ ಕಿರ್ಕ್ ಅವರನ್ನು ಗುಂಡಿಕ್ಕಿ ಕೊಲ್ಲಲಾಗಿದೆ. ಓರೆಮ್‌ನ ಉತಾಹ್ ವ್ಯಾಲಿ ವಿಶ್ವವಿದ್ಯಾಲಯದಲ್ಲಿ ರ್ಯಾಲಿಯಲ್ಲಿರ್ ವಿದ್ಯಾರ್ಥಿಗಳ ಪ್ರಶ್ನೆಗಳಿಗೆ ಉತ್ತರಿಸುತ್ತಿದ್ದಾಗ, ಮಧ್ಯಾಹ್ನ 12 ಗಂಟೆ ಸುಮಾರಿಗೆ ಇದ್ದಕ್ಕಿದ್ದಂತೆ ಗುಂಡೇಟಿನ ಶಬ್ದ ಕೇಳಿಬಂದಿದೆ. ವೇದಿಕೆಯ ಮೇಲೆ ಬಿದ್ದ ಅವರನ್ನು ತಕ್ಷಣ ಆಸ್ಪತ್ರೆಗೆ ಕರೆದೊಯ್ಯಲಾಯಿತು, ಆದರೆ ಅವರು ಸಾವನ್ನಪ್ಪಿರುವುದಾಗಿ ವೈದ್ಯರು ಖಚಿತಪಡಿಸಿದ್ದಾರೆ.

ಚಾರ್ಲಿ ಕಿರ್ಕ್ ಹತ್ಯೆಗೆ ಸಂಬಂಧಿಸಿದಂತೆ ಕಾನೂನು ಜಾರಿ ಅಧಿಕಾರಿಗಳು, ಘಟನಾ ಸ್ಥಳದಲ್ಲಿ ಓರ್ವ ಶಂಕಿತನನ್ನು ಬಂಧಿಸಿ ವಿಚಾರಣೆ ನಡೆಸಿದ್ದಾರೆ. ಆದರೆ ಆತ ಹತ್ಯೆಯಲ್ಲಿ ಭಾಗಿಯಾಗಿಲ್ಲ ಎಂಬುದನ್ನು ಖಚಿತಪಡಿಸಿಕೊಂಡ ಬಳಿಕ, ಆತನನ್ನು ಬಿಡುಗಡೆ ಮಾಡಲಾಗಿದೆ. ನೈಜ ಕೊಲೆಗಾರನ ಬಂಧನಕ್ಕೆ ಶೋಧಕಾರ್ಯ ನಡೆಯುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಚಾರ್ಲಿ ಕಿರ್ಕ್ ಅವರು ಅಮೆರಿಕ ಅಧ್ಯಕ್ಷ ಟ್ರಂಪ್ ಅವರ ಅತ್ಯಂತ ಆಪ್ತ ವ್ಯಕ್ತಿಗಳಲ್ಲಿ ಒಬ್ಬರು.



ಡೊನಾಲ್ಡ್ ಟ್ರಂಪ್ ಟ್ರೂತ್ ಸೋಷಿಯಲ್‌ನಲ್ಲಿ ಪೋಸ್ಟ್ ಮಾಡುವ ಮೂಲಕ ಅವರ ಸಾವನ್ನು ದೃಢಪಡಿಸಿದ್ದು, ಅದೇ ಸಮಯದಲ್ಲಿ, ಉತಾಹ್ ಗವರ್ನರ್ ಸ್ಪೆನ್ಸರ್ ಕಾಕ್ಸ್ ಪತ್ರಿಕಾಗೋಷ್ಠಿಯಲ್ಲಿ ಇದನ್ನು ರಾಜಕೀಯ ಕೊಲೆ. ಇದರ ಹೊಣೆಗಾರರಿಗೆ ಶಿಕ್ಷೆಯಾಗುತ್ತದೆ ಎಂದು ಹೇಳಿದ್ದಾರೆ. ಸೆಪ್ಟೆಂಬರ್ 14ರವರೆಗೆ ರಾಜ್ಯಾದ್ಯಂತ ಯುಎಸ್ ಮತ್ತು ಉತಾಹ್ ಧ್ವಜಗಳನ್ನು ಅರ್ಧಕ್ಕೆ ಹಾರಿಸಲು ಅವರು ಆದೇಶಿಸಿದ್ದಾರೆ.

ಘಟನೆಯ ನಂತರ, ಪೊಲೀಸರು ಮತ್ತು ಇತರ ಏಜೆನ್ಸಿಗಳು ಕ್ಯಾಂಪಸ್ ಅನ್ನು ಲಾಕ್‌ಡೌನ್ ಮಾಡಿ ಶೋಧ ಕಾರ್ಯಾಚರಣೆ ನಡೆಸಿದ್ದಾರೆ. ಆರಂಭಿಕ ವರದಿಗಳು ಪೊಲೀಸರು ಒಬ್ಬ ಶಂಕಿತನನ್ನು ಬಂಧಿಸಿದ್ದಾರೆಂದು ಹೇಳಿದ್ದವು, ಆದರೆ ನಂತರ ಅಧಿಕಾರಿಗಳು ನಿಜವಾದ ದಾಳಿಕೋರ ಇನ್ನೂ ತಲೆಮರೆಸಿಕೊಂಡಿದ್ದಾನೆ ಎಂದು ಸ್ಪಷ್ಟಪಡಿಸಿದರು.

**ಚಾರ್ಲಿ ಕಿರ್ಕ್ ಯಾರು?:** ಚಾರ್ಲಿ ಕಿರ್ಕ್ ಅಮೆರಿಕದಲ್ಲಿ ಸಂಪ್ರದಾಯವಾದಿ ರಾಜಕೀಯದ ದೊಡ್ಡ ಮುಖವಾಗಿದ್ದರು. ಅವರು ಪ್ರೌಢಶಾಲೆ, ಕಾಲೇಜು ವಿದ್ಯಾರ್ಥಿಗಳಿಗಾಗಿ ಟರ್ನಿಂಗ್ ಪಾಯಿಂಟ್ ಯುಎಸ್ಎ ಅನ್ನು ಸ್ಥಾಪಿಸಿದರು. ಇದು 2024ರಲ್ಲಿ ಸಾಮಾಜಿಕ ಮಾಧ್ಯಮದಲ್ಲಿ ಸುಮಾರು 15 ಬಿಲಿಯನ್ ವೀಕ್ಷಣೆಗಳನ್ನು ಗಳಿಸಿತು. ಚಾರ್ಲಿ ಕಿರ್ಕ್ ಭಾರತದಲ್ಲಿ ಅಮೆರಿಕನ್ ರಾಜಕೀಯದಲ್ಲಿ ಆಸಕ್ತಿ ಹೊಂದಿರುವ ಜನರಲ್ಲಿಯೂ ಜನಪ್ರಿಯರಾಗಿದ್ದಾರೆ. ಕ್ರಿಶ್ಚಿಯನ್ ರಾಷ್ಟ್ರೀಯತೆ, ಬಂದೂಕು ಹಕ್ಕುಗಳು, ತಪ್ಪು ಮಾಹಿತಿ ಮತ್ತು ಚುನಾವಣಾ ವಂಚನೆಯ ಹಕ್ಕುಗಳಂತಹ ಅನೇಕ ವಿವಾದಾತ್ಮಕ ವಿಷಯಗಳ ಬಗ್ಗೆ ಕಿರ್ಕ್ ಕಠಿಣ ನಿಲುವು ತೆಗೆದುಕೊಂಡಿದ್ದರು. 2024ರ ಯುಎಸ್ ಅಧ್ಯಕ್ಷೀಯ ಚುನಾವಣೆಯಲ್ಲಿ ಯುವ ಮತದಾರರನ್ನು ಟ್ರಂಪ್‌ಗೆ ಮತ ಚಲಾಯಿಸುವಂತೆ ಮನವೊಲಿಸಿದ್ದರು.

**ಸಂತಾಪ:** ಕಿರ್ಕ್‌ಗೆ ಪತ್ನಿ ಮತ್ತು ಇಬ್ಬರು ಚಿಕ್ಕ ಮಕ್ಕಳಿದ್ದಾರೆ. ಅವರ ಸಾವಿನ ಸುದ್ದಿ ಬಂದ ತಕ್ಷಣ, ಅಮೆರಿಕಾದಾದ್ಯಂತ ಶೋಕದ ಅಲೆಯಿದೆ. ಬೇಸ್‌ಬಾಲ್ ತಂಡ ನ್ಯೂಯಾರ್ಕ್ ಯಾಂಕೀಸ್ ಚಾರ್ಲಿ ಕಿರ್ಕ್ ಅವರ ಗೌರವಾರ್ಥವಾಗಿ ಒಂದು ಕ್ಷಣ ಮೌನ ಆಚರಿಸಿದ್ದಾರೆ. ಚಾರ್ಲಿ ಕಿರ್ಕ್ ಅವರ ನಿಧನಕ್ಕೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತೀವ್ರ ಸಂತಾಪ ವ್ಯಕ್ತಪಡಿಸಿ, ಅವರನ್ನು ಶ್ರೇಷ್ಠ, ದಂತಕಥೆ ಎಂದು ಬಣ್ಣಿಸಿದ್ದು, ಅಮೆರಿಕದ ಯುವಕರನ್ನು ಚಾರ್ಲಿ ಅರ್ಥಮಾಡಿಕೊಂಡಷ್ಟು ಯಾರೂ ಅರ್ಥಮಾಡಿಕೊಂಡಿರಲಿಲ್ಲ. ಈಗ ಅವರು ನಮೊಂದಿಗಿಲ್ಲ. ಅವರ ಪತ್ನಿ ಎರಿಕಾ ಮತ್ತು ಇಡೀ ಕುಟುಂಬದೊಂದಿಗೆ ನಾವಿದ್ದೇವೆ. ಚಾರ್ಲಿ, ನಾವು ನಿನ್ನನ್ನು ಪ್ರೀತಿಸುತ್ತೇವೆ ಎಂದಿದ್ದಾರೆ. ಟ್ರಂಪ್ ಅವರ ಗೌರವಾರ್ಥವಾಗಿ ಅಮೆರಿಕದಾದ್ಯಂತ ಧ್ವಜಗಳನ್ನು ಅರ್ಧಕ್ಕೆ ಹಾರಿಸಲು ಆದೇಶಿಸಿದ್ದಾರೆ. ಏತನಧ್ಯೆ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಗುರುವಾರ ಉತಾಹ್‌ಗೆ ಭೇಟಿ ನೀಡಿದ್ದಾರೆ.


---

## ವಿಧ್ವಂಸಕ ಕೃತ್ಯಕ್ಕೆ ಸಂಚು ರೂಪಿಸಿದ್ದ 5 ಐಸಿಸ್ ಉಗ್ರರ ಸೆರೆ

**ನವದೆಹಲಿ:** ದೇಶದ ವಿವಿಧೆಡೆ ವಿಧ್ವಂಸಕ ಕೃತ್ಯ ನಡೆಸಲು ಸಂಚು ರೂಪಿಸಿದ್ದ ಆರೋಪದ ಹಿನ್ನೆಲೆಯಲ್ಲಿ ದೆಹಲಿ ವಿಶೇಷ ಪೊಲೀಸ್ ದಳ ಹಾಗೂ ಕೇಂದ್ರ ಸಂಸ್ಥೆಗಳು ಜಂಟಿ ಕಾರ್ಯಾಚರಣೆ ನಡೆಸಿ ಶಂಕಿತ 5 ಮಂದಿ ಐಸಿಸ್ ಭಯೋತ್ಪಾದಕರನ್ನು ಬಂಧಿಸಿವೆ. ಮುಂಬೈ ನಿವಾಸಿಗಳಾದ ಅಫ್ತಾಬ್, ಅಬು ಸುಫಿಯಾನ್ ಅವರನ್ನು ದೆಹಲಿಯ ನಿಜಾಮುದ್ದೀನ್ ರೈಲ್ವೆ ನಿಲ್ದಾಣದಲ್ಲಿ ಬಂಧಿಸಲಾಗಿದೆ. ಆಶರ್ ದಾನಿಶ್ ಅವರನ್ನು ರಾಂಚಿಯಿಂದ ಬಂಧಿಸಲಾಗಿದೆ. ಕಮ್ರಾನ್ ಖುರೇಷಿ ಅವರನ್ನು ಮಧ್ಯಪ್ರದೇಶದ ರಾಜ್‌ಗಢದಿಂದ, ಹುಜೈಫ್ ಯೆಮೆನ್ ಅವರನ್ನು ತೆಲಂಗಾಣದಿಂದ ಬಂಧಿಸಲಾಗಿದೆ.

ಬಂಧಿತರಿಂದ ಅಪಾರ ಪ್ರಮಾಣದ ರಾಸಾ ಯನಿಕಗಳು ಮತ್ತು ಶಸ್ತ್ರಾಸ್ತ್ರಗಳ ಕಾರ್ಟ್ರಿಡ್ಜ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ವಶಪಡಿಸಿಕೊಂಡ ರಾಸಾಯನಿಕಗಳಲ್ಲಿ ಹೈಡ್ರೋಕ್ಲೋರಿಕ್ ಆಮ್ಲ, ನೈಟ್ರಿಕ್ ಆಮ್ಲ, ಸೋಡಿಯಂ ಬೈಕಾರ್ಬನೇಟ್, ಸಲ್ಫರ್ ಪುಡಿ, ಪಿಹೆಚ್ ಮೌಲ್ಯ ಪರೀಕ್ಷಕ ಮತ್ತು ಬಾಲ್ ಬೇರಿಂಗ್‌ಗಳು ಸೇರಿವೆ.

ಇದಲ್ಲದೆ, ಲ್ಯಾಪ್‌ಟಾಪ್, ಮೊಬೈಲ್ ಫೋನ್, ತೂಕದ ಯಂತ್ರ, ಬೀಕರ್ ಸೆಟ್, ಸುರಕ್ಷತಾ ಕೈಗವಸುಗಳು, ಉಸಿರಾಟದ ಮುಖವಾಡಗಳು, ಮದರ್ಬೋರ್ಡ್ ಹೊಂದಿರುವ ಪ್ಲಾಸ್ಟಿಕ್ ಕಂಟೇನರ್, ವೈರ್‌ಗಳು ಇತ್ಯಾದಿಗಳನ್ನು ಸಹ ವಶಪಡಿಸಿಕೊಳ್ಳಲಾಗಿದೆ. ವಿವಿಧ ರಾಜ್ಯಗಳಲ್ಲಿ ಜಂಟಿ ಕಾರ್ಯಾಚರಣೆ ನಡೆಸಿ ಬಂಧಿಸಲಾದ



ಐವರು ಶಂಕಿತ ಐಸಿಸ್ ಕಾರ್ಯಕರ್ತರು, ರಾಸಾಯನಿಕ ಶಸ್ತ್ರಾಸ್ತ್ರಗಳನ್ನು ತಯಾರಿಸುವಲ್ಲಿ ಪರಿಣಿತಿ ಹೊಂದಿದ್ದರು. ಸಂಘಟನೆಗೆ ಯುವಕರನ್ನು ನೇಮಿಸಿಕೊಳ್ಳಲು ಖಿಲಾಫತ್ ಮಾದರಿಯನ್ನು ಅನುಸರಿಸುತ್ತಿದ್ದರು. ಆರೋಪಿಗಳು ಭಯೋತ್ಪಾದಕ ಸಂಘಟನೆಯ ಸ್ಲೀಪರ್ ಮಾಡ್ಯೂಲ್‌ನ ಭಾಗವಾಗಿದ್ದರು ಮತ್ತು ಬಾಂಬ್‌ಗಳನ್ನು ತಯಾರಿಸುವುದು, ಶಸ್ತ್ರಾಸ್ತ್ರಗಳನ್ನು ಸಂಗ್ರಹಿಸುವುದು, ಸಂಘಟನೆಯ ಬಲವನ್ನು ಹೆಚ್ಚಿಸುವ ಕೆಲಸವನ್ನು ಅವರು ನಿರ್ವಹಿಸುತ್ತಿದ್ದರು.

ಶಂಕಿತರು ವಿವಿಧ ಸಾಮಾಜಿಕ ಮಾಧ್ಯಮ ಖಾತೆಗಳನ್ನು ಬಳಸಿಕೊಂಡು ಭಾರತದಲ್ಲಿ ಜನರನ್ನು ತೀವ್ರಗಾಮಿಗಳಾಗಿ ಪರಿವರ್ತನೆ ಮಾಡಿ, ಭಯೋತ್ಪಾದನಾ ಚಟುವಟಿಕೆ ನಡೆಸಲು ನೇಮಕ ಮಾಡಿಕೊಳ್ಳುತ್ತಿದ್ದರು ಎಂದು ಉನ್ನತಾಧಿಕಾರಿಗಳು ತಿಳಿಸಿದ್ದಾರೆ.

---

## ಭಾರತದ ಜೊತೆಗಿನ ಸಂಬಂಧ ಸುಧಾರಣೆಗಾಗಿ ಆಪ್ತನನ್ನ ಭಾರತದ ರಾಯಭಾರಿಯಾಗಿ ನೇಮಿಸಿದ ಟ್ರಂಪ್

**ನ್ಯೂಯಾರ್ಕ್:** ಭಾರತಕ್ಕೆ ಅಮೆರಿಕದ ನಿಯೋಜಿತ ರಾಯಭಾರಿ ಸೆರ್ಗಿಯೊ ಗೋರ್ ಅಧ್ಯಕ್ಷ ಟ್ರಂಪ್ ಅವರ ಅತ್ಯಂತ ವಿಶ್ವಾಸಾರ್ಹ ಸಹಾಯಕರಲ್ಲಿ ಒಬ್ಬರು ಮತ್ತು ದೆಹಲಿಯಲ್ಲಿ ಸೇವೆ ಸಲ್ಲಿಸಲು ಅವರ ನಾಮನಿರ್ದೇಶನವನ್ನು ದ್ವಿಪಕ್ಷೀಯ ಸಂಬಂಧಗಳ ಪ್ರಾಮುಖ್ಯತೆ ಮತ್ತು ಆದ್ಯತೆಯ ಸಂಕೇತವೆಂದು ಪರಿಗಣಿಸಲಾಗಿದೆ ಎಂದು ಅಮೆರಿಕದ ಭಾರತದ ರಾಯಭಾರಿ ವಿನಯ್ ಮೋಹನ್ ಕ್ವಾಟ್ರಾ ಹೇಳಿದ್ದಾರೆ. ಅಧ್ಯಕ್ಷ ಟ್ರಂಪ್ ತಮ್ಮ ಅತ್ಯಂತ ವಿಶ್ವಾಸಾರ್ಹ ಸಹಾಯಕರಲ್ಲಿ ಒಬ್ಬರಾದ ಅವರನ್ನು ಭಾರತಕ್ಕೆ ಮುಂದಿನ ಅಮೆರಿಕದ ರಾಯಭಾರಿಯಾಗಿ ಸೇವೆ ಸಲ್ಲಿಸಲು ಕಳುಹಿಸುತ್ತಿದ್ದಾರೆ ಎಂಬುದನ್ನು ನಾನು ಸ್ವಾಗತಿಸುತ್ತೇನೆ ಎಂದು ಕ್ವಾಟ್ರಾ ಎಕ್ಸ್ ಮಾಡಿದ್ದಾರೆ.



ಈ ಕ್ರಮವನ್ನು ಭಾರತ-ಅಮೆರಿಕ ಸಂಬಂಧಗಳ ಪ್ರಾಮುಖ್ಯತೆ ಮತ್ತು ಆದ್ಯತೆಯ ಸಂಕೇತವಾಗಿ ಮತ್ತು ಸೇತುವೆಗಳನ್ನು ಬಲಪಡಿಸಲು ಮತ್ತು ನಮ್ಮ ಎರಡು ದೇಶಗಳ ನಡುವಿನ ಸ್ನೇಹದ ಬಂಧಗಳನ್ನು ಗಾಢವಾಗಿಸಲು ಬದ್ಧತೆಯ ಸಂಕೇತವಾಗಿ ನೋಡಲಾಗಿದೆ ಎಂದು ಕ್ವಾಟ್ರಾ ಹೇಳಿದರು. ಭಾರತ ಗಣರಾಜ್ಯಕ್ಕೆ ಅಮೆರಿಕದ ಅಮೆರಿಕದ ಅಸಾಧಾರಣ ರಾಯಭಾರಿ ಮತ್ತು ಪೂರ್ಣ ಅಧಿಕಾರ ರಾಯಭಾರಿಯಾಗಲು ದೃಢೀಕರಣ ವಿಚಾರಣೆಗಾಗಿ ಗೋರ್ ಇಂದು ವಾಷಿಂಗ್ಟನ್ ಡಿಸಿಯಲ್ಲಿ ಸೆನೆಟ್ ವಿದೇಶಾಂಗ ಸಂಬಂಧಗಳ ಸಮಿತಿಯ ಮುಂದೆ ಹಾಜರಾಗಲಿದ್ದಾರೆ.

ಕಳೆದ ತಿಂಗಳು ಟ್ರೂತ್ ಸೋಶಿಯಲ್‌ನಲ್ಲಿ ಟ್ರಂಪ್, ಅಧ್ಯಕ್ಷೀಯ ಸಿಬ್ಬಂದಿ ನಿರ್ದೇಶಕ ಗೋರ್ ಅವರನ್ನು ಭಾರತಕ್ಕೆ ಮುಂದಿನ ಅಮೆರಿಕದ ರಾಯಭಾರಿ ಮತ್ತು ದಕ್ಷಿಣ, ಮಧ್ಯ ಏಷ್ಯಾ ವ್ಯವಹಾರಗಳ ವಿಶೇಷ ರಾಯಭಾರಿಯಾಗಿ ಬಡ್ತಿ ನೀಡುತ್ತಿರುವುದಾಗಿ ಹೇಳಿದ್ದರು.

ಗೋರ್ ಅವರನ್ನು ಹಲವು ವರ್ಷಗಳಿಂದ ನನ್ನೊಂದಿಗಿರುವ ಉತ್ತಮ ಸ್ನೇಹಿತ ಎಂದು ಬಣ್ಣಿಸಿದ ಟ್ರಂಪ್, ವಿಶ್ವದ ಅತ್ಯಂತ ಜನನಿಬಿಡ ಪ್ರದೇಶಕ್ಕೆ, ನನ್ನ ಕಾರ್ಯಸೂಚಿಯನ್ನು ಪೂರೈಸಲು ಮತ್ತು ಅಮೆರಿಕವನ್ನು ಮತ್ತೊಮ್ಮೆ ಶ್ರೇಷ್ಠರನ್ನಾಗಿ ಮಾಡಲು ನಮಗೆ ಸಹಾಯ ಮಾಡಲು ನಾನು ಸಂಪೂರ್ಣವಾಗಿ ನಂಬಬಹುದಾದ ವ್ಯಕ್ತಿಯನ್ನು ಹೊಂದಿರುವುದು ಮುಖ್ಯ. ಸೆರ್ಗಿಯೊ ಅದ್ಭುತ ರಾಯಭಾರಿ ಆಗುತ್ತಾರೆ ಎಂದು ಹೇಳಿದ್ದರು.

---

# ರಾಜಮನೆತನದ ಆಡಳಿತವೇ ಬರಲಿ ಎಂಬುದು ಜನರ ಆಶಯ

## ಸೇನಾ ಮುಖ್ಯಸ್ಥರ ಕಚೇರಿಯಲ್ಲಿರುವ ಹಿಂದೂ ರಾಜನ ಫೋಟೋ ಯಾರದ್ದು? ನೇಪಾಳಕ್ಕೂ ಹಿಂದೂ ರಾಜರಿಗೂ ಏನು ಸಂಬಂಧ?

**ಕಠ್ಮಂಡು:** ನೇಪಾಳದಲ್ಲಿ ಇತ್ತೀಚೆಗೆ ನಡೆದ ಯುವಜನರ ಭಾರೀ ಪ್ರತಿಭಟನೆಯಿಂದಾಗಿ ಇಡೀ ದೇಶದಲ್ಲೀಗ ಸೇನಾಡಳಿತ ಜಾರಿ ಆಗಿದೆ. ಅದನ್ನು ಅಲ್ಲಿನ ಸೇನಾ ಮುಖ್ಯಸ್ಥರಾದ ಅಶೋಕ್ ರಾಜ್ ಸಿಗ್ದೆಲ್ ಅವರು ಟೆಲಿವಿಷನ್ ಮಾಧ್ಯಮ ಮೂಲಕ ರಾಷ್ಟ್ರವನ್ನುದ್ದೇಶಿಸಿ ಮಾಡಿದ ಭಾಷಣದಲ್ಲಿ ಈ ವಿಚಾರವನ್ನು ತಿಳಿಸಿದ್ದಾರೆ. ಆದರೆ, ಅವರು ಭಾಷಣ ಮಾಡುತ್ತಿದ್ದಾಗ ಅವರ ಹಿಂದೆ ಇದ್ದ ಹಿಂದೂ ರಾಜನ ಫೋಟೋವೊಂದು ಎಲ್ಲರ ಗಮನ ಸಳೆದಿದೆ. ಯಾರು ಅವರು, ಅವರ ಪ್ರಾಮುಖ್ಯತೆಯೇನು? ಹಿಂದೂ ರಾಜನ ಫೋಟೋ ನೇಪಾಳದ ಸೇನಾ ಮುಖ್ಯಸ್ಥರ ಕಚೇರಿಯಲ್ಲಿ ಬಂದಿದ್ದು ಹೇಗೆ ಎಂಬುದರ ಚರ್ಚೆಗಳು ಆರಂಭವಾಗಿವೆ.

**ಯಾರು ಆ ರಾಜ?:** ರಾಜರ ಹೆಸರು ಪೃಥ್ವಿನಾರಾಯಣ್ ಸಿಂಗ್. 1768ರಲ್ಲಿ ಪೃಥ್ವಿನಾರಾಯಣ್ ಶಾ ಅವರು ನೇಪಾಳದಲ್ಲಿ ಮೊದಲ ಬಾರಿಗೆ ಸಾಮ್ರಾಜ್ಯವನ್ನು ಸ್ಥಾಪಿಸಿದರು. ಆಗಿನಿಂದ ಮೂರ್ನಾಲ್ಕು ಶತಮಾನಗಳವರೆಗೆ ನೇಪಾಳವನ್ನು ಆ ರಾಜ ಮನೆತನ ನೇಪಾಳದಲ್ಲಿ ಆಳ್ವಿಕೆ ನಡೆಸಿದೆ. ಆದರೆ, 2008ರಲ್ಲಿ ನಡೆದ ಜನಾಂದೋಲನದ ಹಿನ್ನೆಲೆಯಲ್ಲಿ ರಾಜಮನೆತನ ತನ್ನ ಅಧಿಕಾರ ತ್ಯಾಗ ಮಾಡಬೇಕಾಯಿತು.

ಆಗ, ರಾಜನಾಗಿ ಅಧಿಕಾರದಲ್ಲಿದ್ದಿದ್ದು ಜ್ಞಾನಾಂದ್ರ ಶಾ.



ಇಡೀ ಪ್ರಪಂಚವನ್ನೇ ಹೌಹಾರಿಸಿತ್ತು

ಅಲ್ಲಿಂದ ಇಲ್ಲಿಯವರೆಗೆ ಅಲ್ಲಿ ಚುನಾವಣೆಗಳು ನಡೆದು ಸುಮಾರು 13 ಸರ್ಕಾರಗಳು ಬಂದು ಹೋಗಿವೆ. ಇದೇ ಸೆ. 9-10ರಂದು ಅಲ್ಲಿ ಕೆಪಿ ಓಲಿ ಅವರ ಸರ್ಕಾರವೂ ಉರುಳಿದೆ. ಯಾವುದೇ ಸ್ಥಿರ ಸರ್ಕಾರ ಅಥವಾ ಸ್ಥಿರ ಆಡಳಿತವನ್ನು ಕಾಣದ ಕಾರಣಕ್ಕಾಗಿ ನೇಪಾಳದಲ್ಲಿ ಮತ್ತೆ ರಾಜರ ಆಳ್ವಿಕೆಯೇ ಬರಬೇಕು ಎಂದು ಕೆಲವು ಸಂಘಟನೆಗಳು ಇದೇ ವರ್ಷದ ಆರಂಭದಲ್ಲಿ ಅಲ್ಲಿ ಆಗ್ರಹಿಸಿದ್ದುಂಟು. ಈಗ ಸೇನಾ ಮುಖ್ಯಸ್ಥರು ದೇಶವನ್ನುದ್ದೇಶಿಸಿ ಮಾತನಾಡುವ ಹಿಂದೆ ಪೃಥ್ವಿ ನಾರಾಯಣ್ ಶಾ ಅವರ ಫೋಟೋವನ್ನು ಹಾಕಿಕೊಂಡಿರುವ ಹಿನ್ನೆಲೆಯಲ್ಲಿ ನೇಪಾಳದಲ್ಲಿ ಮತ್ತೆ ರಾಜರ ಆಡಳಿತ ತರಲು ಅಲ್ಲಿನ ಸೇನೆಗೂ ಒಲವಿದೆಯೇ ಎಂಬ ಅನುಮಾನಗಳನ್ನು ಹುಟ್ಟುಹಾಕಿದೆ.

ನಿಮಗೆ ನೆನಪಿರಬಹುದು 2001ರಲ್ಲಿ ನೇಪಾಳದ ಅರಮನೆಯಲ್ಲಿ ಅಂದಿನ ರಾಜಕುಮಾರ ದೀಪೇಂದ್ರ, ಎಂಬಾತ ತನ್ನ ತಂದೆ ಹಾಗೂ ಮಹಾರಾಜ ಬೀರೇಂದ್ರ, ತಾಯಿ ಐಶ್ವರ್ಯ, ಸಹೋದರ, ಸಹೋದರಿ ಸೇರಿದಂತೆ ರಾಜಮನೆತನದ ಅನೇಕ ಹಿರಿಯರನ್ನು ಗುಂಡು ಹಾರಿಸಿ ಕೊಂದಿದ್ದ. ಇದು ಇಡೀ ಪ್ರಪಂಚವನ್ನೇ ಹೌಹಾರಿಸಿತ್ತು. ಆಗಿನಿಂದಲೇ ರಾಜಮನೆದವರ ಮೇಲೆ ನೇಪಾಳದ ಜನರಿಗೆ ಒಂದು ರೀತಿಯ ಅಸಹನೆ ಜಾಸ್ತಿಯಾಗಿತ್ತು. ಈಗ ಕಾಲ ಉರುಳಿದೆ. ರಾಜರ ಆಡಳಿತ ಮುಗಿದು ಪ್ರಜಾಪ್ರಭುತ್ವ ಜಾರಿಯಾಗಿದ್ದರೂ ಯಾವುದೇ ಸ್ಥಿರ ಸರ್ಕಾರ ಬಾರದ ಕಾರಣ, ಈಗ ಮತ್ತೆ ರಾಜಮನೆತನದ ಆಡಳಿತವೇ ಬರಲಿ ಎಂದು ಅಲ್ಲಿನ ಜನರು ಆಶಿಸುವಂತಾಗಿದೆ.

### ಭುಗಿಲೆದ್ದ ಯುವಜನರ ಆಕ್ರೋಶ

**ನೇಪಾಳದಲ್ಲಿ ಸಾಮಾಜಿಕ ಜಾಲತಾಣಗಳನ್ನು ನಿಷೇಧಿಸಿದ್ದನ್ನೇ ನೆಪ ಮಾಡಿಕೊಂಡು, ಅಲ್ಲಿನ ಸರ್ಕಾರದ ಮೇಲೆ ತಮ್ಮೊಳಗಿದ್ದ ಆಕ್ರೋಶಗಳೆಲ್ಲವನ್ನೂ ಒಮ್ಮೆಲೇ ಕಕ್ಕಿದ ಅಲ್ಲಿನ ಯುವಜನರು ಅಲ್ಲಿನ ಸರ್ಕಾರವನ್ನೇ ಕೆಡವಿದ್ದಾರೆ. ಆ ಮೂಲಕ, ಅಲ್ಲಿ ಅಸ್ತಿತ್ವದಲ್ಲಿದ್ದ ಕೆಪಿ ಓಲಿಯವರ ಸರ್ಕಾರವನ್ನು ಕೆಡವಿದ್ದಾರೆ. ರಾಜಕೀಯ ನೇತಾರರನ್ನು ಅಟ್ಟಾಡಿಸಿ ಹೊಡೆದಿದ್ದಾರೆ, ಅವರ ಮನೆಗಳಿಗೆ ಬೆಂಕಿ ಹಚ್ಚಿದ್ದಾರೆ. ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಅಲ್ಲಿ ಜನರ ಆಕ್ರೋಶ ಮುಗಿಲುಮುಟ್ಟಿದೆ.**

### ಸೇನೆಯ ಒಲವು ರಾಜಪ್ರಭುತ್ವದ ಕಡೆ ಇದೆಯೇ ಎಂಬ ಅನುಮಾನ

**ನೇಪಾಳದಲ್ಲಿ ಸೇನಾಡಳಿತ ಜಾರಿಯಾದ ಬೆನ್ನಲ್ಲೇ ಸೇನಾ ಮುಖ್ಯಸ್ಥರ ಭಾಷಣದಲ್ಲಿ ಹಿಂದೂ ರಾಜನ ಫೋಟೋ ಕಾಣಿಸಿಕೊಂಡಿದ್ದು ಚರ್ಚೆಗೆ ಗ್ರಾಸವಾಗಿದೆ. 2008ರಲ್ಲಿ ರಾಜಪ್ರಭುತ್ವ ಅಂತ್ಯಗೊಂಡರೂ, ಸ್ಥಿರ ಸರ್ಕಾರಗಳಿಲ್ಲದ ಕಾರಣ ಮತ್ತೆ ರಾಜರ ಆಳ್ವಿಕೆಗಾಗಿ ಕೆಲವರ ಆಗ್ರಹ ಕೇಳಿಬಂದಿದೆ. ಸೇನೆಯ ಒಲವು ರಾಜಪ್ರಭುತ್ವದ ಕಡೆ ಇದೆಯೇ ಎಂಬ ಅನುಮಾನಗಳು ಹುಟ್ಟಿಕೊಂಡಿವೆ.**

---

## ಮಿನಿ ನ್ಯೂಸ್

### ಮೆಕ್ಸಿಕೋ ನಗರದಲ್ಲಿ ಗ್ಯಾಸ್ ಟ್ಯಾಂಕರ್ ಸ್ಫೋಟಗೊಂಡು ಮೂವರ ಸಾವು,

**ಮೆಕ್ಸಿಕೋ:** ನಗರದ ಪ್ರಮುಖ ಹೆದ್ದಾರಿಯಲ್ಲಿ ಗ್ಯಾಸ್ ಟ್ಯಾಂಕರ್ ಟ್ರಕ್ ಸ್ಫೋಟಗೊಂಡ ಪರಿಣಾಮ ಮೂವರು ಸಾವನ್ನಪ್ಪಿದ್ದಾರೆ, 70 ಜನರು ಗಾಯಗೊಂಡಿದ್ದಾರೆ .ಕಳೆದ ರಾತ್ರಿ ಹೆದ್ದಾರಿ ಮೇಲ್ಸೇತುವೆಯ ಕೆಳಗೆ ಸಂಭವಿಸಿದ ಸ್ಫೋಟವನ್ನು ತುರ್ತು ಪರಿಸ್ಥಿತಿ ಎಂದು ಮೇಯರ್ ಎಂದು ಕ್ಲಾರಾ ಬ್ರೂಗಾಡಾ ಘೋಷಿಸಿದರು.

ಘಟನೆಯಲ್ಲಿ ಸುಮಾರು 18 ವಾಹನಗಳು ಸುಟ್ಟುಹಾಕಿದೆ, 19 ಮಂದಿ ಗಾಯಳುಗಳ ಸ್ಥಿತಿ ಗಂಭೀರವಾಗಿದೆ ಎಂದು ಅವರು ಮಾಧ್ಯಮಕ್ಕೆ ತಿಳಿಸಿದ್ದಾರೆ.ದುರಂತಕ್ಕೆ ಕಾರಣವೇನು ಎಂದು ಪೊಲೀಸರು ತನಿಖೆ ನಡೆಸುತ್ತಿದ್ದಾರೆ ಎಂದು ಬ್ರೂಗಾಡಾ ಹೇಳಿದರು. ಚಾಲಕನ ನಿಯಂತ್ರಣ ತಪ್ಪಿ ಹೆದ್ದಾರಿಯಲ್ಲಿ ಉರುಳಿದ ನಂತರ ಟ್ರಕ್ ಟಗೊಂಡಿದೆ. ವಾಹನಗಳ ಸಂಚಾರಕ್ಕೆ ಕೆಲ ಗಂಟೆ ಸಮಸ್ಯೆಯಾಗಿದೆ ತರ್ತು ಕಾರ್ಯಾಪಡೆ ಪರಿಸ್ಥಿತಿ ನಿಭಾಯಿಸುತ್ತಿದೆ.

### ಆಮಿಷಕ್ಕೆ ಒಳಗಾಗಿ ರಷ್ಯಾ ಸೇನೆ ಸೇರದಿರಲು ವಿದೇಶಾಂಗ ಸಚಿವಾಲಯ ಎಚ್ಚರಿಕೆ

**ನವದೆಹಲಿ:** ಮಾಸ್ಕೋಗೆ ಪ್ರಯಾಣಿಸಿದ್ದ ಹಲವಾರು ಭಾರತೀಯರನ್ನು ಉಕ್ರೇನ್ ಯುದ್ಧದಲ್ಲಿ ಯುದ್ಧ ಪಾತ್ರಗಳಿಗೆ ತಳ್ಳಲಾಗುತ್ತಿದೆ ಎಂಬ ವರದಿಗಳ ಮಧ್ಯೆ, ಭಾರತ ತನ್ನ ನಾಗರಿಕರಿಗೆ ರಷ್ಯಾದ ಸೇನೆಗೆ ಸೇರದಂತೆ ಎಚ್ಚರಿಕೆ ನೀಡಿದೆ. ಇತ್ತೀಚೆಗೆ ಭಾರತೀಯ ಪ್ರಜೆಗಳನ್ನು ರಷ್ಯಾದ ಸೇನೆಗೆ ಸೇರಿಸಿಕೊಳ್ಳಲಾಗುತ್ತಿದೆ ಎಂಬ ವರದಿಗಳನ್ನು ನಾವು ನೋಡಿದ್ದೇವೆ. ಕಳೆದ ಒಂದು ವರ್ಷದಿಂದ ಸರ್ಕಾರವು ಹಲವಾರು ಸಂದರ್ಭಗಳಲ್ಲಿ ಈ ಕ್ರಮದಲ್ಲಿ ಅಂತರ್ಗತವಾಗಿರುವ ಅಪಾಯಗಳನ್ನು ಒತ್ತಿಹೇಳಿದೆ, ಅದಕ್ಕೆ ಅನುಗುಣವಾಗಿ ಭಾರತೀಯ ನಾಗರಿಕರಿಗೆ ಎಚ್ಚರಿಕೆ ನೀಡಿದೆ ಎಂದು ವಿದೇಶಾಂಗ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ದೆಹಲಿ ಮತ್ತು ಮಾಸ್ಕೋ ಎರಡರಲ್ಲೂ ರಷ್ಯಾದ ಅಧಿಕಾರಿಗಳೊಂದಿಗೆ ಈ ವಿಷಯವನ್ನು ತಿಳಿಸಲಾಗಿದೆ ಎಂದು ಸಚಿವಾಲಯ ದೃಢಪಡಿಸಿತು, ಈ ಅಭ್ಯಾಸವನ್ನು ಕೊನೆಗೊಳಿಸಬೇಕು ಮತ್ತು ನಮ್ಮ ಪ್ರಜೆಗಳನ್ನು ಬಿಡುಗಡೆ ಮಾಡಬೇಕು ಎಂದು ಒತ್ತಿ ಹೇಳಿದೆ. ಪೂರ್ವ ಉಕ್ರೇನ್‌ನ ಡೊನೆಟ್ಸ್ಕ ಪ್ರದೇಶದಲ್ಲಿ ಪ್ರಸ್ತುತ ವಾಸಿಸುತ್ತಿರುವ ಇಬ್ಬರು ಭಾರತೀಯ ಪುರುಷರು, ನಿರ್ಮಾಣ ಕೆಲಸಗಳ ನೆಪದಲ್ಲಿ ತಮ್ಮನ್ನು ರಷ್ಯಾಕ್ಕೆ ಆಮಿಷವೊಡ್ಡಲಾಗಿದೆ ಎಂದು ಆರೋಪಿಸಿ, ಬದಲಾಗಿ ಮುಂಚೂಣಿಯಲ್ಲಿ ನಿಯೋಜಿಸಲಾಗಿದೆ ಎಂದು ಪ್ರಮುಖ ಪತ್ರಿಕೆಯೊಂದು ವರದಿ ಮಾಡಿದ ನಂತರ ಈ ಸಲಹೆ ನೀಡಲಾಗಿದೆ. ನವೆಂಬರ್ 2024 ರಲ್ಲಿ ರಷ್ಯಾ ವಶಪಡಿಸಿಕೊಂಡ ಸೆಲಿಡೋವ್ ಪಟ್ಟಣದಿಂದ ದೂರವಾಣಿಯಲ್ಲಿ ಮಾತನಾಡಿದ ಅವರು, ಕನಿಷ್ಠ 13 ಭಾರತೀಯರು ಇದೇ ರೀತಿಯ ಪರಿಸ್ಥಿತಿಗಳಲ್ಲಿ ಸಿಕ್ಕಿಬಿದ್ದಿದ್ದಾರೆ ಎಂದು ಹೇಳಿಕೊಂಡರು. ಕಳೆದ ಆರು ತಿಂಗಳಲ್ಲಿ ವಿದ್ಯಾರ್ಥಿ ಅಥವಾ ಸಂದರ್ಶಕ ವೀಸಾದಲ್ಲಿ ಇಬ್ಬರೂ ರಷ್ಯಾಕ್ಕೆ ಪ್ರಯಾಣಿಸಿದ್ದಾರೆ ಎಂದು ವರದಿಯಲ್ಲಿ ತಿಳಿಸಲಾಗಿದೆ. ನಿರ್ಮಾಣ ಕ್ಷೇತ್ರದಲ್ಲಿ ಉದ್ಯೋಗದ ಭರವಸೆ ನೀಡಿದ ಏಜೆಂಟ್ ಅವರನ್ನು ದಾರಿ ತಪ್ಪಿಸಿ ನೇರವಾಗಿ ಯುದ್ಧಭೂಮಿಗೆ ಕಳುಹಿಸಿದ್ದಾರೆ ಎಂದು ಅವರು ಆರೋಪಿಸಿದ್ದಾರೆ. ತನ್ನ ಎಚ್ಚರಿಕೆಯನ್ನು ಪುನರುಚ್ಚರಿಸುತ್ತಾ, ಭಾರತೀಯ ನಾಗರಿಕರು ಯಾವುದೇ ವೆಚ್ಚದಲ್ಲಿ ಅಂತಹ ಕೊಡುಗೆಗಳನ್ನು ತಪ್ಪಿಸುವಂತೆ ಒತ್ತಾಯಿಸಿದರು. ರಷ್ಯಾದ ಸೈನ್ಯಕ್ಕೆ ಸೇರಲು ಯಾವುದೇ ಕೊಡುಗೆಗಳಿಂದ ದೂರವಿರಲು ನಾವು ಮತ್ತೊಮ್ಮೆ ಎಲ್ಲಾ ಭಾರತೀಯ ಪ್ರಜೆಗಳನ್ನು ಬಲವಾಗಿ ಒತ್ತಾಯಿಸುತ್ತೇವೆ ಏಕೆಂದರೆ ಇದು ಅಪಾಯಕಾರಿ ಕೋರ್ಸ್ ಆಗಿದೆ ಎಂದು ಸಚಿವಾಲಯ ಹೇಳಿದೆ.

### ಅಮೆರಿಕದಲ್ಲಿ ಆದಾಯ ಅಸಮಾನತೆ ಇಳಿಕೆ: ಸಮೀಕ್ಷೆ

**ವಾಷಿಂಗ್ಟನ್:** 2023-24ರ ಅವಧಿಯಲ್ಲಿ ಅಮೆರಿಕದಲ್ಲಿನ ಆದಾಯ ಅಸಮಾನತೆ ಕಡಿಮೆಯಾಗಿದ್ದು, ಬಹಳಷ್ಟು ಮಂದಿ ಪದವೀಧರರಾಗಿದ್ದಾರೆ ಎಂದು ಅಮೆರಿಕದ ಜನಜೀವನ ಕುರಿತಾದ ಅತಿದೊಡ್ಡ ವಾರ್ಷಿಕ ಸಮೀಕ್ಷೆ ಅಮೆರಿಕನ್ ಕಮ್ಯೂನಿಟಿ ಸರ್ವೆ ದತ್ತಾಂಶಗಳು ತಿಳಿಸಿವೆ. ಅಲ್ಲದೇ, ಏಷ್ಯಾ ಮೂಲದ ಜನರು, ಸ್ಪ್ಯಾನಿಷ್ ಮಾತನಾಡುವ ದೇಶಗಳ ಜನರ ಸಂಖ್ಯೆಯೂ ಅಮೆರಿಕದಲ್ಲಿ ಏರಿಕೆಯಾಗಿದೆ ಎಂದು ಸಮೀಕ್ಷೆ ತಿಳಿಸಿದೆ. ಆದಾಯ, ವಸತಿ ವೆಚ್ಚ, ಕಂಪ್ಯೂಟರ್ ಬಳಕೆ, ಶಿಕ್ಷಣ ಸೇರಿದಂತೆ 40 ವಿಷಯಗಳ ಕುರಿತು 35 ಲಕ್ಷ ಕುಟುಂಬಗಳಿಂದ ಸಂಗ್ರಹಿಸಿದ ಮಾಹಿತಿಯನ್ನು ಈ ಸಮೀಕ್ಷೆ ಒಳಗೊಂಡಿದೆ. ದತ್ತಾಂಶಗಳ ಪ್ರಕಾರ, 2023ರಿಂದ 2024ರವರೆಗೆ ಅಮೆರಿಕದಲ್ಲಿ ಮಧ್ಯಮ ವರ್ಗದ ಕುಟುಂಬದ ಆದಾಯವು 70 ಲಕ್ಷದಿಂದ 72 ಲಕ್ಷಕ್ಕೆ ಏರಿಕೆಯಾಗಿದೆ ಈ ಕಾರಣದಿಂದ ಆದಾಯ ಅಸಮಾನತೆ ಬಹುತೇಕ ಕಡಿಮೆಯಾಗಿದೆ.

ಇದೇ ಅವಧಿಯಲ್ಲಿ ಏಷ್ಯಾದ ಜನರ ಸಂಖ್ಯೆ ಶೇ6 ರಿಂದ ಶೇ6.3ಕ್ಕೆ ಏರಿಕೆಯಾಗಿದ್ದರೆ, ಸ್ಪ್ಯಾನಿಷ್ ಮಾತನಾಡುವ ದೇಶಗಳ ಜನರ ಸಂಖ್ಯೆ ಶೇ19.4ರಿಂದ ಶೇ20ಕ್ಕೆ ತಲುಪಿದೆ. ಅಮೆರಿಕದ ವಿವಿಧ ರಾಜ್ಯಗಳು, ಪ್ರಮುಖ ನಗರಗಳಲ್ಲಿ ಮನೆಗಳ ಬಾಡಿಗೆ ಗಣನೀಯವಾಗಿ ಏರಿಕೆಯಾಗಿದೆ. ಇದರಿಂದಾಗಿ ಶೇ11 ಮಂದಿ ಬೇರೆ-ಬೇರೆ ನಗರಗಳಿಗೆ ಕಳೆದ ವರ್ಷ ಸ್ಥಳಾಂತರಗೊಂಡಿದ್ದಾರೆ. ಅದಕ್ಕೂ ಹಿಂದಿನ ವರ್ಷದಲ್ಲಿ ಈ ರೀತಿ ಸ್ಥಳಾಂತರಗೊಂಡವರ ಸಂಖ್ಯೆ ಶೇ11.3 ಆಗಿತ್ತು ಎಂದು ದತ್ತಾಂಶದಿಂದ ತಿಳಿದುಬಂದಿದೆ. ಇನ್ನು ಮದುವೆಯಾಗದೇ ಉಳಿದಿರುವ ಪುರುಷರ ಸಂಖ್ಯೆ ಶೇ 37.2 ರಿಂದ ಶೇ37.6ಕ್ಕೆ ತಲುಪಿದ್ದರೆ, ಅವಿವಾಹಿತ ಮಹಿಳೆಯರ ಸಂಖೆ ಶೇ316 ರಿಂದ 32.1ಕ್ಕೆ ಏರಿಕೆಯಾಗಿದೆ ಎಂದೂ ಸಮೀಕ್ಷೆ ವರದಿ ತಿಳಿಸಿದೆ.

### ವಿಶ್ವದ ಅತ್ಯಂತ ಶ್ರೀಮಂತ ವ್ಯಕ್ತಿ ಪಟ್ಟಕ್ಕೇರಿದ ಒರಾಕಲ್‌ನ ಲ್ಯಾರಿ ಎಲಿಸನ್

**ನ್ಯೂಯಾರ್ಕ್:** ಒರಾಕಲ್ ಸಹ ಸಂಸ್ಥಾಪಕ ಲ್ಯಾರಿ ಎಲಿಸನ್ ಅವರು ವಿಶ್ವದ ಅತ್ಯಂತ ಶ್ರೀಮಂತ ವ್ಯಕ್ತಿ ಎಂಬ ಖ್ಯಾತಿಗೆ ಪಾತ್ರರಾಗಿದ್ದಾರೆ. ದೀರ್ಘಕಾಲದಿಂದ ಇಲಾನ್ ಮಸ್ಕ್ ಹೊಂದಿದ್ದ ಈ ಖ್ಯಾತಿಯನ್ನು ಲ್ಯಾರಿ ಕಸಿದುಕೊಂಡಿದ್ದಾರೆ ಎಂದು ವೆಲ್ತ್ ಟ್ರ್ಯಾಕರ್ ಬ್ಲೂಮ್‌ಬರ್ಗ್ ಹೇಳಿದೆ. ಅವರ ಸಾಫ್ಟ್‌ವೇರ್ ದೈತ್ಯ ಕಂಪನಿಯ ಷೇರುಗಳು ಕೆಲವೇ ನಿಮಿಷಗಳ ವಹಿವಾಟಿನಲ್ಲಿ ಮೂರನೇ ಒಂದು ಭಾಗಕ್ಕಿಂತ ಹೆಚ್ಚು ಏರಿಕೆ ಕಂಡವು ಎಂದು ವರದಿ ತಿಳಿಸಿದೆ. 81 ವರ್ಷದ ಎಲಿಸನ್ ಈಗ 393 ಬಿಲಿಯನ್ ಅಮೆರಿಕ ಡಾಲರ್ ಮೌಲ್ಯದ ಸಂಪತ್ತನ್ನು ಹೊಂದಿದ್ದಾರೆ ಎಂದು ಬ್ಲೂಮ್‌ಬರ್ಗ್ ಹೇಳಿದೆ. ಇಲಾನ್ ಮಸ್ಕ್ ಸಂಪತ್ತಿನ ಮೌಲ್ಯ 385 ಬಿಲಿಯನ್ ಡಾಲರ್ ಎಂದು ಅಂದಾಜಿಸಲಾಗಿದೆ.

ನಾಲ್ಕು ವರ್ಷಗಳ ಹಿಂದೆ ಮೊದಲ ಬಾರಿಗೆ ವಿಶ್ವದ ಅತ್ಯಂತ ಶ್ರೀಮಂತ ವ್ಯಕ್ತಿ ಎಂಬ ಖ್ಯಾತಿ ಗಳಿಸಿದ್ದ ಮಸ್ಕ್ ಅವರಿಗಿಂತ ಎಲಿಸನ್ ಹಲವು ಶತಕೋಟಿ ಡಾಲರ್ ಹೆಚ್ಚು ಶ್ರೀಮಂತರಾಗಿದ್ದಾರೆ. ಒರಾಕಲ್ ಷೇರುಗಳ ಮೌಲ್ಯ ಏರುಮುಖವಾಗಿದ್ದರೆ, ಟೆಸ್ಲಾ ಷೇರು ಮೌಲ್ಯ ಕುಸಿಯುತ್ತಾ ಸಾಗಿವೆ. ಈ ವರ್ಷ ಮಂಗಳವಾರದ ವೇಳೆಗೆ 14 ಪ್ರತಿಶತದಷ್ಟು ಕುಸಿದಿವೆ. ಕೃತಕ-ಬುದ್ಧಿಮತ್ತೆಯ ಓಟವು ಒರಾಕಲ್ ಆದಾಯವನ್ನು ಭಾರಿ ಪ್ರಮಾಣದಲ್ಲಿ ಹೆಚ್ಚಿಸಿದೆ ಎಂದು ವರದಿ ತಿಳಿಸಿದೆ. ಅವರ ಸಂಪತ್ತಿನ ಮೌಲ್ಯ 439 ಬಿಲಿಯನ್ ಅಮೆರಿಕ ಡಾಲರ್ ಎಂದು ಹೇಳಿದೆ.

# ರಮೇಶ್ ಹುಟ್ಟುಹಬ್ಬಕ್ಕೆ ದೈಜಿ ಟೀಸರ್

ತಮ್ಮ ಅಮೋಘ ಅಭಿನಯದಿಂದ ಜನಮನಗೆದ್ದಿರುವ ನಟ ರಮೇಶ್ ಅರವಿಂದ್ ಅವರಿಗೆ ಹುಟ್ಟುಹಬ್ಬದ ಸಂಭ್ರಮ. ಈ ಸಂದರ್ಭದಲ್ಲಿ ರಮೇಶ್ ಅರವಿಂದ್ ಅವರು ಪ್ರಮುಖಪಾತ್ರದಲ್ಲಿ ನಟಿಸಿರುವ ದೈಜಿ ಚಿತ್ರದ ಟೀಸರ್ ಬಿಡುಗಡೆಯಾಗಿದೆ. ಟೀಸರ್ ಬಿಡುಗಡೆ ಮಾಡುವ ಮೂಲಕ ಚಿತ್ರತಂಡ ತಮ್ಮ ನಾಯಕನಿಗೆ ಹುಟ್ಟುಹಬ್ಬದ ಶುಭಾಶಯ ತಿಳಿಸಿದೆ.

ಟೀಸರ್‌ಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದ್ದು, ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. ಟೀಸರ್ ಬಿಡುಗಡೆ ನಂತರ ದೈಜಿ ಚಿತ್ರ ತಂಡದವರು ಮಾಧ್ಯಮದವರ ಜೊತೆಗೆ ಮಾತನಾಡಿದರು.

ರಮೇಶ್ ಅರವಿಂದ್ ಅವರಿಗೆ ಹುಟ್ಟುಹಬ್ಬದ ಶುಭಾಶಯ ತಿಳಿಸಿ ಮಾತನಾಡಿದ ನಿರ್ಮಾಪಕ ರವಿ ಕಶ್ಯಪ್, ಹತ್ತು ವರ್ಷಗಳ ಹಿಂದೆ ನಾನು, ನಿರ್ದೇಶಕ ಆಕಾಶ್ ಶ್ರೀವತ್ಸ ಅವರಿಗೆ ಈ ಚಿತ್ರದ ಬಗ್ಗೆ ಹೇಳಿದ್ದೆ. ಈಗ ಕಾಲ ಕೂಡಿ ಬಂದಿದೆ. ಇದು ವಿದೇಶದಲ್ಲಿ ನಾನು ಕಂಡಿರುವ ನೈಜ ಘಟನೆ ಆಧರಿತ ಚಿತ್ರ. ಇದನ್ನು ನಾನು ಅಂದುಕೊಂಡಂತೆ ತೆರೆಗೆ ತಂದಿರುವ ತಂತ್ರಜ್ಞರಿಗೆ ಹಾಗೂ ಕಲಾವಿದರಿಗೆ ಧನ್ಯವಾದ. ಇನ್ನೂ ಯಾವುದೇ ಹಾಲಿವುಡ್ ಚಿತ್ರಕ್ಕೂ ಕಡಿಮೆ ಇಲ್ಲದಂತೆ ಮೂಡಿಬಂದಿರುವ ನಮ್ಮ ದೈಜಿ ಚಿತ್ರವನ್ನು ಕೆಲವೇ ದಿನಗಳಲ್ಲಿ ನಿಮ್ಮ ಮುಂದೆ ತರುತ್ತೇವೆ ಎಂದರು. ಸಂಖ್ಯಾಶಾಸ್ತ್ರದ ಪ್ರಕಾರ ಮೂರು ಅಂಕಿಗೂ, ನನಗೂ ಹಾಗೂ ಈ ಚಿತ್ರಕ್ಕೂ ನಂಟಿದೆ. ಹೇಗೆಂದರೆ, ಇದು ನನ್ನ ನಿರ್ದೇಶನದಲ್ಲಿ ರಮೇಶ್ ಅರವಿಂದ್ ಅವರು ನಾಯಕರಾಗಿ ನಟಿಸಿರುವ ಮೂರನೇ ಸಿನಿಮಾ. ನಟಿ ರಾಧಿಕಾ ನಾರಾಯಣ್ ಅವರ ಜೊತೆಗೂ ಮೂರನೇ ಸಿನಿಮಾ. ನನ್ನ ಹಾಗೂ ನಿರ್ಮಾಪಕರ ಮೂರನೇ ಕಾಂಬಿನೇಶನ್ ನ ಚಿತ್ರವೂ ಹೌದು.(ಒಂದು ಕಿರುಚಿತ್ರ). ಹೇಗೆ ಮೂರರ ನಂಟನ್ನು ಸಾಕಷ್ಟು ಉದಾಹರಿಸಬಲ್ಲೆ. ನಿರ್ಮಾಪಕರು ವಿದೇಶದಲ್ಲಿ ತಾವು ಕಂಡ ನೈಜ ಘಟನೆಯನ್ನು ನನಗೆ ಹೇಳಿದರು. ಅವರು ಹೇಳಿದ ಈ ಕಥೆಯೇ ಈ ಚಿತ್ರಕ್ಕೆ ಸ್ಪೂರ್ತಿ. ನಂತರ ಈ ಕಥೆಗೆ ರಮೇಶ್ ಅರವಿಂದ್ ಅವರೆ ಸೂಕ್ತ ಎನಿಸಿ, ಅವರಿಗೆ ಕಥೆ ಹೇಳಿದಾಗ, ಅವರು ನಟಿಸಲು ಒಪ್ಪಿಕೊಂಡಿದ್ದು ಬಹಳ ಖುಷಿಯಾಯಿತು. ಸೂರ್ಯ ಎಂಬ ಪಾತ್ರದಲ್ಲಿ ರಮೇಶ್ ಅವರು ಕಾಣಿಸಿಕೊಂಡಿದ್ದಾರೆ. ರಾಧಿಕಾ ನಾರಾಯಣ್ ಅವರು ಭೂಮಿ ಪಾತ್ರದಲ್ಲಿ ಹಾಗೂ ರಮೇಶ್ ಅವರ ತಮ್ಮನಾಗಿ ನಟ ದಿಗಂತ್ ಗಗನ್ ಎನ್ನುವ ಪಾತ್ರದಲ್ಲಿ ನಟಿಸಿದ್ದಾರೆ. ದೈಜಿ ಎಂದರೆ ಪ್ರೇತಾತ್ಮಗಳ ದೈವ ಎಂದರ್ಥ. ಟೀಸರ್ ಬಿಡುಗಡೆಯಾಗಿದೆ. ಸದ್ಯದಲ್ಲೇ ಟ್ರೇಲರ್ ಸಹ ಬರಲಿದ್ದು, ವರ್ಷದ ಕೊನೆ ಅಥವಾ ನೂತನ ವರ್ಷದ ಆರಂಭಕ್ಕೆ ದೈಜಿ ನಿಮ್ಮ ಮುಂದೆ ಬರಲಿದೆ ಎಂದು ನಿರ್ದೇಶಕ ಆಕಾಶ್ ಶ್ರೀವತ್ಸ ತಿಳಿಸಿದರು.

**ಟೀಸರ್‌ಗೆ ಮೆಚ್ಚುಗೆಯ ಮಹಾಪೂರ**





# ತಿರುಗೇಟು ಕೊಟ್ಟ ಮೋಹಕತಾರೆ

ಮೋಹಕತಾರೆ ನಟಿ ರಮ್ಯಾ ಅಮೆರಿಕದಲ್ಲಿ ಫುಲ್ ಮಸ್ತಿ ಮಾಡುತ್ತಿದ್ದಾರೆ. ಅಮೆರಿಕದಲ್ಲಿ ನಡೆಯುವ ನಾವಿಕ ಕಾರ್ಯಕ್ರಮಕ್ಕೆ ಈ ಬಾರಿ ನಟಿ ರಮ್ಯಾ ಅತಿಥಿಯಾಗಿ ಹೋಗಿದ್ದಾರೆ. ಸಮಾರಂಭದ ಬಿಡುವಿನ ವೇಳೆ ಅಮೆರಿಕದ ಬ್ಯೂಟಿಫುಲ್ ಲೊಕೇಶನ್‌ನಲ್ಲಿ ಸುತ್ತಾಟ ನಡೆಸಿದ್ದಾರೆ. ಈ ಬಾರಿಯ ನಾವಿಕ ಸಮಾರಂಭಕ್ಕೆ ರಮ್ಯಾ ಜೊತೆ ನಟ ವಿನಯ್ ರಾಜ್‌ಕುಮಾರ್ ಕೂಡ ಹೋಗಿದ್ದಾರೆ. ವಿಶೇಷ ಅಂದ್ರೆ ಪುನೀತ್ ರಾಜ್‌ಕುಮಾರ್ ಕಿರಿಯ ಪುತ್ರಿ ವಂದಿತಾ ಕೂಡಾ ಇವರ ಜೊತೆಗಿದ್ದಾರೆ. ಅಮೆರಿಕದಲ್ಲಿ ಮೂವರೂ ಎಂಜಾಯ್ ಮಾಡ್ತಿರುವ ಫೋಟೋಗಳನ್ನ ರಮ್ಯಾ ಇನ್‌ಸ್ಟಾಗ್ರಾಂನಲ್ಲಿ ಶೇರ್ ಮಾಡ್ಕೊಂಡಿದ್ದು, ಫೋಟೋಗಳ ಜೊತೆಗೆ ಅದಕ್ಕೆ ಕ್ಯಾಪ್ಷನ್ ಹಾಕಿರುವ ರಮ್ಯಾ 'ನಾನು ಹಾಗೂ ಬೆಸ್ಟ್ ಕಂಪನಿ' ಎಂದು ವಿನಯ್ ರಾಜ್‌ಕುಮಾರ್ ಮತ್ತು ವಂದಿತಾ ಪುನೀತ್ ರಾಜ್‌ಕುಮಾರ್ ಹೆಸರನ್ನು ಮೆನ್ಷನ್ ಮಾಡಿದ್ದಾರೆ. ರಮ್ಯಾ ಹಂಚಿಕೊಂಡ ಫೋಟೋಗಳು ಸಾಮಾಜಿಕ ಜಾಲತಾಣದಲ್ಲಿ ಹಲ್‌ಚಲ್ ಎಬ್ಬಿಸಿದ್ದವು. ನಟಿ ರಮ್ಯಾ ಫೋಟೋಗಳಿಗೆ ಹಲವರು ಡೇಟಿಂಗ್‌ನಲ್ಲಿ ಇದ್ದಾರೆ ಎಂದು ಬರೆದುಕೊಂಡಿದ್ದರು. ಇದೀಗ ಈ ವಿಷಯಕ್ಕೆ ಸಂಬಂಧಿಸಿದಂತೆ ನಟಿ ರಮ್ಯಾ ಪ್ರತಿಕ್ರಿಯೆ ನೀಡಿದ್ದಾರೆ. ತಮ್ಮ ಜಾಲತಾಣದಲ್ಲಿ ಪೋಸ್ಟ್ ಹಾಕಿರುವ ರಮ್ಯಾ 'ನೀವು ತುಂಬಾ ತಮಾಷೆ ಮಾಡುತ್ತಿದ್ದೀರಾ.. ನನಗೆ ಸಹೋದರ ಸಮಾನರು ವಿನಯ್ ರಾಜ್‌ಕುಮಾರ್. ನಿಮ್ಮ ಕಲ್ಪನೆ, ಮಾತುಗಳಿಗೆ ಹಿಡಿತವಿರಲಿ' ಎಂದು ಖಾರವಾಗಿ ಪ್ರತಿಕ್ರಿಯೆ ನೀಡಿದ್ದಾರೆ.



**ವಿನಯ್ ಜೊತೆ ರಮ್ಯಾ ಸುತ್ತಾಟ**

ಸಿನಿ ವಾಹಿನಿ

# 40 ನಿಮಿಷ ವಾಕಿಂಗ್

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಪರಪ್ಪನ ಅಗ್ರಹಾರ ಜೈಲಿನಲ್ಲಿರುವ ಆರೋಪಿ ನಟ ದರ್ಶನ್ ಅವರಿಗೆ ಬೆಳಗ್ಗೆ ಮತ್ತು ಸಂಜೆ 40 ನಿಮಿಷ ವಾಕಿಂಗ್ ಮಾಡಲು ಅವಕಾಶ ನೀಡಲಾಗಿದೆ. ಬ್ಯಾರಕ್‌ನ ಹೊರಭಾಗದ ಕಾರಿಡಾರ್‌ನಲ್ಲಿ ವಾಕ್ ಮಾಡಲು ಅನುಮತಿ ಸಿಕ್ಕಿದೆ. ಈ ಸಮಯದಲ್ಲಿ ಬೇರೆ ವಿಚಾರಣಾಧೀನಾ ಕೈದಿಗಳು ವಾಕ್ ಮಾಡುವಂತಿಲ್ಲ. ದರ್ಶನ್ ವಾಕ್ ಮುಗಿದ ನಂತರವಷ್ಟೇ ಇತರರು ವಾಕ್ ಮಾಡಬಹುದಾಗಿದೆ. ವಾಕಿಂಗ್ ಸೇರಿದಂತೆ ಸೆಲ್‌ನಲ್ಲಿ ನಡೆಯುವ ಎಲ್ಲಾ ಚಟುವಟಿಕೆಗಳು ಸಿಸಿಟಿವಿಯಲ್ಲಿ ದಾಖಲಾಗುವಂತೆ ವ್ಯವಸ್ಥೆ ಮಾಡಲಾಗಿದೆ.



ಅದರ ಜೊತೆಗೆ ದರ್ಶನ್ ಸೆಲ್ ಬಳಿ ಕೆಲಸ ಮಾಡುವ ಎಲ್ಲಾ 15 ಸಿಬ್ಬಂದಿ ಕಡ್ಡಾಯವಾಗಿ ಬಾಡಿ ವಾರ್ನ್ ಕ್ಯಾಮರಾ ಹಾಕಿಕೊಂಡು ಕೆಲಸ ಮಾಡಲು ಮೇಲಾಧಿಕಾರಿಗಳು ಸೂಚಿಸಿದ್ದಾರೆ.

ಜೈಲಿನಲ್ಲಿರುವ ನಟ ದರ್ಶನ್‌ಗೆ ಕನಿಷ್ಠ ಸವಲತ್ತುಗಳನ್ನು ನೀಡುವಂತೆ ಕೋರ್ಟ್ ಸೂಚಿಸಿತ್ತು. ವಿಚಾರಣೆ ವೇಳೆ ನ್ಯಾಯಾಧೀಶರ ಎದುರು ನನಗೆ ವಿಷ ಕೊಟ್ಟುಬಿಡಿ. ನನಗೆ ಜೈಲು ಜೀವನ ಸಾಕಾಗಿದೆ. ಬಿಸಿಲು ನೋಡಿ ತಿಂಗಳಾಗಿದೆ. ಫಂಗಸ್ ಸಮಸ್ಯೆ ಆಗುತ್ತಿದೆ ಎಂದು ದರ್ಶನ್ ಗೋಗರೆದಿದ್ದರು.

# ಎಲ್ಲಾ ಹೆಣ್ಮಕ್ಕಳು ಮಾಡೋದು ವರದಕ್ಷಿಣೆ ಆರೋಪವೊಂದೇ

**ನನ್ನ ವ್ಯಕ್ತಿತ್ವ ಎಲ್ಲರಿಗೂ ಗೊತ್ತು**


ಒಂದು ವರ್ಷದ ಹಿಂದೆಯೇ ಸೊಸೆ ಮನೆ ಬಿಟ್ಟು ಹೋಗಿದ್ರು. ಈಗ ದೂರು ವರದಕ್ಷಿಣೆ ಕಿರುಕುಳ ಅಂತ ದೂರು ಕೊಟ್ಟಿದ್ದಾರೆ. ರೆಗ್ಯೂಲರ್ ಆಗಿ ನಮ್ಮ ದೇಶದಲ್ಲಿ ಎಲ್ಲಾ ಹೆಣ್ಮಕ್ಕಳು ಮಾಡೋದು ಅದೊಂದೇ ತಾನೆ ಎಂದ ನಿರ್ದೇಶಕ ಎಸ್. ನಾರಾಯಣ್ ಹೇಳಿದ್ದಾರೆ.

ಸೊಸೆ ಕೊಟ್ಟ ದೂರಿನ ಬಗ್ಗೆ ಅವರು ಪ್ರತಿಕ್ರಿಯೆ ನೀಡಿದ್ದಾರೆ. ನಾವೇನೋ ಹಿಂಸೆ ಕೊಟ್ಟಿದ್ದೇವೆ ಅಂತ ದೂರು ಕೊಟ್ಟಿದ್ದಾರೆ. ಅದು ಕೋರ್ಟಿಗೆ ಹೋಗಿದೆ. ನಾವು ಅದರ ಬಗ್ಗೆ ಹೇಳಿದ್ರೆ ಅವರಿಗೇ ಅವಮಾನ ಮಾಡಿದಂತೆ ಆಗುತ್ತೆ. ಪಾಪ ಹೆಣ್ಮಗು ಅಲ್ವಾ ಅವರಿಗೆ ತೇಜೋವಧೆ ಮಾಡಬಾರದು ಅಂತ ಹೇಳಿದ್ದಾರೆ. ಇನ್ನೂ ವರದಕ್ಷಿಣೆ ಕಿರುಕುಳ ಅಂತ ಆರೋಪ ಮಾಡಿದ್ದರೆ ಅಂದಾಗ, ರೆಗ್ಯೂಲರ್ ಆಗಿ ನಮ್ಮ ದೇಶದಲ್ಲಿ ಎಲ್ಲಾ ಹೆಣ್ಮಕ್ಕಳು ಮಾಡೋದು ಅದೊಂದೇ ತಾನೆ. ಬೇರೆ ಇನ್ನೇನಾದ್ರೂ ಸಿಗುತ್ತಾ ಅವರು ಮನೆ ಬಿಟ್ಟು ಹೋಗಿ ಒಂದು ವರ್ಷ ಆಯ್ತು. ಈಗ ದೂರು ಕೊಟ್ಟಿದ್ದಾರೆ. ಅವರಿಗೆ ಸುಃಖ, ಸಂತೋಷ ಎಲ್ಲಿ ಸಿಗುತ್ತೋ ಅಲ್ಲಿಗೆ ಹೋಗಿದ್ದಾರೆ. ನನ್ನ ವ್ಯಕ್ತಿತ್ವ ಎಲ್ಲರಿಗೂ ಗೊತ್ತು, ನಾವು ಸದಾ ಹೆಣ್ಮಕ್ಕಳನ್ನ ಗೌರವದಿಂದ ಕಾಣುವಂತಹವರು ಅಂತ ತಿಳಿಸಿದ್ದಾರೆ. ಸೊಸೆಗೆ ವರದಕ್ಷಿಣೆ ಕಿರುಕುಳ ನೀಡಿದ ಆರೋಪದಡಿ ಖ್ಯಾತ ಚಿತ್ರ ನಿರ್ದೇಶಕ ಎಸ್.ನಾರಾಯಣ್, ಪತ್ನಿ, ಪುತ್ರನ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಈ ಸಂಬಂಧ ಜ್ಞಾನಭಾರತಿ ಪೊಲೀಸ್ ಠಾಣೆಯಲ್ಲಿ ಎಸ್.ನಾರಾಯಣ್ ಅವರ 2ನೇ ಮಗನ ಪತ್ನಿ ಪವಿತ್ರಾ ದೂರು ದಾಖಲಿಸಿದ್ದಾರೆ. ದೂರಿನನ್ವಯ ಎಸ್.ನಾರಾಯಣ್, ಪತ್ನಿ ಭಾಗ್ಯಲಕ್ಷ್ಮಿ, ಪತಿ ಪವನ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಮದುವೆಯಲ್ಲಿ ವರದಕ್ಷಿಣೆ ಕೊಟ್ಟಿದ್ದರೂ ಹೆಚ್ಚಿನ ಹಣಕ್ಕೆ ಒತ್ತಾಯ ಮಾಡುತ್ತಿದ್ದಾರೆ. ಹಲ್ಲೆ ನಡೆಸಿ ವರದಕ್ಷಿಣೆ ಕಿರುಕುಳ ನೀಡಿದ್ದಾರೆ ಎಂದು ಆರೋಪಿಸಿದ್ದಾರೆ.



# 'ಮುತ್ತರಸ'ನಾದ ಮಡೆನೂರು ಮನು

ಚಿತ್ರಕ್ಕೆ ಮುತ್ತರಸ ಎಂದು ಹೆಸರಿಡಲಾಗಿದೆ. ಜೆ.ಕೆ ಮೂವೀಸ್ ಲಾಂಛನದಲ್ಲಿ ಕೆ.ಎಂ ನಟರಾಜ್ ಅವರು ಈ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ಖ್ಯಾತ ನಟ ವಸಿಷ್ಠ ಸಿಂಹ, ಹಿರಿಯ ನಟರಾದ ಎಂ.ಎಸ್.ಉಮೇಶ್, ಕರಿ ಸುಬ್ಬು, ಕನ್ನಡ ಚಲನಚಿತ್ರ ನಿರ್ಮಾಪಕರ ಸಂಘದ ಅಧ್ಯಕ್ಷರಾದ ಉಮೇಶ್ ಬಣಕಾರ್ ಮುಂತಾದವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಚಿತ್ರ ಯಶಸ್ವಿಯಾಗಲೆಂದು ಹಾರೈಸಿ, ಮಡೆನೂರ್ ಮನು ಅವರಿಗೆ ಹುಟ್ಟುಹಬ್ಬದ ಶುಭಾಶಯ ತಿಳಿಸಿದರು. ಪದ್ಮಶ್ರೀ ಪುರಸ್ಕೃತರಾದ ಮಂಜಮ್ಮ ಜೋಗತಿ ಅವರು ಶೀರ್ಷಿಕೆ ಅನಾವರಣ ಮಾಡಿದರು. ನಂತರ ಸಿನಿಮಾ ತಂಡದವರು ಹಾಗೂ ಗಣ್ಯರು ಮಾತನಾಡಿದರು. ಕೆಲವು ದಿನಗಳ ಹಿಂದೆ ನನ್ನ ಜೀವನದಲ್ಲಿ ಆದ ಕಹಿ ಘಟನೆಗಳನೆಲ್ಲಾ ಮರೆತಿದ್ದೇನೆ. ಸದ್ಯಕ್ಕೆ ಯಾವುದೇ ಸಮಸ್ಯೆಗಳು ಇಲ್ಲ. ಆ ಸಮಯದಲ್ಲಿ ನನ್ನ ಜೊತೆಗೆ ನಿಂತವರಿಗೆ ನಾನು ಚಿರಋಣಿ. ಇಂದು ನನ್ನ ಹೊಸ ಸಿನಮಾದ ಶೀರ್ಷಿಕೆ ಬಿಡುಗಡೆಯಾಗಿದೆ. ಅನಾವರಣ ಮಾಡಿಕೊಟ್ಟ ವಸಿಷ್ಠ ಸಿಂಹ ಅವರು ಸೇರಿದಂತೆ ಪ್ರತಿಯೊಬ್ಬ ಗಣ್ಯರಿಗೆ ಧನ್ಯವಾದ. ನಾನು ವಸಿಷ್ಠ ಸಿಂಹ ಅವರೊಟ್ಟಿಗೆ ತಲ್ವಾರ್ ಪೇಟೆ ಚಿತ್ರದಲ್ಲಿ ನಟಿಸಿದ್ದೇನೆ. ಇನ್ನೂ ಮುತ್ತರಸ ಚಿತ್ರದ ಶೀರ್ಷಿಕೆ ಕೊಟ್ಟದ್ದು ನಿರ್ದೇಶಕ ರಾಮ್ ನಾರಾಯಣ್ ಅವರು.



# ಭಾರತ-ಪಾಕಿಸ್ತಾನ ಕ್ರಿಕೆಟ್ ಪಂದ್ಯಕ್ಕೆ ಸುಪ್ರೀಂ ಗ್ರೀನ್ ಸಿಗ್ನಲ್




ದುಬೈನಲ್ಲಿ ನಡೆಯಲಿರುವ ಏಷ್ಯಾಕಪ್‌ಗಾಗಿ ನಿಗದಿಯಾಗಿರುವ ಭಾರತ-ಪಾಕಿಸ್ತಾನ ಕ್ರಿಕೆಟ್ ಪಂದ್ಯವನ್ನು ರದ್ದುಗೊಳಿಸುವಂತೆ ಕೋರಿ ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ವಿಚಾರಣೆ ನಡೆಸಲು ಸುಪ್ರೀಂಕೋರ್ಟ್ ನಿರಾಕರಿಸಿದೆ. ಹಾಗೆಯೇ ಭಾರತ ಹಾಗೂ ಪಾಕಿಸ್ತಾನ ನಡುವಿನ ಕ್ರಿಕೆಟ್ ಪಂದ್ಯಕ್ಕೆ ಗ್ರೀನ್ ಸಿಗ್ನಲ್ ನೀಡಿದೆ.

ಸೆಪ್ಟೆಂಬರ್ 14 ರಂದು ನಡೆಯಲಿರುವ ಏಷ್ಯಾ ಕಪ್ ಟಿ20 ಟೂರ್ನಮೆಂಟ್‌ನ ಭಾರತ-ಪಾಕಿಸ್ತಾನ ಪಂದ್ಯವನ್ನು ರದ್ದುಗೊಳಿಸುವಂತೆ ಮನವಿ ಮಾಡಿ ಸಲ್ಲಿಸಲಾದ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ (ಪಿಐಎಲ್)ಯನ್ನು ತಕ್ಷಣ ವಿಚಾರಣೆಗೆ ಒಳಪಡಿಸಲು ಸುಪ್ರೀಂ ಕೋರ್ಟ್ ಗುರುವಾರ ನಿರಾಕರಿಸಿದೆ. ಈ ವಿಚಾರ ನ್ಯಾಯಮೂರ್ತಿ ಜೆ.ಕೆ. ಮಹೇಶ್ವರಿ ಮತ್ತು ನ್ಯಾಯಮೂರ್ತಿ ವಿಜಯ್ ಬಿಷ್ಣೋಯ್ ಅವರ ಪೀಠದ ಮುಂದೆ ಬಂದಾಗ, ನ್ಯಾಯಾಲಯವು ಅದನ್ನು ಗಂಭೀರವಾಗಿ ಪರಿಗಣಿಸಲು ನಿರಾಕರಿಸಿತು. ನ್ಯಾಯಮೂರ್ತಿ ಮಹೇಶ್ವರಿ ಸ್ಪಷ್ಟವಾಗಿ ಹೇಳಿದರು, ಆತುರ ಏನಿದೆ ಇದು ಕೇವಲ ಒಂದು ಪಂದ್ಯ, ನಡೆಯಲಿ ಬಿಡಿ ಎಂದು ಹೇಳಿದ್ದಾರೆ.

ಅರ್ಜಿದಾರರು ಸುಪ್ರೀಂ ಕೋರ್ಟ್ ಬಳಿ ಬೇಗ ವಿಚಾರಣೆ ನಡೆಸಬೇಕೆಂದು ಒತ್ತಾಯಿಸಿದ್ದರು. ನ್ಯಾಯಾಲಯದ ಬಳಿ ಪಂದ್ಯ ಭಾನುವಾರ ಇದೆ, ಆದ್ದರಿಂದ ಬೇಗ ವಿಚಾರಣೆ ನಡೆಸಬೇಕು ಎಂದು ಹೇಳಲಾಗಿತ್ತು. ನ್ಯಾಯಮೂರ್ತಿ ಮಹೇಶ್ವರಿ ತಮ್ಮ ಅಭಿಪ್ರಾಯ ತಿಳಿಸಿ ಪಂದ್ಯ ಭಾನುವಾರವಿದ್ದರೆ ನಾವು ಏನು ಮಾಡಬೇಕು, ಪಂದ್ಯ ನಡೆಯಲಿ ಬಿಡಿ ಎಂದು ಹೇಳಿದ್ದಾರೆ.

ಏಷ್ಯಾ ಕಪ್ ಟಿ20 ಲೀಗ್‌ನ ಭಾಗವಾಗಿ ಸೆಪ್ಟೆಂಬರ್ 14, 2025 ರಂದು ದುಬೈನಲ್ಲಿ ನಡೆಯಲಿರುವ ಭಾರತ-ಪಾಕಿಸ್ತಾನ ಟಿ20 ಕ್ರಿಕೆಟ್ ಪಂದ್ಯವನ್ನು ರದ್ದುಗೊಳಿಸಲು ತಕ್ಷಣ ನಿರ್ದೇಶನಗಳನ್ನು ಕೋರಿ, ಉರ್ವಶಿ ಜೈನ್ ಸೇರಿದಂತೆ ನಾಲ್ವರು ಕಾನೂನು ವಿದ್ಯಾರ್ಥಿಗಳು ಸಂವಿಧಾನದ 32 ನೇ ವಿಧಿಯ ಅಡಿಯಲ್ಲಿ ಈ ಪಿಐಎಲ್ ಅನ್ನು ಸಲ್ಲಿಸಿದ್ದಾರೆ.


ರಾಷ್ಟ್ರೀಯ ಕ್ರೀಡಾ ಆಡಳಿತ ಕಾಯ್ದೆ, 2025 ರ ಅನುಷ್ಠಾನಕ್ಕೆ ನಿರ್ದೇಶನಗಳನ್ನು ಸಹ ಕೋರಿದ್ದಾರೆ. ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ಭಾರತೀಯ ನಾಗರಿಕರು ಮತ್ತು ಸೈನಿಕರು ತಮ್ಮ ಪ್ರಾಣ ತ್ಯಾಗ ಮಾಡಿದ ಆಪರೇಷನ್ ಸಿಂಧೂರ್ ನಂತರ, ಪಾಕಿಸ್ತಾನದೊಂದಿಗೆ ಕ್ರಿಕೆಟ್ ಪಂದ್ಯವನ್ನು ಆಯೋಜಿಸುವುದು ರಾಷ್ಟ್ರೀಯ ಘನತೆ ಮತ್ತು ಸಾರ್ವಜನಿಕ ಭಾವನೆಗೆ ಅಸಮಂಜಸವಾದ ಸಂದೇಶವನ್ನು ರವಾನಿಸುತ್ತದೆ ಎಂದು ಅರ್ಜಿಯಲ್ಲಿ ಹೇಳಲಾಗಿದೆ. ಭಯೋತ್ಪಾದನೆಯನ್ನು ಆಶ್ರಯಿಸುವ ರಾಷ್ಟ್ರದೊಂದಿಗೆ ಕ್ರೀಡೆಗಳಲ್ಲಿ ತೊಡಗಿಸಿಕೊಳ್ಳುವುದು ಸಶಸ್ತ್ರ ಪಡೆಗಳ ನೈತಿಕತೆಯನ್ನು ದುರ್ಬಲಗೊಳಿಸುತ್ತದೆ ಮತ್ತು ಹುತಾತ್ಮರ ಮತ್ತು ಭಯೋತ್ಪಾದನೆಯ ಬಲಿಪಶುಗಳ ಕುಟುಂಬಗಳಿಗೆ ದುಃಖವನ್ನುಂಟು ಮಾಡುತ್ತದೆ ಎಂದು ವಾದಿಸಲಾಗಿದೆ.

**ಪಂದ್ಯ ನಡೆಯಲಿ ಬಿಡಿ**

# ಗಂಭೀರ್, ಸೂರ್ಯನ ಪ್ಲಾನ್ ಸಕ್ಸಸ್..

ಏಷ್ಯಾಕಪ್ ಅಖಾಡದಲ್ಲಿ ಟೀಮ್ ಇಂಡಿಯಾ ಶುಭಾರಂಭ ಮಾಡಿದೆ. ಯುಎಇ ತಂಡವನ್ನ ಬಗ್ಗು ಬಡಿದು ಟ್ರೋಫಿಯತ್ತ ದೊಡ್ಡ ಹೆಜ್ಜೆ ಇಟ್ಟಿದೆ. ಇಷ್ಟೇ ಅಲ್ಲ, ಮೊದಲ ಪಂದ್ಯದಲ್ಲೇ ಟೀಮ್ ಇಂಡಿಯಾ ಗೇಮ್‌ಪ್ಲಾನ್ ಸಖತ್ ಆಗಿ ವರ್ಕೌಟ್ ಆಗಿದೆ. ಏಷ್ಯಾಕಪ್ ಅಖಾಡದಲ್ಲಿ ಟೀಮ್ ಇಂಡಿಯಾ ಶುಭಾರಂಭ ಮಾಡಿದೆ. ಯುಎಇ ತಂಡವನ್ನ ಬಗ್ಗು ಬಡಿದು ಟ್ರೋಫಿಯತ್ತ ದೊಡ್ಡ ಹೆಜ್ಜೆ ಇಟ್ಟಿದೆ. ಇಷ್ಟೇ ಅಲ್ಲ, ಮೊದಲ ಪಂದ್ಯದಲ್ಲೇ ಟೀಮ್ ಇಂಡಿಯಾ ಗೇಮ್‌ಪ್ಲಾನ್ ಸಖತ್ ಆಗಿ ವರ್ಕೌಟ್ ಆಗಿದೆ. ಟೀಮ್‌ಇಂಡಿಯಾ ಗೆಲುವಿನ ರಣ ತಂತ್ರ, ಸಕ್ಸಸ್ ಕಂಡಿದ್ದೇಗೆ ಅನ್ನೋ ವಿವರ ಇಲ್ಲಿದೆ.

3 ಜನ ಸ್ಪಿನ್ನರ್ ಬೇಕಿತ್ತಾ ಏಷ್ಯಾಕಪ್ ಕದನದ ಯುಎಇ ವಿರುದ್ಧದ ಪಂದ್ಯಕ್ಕೆ ಟೀಮ್ ಇಂಡಿಯಾ ಪ್ಲೇಯಿಂಗ್ ಇಲೆವೆನ್ ಅನೌನ್ಸ್ ಆದ ಕೂಡಲೇ ಹೀಗೊಂದು ಪ್ರಶ್ನೆ ಹುಟ್ಟಿಕೊಂಡಿತ್ತು. ಕೆಲವೇ ಗಂಟೆಗಳಲ್ಲಿ ಈ ಪ್ರಶ್ನೆಗೆ ಸರಿಯಾದ ಉತ್ತರ ಸಿಗ್ತು. ಹೆಡ್‌ಕೋಚ್ ಗೌತಮ್ ಗಂಭೀರ್, ಕ್ಯಾಪ್ಟನ್ ಸೂರ್ಯಕುಮಾರ್ ಯಾದವ್ ಪ್ಲಾನ್ ಪರ್ಫೆಕ್ಟ್ ಆಗಿ ವರ್ಕೌಟ್ ಆಯ್ತು.




**ಸ್ಪಿನ್ 'ಸ್ಟ್ರೋಕ್'.!:** ದುಬೈ ಮೈದಾನದಲ್ಲಿ ಟೀಮ್ ಇಂಡಿಯಾ ಸ್ಪಿನ್ನರ್‌ಗಳು ನಿನ್ನೆ ಪರಾಕ್ರಮ ಮೆರೆದ್ರು. ಮೆನ್ ಇನ್ ಬ್ಲೂ ಆರ್ಮಿಯ ಸ್ಪಿನ್ ಮೆಜಿಶಿಯನ್ಸ್ ಚಮಾತ್ಕಾರದ ಮುಂದೆ ಯುಇಎ ಬ್ಯಾಟರ್ಸ್ ಪರದಾಡಿದ್ರು. ಸ್ಪಿನ್ ಟ್ರ್ಯಾಪ್‌ನಲ್ಲಿ ಬಿದ್ದು ವಿಲ ವಿಲ ಒದ್ದಾಡಿದ್ರು. ಟೀಮ್ ಇಂಡಿಯಾದ ಸ್ಪಿನ್ ಸ್ಟ್ರೋಕ್‌ಗೆ ತಬ್ಬಿಬ್ಬಾಗಿ ಒಬ್ಬರ ಹಿಂದೆ ಒಬ್ಬರಂತೆ ಪೆವಿಲಿಯನ್ ಪರೇಡ್ ನಡೆಸಿದ್ರು. ಚೈನಾಮನ್ ಸ್ಪಿನ್ನರ್ ಕುಲ್‌ದೀಪ್ ಯಾದವ್ ನಿನ್ನೆ ಕೈಚಳಕ ಮಾಡಿದ್ರು. ದುಬೈನಲ್ಲಿ ದರ್ಬಾರ್ ನಡೆಸಿದ ಕುಲ್‌ದೀಪ್ ಯಾದವ್ 4 ವಿಕೆಟ್ ಬೇಟೆಯಾಡಿದ್ರು. ಹಾಕಿದ ಮೊದಲ ಓವರ್‌ನಲ್ಲಿ ವಿಕೆಟ್ ಲೆಸ್ ಆಗಿ ನಿರ್ಗಮಿಸಿದ ಕುಲ್‌ದೀಪ್ ಯಾದವ್, 2ನೇ ಓವರ್‌ನಲ್ಲಿ ಚಮಾತ್ಕಾರ ಮಾಡಿದ್ರು. ರಾಹುಲ್ ಚೋಪ್ರಾ, ಮೊಹಮ್ಮದ್ ವಾಸಿಮ್, ಹರ್ಷಿತ್ ಕೌಶಿಕ್.. ಮೂವರಿಗೆ ಒಂದೇ ಓವರ್‌ನಲ್ಲಿ ಪೆವಿಲಿಯನ್ ದಾರಿ ತೋರಿಸಿದ್ರು.

ಸೆಕೆಂಡ್ ಸ್ಪೆಲ್ ಹಾಕಲು ಬಂದ ಮೊದಲ ಎಸೆತದಲ್ಲೇ ಕುಲ್‌ದೀಪ್ ಯುಎಇ ಬ್ಯಾಟಿಂಗ್ ಕತೆ ಮುಗಿಸಿದ್ರು. ಮ್ಯಾಜಿಕಲ್ ಎಸೆತಕ್ಕೆ ತಬ್ಬಿಬ್ಬಾದ ಹೈದರ್ ಅಲಿ, ಸಂಜು ಸ್ಯಾಮ್ಸನ್‌ಗೆ ಕ್ಯಾಚ್ ನೀಡಿ ನಿರ್ಗಮಿಸಿದ್ರು.

**ಕುಲ್‌ದೀಪ್ ಯಾದವ್ ಬೌಲಿಂಗ್**

ನಿನ್ನೆ ಪಂದ್ಯದಲ್ಲಿ ಒಟ್ಟಾರೆ 2.1 ಓವರ್ ಬೌಲಿಂಗ್ ಮಾಡಿದ ಕುಲ್‌ದೀಪ್ ಯಾದವ್, ಕೇವಲ 7 ರನ್ ಬಿಟ್ಟು ಕೊಟ್ರು. 3.20ರ ಎಕಾನಮಿಯಲ್ಲಿ ರನ್ ಬಿಟ್ಟು ಕೊಟ್ಟ ಕುಲ್‌ದೀಪ್ ಯಾದವ್ ಒಟ್ಟು 4 ವಿಕೆಟ್ ಬೇಟೆಯಾಡಿದ್ರು. ಕುಲ್‌ದೀಪ್ ಯಾದವ್ ಮಾತ್ರವಲ್ಲ.. ಮಿಸ್ಟ್ರಿ ಸ್ಪಿನ್ನರ್ ವರುಣ್ ಚಕ್ರವರ್ತಿ ಕೂಡ ಚಮಾತ್ಕಾರ ಮಾಡಿದ್ರು. 2 ಓವರ್ ಬೌಲಿಂಗ್ ಮಾಡಿದ ವರುಣ್ ಚಕ್ರವರ್ತಿ ಜಸ್ಟ್ 4 ರನ್ ಬಿಟ್ಟು ಕೊಟ್ಟು ಒಂದು ವಿಕೆಟ್ ಉರುಳಿಸಿದ್ರು.

ಅಕ್ಷರ್ ಪಟೇಲ್ ಕೂಡ ವಿಕೆಟ್ ಬೇಟೆಯಾಡುವಲ್ಲಿ ಯಶಸ್ವಿಯಾದ್ರು. ಮೊದಲ ಓವರ್‌ನಲ್ಲಿ ದುಬಾರಿ ಅನಿಸಿದ್ರೂ, 2ನೇ ಓವರ್‌ನಲ್ಲಿ ವಿಕೆಟ್ ಉರುಳಿಸುವಲ್ಲಿ ಯಶಸ್ವಿಯಾದ್ರು. ಸ್ಪಿನ್ನರ್‌ಗಳ ಹೊರತಾಗಿ ಆಲ್‌ರೌಂಡರ್ ಶಿವಂ ದುಬೆ ಎಲ್ಲರ ಗಮನ ಸೆಳೆದ್ರು. ಹಾಕಿದ 2 ಓವರ್‌ಗಳಲ್ಲಿ 3 ವಿಕೆಟ್ ಬೇಟೆಯಾಡಿದ್ರು. ವೇಗಿ ಜಸ್‌ಪ್ರಿತ್ ಬೂಮ್ರಾ, ಒಂದು ವಿಕೆಟ್ ಕಬಳಿಸಿದ್ರು. ಒಟ್ಟಿನಲ್ಲಿ ಆಡಿದ ಮೊದಲ ಪಂದ್ಯದಲ್ಲೇ ಟೀಮ್ ಇಂಡಿಯಾ ಬೌಲರ್‌ಗಳು ಪರಾಕ್ರಮ ಮೆರೆದಿದ್ದಾರೆ. ಜೊತೆಗೆ ಅರಬ್ಬರ ಪಡೆಯನ್ನ ಬಗ್ಗು ಬಡಿದು ಮುಂದಿನ ಎದುರಾಳಿ ಪಾಕಿಸ್ತಾನಕ್ಕೆ ಖಡಕ್ ಎಚ್ಚರಿಕೆಯ ಸಂದೇಶವನ್ನೂ ರವಾನಿಸಿದ್ದಾರೆ.

# ಬಾಂಗ್ಲಾಗೆ 7 ವಿಕೆಟ್‌ಗಳ ಭರ್ಜರಿ ಜಯ

## ಟೂರ್ನಿಯಿಂದ ಬಹುತೇಕ ಹೊರಬಿದ್ದ ಹಾಂಗ್ ಕಾಂಗ್!




ಹಾಂಗ್ ಕಾಂಗ್ ನೀಡಿದ್ದ 144 ರನ್‌ಗಳ ಗುರಿಯನ್ನ ಬೆನ್ನಟ್ಟಿದ ಬಾಂಗ್ಲಾದೇಶ ತಂಡ ನಾಯಕ ಲಿಟನ್ ದಾಸ್ ಸಿಡಿಸಿದ ಅರ್ಧಶತಕ ಹಾಗೂ ಹೃದೋಯ್ ಅವರ 36 ರನ್‌ಗಳ ಆಜೇಯ ಆಟದ ನೆರವಿನಿಂದ 17.4 ಓವರ್‌ಗಳಲ್ಲಿ ಗುರಿ ತಲುಪಿತು. ಏಷ್ಯಾಕಪ್ 2025 ರ ಮೂರನೇ ಪಂದ್ಯದಲ್ಲಿ ಬಾಂಗ್ಲಾದೇಶ ತಂಡ ಹಾಂಗ್ ಕಾಂಗ್ ವಿರುದ್ಧ 7 ವಿಕೆಟ್‌ಗಳ ಸುಲಭ ಜಯ ಸಾಧಿಸಿ ಅಂಕಪಟ್ಟಿಯಲ್ಲಿ ಖಾತೆ ತೆರೆದಿದೆ. ಇತ್ತ ಸತತ 2 ಪಂದ್ಯಗಳಲ್ಲಿ ಸೋಲು ಕಂಡ ಹಾಂಗ್ ಕಾಂಗ್ ತಂಡ ಬಹುತೇಕ ಟೂರ್ನಿಯಿಂದ ಹೊರಬಿದ್ದಂತಾಗಿದೆ. ಹಾಂಗ್ ಕಾಂಗ್ ನೀಡಿದ್ದ 144 ರನ್‌ಗಳ ಗುರಿಯನ್ನ ಬೆನ್ನಟ್ಟಿದ ಬಾಂಗ್ಲಾದೇಶ ತಂಡ ನಾಯಕ ಲಿಟನ್ ದಾಸ್ ಸಿಡಿಸಿದ ಅರ್ಧಶತಕ ಹಾಗೂ ಹೃದೋಯ್ ಅವರ 36 ರನ್‌ಗಳ ಆಜೇಯ ಆಟದ ನೆರವಿನಿಂದ 17.4 ಓವರ್‌ಗಳಲ್ಲಿ ಗುರಿ ತಲುಪಿತು.

# ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ.. ಮುಂದಿನ ಬಿಗ್‌ಬಾಸ್

24 ವರ್ಷಗಳ ಕಾಲ ಟೀಮ್ ಇಂಡಿಯಾ ಪರ ಆಡಿದ್ದ ಸಚಿನ್, ವಿಶ್ವ ಕ್ರಿಕೆಟ್‌ಗೆ ಸಾಕಷ್ಟು ಕೊಡುಗೆ ನೀಡಿದ್ದಾರೆ. ಟೀಮ್ ಇಂಡಿಯಾ ಪರ ದಾಖಲೆಗಳ ಮೇಲೆ ದಾಖಲೆ ಬರೆದಿರುವ ಸಚಿನ್, ಕ್ಲೀನ್ ಇಮೇಜ್ ಹೊಂದಿದ್ದಾರೆ. ಆಟಗಾರನಾಗಿ ತೆರೆ ಹಿಂದೆ ಶ್ರಮಿಸಿರುವ ಸಚಿನ್, ಸದ್ಯದ ಪರಿಸ್ಥಿತಿಗಳಲ್ಲಿ ಬಿಸಿಸಿಐ ಅಧ್ಯಕ್ಷ ಹುದ್ದೆಗೇರಲು ಅರ್ಹರೂ ಆಗಿದ್ದಾರೆ. ಎಲ್ಲಾ ಕ್ರೀಡೆಗಳಲ್ಲಿ ಈಗ ಆಟಗಾರರೇ ಕ್ರಿಕೆಟ್ ಸಂಸ್ಥೆಗಳ ರಾಜ್ಯಭಾರ ನಡೆಸ್ತಿರುವುದು ಟ್ರೆಂಡ್. ಹೀಗಾಗಿ ಸಚಿನ್, ಅಧ್ಯಕ್ಷ ಹುದ್ದೆಗೆ ಏರಿದ್ರೆ, ಟೀಮ್ ಇಂಡಿಯಾ ವೃದ್ಧಿಗೆ ಮತ್ತಷ್ಟು ಶ್ರಮಿಸುವುದು ಪಕ್ಕಾ. ಬಿಸಿಸಿಐ ಅಧ್ಯಕ್ಷಗಿರಿ ಸಚಿನ್‌ಗೆ ನೀಡುವ ಒಲವಿಗೆ ಕಾರಣ ಪಶ್ಚಿಮ ವಲಯದ ಕ್ರಿಕೆಟರ್ ಎಂಬುವುದು ಒಂದಾಗಿದೆ. ಬಿಸಿಸಿಐನ ಪದ್ಧತಿಯನ್ವಯ ಪ್ರತಿ ಬಾರಿ ಒಂದೊಂದು ಪ್ರದೇಶಕ್ಕೆ ಒತ್ತು ನೀಡಲಾಗಿತ್ತು.

ಇದು ಕಡ್ಡಾಯವಾಗಿ ಪಾಲಿಸದಿದ್ದರೂ, ಕಳೆದ 2 ಅವಧಿಗಳಲ್ಲಿ ಪೂರ್ವ ವಲಯದ ಸೌರವ್ ಗಂಗೂಲಿ, ದಕ್ಷಿಣ ವಲಯದ ರೋಜರ್ ಬಿನ್ನಿಗೆ ಅಧ್ಯಕ್ಷ ಪಟ್ಟ ಸಿಕ್ಕಿತ್ತು. ಇದರಂತೆಯೇ ಈ ಬಾರಿ ಪಶ್ಚಿಮ ವಲಯದವರಿಗೆ ಅಧ್ಯಕ್ಷ ಹುದ್ದೆ ನೀಡಲು ಚಿಂತನೆ ನಡೆದಿದೆ. ಇದೇ ಕಾರಣಕ್ಕೆ ಸಚಿನ್‌ಗೆ ಪಟ್ಟ ಕಟ್ಟಲು ಆಸಕ್ತಿ ವಹಿಸಿದೆ.

**ಸರ್ವಾನುಮತದ ಆಯ್ಕೆ:** ಸಚಿನ್ ಬಿಸಿಸಿಐ ಅಧ್ಯಕ್ಷ ಸ್ಥಾನದ ರೇಸ್‌ನಲ್ಲಿದ್ದರೆ, ಆಯ್ಕೆ ಬಹಳ ಸುಲಭ ಎಂಬ ಲೆಕ್ಕಾಚಾರವೂ ಇದೆ. ಯಾಕಂದ್ರೆ ಕ್ಲೀನ್ ಹ್ಯಾಂಡ್, ಲೆಜೆಂಡರಿ ಕ್ರಿಕೆಟರ್ ಆಯ್ಕೆಗೆ ವಿರೋಧ ವ್ಯಕ್ತವಾಗಲ್ಲ. ಅಧ್ಯಕ್ಷಗಿರಿಯ ಮೇಲೆ ಒಲವು ಹೊಂದಿರುವ ಇತರರು ರೇಸ್‌ನಿಂದ ಹಿಂದೆ ಸರಿಯಲಿದ್ದಾರೆ. ಹೀಗಾಗಿ ಪ್ರತಿ ಸ್ಪರ್ಧಿ ಇಲ್ಲದೆ ಸರ್ವಾನುಮತದ ಆಯ್ಕೆ ಎಂಬ ಲೆಕ್ಕಾಚಾರವೂ ಅಡಗಿದೆ.

**ಸಚಿನ್‌ಗೆ ರಾಜಕೀಯ ವರ್ಗದಿಂದಲೂ ಬೆಂಬಲ**



# ಪಾಕ್ ವಿರುದ್ಧದ ಪಂದ್ಯದಲ್ಲಿ ಆಡುವ ಅವಕಾಶವಿಲ್ಲ

ಏಷ್ಯಾಕಪ್‌ನಲ್ಲಿ ಶುಭಾರಂಭ ಮಾಡಿರುವ ಟೀಂ ಇಂಡಿಯಾ ಇದೀಗ ಪಾಕಿಸ್ತಾನ ವಿರುದ್ಧದ ಪಂದ್ಯಕ್ಕೆ ತಯಾರಿ ನಡೆಸುತ್ತಿದೆ. ಉಭಯ ದೇಶಗಳಿಗೆ ಇದು ಪ್ರತಿಷ್ಠೆಯ ಕಣವಾಗಿರುವುದರಿಂದ ಎರಡೂ ತಂಡಗಳು ಗೆಲ್ಲಲೇಬೇಕಾದ ಒತ್ತಡದಲ್ಲಿವೆ. ಹೀಗಾಗಿ ಉಭಯ ತಂಡಗಳು ಬಲಿಷ್ಠ ಪಡೆಯನ್ನು ಕಟ್ಟಿಕೊಂಡು ಕಣಕ್ಕಿಳಿಯಲಿವೆ. ಇತ್ತ ಟೀಂ ಇಂಡಿಯಾ ಬಗ್ಗೆ ಹೇಳುವುದಾದರೆ ಯುಎಇ ವಿರುದ್ಧದ ಪಂದ್ಯದಲ್ಲಿ ಒಂದು ಓವರ್‌ನಲ್ಲಿ 3 ವಿಕೆಟ್‌ಗಳನ್ನು ಉರುಳಿಸಿದ್ದ ಕುಲ್ದೀಪ್ ಯಾದವ್‌ಗೆ ಪಾಕಿಸ್ತಾನ ವಿರುದ್ಧದ ಪಂದ್ಯದಲ್ಲಿ ತಂಡದಲ್ಲಿ ಸ್ಥಾನ ಸಿಗುವುದು ಅನುಮಾನ ಎಂದು ಸಂಜಯ್ ಮಂಜ್ರೇಕರ್ ಹೇಳಿದ್ದಾರೆ.




ಯುಎಇ ತಂಡ ಕೇವಲ 57 ರನ್‌ಗಳಿಗೆ ಆಲೌಟ್ ಆಯಿತು. ತಂಡವನ್ನು ಇಷ್ಟು ಕಡಿಮೆ ಮೊತ್ತಕ್ಕೆ ಆಲೌಟ್ ಮಾಡುವಲ್ಲಿ ಪ್ರಮುಖ ಪಾತ್ರವಹಿಸಿದ್ದ ಕುಲ್ದೀಪ್ 2.1 ಓವರ್‌ಗಳಲ್ಲಿ ಕೇವಲ 7 ರನ್‌ಗಳಿಗೆ 4 ವಿಕೆಟ್‌ಗಳನ್ನು ಪಡೆಯುವ ಮೂಲಕ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಆಯ್ಕೆಯಾದರು. ಹಾಗಿದ್ದರೂ ಕುಲ್ದೀಪ್‌ಗೆ ಮುಂದಿನ ಪಂದ್ಯದಲ್ಲಿ ಅವಕಾಶ ಸಿಗುವುದಿಲ್ಲ ಎಂದು ಸಂಜಯ್ ಮಂಜ್ರೇಕರ್ ಹಂಚಿಕೊಂಡಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966